

ಮೈಸೂರು ಮಿತ್ರ


ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 10 ಬುಧವಾರ 2024

ಸಂಪುಟ: 44 | ಸಂಚಿಕೆ: 264 | ಪುಟಗಳು: 10

₹4



ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com





28ರಲ್ಲಿ 26 ಗೆಲ್ಲಲೇಬೇಕು!

ರಾಜ್ಯ ಕಾಂಗ್ರೆಸ್ಸಿಗರಿಗೆ ವರಿಷ್ಠರ ಟಾರ್ಗೆಟ್

- ಲೋಕಸಭಾ ಚುನಾವಣೆ ಮುಗಿಯುವವರೆಗೆ ಡಿಸಿಎಂ ಸೇರಿ ಎಲ್ಲಾ ನಿಮ್ಮ ಬೇಡಿಕೆ ಬದಿಗಿರಿಸಿ
- ಸಿಎಂ, ಡಿಸಿಎಂ ಬಿಟ್ಟು ಉಳಿದ 28 ಸಚಿವರಿಗೂ ದೆಹಲಿಗೆ ಬುಲಾವ್ ನೀಡಿದ ಹೈಕಮಾಂಡ್
- ನಾಳೆ ದೆಹಲಿಯ ಕಾಂಗ್ರೆಸ್ ಕಚೇರಿಯಲ್ಲಿ ಸಚಿವರಿಗೆ ಲೋಕಸಭಾ ಚುನಾವಣೆ ಗೆಲ್ಲುವ ಪಾಠ

ಬೆಂಗಳೂರು, ಜ.9(ಕೆಎಂಶಿ)– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದ 28 ಸ್ಥಾನಗಳ ಪೈಕಿ 26 ಕ್ಷೇತ್ರಗಳನ್ನು ಗೆಲ್ಲಿಸಿಕೊಂಡು ಬರಲೇಬೇಕೆಂದು ಕಾಂಗ್ರೆಸ್ ವರಿಷ್ಠರು, ರಾಜ್ಯದ ಸಚಿವರಿಗೆ ಗುರಿ ನೀಡಿದ್ದಾರೆ.


ಚುನಾವಣೆ ಮುಗಿಯುವವರೆಗೂ ಉಪಮುಖ್ಯಮಂತ್ರಿ ಬೇಡಿಕೆ ಸೇರಿದಂತೆ ನಿಮ್ಮೆಲ್ಲಾ ಬೇಡಿಕೆಗಳನ್ನು ಬದಿಗಿರಿಸಿ ಗುರಿ ತಲುಪಲು ಕಾರ್ಯತಂತ್ರ ರೂಪಿಸಿ ಎಂದು ಆದೇಶ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಹೊರತುಪಡಿಸಿ ಉಳಿದ 28 ಸಚಿವರಿಗೆ ಒಂದೊಂದು ಕ್ಷೇತ್ರದ ಹೊಣೆಗಾರಿಕೆ ನೀಡಿದ್ದಾರೆ. ಉಸ್ತುವಾರಿ ವಹಿಸಿಕೊಂಡಿರುವ 28 ಸಚಿವರನ್ನು ದೆಹಲಿಗೆ ಬರುವಂತೆ ವರಿಷ್ಠರು ಆದೇಶ ಮಾಡಿದ್ದು, ಇವರಿಗೆ ಚುನಾವಣೆ ಯಾವ ರೀತಿ ಗೆಲ್ಲಬೇಕು ಎಂಬ ಬಗ್ಗೆ ದೆಹಲಿ ಕಾಂಗ್ರೆಸ್ ಕೇಂದ್ರ ಕಚೇರಿಯಲ್ಲಿ ಜನವರಿ 11ರ ಬೆಳಗ್ಗೆ 9 ಗಂಟೆಗೆ ಪಾಠ ಮಾಡಲಿದ್ದಾರೆ.

ಸಚಿವರನ್ನು ವರಿಷ್ಠರು ದೆಹಲಿಗೆ ಕರೆಸಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಗುರುವಾರ ಬೆಳಗ್ಗೆ 11 ಗಂಟೆಗೆ ಕರೆದಿದ್ದ ಸಂಪುಟ ಸಭೆಯನ್ನು ಮುಂದೂಡಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಪಕ್ಷ ಜಯಭೇರಿ ಭಾರಿಸಿದ ●8ನೇ ಪುಟಕ್ಕೆ

ಬೇಡಿಕೆ ಇಟ್ಟಿದ್ದೇವೆ! ಬೆದರಿಕೆ ಹಾಕಿಲ್ಲ!!


ಪರಮೇಶ್ವರ್

ಬೆಂಗಳೂರು:ಹೆಚ್ಚುವರಿ ಉಪ ಮುಖ್ಯಮಂತ್ರಿ ಬೇಡಿಕೆ ಇಟ್ಟಿದ್ದೇವೆಯೇ ಹೊರತು ಬೆದರಿಕೆ ಹಾಕಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಕರ್ನಾಟಕದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಕಟ್ಟಿಹಾಕಿ ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗಳಿಸುವ ಸಂಬಂಧ ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ ಕಳೆದ ಎರಡು ದಿನಗಳಿಂದ ರಾಜ್ಯ ನಾಯಕರೊಂದಿಗೆ ಮಾತುಕತೆ ನಡೆಸಿದ್ದಾರೆ. ಉಪಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಗಳಾಗಿರುವ ಡಾ.ಪರಮೇಶ್ವರ್, ಸತೀಶ್ ಜಾರಕಿಹೊಳಿ ಹಾಗೂ ಎಂ.ಬಿ.ಪಾಟೀಲ್ ಒಟ್ಟಾಗಿ ನಿನ್ನೆ ಹಾಗೂ ಇಂದು ಎರಡು ಬಾರಿ ಸುರ್ಜೇವಾಲ ಅವರನ್ನು ಭೇಟಿ ಮಾಡಿ ತಮ್ಮ ಹಕ್ಕೊತ್ತಾಯಿಸಿದ್ದಾರೆ. ಭೇಟಿಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್ ಹಾಗೂ ಸತೀಶ್ ಜಾರಕಿಹೊಳಿ, ಲೋಕಸಭಾ ಚುನಾವಣೆ ದೃಷ್ಟಿಯಿಂದ ಜಾತಿಗೊಂದು ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ಮನವಿ ಮಾಡಿದ್ದೇವೆ, ನಿರ್ಧಾರ ವರಿಷ್ಠರಿಗೆ ಬಿಟ್ಟಿದ್ದು. ಲೋಕಸಭಾ ಚುನಾವಣೆಯನ್ನು ಗಂಭೀರವಾಗಿ ತೆಗೆದುಕೊಳ್ಳಿ, ಮೈತ್ರಿ ಪಕ್ಷಗಳ ವಿರುದ್ಧ ಒಟ್ಟಾಗಿ ಹೋರಾಟ ಮಾಡಿ ಎಂದು ತಿಳಿಹೇಳಲು ನಮ್ಮನ್ನು ಕರೆಸಿದ್ದರು. ●8ನೇ ಪುಟಕ್ಕೆ



ಚಿಕ್ಕಮಗಳೂರು ರೆಸಾರ್ಟ್‌ನಲ್ಲಿ ದಳಪತಿಗಳ ಮಹತ್ವದ ಸಭೆ

- ಹೆಚ್ಡಿಕೆ ಮಂಡ್ಯ ಅಭ್ಯರ್ಥಿಯಾಗುವ ಬಗ್ಗೆ ಮಹತ್ವದ ಸಭೆ
- ಮಂಡ್ಯ ಕ್ಷೇತ್ರ ವ್ಯಾಪ್ತಿಯ ನಾಯಕರೊಂದಿಗೆ ಚರ್ಚೆ
- ನಿಖಿಲ್ ಸ್ಪರ್ಧೆ ವೇಳೆ ಆದ ಎಡವಟ್ಟುಗಳು ಮರುಕಳಿಸದಂತೆ ಎಚ್ಚರಿಕೆಯ ಹೆಜ್ಜೆ


ಕುಮಾರಸ್ವಾಮಿ

ಮಂಡ್ಯ, ಜ.9(ಎಂ.ಕೆ.ಮೋಹನ್ ರಾಜ್)– ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅಭ್ಯರ್ಥಿ ಆಗುವುದು ಬಹುತೇಕ ಖಚಿತವಾಗಿದೆ ಈ ಹಿನ್ನೆಲೆಯಲ್ಲಿ ಸಾಧಕ– ಬಾಧಕಗಳ ಬಗ್ಗೆ ಕುಮಾರಸ್ವಾಮಿ ನೇತೃತ್ವದಲ್ಲಿ ಚಿಕ್ಕಮಗಳೂರಿನ ಖಾಸಗಿ ರೆಸಾರ್ಟ್‌ನಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಜೆಡಿಎಸ್ ನಾಯಕರ ಮಹತ್ವದ ಸಭೆ ಮಂಗಳವಾರ ನಡೆಯಿತು.

ಲೋಕಸಭೆ ಚುನಾವಣೆ ಹತ್ತಿರವಾಗುತ್ತಿದ್ದಂತೆ ಜಿಲ್ಲೆಯಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ಇತ್ತ ಸುಮಲತಾ ಅಂಬರೀಶ್ ಮತ್ತೊಮ್ಮೆ ಮಂಡ್ಯದಿಂದ ಕಣಕ್ಕಿಳಿಯಲು ಸಿದ್ಧತೆ ನಡೆಸಿದ್ದರೆ, ಮತ್ತೊಂದೆಡೆ ಜಿಲ್ಲೆಯ ಜೆಡಿಎಸ್ ದಳಪತಿಗಳು ಅಭ್ಯರ್ಥಿ ಆಯ್ಕೆ ಗೊಂದಲಕ್ಕೆ ತೆರೆ ಎಳೆದು, ಸ್ವತಃ ಕುಮಾರಸ್ವಾಮಿಯೇ ಕಣಕ್ಕಿಳಿಯಲು ಚಿಂತಿಸಿ, ಸಿದ್ಧತೆ ಸಂಬಂಧ ಚಿಕ್ಕಮಗಳೂರಿನ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿದ್ದಾರೆ. ಮಂಡ್ಯಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹಾಗೂ ನಿಖಿಲ್ ಕರೆತರುವ ಪ್ರಯತ್ನ ನಡೆಯುತ್ತಿತ್ತು. ಮತ್ತೊಂದೆಡೆ ಜಿಲ್ಲೆಯ ಜೆಡಿಎಸ್ ನಾಯಕರಾದ ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ ಹಾಗೂ ಕೆ.ಸುರೇಶ್‌ಗೌಡ ಹೆಸರೂ ಕೇಳಿ ಬಂದಿತ್ತು. ಇದರ ನಡುವೆಯೂ ಕುಮಾರಸ್ವಾಮಿ ಅವರನ್ನೇ ಕರೆತರುವ ಪ್ರಯತ್ನಗಳು ಸದ್ದಿಲ್ಲದೆ ನಡೆಯುತ್ತಿದೆ. ಇದರ ಬಗ್ಗೆ ಬಹಿರಂಗವಾಗಿಯೇ ಜಿಲ್ಲೆಯ ಜೆಡಿಎಸ್ ನಾಯಕರು ಹೇಳಿಕೆ ನೀಡಿದ್ದರು. ಇದಕ್ಕೆ ಪೂರಕ ಎಂಬಂತೆ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಕರೆತರಲು ವೇದಿಕೆ ಸಿದ್ಧವಾಗುತ್ತಿದ್ದು, ಇದರ ಭಾಗವಾಗಿ ಸಭೆ ನಡೆದಿದೆ. ಜಿಲ್ಲೆಯ ಜೆಡಿಎಸ್ ನಾಯಕರಲ್ಲಿ ಹೊಂದಾಣಿಕೆ ಕೊರತೆ ●8ನೇ ಪುಟಕ್ಕೆ

ಜಾತಿ ನಿಂದನೆ, ಲೈಂಗಿಕ ದೌರ್ಜನ್ಯ, ಜೀವ ಬೆದರಿಕೆ ಪ್ರಕರಣ

ಸ್ಯಾಂಟ್ರೋ ರವಿ ಜಾಮೀನು ಅರ್ಜಿ ಸುಪ್ರೀಂಕೋರ್ಟ್‌ನಲ್ಲೂ ತಿರಸ್ಕೃತ


ಸ್ಯಾಂಟ್ರೋ ರವಿ

ಮೈಸೂರು, ಜ.9(ಆರ್‌ಕೆ)– ಯುವತಿ ಮೇಲೆ ಲೈಂಗಿಕ ದೌರ್ಜನ್ಯ, ಜಾತಿ ನಿಂದನೆ, ಪ್ರಾಣ ಬೆದರಿಕೆ, ಬ್ಲಾಕ್‌ಮೇಲ್ ಪ್ರಕರಣದಲ್ಲಿ ಬಂಧಿತನಾಗಿ ನ್ಯಾಯಾಂಗ ಬಂಧನದಲ್ಲಿರುವ ಕೆ.ಎಸ್. ಮಂಜುನಾಥ ಅಲಿಯಾಸ್ ಸ್ಯಾಂಟ್ರೋ ರವಿ ಜಾಮೀನು ಅರ್ಜಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿದೆ.

2023ರ ಸೆಪ್ಟೆಂಬರ್ 15ರಂದು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಬೆಲ್ಲಾ ಮಾಧುರ್ಯ ತ್ರಿವೇದಿ ಮತ್ತು ಪಂಕಜ್ ಮಿತ್ತಲ್ ನೇತೃತ್ವದ ವಿಭಾಗೀಯ ಪೀಠವು ವಾದ–ಪ್ರತಿವಾದಗಳನ್ನು ಆಲಿಸಿದ ಬಳಿಕ ಆರೋಪಿ ಸ್ಯಾಂಟ್ರೋ ರವಿ ಜಾಮೀನು ಕೋರಿಕೆ ಮನವಿಯನ್ನು ಇಂದು ಬೆಳಗ್ಗೆ ತಿರಸ್ಕರಿಸಿ ಆದೇಶ ಹೊರಡಿಸಿದೆ.

ದೂರುದಾರ ಸಂತ್ರಸ್ತೆ ಪರ ನ್ಯಾಯವಾದಿ ವಿ.ಎನ್. ರಘುಪತಿ ವಾದ ಪುರಸ್ಕರಿಸಿದ ನ್ಯಾಯಮೂರ್ತಿಗಳು, ಕರ್ನಾಟಕ ರಾಜ್ಯದಲ್ಲಿ ದಾಖಲಾಗಿದ್ದ 23 ಅಪರಾಧ ಪ್ರಕರಣಗಳಲ್ಲಿ ನಿರಪರಾಧಿ ಎಂದು ಬಿಡುಗಡೆಯಾಗಿರುವ ವ್ಯಕ್ತಿ ಇನ್ನೆಷ್ಟು ಪ್ರಭಾವಶಾಲಿಯಾಗಿರಬಹುದು. ಆತನಿಗೆ ಜಾಮೀನು ನೀಡಿದರೆ ಸಮಾಜದ ಮೇಲೆ ಮತ್ತೆ ಇನ್ನೆಷ್ಟು ದುಷ್ಪರಿಣಾಮ ಬೀರಬಹುದು ಎಂಬುದನ್ನು ಗಮನದಲ್ಲಿಟ್ಟುಕೊಂಡು ಸ್ಯಾಂಟ್ರೋ ರವಿ ಜಾಮೀನು ಅರ್ಜಿಯನ್ನು ಸಾರಾಸಗಟಾಗಿ ತಿರಸ್ಕರಿಸಿ ಆದೇಶ ಹೊರಡಿಸಿದ್ದಾರೆ.

ಸ್ಯಾಂಟ್ರೋ ರವಿ ಪರ ಹಿರಿಯ ವಕೀಲರಾದ ಸಿದ್ಧಾರ್ಥ ಲೂತ್ರ ಮತ್ತು ರವೀಂದ್ರ ಕಾಮತ್ ವಾದ ಮಂಡಿಸಿದ್ದರು. ಯುವತಿ ನಂಬಿಸಿ ಲೈಂಗಿಕ ದೌರ್ಜನ್ಯ ಎಸಗಿರುವುದಲ್ಲದೆ ಬ್ಲಾಕ್‌ಮೇಲ್, ಪ್ರಾಣ ಬೆದರಿಕೆ, ಜಾತಿ ನಿಂದನೆಯಂತಹ ಗಂಭೀರ ಪ್ರಕರಣದಲ್ಲಿ ಬಂಧಿತನಾಗಿರುವ ಆರೋಪಿಯನ್ನು ಜಾಮೀನಿನ ಮೇಲೆ ಬಿಡಲಾಗದು ಎಂದು ನ್ಯಾಯಪೀಠ ತೀರ್ಪಿನಲ್ಲಿ ಸ್ಪಷ್ಟಪಡಿಸಿದೆ. 2023ರ ಜನವರಿ 2ರಂದು ಸಂತ್ರಸ್ತೆ ನೀಡಿದ ದೂರಿನನ್ವಯ ಮೈಸೂರಿನ ವಿಜಯನಗರ ಠಾಣೆ ಸಬ್ ಇನ್ಸ್‌ಪೆಕ್ಟರ್ ವಿ.ಆರ್.ಶಬರೀಶ ●8ನೇ ಪುಟಕ್ಕೆ

ಮಗನ ಕೊಂದು ಬ್ಯಾಗಿನಲ್ಲಿ ಹೆಣ ಸಾಗಿಸುತ್ತಿದ್ದ ಮಹಾತಾಯಿ!


ಸುಚನಾ ಸೇಠ್

ಬೆಂಗಳೂರು, ಜ.9– ತನ್ನ ನಾಲ್ಕು ವರ್ಷದ ಮಗನನ್ನು ಕೊಲೆ ಮಾಡಿ ಮೃತದೇಹವನ್ನು ಬ್ಯಾಗಿನಲ್ಲಿಟ್ಟು ಕೊಂಡು ಕಾರಿನಲ್ಲಿ ಸಾಗಣೆ ಮಾಡುತ್ತಿದ್ದ ಖಾಸಗಿ ಸ್ಟಾರ್ಟ್ ಅಪ್ ಕಂಪೆನಿಯ ಮಹಿಳಾ ಸಿಇಒ ಒಬ್ಬರನ್ನು ಐಮಂಗಲ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಬೆಂಗಳೂರಿನ 'ಮೈಂಡ್ ಫುಲ್ ಎಐ ಲ್ಯಾಬ್' ಕೃತಕ ಬುದ್ಧಿಮತ್ತೆ ಕಂಪೆನಿಯ ಸಹ ಸಂಸ್ಥಾಪಕಿ ಸುಚನಾ ಸೇಠ್(39) ಬಂಧಿತ ಮಹಿಳೆ. ಕಾರು ಚಾಲಕನೇ ಆರೋಪಿಯನ್ನು ಪೊಲೀಸರಿಗೆ ಹಿಡಿದುಕೊಟ್ಟಿದ್ದು, ಮೃತದೇಹವನ್ನು ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ. ಆರೋಪಿ ಮಹಿಳೆಯನ್ನು ಗೋವಾ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.

ಉತ್ತರ ಗೋವಾದ 'ಸೋಲ್ ಬ್ಯಾನಿಯನ್ ಗ್ರ್ಯಾಂಡ್' ಹೋಟೆಲ್‌ಗೆ ಮಹಿಳೆ ಪುತ್ರನೊಂದಿಗೆ ಶನಿವಾರ ತೆರಳಿದ್ದಳು. ಸೋಮವಾರ ಕೊಠಡಿ ತೆರವುಗೊಳಿಸಿ ಏಕಾಂಗಿಯಾಗಿ ಹೊರಬಂದಿದ್ದಳು. ಬೆಂಗಳೂರಿಗೆ ಮರಳಲು ಟ್ಯಾಕ್ಸಿ ಬಾಡಿಗೆ ಕೇಳಿದ್ದಳು. ಅನುಮಾನಗೊಂಡ ಹೋಟೆಲ್ ಸಿಬ್ಬಂದಿ ಬಾಲಕನ ಬಗ್ಗೆ ವಿಚಾರಿಸಿದ್ದರು. ಸಂಬಂಧಿಕರ ಮನೆಯಲ್ಲಿ ಬಾಲಕನನ್ನು ಬಿಟ್ಟು ಬಂದಿರುವುದಾಗಿ ಮಹಿಳೆ ಸಬೂಬು ನೀಡಿ ಹೊರಬಂದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಕೊಠಡಿ ಶುಚಿಗೊಳಿಸುವಾಗ ರಕ್ತದ ಕಲೆಗಳನ್ನು ಗಮನಿಸಿದ ಹೋಟೆಲ್ ಸಿಬ್ಬಂದಿ ಪೊಲೀಸರಿಗೆ ಮಾಹಿತಿ ನೀಡಿದ್ದರು. ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಶೀಲನೆ ನಡೆಸಿ ಮಹಿಳೆ ತೆರಳುತ್ತಿದ್ದ ಕಾರಿನ ಚಾಲಕನನ್ನು ಫೋನ್ ಮೂಲಕ ಸಂಪರ್ಕಿಸಿದ್ದಾರೆ. ಕೊಂಕಣಿಯಲ್ಲಿ ಮಾತನಾಡಿದ ಪೊಲೀಸರು, ಘಟನೆ ಬಗ್ಗೆ ಚಾಲಕನಿಗೆ ವಿವರಿಸಿದ್ದಾರೆ. ಆರೋಪಿಯನ್ನು ಪೊಲೀಸರಿಗೆ ಹಿಡಿದು ಕೊಡಲು ಸೂಚನೆ ನೀಡಿದ್ದಾರೆ. ಚಾಲಕನಿಗೆ ಈ ಮಾಹಿತಿ ತಿಳಿದಾಗ ಕಾರು ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಚಿತ್ರದುರ್ಗ ದಿಂದ ಹಿರಿಯೂರು ಕಡೆಗೆ ಸಾಗುತ್ತಿತ್ತು. ಐಮಂಗಲ ಸಮೀಪದ ಪೊಲೀಸ್ ಠಾಣೆ ಗಮನಿಸಿದ ಚಾಲಕ, ನೇರವಾಗಿ ಠಾಣೆಗೆ ಕಾರು ತಂದಿದ್ದಾರೆ. ಕಾರಿನ ಡಿಕ್ಕಿ ತೆರೆದಾಗ ಸೂಟ್‌ಕೇಸ್ ಬ್ಯಾಗಿನಲ್ಲಿ ಬಾಲಕನ ಮೃತದೇಹ ಪತ್ತೆಯಾಗಿದೆ. ಮಹಿಳೆಯನ್ನು ಬಂಧಿಸಿ ಗೋವಾ ಪೊಲೀಸರಿಗೆ ಮಾಹಿತಿ ನೀಡಲಾಗಿದೆ.

ನಾಲಾ ಜಾಗ 14 ಗುಂಟೆ ಕಬಳಿಸಲು ನೆರವಾದ ಮೂವರು ಅಧಿಕಾರಿಗಳ ವಿರುದ್ಧ ದೋಷಾರೋಪ

- ಸರ್ಕಾರಿ ನಾಲಾ ಜಾಗದಲ್ಲಿ ಅಕ್ರಮವಾಗಿ ಬಡಾವಣೆ ಅಭಿವೃದ್ಧಿಪಡಿಸಿರುವ ವ್ಯಕ್ತಿ ವಿರುದ್ಧವೂ ಎಫ್‌ಐಆರ್ ದಾಖಲು
- ತಮ್ಮ ಸುಪರ್ದಿನ ಜಾಗ ಭೂ ಪರಿವರ್ತನೆಯಾಗಿದ್ದರೂ ಸುಮ್ಮನಿದ್ದ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು

● ಎಸ್.ಟಿ.ರವಿಕುಮಾರ್


ಅಕ್ರಮವಾಗಿ ಅನ್ಯಕ್ರಾಂತ ಮಂಜೂರಾಗಿರುವ ಶ್ರೀರಂಗಪಟ್ಟಣ ತಾಲೂಕು ಬೆಳಗೊಳ ಗ್ರಾಮದ ಬಳಿಯ 14 ಗುಂಟೆ ನಾಲಾ ಜಾಗ.

ಮೈಸೂರು, ಜ. 9– ನಾಲೆಗೆ ಸೇರಿದ 14 ಗುಂಟೆ ಜಾಗವನ್ನು ಅನ್ಯಕ್ರಾಂತ ಮಂಜೂರು ಮಾಡಿ ವಸತಿ ಬಡಾವಣೆ ಅಭಿವೃದ್ಧಿಪಡಿಸಲು ಭೂ ಮಾಲೀಕರಿಗೆ ಸಹಾಯ ಮಾಡಿದ್ದ ಮೂವರು ಅಧಿಕಾರಿಗಳ ವಿರುದ್ಧ 1–4 ರೀತ್ಯಾ ಶ್ರೀರಂಗಪಟ್ಟಣ ತಹಸೀಲ್ದಾರ್ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದಾರೆ.

ಶ್ರೀರಂಗಪಟ್ಟಣ ತಾಲೂಕು, ಹಿಂದಿನ ರೆವಿನ್ಯೂ ಇನ್ಸ್‌ಪೆಕ್ಟರ್ ಜಯರಾಮಮೂರ್ತಿ, ಹಿಂದಿನ ಗ್ರಾಮ ಆಡಳಿತಾಧಿಕಾರಿ ಪುಟ್ಟಸ್ವಾಮಿ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಸಹಾಯಕ ನಿರ್ದೇಶಕ ಕೆ.ಬಾಲಚಂದರ್ ವಿರುದ್ಧ ಅನುಬಂಧ 1ರಿಂದ 4ರವರೆಗೆ ದೋಷಾರೋಪಣಾ ಪಟ್ಟಿಯನ್ನು 2023ರ ಡಿಸೆಂಬರ್ 28ರಂದು ಮಂಡ್ಯ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗಿದೆ.

ಮೈಸೂರಿನ ಜಯಲಕ್ಷ್ಮೀಪುರಂ ನಿವಾಸಿಯಾದ ವಕೀಲ ಎಸ್. ಮಹೇಶ್ ಎಂಬುವರು ಲೋಕಾಯುಕ್ತ ಕಚೇರಿಗೆ ದೂರು ಸಲ್ಲಿಸಿ, ಬೆಳಗೊಳ ಸ. ನಂ. 44ರ 2.12 ಎಕರೆ ಪೈಕಿ 14 ಗುಂಟೆ ●8ನೇ ಪುಟಕ್ಕೆ



ಫೆ.12ರಂದು ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ



ಮೈಸೂರು, ಜ.9–ಶ್ರೀ ಶಿವಯೋಗಿ ಸಿದ್ಧರಾಮೇಶ್ವರರ 850ನೇ ಸುವರ್ಣ ಜಯಂತಿ ಮಹೋತ್ಸವವನ್ನು ಫೆ.12 ರಂದು ಕಿರು ರಂಗಮಂದಿರದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಆರ್.ಲೋಕನಾಥ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಿದ್ಧರಾಮೇಶ್ವರ ಜಯಂತಿ ಆಚರಣೆ ಸಂಬಂಧ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಜಿಲ್ಲೆಗೆ ಕಾರ್ಯಕ್ರಮ ಮಾಡಲು 50 ಸಾವಿರ ಅನುದಾನ ಬಿಡುಗಡೆ ಮಾಡಲಾಗಿದೆ. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಲಾಗುವುದು ಎಂದರು.

"ಸಿದ್ಧರಾಮೇಶ್ವರರ ಜಯಂತಿ ಕಾರ್ಯಕ್ರಮ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು ಸೂಕ್ತಕ್ರಮ ಕೈಗೊಳ್ಳಿ –ಆರ್.ಲೋಕನಾಥ್

ಈ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕಲಾತಂಡಗಳಿಂದ ಪ್ರದರ್ಶನ ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದರು.

ಸಭೆಯಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಭೋವಿ ಸಮುದಾಯದ ಅಧ್ಯಕ್ಷ ಜಿ.ನಾಗರಾಜ್, ಉಪಾಧ್ಯಕ್ಷ ಚಿನ್ನಸ್ವಾಮಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ಮೈಸೂರಿನ ಒಕ್ಕಲಿಗ ಯುವ ಬ್ರಿಗೇಡ್ ಮತ್ತು ಎನ್‌ಆರ್‌ಐ ಒಕ್ಕಲಿಗ ಬ್ರಿಗೇಡ್‌ನ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ ಅವರ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಬಿಇಎಂಎಲ್ ಒಕ್ಕಲಿಗ ಸಂಘ ನೀಡುವ 2023ನೇ ಸಾಲಿನ ಸೇವಾರತ್ನ ಪ್ರಶಸ್ತಿ ನೀಡಿ ಗೌರವಿಸಿದೆ. ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಶಾಸಕ ಹರೀಶ್‌ಗೌಡ, ರಾಜ್ಯ ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಕೆ.ವಿ.ಶ್ರೀಧರ್ ಇದ್ದರು.

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಯಲ್ಲಿ ಸುರಕ್ಷತಾ ಕ್ರಮ

ಕೇಂದ್ರ ಸರ್ಕಾರದಿಂದ 688 ಕೋಟಿ ಬಿಡುಗಡೆ; ಬಿಡ್ ಆಹ್ವಾನ



ಮೈಸೂರು, ಜ.9(ಬಿಎಲ್‌ಯು)–ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಯಲ್ಲಿ ಸಂಭವಿಸುತ್ತಿದ್ದ ಅಪಘಾತಗಳಿಗೆ ಕಡಿವಾಣ ಹಾಕಲು ರಸ್ತೆ ಸುರಕ್ಷತೆಗಾಗಿ ಕೇಂದ್ರ ಸರ್ಕಾರ 688 ಕೋಟಿ ರೂಪಾಯಿ ವೆಚ್ಚ ಮಾಡಲಿದೆ.

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆಯಲ್ಲಿ ಈ ತನಕ 400ಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿದ್ದು, 121 ಜನರು ಸಾವನ್ನಪ್ಪಿದ್ದಾರೆ. ಸರಣಿ ಅಪಘಾತಗಳಿಂದ ಭಯಭೀತರಾಗಿದ್ದ ಜನರು ಎಕ್ಸ್‌ಪ್ರೆಸ್ ಹೈವೆಯಲ್ಲಿ ಸುರಕ್ಷತಾ ಕ್ರಮ ಕೈಗೊಳ್ಳುವಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದರು.

ಈ ಹಿನ್ನೆಲೆಯಲ್ಲಿ ರಸ್ತೆ ಸುರಕ್ಷತಾ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಪರಿಶೀಲನೆ ನಡೆಸಿ ವರದಿ ನೀಡಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಜ್ಞರ ಸಮಿತಿ ರಚನೆ ಮಾಡಿತ್ತು. ಈಗ ರಸ್ತೆ ಸುರಕ್ಷತಾ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ತಜ್ಞರ ಸಮಿತಿ ವರದಿ ನೀಡಿದೆ. ವರದಿ ಆಧಾರದ ಮೇಲೆ ರಸ್ತೆ ಸುರಕ್ಷತೆಗಾಗಿ ಕೇಂದ್ರ ಸರ್ಕಾರ ಈಗ 688 ಕೋಟಿ ರೂ. ಬಿಡುಗಡೆ ಕೂಡ ಮಾಡಿ, ಬಿಡ್ ಆಹ್ವಾನಿಸಿದೆ. ಎಕ್ಸ್‌ಪ್ರೆಸ್ ಹೈವೆಯಲ್ಲಿರುವ ಅಪಾಯಕಾರಿ ಸ್ಥಳಗಳಲ್ಲಿ ಹೆಡ್‌ಲೈಟ್ ಪ್ರತಿಫಲಕಗಳು, ರಸ್ತೆ ಗುರುತು, ಗಾರ್ಡ್ ರೈಲ್, ಕ್ರ್ಯಾಶ್ ಬ್ಯಾರಿಯರ್ ಅಳವಡಿಕೆ, ಪಾದಚಾರಿ ಮೇಲ್ಸೇತುವೆ ನಿರ್ಮಾಣ ಸೇರಿದಂತೆ ಇತರೆ ಸುರಕ್ಷತಾ ಕ್ರಮ ಕೈಗೊಳ್ಳಲಾಗುತ್ತಿದೆ.

ನವದೆಹಲಿಯಲ್ಲಿ ಇತ್ತೀಚೆಗೆ ಕೇಂದ್ರ ರಸ್ತೆ ಸಾರಿಗೆ ಸಚಿವ ನಿತಿನ್ ಗಡ್ಕರಿ ಭೇಟಿ ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಸಂಬಂಧ ಮನವಿ ಕೂಡ ಸಲ್ಲಿಸಿದ್ದರು.



ಮೈಸೂರಿನ ಹಿನಕಲ್ ಗ್ರಾಮದಲ್ಲಿ ಅಯೋಧ್ಯೆ ಶ್ರೀರಾಮಮಂದಿರದ ಪವಿತ್ರ ಮಂತ್ರಾಕ್ಷತೆಯನ್ನು ಮನೆ ಮನೆಗೆ ವಿತರಿಸುವ ಅಭಿಯಾನ ನಡೆಯಿತು. ಈ ವೇಳೆ ಲೋಹಿತ್ ವಿ ಅರಸ್, ಬಿಜೆಪಿ ಮುಖಂಡರಾದ ಎ.ಶ್ರೀನಿವಾಸ್, ಕೇಬಲ್ ಪಾಪಣ್ಣ, ಹಿನಕಲ್ ಗಣೇಶ, ಅಭಿಯಾನದ ಸಂಚಾಲಕರಾದ ಪರಮೇಶ್, ಸಹ ಸಂಚಾಲಕ ಮಹೇಶ್, ಲೋಕೇಶ್, ಶಿವಕುಮಾರ, ಕಿರಣ್, ಚರಣ್, ಮಧು, ಪ್ರಸಾದ್, ವೆಂಕಟೇಶ ರಾವ್ ಶೈಲೇಶ್, ತಿಲಕ್, ಚಂದ್ರು,ಮಂಜು, ರಾಜು, ಸುಮತಿ ಶ್ರೀನಿವಾಸ, ಭಾರತಿ, ಚೈತ್ರ ವಿ. ಅರಸ್, ಶ್ರೀದೇವಿ, ರೂಪ, ಮಂಗಳಮ್ಮ, ರತ್ನ, ಇಂದಿರಾ ಇನ್ನಿತರರಿದ್ದರು.


ಎಂದಿನಂತೆ ಗ್ರಂಥಾಲಯಗಳ ಕಾರ್ಯನಿರ್ವಹಣೆ

ಮೈಸೂರು, ಜ.9– ಮೈಸೂರು ನಗರ ಕೇಂದ್ರ ಗ್ರಂಥಾಲಯ ಕಚೇರಿಯ ಅಧೀನ ಶಾಖಾ, ಸೇವಾ ಕೇಂದ್ರ ಗ್ರಂಥಾಲಯಗಳಲ್ಲಿ ಡಿಸೆಂಬರ್ 21ರಿಂದ ಜನವರಿ 31 ರವರೆಗೆ ಪುಸ್ತಕ ದಾಸ್ತಾನು ಪರಿಶೀಲನೆಯ ಕಾರ್ಯವನ್ನು ಕೈಗೊಳ್ಳಲಾಗುತ್ತಿರುವುದರಿಂದ ಸದರಿ ದಿನಗಳಂದು ಸಾರ್ವಜನಿಕರಿಗೆ ಗ್ರಂಥಾಲಯದ ಎರವಲು ಸೇವೆಯನ್ನು ಒದಗಿಸಲಾಗುವುದಿಲ್ಲವೆಂದು ಪ್ರಕಟಿಸಲಾಗಿತ್ತಾದರೂ, ವಿದ್ಯಾರ್ಥಿಗಳಿಗೆ ಜನವರಿ–2024ರ ಮಾಹೆಯಲ್ಲಿ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳಿರುವುದರಿಂದ ಮತ್ತು ಸಾರ್ವಜನಿಕ ಬೇಡಿಕೆಯನುಸಾರ ಪುಸ್ತಕ ದಾಸ್ತಾನು ಪರಿಶೀಲನೆಯ ಕಾರ್ಯವನ್ನು ಮುಂದೂಡಲಾಗಿರುತ್ತದೆ. ಸಾರ್ವಜನಿಕ ಓದುಗರು, ವಿದ್ಯಾರ್ಥಿಗಳು ಎಂದಿನಂತೆ ಗ್ರಂಥಾಲಯದ ಸದುಪಯೋಗ ಪಡೆದುಕೊಳ್ಳಬಹುದು ಎಂದು ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಮಟ್ಟದ ಅಂಚೆ ಚೀಟಿ ಪ್ರದರ್ಶನ ಕರ್ನಾಪೆಕ್ಸ್‌ನಲ್ಲಿ

ಮೈಸೂರಿನ ಡಾ.ರಾಧಾ ಮಲ್ಲಪ್ಪ, ಕೊಡಗಿನ ಕಾಫಿಪುಡಿ ಸಾಕಮ್ಮರ ಸಾಧನೆ ಅನಾವರಣ





ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮೈಸೂರು ವಿಭಾಗದ ಅಂಚೆ ಉಪ ಅಧೀಕ್ಷಕ ಸುನೀಲ್ ಹಳಪೇಟಿ ಮಾತನಾಡಿದರು. ಈ ವೇಳೆ ಶಂಖು ಮತ್ತು ಕಪ್ಪೆಚಿಪ್ಪಿನ ಕಲಾಕೃತಿಗಳ ವಸ್ತು ಸಂಗ್ರಹಾಲಯದ ವಿಶೇಷ ಅಂಚೆ ಲಕೋಟೆಯನ್ನು ಪ್ರದರ್ಶಿಸಿದರು. ಚಿತ್ರದಲ್ಲಿ ಮಂಗಳ ಮುದ್ದುಮಲ್ಲಪ್ಪ, ಡಾ.ರಾಧಾ ಮಲ್ಲಪ್ಪ, ಅಂಚೆ ಮಾರುಕಟ್ಟೆ ವಿಭಾಗದ ವ್ಯವಸ್ಥಾಪಕ ಸುರೇಶ್‌ಕುಮಾರ್ ಇದ್ದಾರೆ. ಮತ್ತೊಂದು ಚಿತ್ರದಲ್ಲಿ ಕಾಫಿಪುಡಿ ಸಾಕಮ್ಮ ಅವರ ವಿಶೇಷ ಅಂಚೆ ಲಕೋಟೆಯನ್ನು ಕಾಣಬಹುದು.

ಮೈಸೂರು, ಜ.9(ಜಿಎ)–ಮಹಿಳಾ ಸಬಲೀಕರಣದ ಅಂಗವಾಗಿ ಈ ಬಾರಿಯ ರಾಜ್ಯ ಮಟ್ಟದ ಅಂಚೆ ಚೀಟಿ ಪ್ರದರ್ಶನ ಕರ್ನಾಪೆಕ್ಸ್‌ನಲ್ಲಿ ಮೈಸೂರಿನ ಶಂಖು, ಕಪ್ಪೆಚಿಪ್ಪಿನ ಕಲಾಕೃತಿಗಳ ವಸ್ತು ಸಂಗ್ರಹಾಲಯ ಮತ್ತು ಕರ್ನಾಟಕದ ಮೊಟ್ಟ ಮೊದಲ ಮಹಿಳಾ ಕಾಫಿ ಉದ್ಯಮಿ ಕೊಡಗಿನ ಕಾಫಿಪುಡಿ ಸಾಕಮ್ಮ ಅವರ ಕುರಿತಾದ ವಿಶೇಷ ಅಂಚೆ ಲಕೋಟೆಯನ್ನು ಬಿಡುಗಡೆಗೊಳಿಸಲಾಯಿತು ಎಂದು ಮೈಸೂರು ವಿಭಾಗದ ಅಂಚೆ ಉಪ ಅಧೀಕ್ಷಕ ಸುನೀಲ್ ಹಳಪೇಟಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಚೆ ಇಲಾಖೆ ವತಿಯಿಂದ ಪ್ರಸಿದ್ಧ ವ್ಯಕ್ತಿ, ಸ್ಥಳ, ಸಂಗ್ರಹಾಲಯಗಳ ವಿಶೇಷ ಅಂಚೆ ಲಕೋಟೆಗಳನ್ನು ಬಿಡುಗಡೆಗೊಳಿಸುವುದು ವಾಡಿಕೆ. ಅದರಂತೆ ಮೈಸೂರಿನ ಲಲಿತ ಮಹಲ್, ಕುವೆಂಪು, ಮಲ್ಲಿಗೆ ಹೂ, ವೀಳ್ಯದೆಲೆ, ಫೀಲ್ಡ್ ಮಾರ್ಷಲ್ ಕಾರಿಯಪ್ಪ ಸೇರಿದಂತೆ ಅನೇಕರ ವಿಶೇಷ ಅಂಚೆ ಲಕೋಟೆಗಳನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ ಎಂದು ತಿಳಿಸಿದರು.

ಕಳೆದ ನಾಲ್ಕು ವರ್ಷದ ನಂತರ ಜ.8ರಂದು ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಈ ಬಾರಿಯ ರಾಜ್ಯ ಮಟ್ಟದ ಅಂಚೆ ಚೀಟಿ ಪ್ರದರ್ಶನ ಕರ್ನಾಪೆಕ್ಸ್‌ನಲ್ಲಿ ಕಳೆದ ನಾಲ್ಕು ದಶಕಗಳಿಂದ ಶಂಖು, ಕಪ್ಪೆಚಿಪ್ಪಿನ 300ಕ್ಕೂ ಅಧಿಕ ಕಲಾಕೃತಿಗಳ ವಸ್ತು ಸಂಗ್ರಹಾಲಯದ ಮೂಲಕ ಗಿನ್ನಿಸ್ ದಾಖಲೆ ಮಾಡಿದ ಡಾ.ರಾಧಾ ಮಲ್ಲಪ್ಪ ಅವರ ವಿಶೇಷ ಲಕೋಟೆ ಬಿಡುಗಡೆಗೊಳಿಸಲಾಗಿದ್ದು, ಇದರಲ್ಲಿ ಅವರು ಕಪ್ಪೆಚಿಪ್ಪಿನಿಂದ ಮಾಡಿದ 22 ಅಡಿ ಎತ್ತರದ ಗಣೇಶ ಮೂರ್ತಿ ಮತ್ತು ತಾಜ್ ಮಹಲ್ ಆಕೃತಿಗಳ ಚಿತ್ರಗಳಿದ್ದು, ಹಿಂಬದಿಯಲ್ಲಿ ಸಂಗ್ರಹಾಲಯ ಮತ್ತು ಡಾ.ರಾಧಾ ಮಲ್ಲಪ್ಪ ಅವರ ಸಂಪೂರ್ಣ ಮಾಹಿತಿ ಒದಗಿಸಲಾಗಿದೆ. ಈ ಮೂಲಕ ನಮ್ಮ ಸಂಸ್ಕೃತಿ ಮತ್ತು ಪ್ರವಾಸಿ ತಾಣಗಳನ್ನು ಪರಿಚಯಿಸಬಹುದಾಗಿದೆ ಎಂದು ತಿಳಿಸಿದರು.

ಇವರೊಟ್ಟಿಗೆ ಕಾಫಿಪುಡಿ ಸಾಕಮ್ಮ ಕೊಡಗು ಜಿಲ್ಲೆಯ ಸೋಮವಾರಪೇಟೆ 'ಸಾಕಮ್ಮಾಸ್' ಕಾಫಿ ಅಂಗಡಿಯ ಮಾಲೀಕರಾಗಿದ್ದರು. ಕಾಫಿ ವಾಣಿಜ್ಯ ಬೆಳೆಯನ್ನು ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಿದ ಕೀರ್ತಿ ಇವರದಾಗಿತ್ತು. 1920ರಲ್ಲಿ ಬೆಂಗಳೂರಿನ ಬುಲ್ ಟೆಂಪಲ್ ರಸ್ತೆಯಲ್ಲಿ ಕಾಫಿ ಕ್ಯುರಿಂಗ್ಸ್ ವರ್ಕ್ಸ್ ಘಟಕವನ್ನು ಸ್ಥಾಪಿಸಿದ್ದರು. ಬೆಂಗಳೂರಿನ ಜನತೆಗೆ ಕಾಫಿ ರುಚಿಯನ್ನು ಪಸರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಇವರ ಈ ವಿಶೇಷ ಅಂಚೆ ಲಕೋಟೆಯ ಮುಂಭಾಗದಲ್ಲಿ ಸಾಕಮ್ಮ ಅವರ ಫೋಟೋ, ಕಾಫಿ ತುಂಬಿದ ಒಂದು ಕಪ್, ಸುತ್ತಲೂ ಕಾಫಿ ಬೀಜಗಳು ಮೇಲ್ಭಾಗದಲ್ಲಿ ಕಾಫಿ ಸಸಿ ಆಕರ್ಷಕವಾಗಿದ್ದು, ಹಿಂಭಾಗದಲ್ಲಿ ಸಾಕಮ್ಮ ಅವರ ಸಾಧನೆಯ ವಿವರವನ್ನು ಸಂಕ್ಷಿಪ್ತವಾಗಿ ತಿಳಿಸಲಾಗಿದೆ. ಸುದ್ದಿಗೋಷ್ಠಿಯಲ್ಲಿ ಮಂಗಳ ಮುದ್ದುಮಲ್ಲಪ್ಪ, ಡಾ.ರಾಧಾ ಮಲ್ಲಪ್ಪ, ಅಂಚೆ ಮಾರುಕಟ್ಟೆ ವಿಭಾಗದ ವ್ಯವಸ್ಥಾಪಕ ಸುರೇಶ್‌ಕುಮಾರ್ ಉಪಸ್ಥಿತರಿದ್ದರು.

ಸುತ್ತೂರು ಜಾತ್ರಾ ಮಹೋತ್ಸವ: ಛಾಯಾಚಿತ್ರ ಸ್ಪರ್ಧೆ

ಮೈಸೂರು, ಜ.9– ಶ್ರೀ ಸುತ್ತೂರು ಕ್ಷೇತ್ರದಲ್ಲಿ 2024 ಫೆಬ್ರವರಿ 6ರಿಂದ 11ರವರೆಗೆ ಜರುಗಲಿರುವ ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸ್ಪರ್ಧೆಗಳು ಜರುಗಲಿವೆ.

ಈ ಜಾತ್ರಾ ಮಹೋತ್ಸವಕ್ಕೆ ಸಂಬಂಧಪಟ್ಟ ಛಾಯಾಚಿತ್ರ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಡಿಎಸ್‌ಎಲ್‌ಆರ್ ಕ್ಯಾಮೆರಾ ಹಾಗೂ ಮೊಬೈಲ್ ಛಾಯಾಚಿತ್ರಗಳ ಎರಡು ವಿಭಾಗಗಳ ಸ್ಪರ್ಧೆ ಇರುತ್ತದೆ. ಸ್ಪರ್ಧೆಗೆ ಯಾವುದೇ ಶುಲ್ಕವಿರುವುದಿಲ್ಲ ಹಾಗೂ ವಯೋಮಾನದ ನಿರ್ಬಂಧವಿಲ್ಲ. ಸ್ಪರ್ಧೆಯಲ್ಲಿ ಪಾಲ್ಗೊಳ್ಳ ಬಯಸುವವರು 2024 ಜನವರಿ 30ರ ಸಂಜೆಯೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು. ಛಾಯಾಚಿತ್ರಗಳನ್ನು ಫೆಬ್ರವರಿ 20ರ ಒಳಗೆ ಸಲ್ಲಿಸಬೇಕು. ಫಲಿತಾಂಶವನ್ನು ನಂತರ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದು. ಸ್ಪರ್ಧೆಗೆ ಕಳುಹಿಸಿದ ಛಾಯಾಚಿತ್ರಗಳನ್ನು ಹಿಂತಿರುಗಿಸಲಾಗುವುದಿಲ್ಲ. ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರಗಳನ್ನು ನೀಡಲಾಗುವುದು. ಹೆಚ್ಚಿನ ವಿವರಗಳಿಗಾಗಿ ಮಹಾವಿದ್ಯಾಪೀಠದ ಜಾತ್ರಾ ಮಹೋತ್ಸವ ಕಾರ್ಯಾಲಯದಲ್ಲಿ ಅಥವಾ ನೇರವಾಗಿ ಸಂಚಾಲಕರಾದ ಜಿ.ಎಲ್.ತ್ರಿಪುರಾಂತಕ ಹಾಗೂ ಎಂ.ನಾಗೇಂದ್ರ, ದೂ. 0821-2548212, 9686677284 9448609062 ಸಂಪರ್ಕಿಸಲು ಕೋರಲಾಗಿದೆ.



ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರ ಕಚೇರಿಯಲ್ಲಿ ಮೈಸೂರು ನಾಯಕ ಪತ್ರಿಕೆಯ 2024ನೇ ಸಾಲಿನ ಕ್ಯಾಲೆಂಡರ್ ಅನ್ನು ಶಾಸಕ ಕೆ.ಹರೀಶ್‌ಗೌಡ ಮತ್ತು ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಭಾಗ್ಯ ಮಾದೇಶ್, ಪ್ರೇಮಾ ಶಂಕರೇಗೌಡ ಬಿಡುಗಡೆ ಮಾಡಿದರು. ಈ ವೇಳೆ ಪಡುವಾರಹಳ್ಳಿ ಪಾಪಣ್ಣ, ಸುಣ್ಣದಕೇರಿ ರಮೇಶ್, ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯ ಮಹದೇಶ್, ತಾವರೆಕಟ್ಟೆ ರಮೇಶ್‌ಬಾಬು, ಮದನ್ ಮಾದೇಶ್, ಕೃಷ್ಣ, ಮಾದೇಶ್‌ಸ್ವಾಮಿ, ಕುಮಾರ, ಮಾದೇವು, ಬಾಲಚಂದ್ರ, ಪ್ರದೀಪ್, ಸತ್ಯನಾರಾಯಣ ಮತ್ತಿತರರು ಉಪಸ್ಥಿತರಿದ್ದರು.

ರಾಮಾಯಣ ಲಿಖಿತ ರಸಪ್ರಶ್ನೆ ಸ್ಪರ್ಧೆ

ಮೈಸೂರು, ಜ. 9– ಅಯೋಧ್ಯೆಯ ಶ್ರೀ ರಾಮಮಂದಿರ ಉದ್ಘಾಟನೆಯ ಶುಭ ಸಂದರ್ಭದ ಪ್ರಯುಕ್ತ ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ಜ.21ರ ಭಾನುವಾರ ಬೆಳಗ್ಗೆ 10.30ಕ್ಕೆ ಶ್ರೀ ರಾಮಾಯಣ ಲಿಖಿತ ರಸಪ್ರಶ್ನೆ ಸ್ಪರ್ಧೆಯನ್ನು ಹಮ್ಮಿಕೊಂಡಿದೆ.

ಸ್ಪರ್ಧೆಯು ಹದಿನೆಂಟು ವರ್ಷಕ್ಕಿಂತ ಮೇಲ್ಪಟ್ಟ ನಾಗರಿಕರಿಗೆ ಹಾಗೂ ಹದಿನೇಳರ ಒಳಗಿನ ಮಕ್ಕಳಿಗಾಗಿ ಎರಡು ವಿಭಾಗಗಳಲ್ಲಿ ನಡೆಯಲಿದೆ. ವಿದ್ಯಾರ್ಥಿಗಳು, ಗೃಹಿಣಿಯರು, ಉದ್ಯೋಗಸ್ಥರು, ಹಿರಿಯ ನಾಗರಿಕರೆಲ್ಲರಿಗೂ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿದೆ. ಎಲ್ಲರಿಗೂ ಪ್ರಮಾಣ ಪತ್ರ ದೊರೆಯಲಿದೆ. ಒಟ್ಟು ಒಂದು ನೂರು ಅಂಕಗಳ ಈ ಪರೀಕ್ಷೆಯ ಅವಧಿಯು 90 ನಿಮಿಷಗಳಾಗಿರುತ್ತದೆ. ಸ್ಪರ್ಧಾ ಪರೀಕ್ಷೆಯು ರಾಮಕೃಷ್ಣನಗರದ ಜಯಲಕ್ಷ್ಮಿ ದೇವಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯಲಿದೆ. ಆಸಕ್ತರು ತಮ್ಮ ಹೆಸರನ್ನು ಜ.20ರೊಳಗೆ 9964790442 ಅಥವಾ 8310306882 ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಂಸ್ಥಾಪನಾ ಕಾರ್ಯದರ್ಶಿ ಗಾಯತ್ರಿ ಸುಂದರೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಮೈಸೂರು,ಜ.9–2023–24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರುವ (2023 ಜನವರಿ 30 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್. ಡಿ ಪ್ರಾರಂಭಿಸಬೇಕು) ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ) 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2023–24ನೇ ಸಾಲಿನಲ್ಲಿ ಕರ್ನಾಟಕ ಶಾಸನಬದ್ಧ ವಿಶ್ವವಿದ್ಯಾಲಯಗಳು, ಅಧೀನಕ್ಕೊಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜ.10 ಕೊನೇ ದಿ. ವಿವರಗಳಿಗಾಗಿ https://bcwd.karnataka.gov.in ಅಥವಾ ದೂ.ಸಂ. 8050770004 ಸಂಪರ್ಕಿಸಬಹುದು.

ವಿಶ್ವಕರ್ಮ ಯುವ ಜಾಗೃತಿ ವೇದಿಕೆಯಿಂದ 'ಸೇವಾರತ್ನ' ಪ್ರಶಸ್ತಿ ಪ್ರದಾನ



ಜಿಲ್ಲಾ ಪತ್ರಕರ್ತರ ಭವನದಲ್ಲಿ ವಿಶ್ವಕರ್ಮ ಯುವ ಜಾಗೃತಿ ವೇದಿಕೆಯಿಂದ ಸಾಧಕರಿಗೆ 'ಸೇವಾರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.


ಮೈಸೂರು, ಜ.9(ಜಿಎ)–ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮೈಸೂರು ಜಿಲ್ಲಾ ವಿಶ್ವಕರ್ಮ ಯುವ ಜಾಗೃತಿ ವೇದಿಕೆ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಐವರು ಸಾಧಕರಿಗೆ 'ಸೇವಾರತ್ನ' ಪ್ರಶಸ್ತಿ ಪ್ರದಾನ ಮತ್ತು ವೇದಿಕೆಯ ನೂತನ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು.

ಮೈಸೂರು ಜಿಲ್ಲಾ ವಿಶ್ವಕರ್ಮ ಯುವ ಜಾಗೃತಿ ವೇದಿಕೆ ವತಿಯಿಂದ ಮಂಗಳವಾರ ಆಯೋಜಿಸಿದ್ದ ಸಮಾರಂಭದಲ್ಲಿ ಏಸ್ ಎಜುಕೇಷನ್ ಟ್ರಸ್ಟ್‌ನ ಸಿಇಒ ಡಾ.ರಾಜು ದೇಸಾನಿ, ಚಿಕ್ಕಲ್ಲೂರು ಹೊಸಮಠದ ಕಾರ್ಯದರ್ಶಿ ಮೈಸೂರು ಸಿದ್ದಪ್ಪಾಜಿ, ವಿಶ್ವಕರ್ಮ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎನ್.ನಂದಕುಮಾರ್, ನಿವೃತ್ತ ಇಂಜಿನಿಯರ್ ಎಂ.ಉದಯಶಂಕರ್, ಚನ್ನಪಟ್ಟಣದ ಸಾಂತ್ವನ ಮ್ಯೂಸಿಕ್ ಅಂಡ್ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷೆ ಡಾ.ಪವಿತ್ರ ಪ್ರಭಾಕರ್ ರೆಡ್ಡಿ ಅವರಿಗೆ 'ಸೇವಾರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಪ್ರಶಸ್ತಿ ಸ್ವೀಕರಿಸಿದ ಏಸ್ ಎಜುಕೇಷನ್ ಟ್ರಸ್ಟ್‌ನ ಸಿಇಒ ಡಾ.ರಾಜು ದೇಸಾನಿ ಮಾತನಾಡಿ, ಸಮುದಾಯದ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಎಲ್ಲಾ ನಾಯಕರು ಹೆಚ್ಚು ಆದ್ಯತೆ ನೀಡಿ, ಸಮುದಾಯದ ನಾಯಕರು ಶೈಕ್ಷಣಿಕ ಅಭಿವೃದ್ಧಿಗೆ ಬೇಕಿರುವ ಸಹಾಯ ಮಾಡಿ. ಗ್ರಾಮೀಣ ಮಟ್ಟದ ವಿದ್ಯಾರ್ಥಿಗಳಲ್ಲಿ ವಿಜ್ಞಾನದ ಬಗ್ಗೆ ಹೆಚ್ಚಿನ ಅರಿವು ಮೂಡಿಸಿ ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಸದಾ ಸಮುದಾಯದ ಜೊತೆ ಇರುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಪಾಲಿಕೆ ಮಾಜಿ ಸದಸ್ಯರಾದ ರಮೇಶ್ (ರಮಣಿ), ಛಾಯಾದೇವಿ, ವೇದಿಕೆ ಅಧ್ಯಕ್ಷ ಕೆ.ಕೆಂಡಗಣ್ಣ ವಿಶ್ವಕರ್ಮ, ಉಪಾಧ್ಯಕ್ಷ ಎಲ್.ಸತೀಶ್, ಪ್ರಧಾನ ಕಾರ್ಯದರ್ಶಿ ಟಿ.ಎ.ಸಿದ್ದರಾಜು, ಸಂಚಾಲಕರಾದ ಲಕ್ಷ್ಮೀ, ಪದಾಧಿಕಾರಿಗಳಾದ ಸಿದ್ದೇಶ್, ನಾಗರಾಜು, ರಾಜು, ಲೋಕೇಶ್, ಸಿದ್ದೇಶ್, ಮಹಾಂತೇಶ್ ಬಡಿಗೇರ್, ಶಿವಶಂಕರ್, ಮಹೇಶ್, ಮಂಜು, ಮೂರ್ತಿ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

10.1.2024 ಬುಧವಾರ, ಮಳೆ ನಕ್ಷತ್ರ: ಪೂಷಾ 29.12.2023 ರಿಂದ 10.01.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
ತಿಥಿ: ಚತುರ್ದಶಿ, ನಕ್ಷತ್ರ: ಮೂಲಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಚಾಯ್ಸ್ ಈಕ್ವಿಟಿ ಗಳಿಕೆ–ಉಳಿಕೆ–ಹೂಡಿಕೆ–ಹಣಕಾಸಿನ ಮಾಹಿತಿಯ ಬಾನುಲಿ ಸರಣಿ, ಪ್ರಸ್ತುತಿ–ಮೂಕನಹಳ್ಳಿ ರಂಗಸ್ವಾಮಿ, 6.40 ಪದಸಂಸ್ಕೃತಿ–ಡಾ.ಆರ್.ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 9.00 ವೃತ್ತಿ ಮಾರ್ಗದರ್ಶನ–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಅಧ್ಯಯನ ಅವಕಾಶಗಳೂ ಹಾಗೂ ಪ್ರವೇಶಾತಿ ಕುರಿತು ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ ಕುಲಪತಿ ಡಾ.ಶರಣಪ್ಪ ವಿ. ಹಲಸೆ, ಪ್ರಸ್ತುತಿ–ಎನ್.ಕೇಶವಮೂರ್ತಿ, 10.00 ಎಸ್.ವಿ. ಸಹನಾ–ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಎಂ.ವೆಂಕಟೇಶ್ ಕುಮಾ, ಸಂಗೀತಾ ಕಟ್ಟಿ, 3.00 ಡೆಲ್ಲಿ ವಿ.ಮುತ್ತುಕುಮಾರ್–ಹಾಡುಗಾರಿಕೆ, 4.00 ಮಹಿಳಾ ರಂಗ–ಸ್ತ್ರೀ ಚೇತನ–ಉದ್ಯಮಿ ಶೋಭಾ ದಿನೇಶ್ ಅವರೊಂದಿಗೆ ಮಾತುಕತೆ, 6.50 ಕೃಷಿರಂಗ–ಸಾವಯವ ವಿಧಾನದಲ್ಲಿ ದಾಸ್ತಾನು ಕೀಟಗಳ ನಿರ್ವಹಣೆ ಕುರಿತು ಡಾ.ವೀರಣ್ಣ ಎನ್.ಪಟೇಲ್ ಅವರೊಂದಿಗೆ ಸಂದರ್ಶನ, 9.30 ಪಂಡಿತ್ ಸಿಯಾರಾಮ್ ತಿವಾರಿ–ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹತೋಬಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ ಮಹಾಭಿಷೇಕ, ಅಲಂಕಾರಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ, ಬೆಳಗ್ಗೆಯಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ.

■ **ಮೈಸೂರು ವಿಶ್ವವಿದ್ಯಾಲಯ, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ:** 74ನೇ ಸಂವಿಧಾನ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸಗಳ ಮಾಲಿಕೆ, ಮೈಸೂರು ವಿವಿ ಯೋಜನಾ ಮತ್ತು ಮೌಲ್ಯಮಾಪನ ಮಂಡಳಿ ನಿರ್ದೇಶಕ ಪ್ರೊ.ಎನ್.ನಾಗರಾಜ ಅವರಿಂದ ಭಾರತ ಸಂವಿಧಾನ ಮತ್ತು ವಾಣಿಜ್ಯ ವ್ಯವಹಾರಗಳು ಕುರಿತು ಉಪನ್ಯಾಸ, ಅಧ್ಯಕ್ಷತೆ: ಮಹಾರಾಣಿ ವಾಣಿಜ್ಯ ಮತ್ತು ವ್ಯವಹಾರ ವಿಜ್ಞಾನ ಕಾಲೇಜು ಪ್ರಾಂಶುಪಾಲ ಪ್ರೊ.ಸೋಮಣ್ಣ, ಸ್ಥಳ: ಮಹಾರಾಣಿ ವಾಣಿಜ್ಯ ಮತ್ತು ವ್ಯವಹಾರ ವಿಜ್ಞಾನ ಕಾಲೇಜು, ಬೆಳಗ್ಗೆ 10.30ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಇಂಗ್ಲಿಷ್ ಅಧ್ಯಯನ ವಿಭಾಗ:** ಕುಮಾರವ್ಯಾಸ–ಕನ್ನಡ ಮಹಾಭಾರತ ಇಂಗ್ಲಿಷ್ ಅನುವಾದಿತ ಕೃತಿ ಬಿಡುಗಡೆ, ಕೃತಿ ಬಿಡುಗಡೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಸಂಪಾದಕರು: ಭಾಷಾಶಾಸ್ತ್ರ ಪ್ರಾಧ್ಯಾಪಕ ಪ್ರೊ.ಎಸ್.ಎನ್.ಶ್ರೀಧರ್, ಮುಖ್ಯ ಅತಿಥಿಗಳು: ಇಂಗ್ಲಿಷ್ ಪ್ರಾಧ್ಯಾಪಕ ಪ್ರೊ.ಎಚ್.ಎಸ್.ಶಿವಪ್ರಕಾಶ್, ಉಪಸ್ಥಿತರು: ಇಂಗ್ಲಿಷ್ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಕೆ.ಸದಾಶಿವ, ನಿವೃತ್ತ ಕನ್ನಡ ಪ್ರಾಧ್ಯಾಪಕ ಪ್ರೊ.ಕೃಷ್ಣಮೂರ್ತಿ ಹನೂರು, ಸ್ಥಳ: ಎಂ.ಎ. ಸೀನಿಯರ್ ಹಾಲ್, ಇಂಗ್ಲಿಷ್ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನ:** ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ದಿನದರ್ಶಿಕೆ ಬಿಡುಗಡೆ ಹಾಗೂ ಶ್ರೀ ಬಸವ ಸೇವಾ ಪ್ರಶಸ್ತಿ, ಸಾರ್ಥಕ ಶರಣ ಸಾಹಿತ್ಯ ಪ್ರಶಸ್ತಿ ಪ್ರದಾನ ಸಮಾರಂಭ, ಸಾನ್ನಿಧ್ಯ : ಶ್ರೀ ವಿಷ್ಣು ಸಾಲಿಗ್ರಾಮ ಗುರೂಜಿ, ದಿನದರ್ಶಿಕೆ ಬಿಡುಗಡೆ : ಸಾಹಿತಿ ಬನ್ನೂರು ಕೆ. ರಾಜು, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಪ್ರಾಸ್ತಾವಿಕ ನುಡಿ : ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ. ಚಂದ್ರಶೇಖರ್, ವಿಶೇಷ ಆಹ್ವಾನಿತರು : ಚಲನಚಿತ್ರ ನಟ ಸುಪ್ರೀತ್, ಸಮಾಜ ಸೇವಕ ಡಾ. ರಘುರಾಂ ವಾಜಪೇಯಿ, ನಜರ್‌ಬಾದ್ ನಟರಾಜು, ಟಿ. ಸುರೇಶ್, ಎಂ. ಸುನೀಲ್, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಮ. 12.30ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಪ್ರಖ್ಯಾತ ಪಂಡಿತ್ ಕಲ್ಲಾಪುರ ಪವಮಾನಾಚಾರ್ಯ ಅವರಿಂದ ಭಗವದ್ಗೀತೆ 14ನೇ ಅಧ್ಯಾಯ ಕುರಿತು ಪ್ರವಚನ, ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ, ಸಂಜೆ 5ರಿಂದ 6ರವರೆಗೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ (ಬೆಂಗಳೂರು), ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ (ಮೈಸೂರು) :** ಹೆಸರಾಂತ ಉಪನ್ಯಾಸಕರಾದ ವಿದ್ವಾನ್ ಎಂ.ಕೆ. ಶೆಲ್ವನಾರಾಯಣ ಅವರಿಂದ ತಿರುಪ್ಪಾವೈ ಕಾಲಕ್ಷೇಪ, ಸ್ಥಳ: ಕೃಷ್ಣಮೂರ್ತಿಪುರಂ ಶ್ರೀ ರಾಮಮಂದಿರ, ಕಾಂತರಾಜ ರಸ್ತೆ, ಸಂಜೆ 6.15ರಿಂದ.

■ **ಶ್ರೀ ಉತ್ತರಾದಿ ಮಠ ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ :** ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀ ಪಾದಂಗಳವರ ಆಜ್ಞೆ ಮತ್ತು ಅನುಗ್ರಹದಿಂದ ಹೆಸರಾಂತ ಪ್ರವಚನಕಾರರಾದ ಪಂಡಿತ್ ಶ್ರೀ ಪವಮಾನಾಚಾರ್ಯ ಕಲ್ಲಾಪುರ ಅವರಿಂದ ಶ್ರೀ ಭಗವದ್ಗೀತಾ ಅಭಿಯಾನ, ಸ್ಥಳ: ರೋಗ ಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30ರಿಂದ.

ಮೈಸೂರಿನ ರಿಂಗ್ ರಸ್ತೆ ಸ್ವಚ್ಛತೆ, ಸೌಂದರ್ಯೀಕರಣಕ್ಕೆ ಜವಾಬ್ದಾರಿ ನಿಗದಿ

ಸಂಸದ ಪ್ರತಾಪ್ ಸಿಂಹ ಅಧ್ಯಕ್ಷತೆಯ ಅಧಿಕಾರಿಗಳ ಸಭೆಯಲ್ಲಿ ತೀರ್ಮಾನ

- ಕಟ್ಟಡ ನಿರ್ಮಾಣ ತ್ಯಾಜ್ಯ ಮರು ಬಳಕೆ
- ಸಾತಗಳ್ಳಿಯಲ್ಲಿ 9.5 ಎಕರೆ ಜಾಗ ಮೀಸಲು
- ಗ್ರೇಟರ್ ಮೈಸೂರ್‌ಗೆ ಪೂರಕ ಯೋಜನೆ



ಮೈಸೂರು ನಗರಪಾಲಿಕೆಯ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಮಂಗಳವಾರ ರಿಂಗ್ ರಸ್ತೆಯ ಸ್ವಚ್ಛತೆಗೆ ಸಂಬಂಧಿಸಿದಂತೆ ಸಂಸದ ಪ್ರತಾಪ್ ಸಿಂಹ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಭೆ ನಡೆಯಿತು.



ಮೈಸೂರು, ಜ.9(ಬಿಎಲ್‌ಯು)– ಮೈಸೂರಿನ ರಿಂಗ್ ರಸ್ತೆಯನ್ನು ಸ್ವಚ್ಛಗೊಳಿಸಿ, ಸೌಂದರ್ಯೀಕರಣಕ್ಕೆ ನಗರಪಾಲಿಕೆ, ಮುಡಾ, ನಗರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಜವಾಬ್ದಾರಿಯನ್ನು ನಿಗದಿ ಮಾಡಲಾಗಿದೆ.

ಮೈಸೂರು ನಗರಪಾಲಿಕೆಯ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಮಂಗಳವಾರ ರಿಂಗ್ ರಸ್ತೆ (ರಾಷ್ಟ್ರೀಯ ಹೆದ್ದಾರಿ 275) ಸ್ವಚ್ಛತೆಗೆ ಸಂಬಂಧಿಸಿದಂತೆ ಸಂಸದ ಪ್ರತಾಪ್ ಸಿಂಹ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಅಧಿಕಾರಿಗಳಿಗೆ ಜವಾಬ್ದಾರಿಗಳನ್ನು ವಹಿಸಲಾಯಿತು.

ರಿಂಗ್ ರಸ್ತೆಯನ್ನು ಸ್ವಚ್ಛವಾಗಿಡಬೇಕು, ಅಕ್ಕಪಕ್ಕದಲ್ಲಿರುವ ಕಸ, ಕಟ್ಟಡ ನಿರ್ಮಾಣ ತ್ಯಾಜ್ಯವನ್ನು ವಿಲೇವಾರಿ ಮಾಡಬೇಕು, ರಸ್ತೆ ಮಧ್ಯೆ ಹೂವಿನ ಗಿಡಗಳನ್ನು ಬೆಳೆಸಿ ಸೌಂದರ್ಯೀಕರಣಗೊಳಿಸುವುದು ಸೇರಿದಂತೆ ರಿಂಗ್ ರಸ್ತೆಯ ನಿರ್ವಹಣೆ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ನಂಜನಗೂಡು ರಸ್ತೆಯ ಬಂಡಿಪಾಳ್ಯ ಎಂಪಿಎಂಸಿ ಜಂಕ್ಷನ್‌ನಿಂದ ನರಸೀಪುರ ರಸ್ತೆ ಜಂಕ್ಷನ್ ಹಾಗೂ ಎಪಿಎಂಸಿ ಜಂಕ್ಷನ್‌ನಿಂದ ರಮಾಬಾಯಿನಗರದ ತನಕ ಕಡಕೊಳ ಪಟ್ಟಣ ಪಂಚಾಯಿತಿಯವರು ನಿರ್ವಹಣೆ ಮಾಡಬೇಕು. ನರಸೀಪುರ ರಸ್ತೆ ಜಂಕ್ಷನ್‌ನಿಂದ ಮಣಿಪಾಲ್ ಆಸ್ಪತ್ರೆ ಜಂಕ್ಷನ್ ತನಕ ನಗರಪಾಲಿಕೆ ನಿರ್ವಹಣೆ ಮಾಡಬೇಕು. ಮಣಿಪಾಲ್ ಜಂಕ್ಷನ್‌ನಿಂದ ರಾಯಲ್ ಇನ್ ಜಂಕ್ಷನ್ ತನಕ ಮುಡಾ ನಿರ್ವಹಣೆ ಮಾಡಬೇಕು ಎಂದು ತಾಕೀತು ಮಾಡಿದರು.

ರಾಯಲ್ ಇನ್ ಜಂಕ್ಷನ್‌ನಿಂದ ವಿಜಯನಗರ 4ನೇ ಹಂತದ ತನಕ ಹೂಟಗಳ್ಳಿ ನಗರಸಭೆ ನಿರ್ವಹಣೆ ಮಾಡಬೇಕು. ವಿಜಯನಗರ 4ನೇ ಹಂತದಿಂದ ದಟ್ಟಗಳ್ಳಿಯ ಆದಿತ್ಯ ಸರ್ಕಲ್ ತನಕ ಬೋಗಾದಿ ಪಟ್ಟಣ ಪಂಚಾಯಿತಿ ನಿರ್ವಹಣೆ ಮಾಡಬೇಕು. ಆದಿತ್ಯ ಸರ್ಕಲ್‌ನಿಂದ ರಮಾಬಾಯಿನಗರದ ತನಕ ಶ್ರೀರಾಮಪುರ ಪಟ್ಟಣ ಪಂಚಾಯಿತಿ ನಿರ್ವಹಣೆ ಮಾಡಬೇಕು ಎಂದು ಸೂಚನೆ ನೀಡಿದರು.

ರಿಂಗ್ ರಸ್ತೆಯಲ್ಲಿ ಸಂಗ್ರಹಿಸುವ ಕಟ್ಟಡ ನಿರ್ಮಾಣ ತ್ಯಾಜ್ಯವನ್ನು ತಾತ್ಕಾಲಿಕವಾಗಿ ಖಾಲಿ ಜಾಗದಲ್ಲಿ ಡಂಪ್ ಮಾಡಬೇಕು. ಕಸವನ್ನು ವಿದ್ಯಾರಣ್ಯಪುರಂನಲ್ಲಿರುವ ಎಕ್ಸೆಲ್ ಪ್ಲಾಂಟ್‌ನಲ್ಲಿ ಡಂಪ್ ಮಾಡಬೇಕು ಎಂದು ಹೇಳಿದರು.

ಮೈಸೂರಿನ ಸಾತಗಳ್ಳಿಯಲ್ಲಿ ಒಂಭತ್ತೂವರೆ ಎಕರೆ ಜಾಗದಲ್ಲಿ ಕಟ್ಟಡ ನಿರ್ಮಾಣ ತ್ಯಾಜ್ಯದ ಮರು ಬಳಕೆಯ ಯೋಜನೆ ರೂಪಿಸಲಾಗುತ್ತಿದೆ. ಈಗ ಕಂಡ ಕಂಡಲ್ಲಿ ಸುರಿದಿರುವ ಕಟ್ಟಡ ನಿರ್ಮಾಣದ ತ್ಯಾಜ್ಯವನ್ನು ನಂತರ ಅಲ್ಲಿ ಡಂಪ್ ಮಾಡಬೇಕು ಎಂದು ತಿಳಿಸಿದರು.

ರಿಂಗ್ ರೋಡ್ ಅವ್ಯವಸ್ಥೆ ಬಗ್ಗೆ ಶಾಸಕ ಜಿ.ಟಿ.ದೇವೇಗೌಡರು ಕೂಡ ಆಗಾಗ್ಗೆ ಪ್ರಸ್ತಾಪ ಮಾಡುತ್ತಿರುತ್ತಾರೆ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ರಿಂಗ್ ರಸ್ತೆ ಸ್ವಚ್ಛವಾಗಿರಬೇಕು. ಎಲ್ಲೂ ಅವ್ಯವಸ್ಥೆ ತಾಂಡವವಾಡಬಾರದು ಎಂದು ಸೂಚಿಸಿದರು.

ಒಳಚರಂಡಿ ತ್ಯಾಜ್ಯ ನೀರು ದಿಕ್ಕಾಪಾಲಾಗಿ ಹರಿದು ಕಾವೇರಿ ನದಿ ಸೇರುತ್ತಿದೆ. ಈ ಹಿನ್ನೆಲೆಯಲ್ಲಿ ತ್ಯಾಜ್ಯ ನೀರು ನದಿ ಸೇರದೆ ನೇರವಾಗಿ ಪ್ಲಾಂಟ್ ಸೇರುವಂತೆ ಮಾಡಲು 1,900 ಕೋಟಿ ರೂಪಾಯಿ ಯೋಜನೆ ರೂಪಿಸಲಾಗುತ್ತಿದೆ. ಗ್ರೇಟರ್ ಮೈಸೂರು ಯೋಜನೆ ರೂಪಿಸಲು ಪೂರಕವಾಗಿ ಇಂತಹ ಯೋಜನೆಗೆ ರೂಪ ನೀಡಲಾಗುತ್ತಿದೆ ಎಂದು ಪ್ರತಾಪ್ ಸಿಂಹ ವಿವರಿಸಿದರು. ನಗರಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಸೂಪರಿಂಟೆಂಡೆಂಟ್ ಇಂಜಿನಿಯರ್ ಸಿಂಧು, ಎಕ್ಸಿಕ್ಯೂಟಿವ್ ಇಂಜಿನಿಯರ್ ನಾಗರಾಜು, ಲೋಕೋಪಯೋಗಿ ಇಲಾಖೆ ಎಇಇ ಸದಾಶಿವ, ಮುಡಾ ಎಕ್ಸಿಕ್ಯೂಟಿವ್ ಇಂಜಿನಿಯರ್ ಚನ್ನಕೇಶವ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಫೆಬ್ರವರಿ ಎರಡನೇ ವಾರದಲ್ಲಿ ಕಾಮಗಾರಿ ಆರಂಭ

ಮೈಸೂರು–ಕುಶಾಲನಗರ ರಾಷ್ಟ್ರೀಯ ಹೆದ್ದಾರಿ 275ರ 92 ಕಿಲೋಮೀಟರ್ ಯೋಜನೆಯ ಕಾಮಗಾರಿಯನ್ನು ಫೆಬ್ರವರಿ ಎರಡನೇ ವಾರದಲ್ಲಿ ಆರಂಭಿಸಲಾಗುವುದು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಭೆಯ ನಂತರ ಈ ವಿಚಾರ ತಿಳಿಸಿದ ಅವರು, ಹೆದ್ದಾರಿ ನಿರ್ಮಾಣ ಸಂಬಂಧ ಭೂಸ್ವಾಧೀನ ಪ್ರಕ್ರಿಯೆ ಕಾರ್ಯ ಬಹುತೇಕ ಪೂರ್ಣಗೊಂಡಿದೆ ಎಂದರು. ಇದಕ್ಕೂ ಮೊದಲು ಜ.28ರಂದು ಪರಿಸರ ಇಲಾಖೆಯ ಅನುಮತಿ ಪಡೆಯಲಾಗುವುದು. ಈ ಮೂಲಕ ಮೈಸೂರು–ಕುಶಾಲನಗರ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಫೆಬ್ರವರಿ 2ನೇ ವಾರದಲ್ಲಿ ಆರಂಭಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.



ಜಲದರ್ಶಿನಿ ಅತಿಥಿ ಗೃಹದಲ್ಲಿ ಸಂಸದ ಪ್ರತಾಪ್ ಸಿಂಹರಿಂದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಭೆ.

ಮೈಸೂರಲ್ಲಿ 2025ರೊಳಗೆ ಟ್ಯಾಪ್ ವಾಟರ್‌ನಂತೆ ಟ್ಯಾಪ್ ಗ್ಯಾಸ್

ಮೈಸೂರು ನಗರದ 65 ವಾರ್ಡ್‌ಗಳಲ್ಲಿ ಗ್ಯಾಸ್ ಪೈಪ್‌ಲೈನ್ ಮಾರ್ಗ ಅಳವಡಿಸಿ 2025ರೊಳಗೆ ಪ್ರತಿ ಮನೆಯಲ್ಲಿ ಟ್ಯಾಪ್ ವಾಟರ್‌ನಂತೆ ಟ್ಯಾಪ್ ಗ್ಯಾಸ್ ಸೌಲಭ್ಯ ಕಲ್ಪಿಸಲಾಗುವುದು ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮನೆ ಮನೆಗೂ ಗ್ಯಾಸ್ ಪೈಪ್‌ಲೈನ್ ಅಳವಡಿಸುವುದರಿಂದ ಜನರಿಗೆ ಕಡಿಮೆ ದರದಲ್ಲಿ ಅಡುಗೆ ಅನಿಲ ದೊರೆಯಲಿದೆ. ಈಗ ಒಂದು ಗ್ಯಾಸ್ ಸಿಲಿಂಡರ್‌ಗೆ 913 ರೂಪಾಯಿ ನಿಗದಿ ಮಾಡಲಾಗಿದ್ದು, 300 ರೂಪಾಯಿ ಸಬ್ಸಿಡಿ ಕಳೆದು 613 ರೂಪಾಯಿಗೆ ಅಡುಗೆ ಅನಿಲ ದೊರೆಯುತ್ತಿದೆ. ಮನೆ ಮನೆಗೆ ಗ್ಯಾಸ್ ಪೈಪ್‌ಲೈನ್ ಯೋಜನೆ ಅನುಷ್ಠಾನವಾದರೆ ಅತ್ಯಂತ ಕಡಿಮೆ ಬೆಲೆಯಲ್ಲಿ ಅಡುಗೆ ಅನಿಲ ದೊರೆಯಲಿದೆ ಎಂದು ಭರವಸೆ ನೀಡಿದರು.



ಗ್ಯಾಸ್ ಪೈಪ್ ಮಾರ್ಗದಲ್ಲಿ ರಸ್ತೆ ಅಗೆದು ಪೈಪ್ ಅಳವಡಿಸಲು ಒಂದು ಮೀಟರ್‌ಗೆ ಈ ಮೊದಲು 1,956 ರೂ. ನಿಗದಿ ಮಾಡಲಾಗಿತ್ತು. ಇದನ್ನು ಪಾಲಿಕೆಗೆ ಪಾವತಿ ಮಾಡಬೇಕಿತ್ತು. ಆದರೆ ಇದು ದುಬಾರಿ ಶುಲ್ಕವಾದ ಕಾರಣ ಈ ಬಗ್ಗೆ ಪುನರ್ ಪರಿಶೀಲನೆ ಮಾಡಿದ ಸರ್ಕಾರ 1 ಮೀಟರ್‌ಗೆ ಈಗ 1 ರೂ. ನಿಗದಿ ಮಾಡಿದೆ. ಈ ಸಂಬಂಧ ಸೆಪ್ಟೆಂಬರ್ 27ರಂದು ರಾಜ್ಯ ಸಚಿವ ಸಂಪುಟದ ಅನುಮೋದನೆ ದೊರಕಿದ್ದು, ಸೆಪ್ಟೆಂಬರ್ 29ರಂದು ಸರ್ಕಾರ ಆದೇಶ ಕೂಡ ಹೊರಡಿಸಿದೆ ಎಂದರು. ಮೈಸೂರು ನಗರದಲ್ಲಿ ಗ್ಯಾಸ್ ಪೈಪ್‌ಲೈನ್ ಯೋಜನೆ ಯಶಸ್ವಿಯಾದ ನಂತರ ಇಡೀ ಜಿಲ್ಲೆಯಲ್ಲಿ ಇದನ್ನು ಅನುಷ್ಠಾನ ಮಾಡಲಾಗುವುದು ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮಂತ್ರಾಕ್ಷತೆ ಸ್ವೀಕರಿಸಲು ಮನಸ್ಸಿಲ್ಲದವರಿಗೆ ಅಕ್ಕಿ ಕೊಡಲು ಮನಸಾಗುವುದೇ!

ಕಾಂಗ್ರೆಸ್ ನಾಯಕರಿಗೆ ಸಂಸದ ಪ್ರತಾಪ್ ಸಿಂಹ ತಿರುಗೇಟು

ಮೈಸೂರು, ಜ.9(ಬಿಎಲ್‌ಯು)– ರಾಮಮಂದಿರ ಉದ್ಘಾಟನೆಯ ಮಂತ್ರಾಕ್ಷತೆ ಸ್ವೀಕರಿಸಲು ಮನಸ್ಸಿಲ್ಲದವರಿಗೆ ಮಂತ್ರಾಕ್ಷತೆಗೆ ಅಕ್ಕಿ ಕೊಡಲು ಮನಸ್ಸು ಬರುತ್ತದೆಯೇ ಎಂದು ಸಂಸದ ಪ್ರತಾಪ್ ಸಿಂಹ ಪ್ರಶ್ನಿಸಿದ್ದಾರೆ.

ಮೈಸೂರು ನಗರಪಾಲಿಕೆಯಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ರಾಮಮಂದಿರ ಉದ್ಘಾಟನೆಗೆ ಆಹ್ವಾನಿಸಲು ನೀಡುತ್ತಿರುವ ಮಂತ್ರಾಕ್ಷತೆ ಅನ್ನಭಾಗ್ಯ ಯೋಜನೆಯ ಅಕ್ಕಿ ಎಂಬ ಕಾಂಗ್ರೆಸ್ ನಾಯಕರ ಟೀಕೆಗೆ ಪ್ರತಾಪ್ ಸಿಂಹ ತಿರುಗೇಟು ನೀಡಿದರು. ಮಂತ್ರಾಕ್ಷತೆ, ಗೋತ್ರದ ಬಗ್ಗೆ ಕಿಂಚಿತ್ತೂ ನಂಬಿಕೆ ಇಲ್ಲದ ಸಿದ್ದರಾಮಯ್ಯಗೆ ಮಂತ್ರಾಕ್ಷತೆಯ ಮಹತ್ವವೇನು ಗೊತ್ತಿಲ್ಲ. ಇಂತಹವರಿಗೆ ಏನು ಹೇಳಿದರೂ ಪ್ರಯೋಜನವಿಲ್ಲ ಎಂದು ಮೂದಲಿಸಿದರು.

ಮಹಾತ್ಮಾ ಗಾಂಧೀಜಿ ರಾಮರಾಜ್ಯದ ಕನಸು ಕಂಡಿದ್ದರು. ಈ ಹಿನ್ನೆಲೆಯಲ್ಲಿ ಅಯೋಧ್ಯೆಯಲ್ಲಿ ಆದರ್ಶ ಪುರುಷ ರಾಮನ ಪ್ರತಿಷ್ಠಾಪನೆ ಜ.22ರಂದು ನಡೆಯುತ್ತಿದೆ. ಈ ಮೂಲಕ 400 ವರ್ಷಗಳ ಹಲವು ರೀತಿಯ ಹೋರಾಟದ ಫಲವಾಗಿ ಇಂದು ಅಯೋಧ್ಯೆಯಲ್ಲಿ ರಾಮಮಂದಿರ ಲೋಕಾರ್ಪಣೆಗೊಳ್ಳುತ್ತಿದೆ ಎಂದರು.

ಇಂತಹ ವಿಶಿಷ್ಟ ಸಮಾರಂಭಕ್ಕೆ ಹೋಗುವುದು, ಬಿಡುವುದು ಸಿದ್ದರಾಮಯ್ಯ ವಿವೇಚನೆಗೆ ಬಿಟ್ಟಿದೆ. ಈ ಮೂಲಕ ಸಿದ್ದರಾಮಯ್ಯ ರಾಮರಾಜ್ಯದಲ್ಲಿ ನಂಬಿಕೆ ಇಟ್ಟಿದ್ದಾರೊ ಅಥವಾ ರಾವಣ ರಾಜ್ಯದಲ್ಲಿ ನಂಬಿಕೆ ಇಟ್ಟಿದ್ದಾರೊ ಎಂಬುದು ತಿಳಿಯಲಿದೆ ಎಂದರು. ರಾಮನನ್ನು ಬಿಜೆಪಿ ಪೇಟೆಂಟ್ ಪಡೆಯುತ್ತಿಲ್ಲ. ಆದರೆ ರಾಮಸೇತು ವಿಚಾರದಲ್ಲಿ ಜನರ ಭಾವನೆಗೆ ತಕ್ಕಂತೆ ನಡೆದುಕೊಂಡಿದ್ದರೆ, ರಾಮನನ್ನು ಭಕ್ತಿಯಿಂದ ಪೂಜಿಸಿದ್ದರೆ ಕಾಂಗ್ರೆಸ್‌ನವರೇ ಪೇಟೆಂಟ್ ಪಡೆಯಬಹುದಿತ್ತಲ್ಲವೇ ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಶ್ರೀರಾಮನ ಅಸ್ತಿತ್ವವನ್ನೆ ಪ್ರಶ್ನಿಸುವ ಇವರಿಗೆ ಬಿಜೆಪಿ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಟಾಂಗ್ ಕೊಟ್ಟರು.

ಕೇಂದ್ರದಲ್ಲಿ ಕಳೆದ 10 ವರ್ಷಗಳಿಂದ ನೆಲೆ ಕಳೆದುಕೊಂಡು ಪೇಚಾಡುತ್ತಿರುವ ಕಾಂಗ್ರೆಸ್ ನಾಯಕರು ಈಗ ಹತಾಶರಾಗಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ ಎಂದು ಲೇವಡಿ ಮಾಡಿದರು.

ಪ್ರತಾಪ್ ಸಿಂಹನೇನು ನ್ಯಾಷನಲ್ ಲೀಡರಾ ಎಂಬ ಡಾ.ಯತೀಂದ್ರ ಟೀಕೆಗೆ ಇದೇ ವೇಳೆ ತಿರುಗೇಟು ನೀಡಿದ ಪ್ರತಾಪ್ ಸಿಂಹ, ಖಂಡಿತ ನಾನು ನ್ಯಾಷನಲ್ ಲೀಡರ್ ಅಲ್ಲ ಎಂದು ಸ್ಪಷ್ಟಪಡಿಸಿದರು. ಅಪ್ಪ ಸಿಎಂ ಆಗಿರುವಾಗ ಪ್ರಭಾವ ಬಳಸಿ ತನ್ನ ಖಾಸಗಿ ಲ್ಯಾಬ್‌ಗೆ ಗುತ್ತಿಗೆ ಪಡೆದುಕೊಳ್ಳುವುದು ನ್ಯಾಷನಲ್ ಲೀಡರ್, ಅಪ್ಪನ ನೆಲೆಯಾದ ವರುಣ ಕ್ಷೇತ್ರ ಕಸಿದುಕೊಂಡು ಬಾದಾಮಿಗೆ ಓಡಿಸಿದ್ದು ನ್ಯಾಷನಲ್ ಲೀಡರ್, ತಾನು ಹೇಳಿದ ಅಧಿಕಾರಿಗಳ ವರ್ಗಾವಣೆಗೆ ಸಹಿ ಮಾಡಿ ಎಂದು ತಂದೆ ಮೇಲೆ ಒತ್ತಡ ತರುವುದು ನ್ಯಾಷನಲ್ ಲೀಡರ್ ಎಂದು ಪ್ರತಾಪ್ ಸಿಂಹ ಗೇಲಿ ಮಾಡಿದರು. ಸಾಮಾನ್ಯ ಕುಟುಂಬದ ಹಿನ್ನೆಲೆಯಿಂದ ಬಂದು ಪತ್ರಿಕೋದ್ಯಮದಲ್ಲಿ ಬರವಣಿಗೆ ಮೂಲಕ ಹೆಸರು ಸಂಪಾದಿಸಿ ಈ ಸ್ಥಾನಕ್ಕೆ ಬಂದಿದ್ದೇನೆ. ಇವರಂತೆ ತಂದೆ ರಾಜಕೀಯ ಪ್ರಭಾವ ಬಳಸಿ ಈ ಸ್ಥಾನಕ್ಕೆ ಬಂದಿಲ್ಲ ಎಂದು ಖಡಕ್ ಆಗಿ ನುಡಿದರು.



ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದನ್ನು ಖಂಡಿಸಿ, ಮೈಸೂರಿನ ಪುರಭವನದ ಮುಂಭಾಗ ಕಾವೇರಿ ಕ್ರಿಯಾ ಸಮಿತಿ ವತಿಯಿಂದ ನಡೆಯುತ್ತಿರುವ ಧರಣಿ ಮಂಗಳವಾರ 64ನೇ ದಿನ ಪೂರೈಸಿತು. ಈ ವೇಳೆ ಸಮಿತಿ ಅಧ್ಯಕ್ಷ ಎಸ್.ಜಯಪ್ರಕಾಶ್, ಉಪಾಧ್ಯಕ್ಷ ಸುರೇಶ್‌ಗೌಡ, ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಮೂಗೂರು ನಂಜುಂಡಸ್ವಾಮಿ, ಮೆಲ್ಲಹಳ್ಳಿ ಮಹದೇವಸ್ವಾಮಿ, ಮಂಜುಳಾ, ಪುಷ್ಪಾ, ಕೃಷ್ಣೇಗೌಡ, ಶಿವಕುಮಾರ್, ಬಾಲಕೃಷ್ಣ, ನಾಗರಾಜು, ಕೃಷ್ಣಪ್ಪ, ವಿಷ್ಣು ಮತ್ತಿತರರು ಪಾಲ್ಗೊಂಡಿದ್ದರು.

ಲೋಕಾಯುಕ್ತ ಶಾಕ್: 30ಕ್ಕೂ ಹೆಚ್ಚು ಕಡೆ ದಾಳಿ





ಕಂತೆ ಕಂತೆ ನೋಟು, ಚಿನ್ನಾಭರಣ ಪತ್ತೆ

ಬೆಂಗಳೂರು,ಜ.9–ರಾಜ್ಯದ ಹಲವೆಡೆ ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಮಂಗಳವಾರ ಬೆಳ್ಳಂಬೆಳಗ್ಗೆ ಶಾಕ್ ನೀಡಿದ್ದು, ಬೆಂಗಳೂರು, ಬಳ್ಳಾರಿ, ರಾಮನಗರ ಸೇರಿದಂತೆ ರಾಜ್ಯದ 30 ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ಮಾಡಿದ್ದಾರೆ. ದಾಳಿ ವೇಳೆ ಅಧಿಕಾರಿಗಳ ಮನೆಯಲ್ಲಿ ಕಂತೆ ಕಂತೆ ನೋಟು, ಚಿನ್ನ, ಬೆಳ್ಳಿ ಆಭರಣಗಳು ಪತ್ತೆಯಾಗಿವೆ ಎಂದು ತಿಳಿದುಬಂದಿದೆ.

ಬೆಸ್ಕಾಂ ಮುಖ್ಯ ಜನರಲ್ ಮ್ಯಾನೇಜರ್ ಎಂ.ಎಲ್.ನಾಗರಾಜ್ ಅವರ ಆಸ್ತಿಗಳ ಶೋಧ ಕಾರ್ಯಾಚರಣೆ ಇನ್ನು ನಡೆಯುತ್ತಿದೆ. ಇದಲ್ಲದೆ ಬೆಂಗಳೂರು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಡಿ.ಎಂ. ಪದ್ಮನಾಭ ನಿವಾಸದಲ್ಲಿ ಶೋಧ ನಡೆಸಲಾಗುತ್ತಿದೆ. ಬೆಂಗಳೂರಿನ ಸೂಪರಿಂಟೆಂಡೆಂಟ್ ಎಂಜಿನಿಯರ್ ಎನ್.ಸತೀಶ್, ಬೆಂಗಳೂರಿನಲ್ಲಿ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಆಗಿರುವ ಸೈಯದ್ ಮುನೀರ್ ಅಹಮದ್, ಚೆನ್ನೇನಹಳ್ಳಿ ಗ್ರಾ.ಪಂ.ಸದಸ್ಯ ಎಚ್.ಎಸ್.ಸುರೇಶ್ ಮತ್ತು ರಾಮನಗರದ ನಗರ ಮತ್ತು ಗ್ರಾಮಾಂತರ ಯೋಜನೆಯ ಸದಸ್ಯ ಕಾರ್ಯದರ್ಶಿ ಹಾಗೂ ಜಂಟಿ ನಿರ್ದೇಶಕ ಮಂಜೇಶ್ ಬಿ.ನಿವಾಸದ ಮೇಲೆ ಲೋಕಾಯುಕ್ತ ದಾಳಿ ನಡೆದಿದೆ.

ಬೆಸ್ಕಾಂ ಮುಖ್ಯ ಜನರಲ್ ಮ್ಯಾನೇಜರ್ ಎಂ.ಎಲ್.ನಾಗರಾಜು ವಿರುದ್ಧ ದಾಖಲಾದ ಅಕ್ರಮ ಆಸ್ತಿ ಪ್ರಕರಣದ ಆಧಾರದ ಮೇಲೆ ಕೂಡ್ಲಿಗಿ, ಬಳ್ಳಾರಿಯ ಐದು ಸ್ಥಳಗಳಲ್ಲಿ ಮತ್ತು ಬೆಂಗಳೂರು ನಗರದ 2 ಸ್ಥಳಗಳಲ್ಲಿ ಶೋಧ ನಡೆಸಲಾಗಿದೆ. 9 ನಿವೇಶನ, 3 ಮನೆ, 2 ಪೆಟ್ರೋಲ್ ಬಂಕ್, ಶಿಕ್ಷಣ ಸಂಸ್ಥೆಗಳು ಹಾಗೂ 4 ಕಡೆ ಕೃಷಿ ಭೂಮಿ ಹೊಂದಿರುವುದು ಪತ್ತೆಯಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ತುಮಕೂರಿನಲ್ಲಿ ತೋಟದ ಮನೆ, ಸೋಮಾಪುರದಲ್ಲಿ ವಾಣಿಜ್ಯ ಕಟ್ಟಡ ಮತ್ತು ಕೈಗಾರಿಕಾ ಶೆಡ್‌ನೊಂದಿಗೆ 5 ಎಕರೆ ಕೃಷಿ ಭೂಮಿ, ಕುಂದಾಣ ಗ್ರಾಪಂ ಪಿಡಿಒ ಪದ್ಮನಾಭ್‌ಗೆ ಸೇರಿದ ಎಜಿಬಿ ಲೇಔಟ್‌ನಲ್ಲಿ 4 ಅಂತಸ್ತಿನ ಮನೆ ಕೂಡ ಶೋಧದ ವೇಳೆ ಪತ್ತೆಯಾಗಿದೆ ಎಂದು ತಿಳಿಸಿದ್ದಾರೆ. ಶೋಧ ಕಾರ್ಯಾಚರಣೆ ಮುಂದುವರಿದಿದೆ.

ನಂಜೇಗೌಡ ನಿವಾಸದಲ್ಲಿ ಮುಂದುವರಿದ ಶೋಧ: ಈ ನಡುವೆ ಮಾಲೂರು ಕಾಂಗ್ರೆಸ್ ಶಾಸಕ ಕೆ.ವೈ.ನಂಜೇಗೌಡ ನಿವಾಸದಲ್ಲಿ ಕುಟುಂಬಸ್ಥರನ್ನು ಹೊರಗೆ ಕಳುಹಿಸದೇ ಮನೆಯಲ್ಲಿರುವ ದಾಖಲೆಗಳನ್ನು ಪರಿಶೀಲನೆ ನಡೆಸಲಾಗುತ್ತಿದೆ.

ಎಲ್ಲರಿಗೂ ಗೃಹಲಕ್ಷ್ಮಿ ಒಲಿಯುತ್ತಾಳೆ... ಆತಂಕ ಬೇಡ!

- ಮಾಜಿ ಶಾಸಕ ಡಾ.ಯತೀಂದ್ರ ಭರವಸೆ
- ವಿಪಕ್ಷಗಳ ಮಾತಿಗೆ ಮನ್ನಣೆ ನೀಡಬೇಡಿ

ಮೈಸೂರು, ಜ.9(ಎಂಟಿವೈ)– ರಾಜ್ಯ ಸರ್ಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿತ ಎಲ್ಲಾ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಲಿದ್ದು, ಮಹಿಳೆಯರು ಆತಂಕ ಪಡುವ ಅಗತ್ಯವಿಲ್ಲ ಎಂದು ಮಾಜಿ ಶಾಸಕ ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದ ಮಲ್ಲೂಪುರ ಗ್ರಾ.ಪಂ.ವ್ಯಾಪ್ತಿಯ ಕಿರುಗುಂದ, ಸೋನಹಳ್ಳಿ, ಸಣ್ಣ ಮಲ್ಲುಪುರ, ಮಡಹಳ್ಳಿ, ಅಳಗಂಚಿ, ಅಳಗಂಚಿಪುರ, ಗ್ರಾಮಗಳಲ್ಲಿ ಜನಸಂಪರ್ಕ ಸಭೆ ನಡೆಸಿ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡ ಜನರಿಗೆ ವರದಾನವಾಗಿ ಪರಿಣಮಿಸಿದೆ. ಎಲ್ಲಾ ವರ್ಗ, ಧರ್ಮ ಹಾಗೂ ಸಮುದಾಯಗಳ ಬಡ ಕುಟುಂಬದ ಜನರು ಗ್ಯಾರಂಟಿ ಯೋಜನೆಯ ಸೌಲಭ್ಯ ಪಡೆದು ಸಂಭ್ರಮಿಸುತ್ತಿದ್ದಾರೆ. ಆದರೆ, ವಿರೋಧ ಪಕ್ಷಗಳ ಮುಖಂಡರು ಸರ್ಕಾರದ ವಿರುದ್ಧ ಅಪಪ್ರಚಾರದಲ್ಲಿ ತೊಡಗಿದ್ದಾರೆ. ಗೃಹಲಕ್ಷ್ಮೀ ಯೋಜನೆ ಸೇರಿದಂತೆ ಎಲ್ಲಾ 5 ಗ್ಯಾರಂಟಿ ಕಾರ್ಯಕ್ರಮದ ಫಲಾನುಭವಿಗಳಿಗೆ ಸೌಲಭ್ಯ ಮುಂದುವರೆಯಲಿದೆ. ಜನ ಗೊಂದಲಕ್ಕೆ ಒಳಗಾಗಬಾರದು ಎಂದು ಮನವಿ ಮಾಡಿದರು.



ವರುಣ ಕ್ಷೇತ್ರದ ಕಿರುಗುಂದ ಗ್ರಾಮದಲ್ಲಿ ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಮಂಗಳವಾರ ಗ್ರಾಮಸ್ಥರಿಂದ ಅಹವಾಲು ಸ್ವೀಕರಿಸಿದರು.

ಮೈಸೂರು ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಗೃಹಲಕ್ಷ್ಮಿ ಯೋಜನೆಗೆ ಹೆಸರು ನೋಂದಣಿ ಮಾಡಿಕೊಂಡಿರುವ ಫಲಾನುಭವಿಗಳ ಖಾತೆಗೆ ಮಾಸಿಕ ಎರಡು ಸಾವಿರ ರೂ. ಹಣ ಜಮೆ ಆಗಲಿದೆ. ಕೆಲ ತಾಂತ್ರಿಕ ಕಾರಣದಿಂದ ವಿಳಂಬವಾಗಿರಬಹುದು. ಆದರೆ, ಯಾರಿಗೂ ಹಣ ನೀಡುವುದನ್ನು ನಿಲ್ಲಿಸುವುದಿಲ್ಲ. ಸರ್ಕಾರ ಮಾಸಿಕ ನೀಡುವ ಹಣದಲ್ಲಿ ಕುಟುಂಬ ನಿರ್ವಹಣೆ ಮಾಡುವ ಮೂಲಕ ಲಕ್ಷಾಂತರ ಮಹಿಳೆಯರು ನೆಮ್ಮದಿಯಿಂದ ಇರುವುದನ್ನು ನೋಡಿದರೆ ಸಂತೋಷವಾಗುತ್ತದೆ. ಹಾಗಾಗಿ ವಿರೋಧ ಪಕ್ಷಗಳ ಸುಳ್ಳು ಆರೋಪಗಳಿಗೆ ಕಿವಿಗೊಡಬಾರದು. ಗೃಹಲಕ್ಷ್ಮಿ ಯೋಜನೆಯ ಹಣ ನಿಮ್ಮ ಖಾತೆಗೆ ಸೇರುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಕಿರಗುಂದ ಸಂಪರ್ಕ ರಸ್ತೆ ಅಭಿವೃದ್ಧಿಗೆ 1 ಕೋಟಿ 20 ಲಕ್ಷ ನೀಡಲಾಗಿದೆ. ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. ಗ್ರಾಮ ಠಾಣಾ ವ್ಯಾಪ್ತಿಯ ಜಾಗವನ್ನು ವಸತಿಹೀನರಿಗಾಗಿ ನಿವೇಶನ ಮಂಜೂರು ಮಾಡಲು ಹಾಗೂ ಸ್ಮಶಾನಕ್ಕೆ ಸ್ಥಳ ಮೀಸಲಿಡುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ಕೆ.ಎನ್. ವಿಜಯ್, ಆಪ್ತ ಸಹಾಯಕ ಶಿವಸ್ವಾಮಿ, ಪ್ರದೀಪ್‌ಕುಮಾರ್, ರಾಜ್ಯ ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ರಂಗಸ್ವಾಮಿ, ಎಪಿಎಂಸಿ ಅಧ್ಯಕ್ಷ, ದಕ್ಷಿಣಾಮೂರ್ತಿ, ಗ್ರಾ.ಪಂ ಅಧ್ಯಕ್ಷೆ ಕೋಮಲ, ಉಪಾಧ್ಯಕ್ಷ ಎಂ.ಆರ್.ಗುರುಸ್ವಾಮಿ, ಗುರುಸಿದ್ದೇಗೌಡ, ರತ್ನಮ್ಮ, ಆನಂದ, ಶಿವನಾಗ, ಪ್ರಕಾಶ್, ಶ್ರೀನಿವಾಸ್, ಪುಟ್ಟಸ್ವಾಮಿ, ತಾಲೂಕು ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

ಗ್ರಾಮಸ್ಥರ ಬೇಡಿಕೆಗಳ ಪಟ್ಟಿ

ಜನಸಂಪರ್ಕ ಸಭೆಯಲ್ಲಿ ಕಿರಗುಂದ ಗ್ರಾಮಸ್ಥರು ವಿವಿಧ ಕಾಮಗಾರಿಗಳ ಬೇಡಿಕೆ ಇಟ್ಟು ಮನವಿ ಸಲ್ಲಿಸಿದರು. ಗ್ರಾಮಕ್ಕೆ ಪ್ರತ್ಯೇಕ ಹಾಲಿನ ಡೈರಿ, ಗ್ರಂಥಾಲಯ ಮಂಜೂರು ಮಾಡಿಕೊಡುವಂತೆ ಕೋರಿದರು. ವಸತಿಹೀನರಿಗಾಗಿ ನಿವೇಶನ, ಸ್ಮಶಾನ, ಡಾ.ಅಂಬೇಡ್ಕರ್ ಪ್ರತಿಮೆ ನಿರ್ಮಾಣ, ದೇವಾಲಯಗಳ ಅಭಿವೃದ್ಧಿ, ಕೆರೆಗೆ ನೀರು ಸರಬರಾಜು, ನಾಲೆಗೆ ತಡೆಗೋಡೆ, ಶಾಲಾಕೊಠಡಿ ದುರಸ್ತಿ, ರಸ್ತೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಇಸ್ರೇಲ್–ಹಮಾಸ್ ಯುದ್ಧ: 23,210 ಪ್ಯಾಲೆಸ್ಟೀನಿಯರ ಸಾವು

ಗಾಜಾ ನಗರ: ಇಸ್ರೇಲ್ ಮತ್ತು ಹಮಾಸ್ ಬಂಡುಕೋರರ ನಡುವೆ ಅಕ್ಟೋಬರ್ 7ರಂದು ಯುದ್ಧ ಆರಂಭವಾದಂದಿನಿಂದ ಈವರೆಗೆ ಪ್ಯಾಲೆಸ್ಟೀನ್ ಪ್ರದೇಶದಲ್ಲಿ 23,210 ಮಂದಿ ಮೃತಪಟ್ಟಿದ್ದಾರೆ ಎಂದು ಗಾಜಾದ ಆರೋಗ್ಯ ಸಚಿವಾಲಯ ಮಂಗಳವಾರ ಹೇಳಿದೆ.

ಕಳೆದ 24 ಗಂಟೆಗಳ ಅವಧಿಯಲ್ಲಿ 126 ಮಂದಿ ಮೃತಪಟ್ಟಿದ್ದಾರೆ. ಗಾಜಾ ಪಟ್ಟಿಯಲ್ಲಿ ಇದುವರೆಗೆ 59,167 ಮಂದಿ ಗಾಯಗೊಂಡಿದ್ದಾರೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಮೂವರು ಪ್ಯಾಲೆಸ್ಟೀನಿಯರ ಹತ್ಯೆ: ಇಸ್ರೇಲ್‌ನ ಅಧೀನದಲ್ಲಿರುವ ವೆಸ್ಟ್ ಬ್ಯಾಂಕ್ ನಗರದ ತುಲ್ಕರ್ಮ್‌ನಲ್ಲಿ ಇಸ್ರೇಲ್ ಯೋಧರು ಮೂವರು ಪ್ಯಾಲೆಸ್ಟೀನಿಯರನ್ನು ಗುಂಡಿಟ್ಟು ಹತ್ಯೆ ಮಾಡಿದ್ದಾರೆ ಎಂದು ಪ್ಯಾಲೆಸ್ಟೀನ್‌ನ ಆರೋಗ್ಯ ಸಚಿವಾಲಯ ಹೇಳಿದೆ.



ಗಾಜಾ, ವೆಸ್ಟ್ ಬ್ಯಾಂಕ್ ಪ್ಯಾಲೆಸ್ಟೀನ್‌ಗೆ ಸೇರಿದ್ದು: ಗಾಜಾ ಮತ್ತು ವೆಸ್ಟ್ ಬ್ಯಾಂಕ್, ಪ್ಯಾಲೆಸ್ಟೀನ್‌ಗೆ ಸೇರಿದ ಪ್ರದೇಶವೆಂದು ಈಜಿಪ್ಟ್ ಮತ್ತು ಜರ್ಮನಿ ಒಪ್ಪಿಕೊಂಡಿರುವುದಾಗಿ ಜರ್ಮನಿಯ ವಿದೇಶಾಂಗ ಸಚಿವೆ ಅನ್ನಾಲೆನಾ ಬೇರ್ಬಾಕ್ ಅವರು ತಿಳಿಸಿದ್ದಾರೆ. ಈಜಿಪ್ಟ್‌ನ ಕೈರೊಗೆ ಭೇಟಿ ನೀಡಿರುವ ಅವರು ಈ ಹೇಳಿಕೆ ನೀಡಿದ್ದಾರೆ.

ಡ್ರೋನ್ ದಾಳಿ: ಕಮಾಂಡರ್ ವಿಸ್ಸಾಂ ತಾವಿಲ್ ಅವರ ಹತ್ಯೆಗೆ ಪ್ರತೀಕಾರವಾಗಿ ಉತ್ತರ ಇಸ್ರೇಲ್‌ನ ಸೇನಾ ಪಡೆಯ ಪ್ರಧಾನ ಕಚೇರಿಯನ್ನು ಗುರಿಯಾಗಿಸಿ ಡ್ರೋನ್ ದಾಳಿ ನಡೆಸಿರುವುದಾಗಿ ಲೆಬನಾನ್‌ನ ಹಿಜ್ಬುಲ್ಲಾ ಸಂಘಟನೆ ಹೇಳಿದೆ.

ಕಾಂಕ್ರೀಟ್ ಕಾಡು ತೆರವು; ಉದ್ಯಾನವನ ನಿರ್ಮಾಣಕ್ಕೆ ಸಿದ್ಧತೆ!

ಮೈಸೂರು,ಜ.9(ಎಸ್‌ಬಿಡಿ)– ಈ ಹಿಂದೆ ಮೈಸೂರು ಮಹಾನಗರ ಪಾಲಿಕೆಯ ಒಂದನೇ ವಲಯ ಕಚೇರಿ ಕಾರ್ಯ ನಿರ್ವಹಿಸುತ್ತಿದ್ದ ಕಟ್ಟಡವನ್ನು ಮಂಗಳವಾರ ನೆಲಸಮಗೊಳಿಸಲಾಗಿದ್ದು, ಈ ಪ್ರದೇಶದಲ್ಲಿ ಉದ್ದೇಶಿತ ಉದ್ಯಾನವನ ನಿರ್ಮಾಣವಾಗಲಿದೆ.

ಅಗ್ರಹಾರ(ವಾರ್ಡ್ ನಂ.51)ದ ತ್ಯಾಗರಾಜ ರಸ್ತೆ, 5ನೇ ಕ್ರಾಸ್‌ನಲ್ಲಿ ಉದ್ಯಾನವನಕ್ಕೆ ಮೀಸಲಾಗಿದ್ದ ಜಾಗದಲ್ಲಿ ಗ್ರಂಥಾಲಯಕ್ಕಾಗಿ 1994ರಲ್ಲಿ ಕಟ್ಟಡ ನಿರ್ಮಿಸಲಾಯಿತು. ಆದರೆ ಗ್ರಂಥಾಲಯ ಆರಂಭವಾಗಲೇ ಇಲ್ಲ. ನಂತರ 2001ರಲ್ಲಿ ಅದೇ ಕಟ್ಟಡದಲ್ಲಿ ವಲಯ ಕಚೇರಿ–1 ಆರಂಭಿಸಿ, ಕಟ್ಟಡವನ್ನು ವಿಸ್ತರಿಸಿಕೊಳ್ಳಲಾಗಿತ್ತು. ಇದರೊಂದಿಗೆ ಅಲ್ಲಿದ್ದ ಜಾರುಬಂಡಿ ಇನ್ನಿತರ ಮಕ್ಕಳಾಡುವ ಪರಿಕರಗಳು ಒಂದೊಂದೇ ಮಾಯವಾಗಿ ಬಯಲು ಪ್ರದೇಶವಾಗಿ ಪರಿವರ್ತನೆಯಾಗಿತ್ತು. ಆ ವೇಳೆ ಸ್ಥಳೀಯ ನಿವಾಸಿಗಳು ಪ್ರತಿಭಟಿಸಿದರೂ ಪ್ರಯೋಜನವಾಗಿರಲಿಲ್ಲ. ಅದರೊಂದಿಗೆ ಉದ್ಯಾನವನ ನಿರ್ಮಾಣ ನನೆಗುದಿಗೆ ಬಿದ್ದಿತ್ತು.

ಸದ್ಯ ಕಳೆದ ನಾಲ್ಕು ತಿಂಗಳ ಹಿಂದೆ ಉತ್ತರಾದಿಮಠ ರಸ್ತೆ, 5ನೇ ಕ್ರಾಸ್‌ನಲ್ಲಿ ಸುಮಾರು 3.50 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಸುಸಜ್ಜಿತ ಕಟ್ಟಡಕ್ಕೆ ವಲಯ ಕಚೇರಿ ಸ್ಥಳಾಂತರವಾಗಿದ್ದರಿಂದ ಈ ಹಳೇ ಕಟ್ಟಡ ಖಾಲಿಯಾಗಿತ್ತು. ಈ ನಡುವೆ ಕಾರ್ಪೊರೇಟರ್ ಆಗಿದ್ದ ಬಿ.ವಿ. ಮಂಜುನಾಥ್, ಹಳೇ ಕಟ್ಟಡವನ್ನು ತೆರವು ಮಾಡಿ, ಅಲ್ಲಿನ ಸುಮಾರು 30 ಗುಂಟೆ ಜಾಗದಲ್ಲಿ ಉದ್ಯಾನವನ ನಿರ್ಮಿಸುವ ಯೋಜನೆ ಕಾರ್ಯಗತಗೊಳಿಸುವಲ್ಲಿ ಯಶಸ್ವಿಯಾದರು.



ಮೈಸೂರು ಮಹಾನಗರ ಪಾಲಿಕೆ ವಲಯ ಕಚೇರಿ–1ರ ಹಳೇ ಕಟ್ಟಡ ನೆಲಸಮಗೊಳಿಸಲಾಯಿತು.

ಈ ನಿಟ್ಟಿನಲ್ಲಿ ಮಂಜೂರಾಗಿದ್ದ ಸುಮಾರು 40 ಲಕ್ಷ ರೂ. ಅನುದಾನದಲ್ಲಿ ಈಗಾಗಲೇ ಸುತ್ತಲೂ ಗ್ರಿಲ್ ಕಾಂಪೌಂಡ್ ನಿರ್ಮಿಸಲಾಗಿದ್ದು, ಇಂದು ಹಳೇ ಕಟ್ಟಡವನ್ನು ನೆಲಸಮಗೊಳಿಸಲಾಗಿದೆ. ಕಟ್ಟಡವಿದ್ದ ಸ್ಥಳದಲ್ಲಿ ಓಪನ್ ಜಿಮ್ ಅಳವಡಿಸಲಾಗುವುದು. ವಾಕಿಂಗ್ ಪಾಥ್ ಸೇರಿದಂತೆ ಸುಂದರ ಉದ್ಯಾನ ನಿರ್ಮಿಸಲಾಗುವುದು. ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ನಿಟ್ಟಿನಲ್ಲಿ ಗುತ್ತಿಗೆದಾರ ಜಯರಾಮಚಾರಿ ಕಾರ್ಯೋನ್ಮುಖರಾಗಿದ್ದಾರೆ. ಒಟ್ಟಾರೆ ಸದರಿ ಜಾಗದಲ್ಲಿ ಉದ್ಯಾನವನ್ನೇ ನಿರ್ಮಿಸಬೇಕೆಂಬ ಸ್ಥಳೀಯರ ಹಲವಾರು ವರ್ಷಗಳ ಬೇಡಿಕೆ ಈಡೇರುತ್ತಿರುವುದು ಸಮಾಧಾನ ತಂದಿದೆ ಎಂದು ಬಿ.ವಿ.ಮಂಜುನಾಥ್ ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಪೊಲೀಸ್ : ನೀನು ವಿಚಿತ್ರ ಮನುಷ್ಯ ಕಣಯ್ಯ, ಹಗಲು ಹೊತ್ತಿನಲ್ಲೇ ಕಳ್ಳತನ ಮಾಡಲು ಹೊರಟಿದ್ದೆಯಲ್ಲ

ಕಳ್ಳ : ಏನ್ ಹೇಳಲಿ ಸಾರ್, ರಾತ್ರಿ ಹೊತ್ತು ಹಾಳಾದ್ದು ನಿದ್ರೆ ಬಂದ್ಬಿಟ್ಟಿರುತ್ತೆ

ಮೈಸೂರು ಮಿತ್ರ

ಬುಧವಾರ, 10 ಜನವರಿ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಯಶಸ್ಸಿನ ಮೂಲಭೂತ ತತ್ವವೇನೆಂದರೆ ಹಿಡಿದ ಕೆಲಸವನ್ನು ಬಿಡದೇ ಮಾಡುವುದು –ವಾಲ್ಟೇರ್

ವೇದ ಸುಳ್ಳಾದರೂ { ಚಿನ್ನ ಒಂದಾದರೂ
ಗಾದೆ ಸುಳ್ಳಾಗದು { ಒಡವೆ ಹಲವು

ನಿಮ್ಮ ಪತ್ರಗಳು

ಡಾಂಬರೀಕರಣಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿ

ಮಾನ್ಯರೇ,



ಮೈಸೂರಿನ ಜೆಎಲ್‌ಬಿ ರಸ್ತೆಯ ಜಾವಗಲ್ ಶ್ರೀನಾಥ್ ವೃತ್ತದ (ಚಾಮುಂಡಿ ಗೆಸ್ಟ್ ಹೌಸ್ ಬಳಿ) ಮಧ್ಯಭಾಗದಲ್ಲಿ ಯಾವುದೋ ಕಾಮಗಾರಿಗಾಗಿ ಗುಂಡಿ ತೆಗೆದು ಬಳಿಕ ಮುಚ್ಚಿ ಎರಡು ಬ್ಯಾರಿಕೇಡ್‌ಗಳನ್ನು ಅಲ್ಲಿನ ಕಲ್ಲು–ಮಣ್ಣಿನ ಜಾಗಕ್ಕೆ ಬೇಲಿಯಂತೆ ನಿಲ್ಲಿಸಿ ಕೈ ತೊಳೆದುಕೊಳ್ಳಲಾಗಿದೆ. ಇಲ್ಲಿ ಒಂದೆಡೆ ರೋಟರಿ ಶಾಲೆ ಇದ್ದು, ಬೆಳಗ್ಗೆ ಮತ್ತು ಸಂಜೆ ವೇಳೆ ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸಂಚರಿಸುತ್ತಾರೆ. ಜೊತೆಗೆ ಮುಡಾ ಕಚೇರಿಯೂ ಇಲ್ಲಿಗೆ ಸಮೀಪದಲ್ಲೇ ಇದೆ. ಪಾದಚಾರಿಗಳು ಮಾತ್ರವಲ್ಲದೆ, ವಾಹನ ಸಂಚಾರ ಅಧಿಕವಿರುವ ಪ್ರಮುಖ ವೃತ್ತ ಇದಾಗಿದೆ.

ಆದರೆ ಕಾಮಗಾರಿ ಪೂರ್ಣಗೊಂಡ ನಂತರ ಈ ಹಿಂದಿದ್ದಂತೆ ಡಾಂಬರೀಕರಣ ಮಾಡದೇ ಕೇವಲ ಬ್ಯಾರಿಕೇಡ್ ಹಾಕಿದ್ದು, ಇದನ್ನು ಗಮನಿಸದೇ ಹಲವು ಸವಾರರು ಸಣ್ಣಪುಟ್ಟ ಅಪಘಾತದ ಕಹಿ ಅನುಭವ ಅನುಭವಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ದೊಡ್ಡ ಅನಾಹುತ ಸಂಭವಿಸಿಲ್ಲ. ಇನ್ನಾದರೂ ಸಂಬಂಧಿಸಿದವರು ಇತ್ತ ಗಮನಹರಿಸಿ ಡಾಂಬರೀಕರಣ ಮಾಡಿಸಿ ಬ್ಯಾರಿಕೇಡ್‌ಗಳನ್ನು ತೆರವುಗೊಳಿಸುವ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು.

–ಪಡುವಾರಹಳ್ಳಿ ಎಂ.ರಾಮಕೃಷ್ಣ, ವಕೀಲರು, ಮೈಸೂರು.

ಎಲ್ಲಿದ್ದೀಯ ಸೂರ್ಯ

ಮಾನ್ಯರೆ,

ಮೂರು ದಿನದಿಂದ ಕಾಣುತ್ತಿಲ್ಲವಲ್ಲ ಸೂರ್ಯ. ನೀ, ಇಲ್ಲದೇ ಇಲ್ಲಿ ಸೋಲಾರ್‌ನಲ್ಲಿ ಬರುತ್ತಿಲ್ಲ ಬಿಸಿ ನೀರು, ಒಗೆದ ಬಟ್ಟೆ ಒಣಗುತ್ತಿಲ್ಲವೆಂದು ಮಹಿಳೆಯರು ಕೋಪಿಸಿಕೊಂಡಿದ್ದಾರೆ. ನಿನ್ನ ಮೇಲೆ, ನೀನೇನು ಚಿಕ್ಕ ಹುಡುಗನೇ, ಹೀಗೆ, ಆಗಾಗ ಮುನಿಸಿಕೊಂಡು ಹೋಗಲು, ಬೇಗ ಬಾ, ನೀ ಇಲ್ಲದೇ ಇಲ್ಲಿ ನಡೆಯದು ಏನು?

–ಬೂಕನಕೆರೆ ವಿಜೇಂದ್ರ, ಕುವೆಂಪು ನಗರ, ಮೈಸೂರು

ಮಾದಾಪುರ ಗ್ರಾಮಕ್ಕೆ ಬೇಕು ಮತ್ತೊಂದು ಬ್ಯಾಂಕ್

ಮಾನ್ಯರೆ.

ಮೈಸೂರು ಜಿಲ್ಲೆ ಎಚ್.ಡಿ.ಕೋಟೆ ತಾಲೂಕಿಗೆ ಸೇರಿದ ಮಾದಾಪುರ ತಾಲೂಕಿನಲ್ಲಿಯೇ ಒಂದು ದೊಡ್ಡ ಗ್ರಾಮವಾಗಿದೆ. ಜೊತೆಗೆ ಭಾರಿ ಜನಸಂಖ್ಯೆಯನ್ನು ಹೊಂದಿರುವ ಗ್ರಾಮ. ಈ ಗ್ರಾಮವು ಮೈಸೂರು ಮಾನಂದವಾಡಿ ಮುಖ್ಯ ರಸ್ತೆಯಲ್ಲಿದೆ. ಅಕ್ಕಪಕ್ಕದ ಗ್ರಾಮದವರು ಮೈಸೂರು ಅಥವಾ ಹೆಚ್.ಡಿ.ಕೋಟೆ ಹಾಗೂ ಇತರೆ ಜಿಲ್ಲೆಗಳಿಗೆ ಹೋಗಬೇಕಾದರೆ ಈ ಮಾದಾಪುರ ಗ್ರಾಮದಿಂದ ಪ್ರಯಾಣ ಮಾಡಬೇಕು. ಈ ಗ್ರಾಮದಲ್ಲಿ ಒಂದೇ ಒಂದು ಕರ್ನಾಟಕ ಗ್ರಾಮೀಣ ಬ್ಯಾಂಕ್ ಇದ್ದು, ಈ ಬ್ಯಾಂಕ್ ಹತ್ತರಿಂದ ಹದಿನೈದು ಊರುಗಳಿಗೆ ಸಂಬಂಧಪಟ್ಟ, ರೈತರ ಹಾಗೂ ವಿದ್ಯಾರ್ಥಿಗಳ ಹಾಗೂ ಸಂಘ–ಸಂಸ್ಥೆಗಳ ವ್ಯವಹಾರಗಳು ನಡೆಯುತ್ತದೆ. ಆದರೆ ಈ ಬ್ಯಾಂಕಿನ ಸಿಬ್ಬಂದಿ ವರ್ಗದವರಿಗೆ ಹಣಕಾಸು ವ್ಯವಹಾರ ಬಹಳ ಸಮಸ್ಯೆ. ಏನೆಂದರೆ ಎಲ್ಲಾ ಗ್ರಾಮದವರು, ಎಲ್ಲಾ ಸಂಘ–ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯತಿ ವ್ಯವಹಾರ ನಡೆಸಲು ತುಂಬಾ ಕಷ್ಟಕರವಾಗಿದೆ. ಆದುದರಿಂದ ಈ ಗ್ರಾಮದಲ್ಲಿ ಮತ್ತೊಂದು "ಬ್ಯಾಂಕ್ ಸ್ಥಾಪನೆ" ಯಾದರೆ ಅಕ್ಕಪಕ್ಕದ ಗ್ರಾಮದವರಿಗೆ ತುಂಬಾ ಅನುಕೂಲವಾಗುತ್ತದೆ. ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ.

– ಸಿದ್ದಲಿಂಗೇಗೌಡ, ಹೈರಿಗೆ ಗ್ರಾಮ ಮುಖಂಡ.

ಮಾದಕ ವಸ್ತುಗಳ ಬಳಕೆ ಸಂಪೂರ್ಣ ನಿಷೇಧಿಸಿ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ಜನಸಂಖ್ಯೆಯು ಏರಿಕೆಯಾದಂತೆ ಯುವ ಸಮೂಹ ಅದರಲ್ಲೂ ಹದಿಹರೆಯದ ವಯಸ್ಸಿಗೆ ಕಾಲಿಟ್ಟ ತಮ್ಮ ಮಕ್ಕಳನ್ನು ಪೋಷಕರು ಸರಿಯಾಗಿ ಗಮನಿಸಿಕೊಳ್ಳಬೇಕಾಗಿದೆ. ಇತ್ತೀಚಿನ ದಿನಗಳಲ್ಲಿ ರಾಜ್ಯಕ್ಕೆ ಮತ್ತು ದೇಶಕ್ಕೆ ಬಂದ ಅನ್ಯ ದೇಶದ ಪ್ರಜೆಗಳಿಂದಲೇ ಅನೇಕ ಪಾರ್ಟಿ, ಸಮಾರಂಭಗಳ ಹೆಸರಲ್ಲಿ ಕೆಲವು ಯುವಕ ಯುವತಿಯರು ಮಾದಕ ವಸ್ತುಗಳನ್ನು ಬಳಸುತ್ತಿದ್ದು, ಇದು ಸಮಾಜದ ಘನತೆ ಗೌರವಗಳನ್ನು ನಾಶ ಪಡಿಸುವುದರ ಮೂಲಕ "ನಾಡು, ನುಡಿ, ಸಂಸ್ಕೃತಿ, ವೈಚಾರಿಕತೆಗಳಿಗೂ ಧಕ್ಕೆ ಉಂಟು ಮಾಡುವಂತಾಗಿದೆ.

ಇದಲ್ಲದೆ ಶಾಲಾ ಕಾಲೇಜಿನ 100 ಮೀಟರ್‌ಗಳಲ್ಲಿ ಮಾದಕ ಮತ್ತು ತಂಬಾಕು ವಸ್ತುಗಳನ್ನು ಮಾರಾಟ ಮಾಡುವುದನ್ನು ಸಂಪೂರ್ಣ ನಿಷೇಧ ಮಾಡಿದ್ದರೂ ಕೂಡ ಕೆಲವು ಕಡೆ ಕದ್ದು ಮುಚ್ಚಿ ಮಾರಾಟ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಬೇಕು. ಇದರೊಂದಿಗೆ ಕೂಡಲೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನ್ಯ ದೇಶದ ಪ್ರಜೆಗಳ ನಿಗಾವಹಿಸಿ ಮಾದಕ ವಸ್ತುಗಳ ಬಳಕೆಯನ್ನು ತಡೆಯಬೇಕು.

– ನಾಗೇಶ್, ಮಾನಸಗಂಗೋತ್ರಿ, ಮೈಸೂರು

ವೃದ್ಧಾಶ್ರಮಕ್ಕೆ ಸೇರಿಸಿದರೆ ಕ್ರಿಮಿನಲ್ ಕೇಸ್.... ವಿಪರ್ಯಾಸ



ಮಾನ್ಯರೆ,

'ಮೈಸೂರು ಮಿತ್ರ'ದಲ್ಲಿ ತಂದೆ ತಾಯಿಯನ್ನು ಸರಿಯಾಗಿ ನೋಡಿಕೊಳ್ಳದ ಮಕ್ಕಳ ಮೇಲೆ ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಕ್ರಿಮಿನಲ್ ಕೇಸ್ ಬುಕ್ ಮಾಡುವಂತೆ ಬೆಂಗಳೂರು ಪೊಲೀಸ್ ಕಮಿಷನರ್ ಸೂಚನೆ ನೀಡಿದ್ದಾರೆ ಅಂತ ಸುದ್ದಿ ಪ್ರಕಟವಾಗಿತ್ತು ಹೆತ್ತು ಹೊತ್ತು ಯಾವಾಗಲೂ ಮಕ್ಕಳ ಸುಖ ಬಯಸುವ ತಂದೆ ತಾಯಿಗಳನ್ನು ನೋಡಿಕೊಳ್ಳಲಾಗದಷ್ಟು ಕಷ್ಟವೇನು ಮಕ್ಕಳಿಗೆ ಅಂತ ತಿಳಿಯುವುದಿಲ್ಲ. ತಮ್ಮ ಮಕ್ಕಳು ಒಳ್ಳೆಯ ದಾರಿಯಲ್ಲೇ ನಡೆಯಬೇಕು, ಕ್ರಿಮಿನಲ್ ಆಗಬಾರದು, ಕೋರ್ಟ್, ಪೊಲೀಸ್ ಸ್ಟೇಷನ್ ಮೆಟ್ಟಿಲು ಹತ್ತಬಾರದು ಎಂಬ ಆಶಯಗಳೊಂದಿಗೆ ಮಕ್ಕಳನ್ನು ಬೆಳೆಸುವ ತಂದೆ–ತಾಯಿಗಳಿಗೆ ತಮ್ಮ ಇಳಿ ವಯಸ್ಸಿನಲ್ಲಿ ತಮ್ಮನ್ನು ವೃದ್ಧಾಶ್ರಮಕ್ಕೆ ಸೇರಿಸಿದ್ದಕ್ಕೆ ಮಕ್ಕಳ ಮೇಲೆ ಕ್ರಿಮಿನಲ್ ಕೇಸು ಎಂದರೆ ಎಂತಹ ವಿಪರ್ಯಾಸ. ಆ ಹಿರಿ ಜೀವಗಳು ಎಷ್ಟು ಒದ್ದಾಡಬಹುದು ಈ ವಿಷಯ ಕೇಳಿ. ಮಕ್ಕಳು ಸ್ವಲ್ಪ ವಿವೇಚನೆಯಿಂದ ಯೋಚಿಸುವಂತಾಗಲಿ.

–ರಾಘವೇಂದ್ರ ಜೋಯಿಸ್, ಮೈಸೂರು



ಕಾರ್ಕಳ ಆನಂದ ಭಟ್

ಮೊ : 7676554198

ಫ್ಲಾಟ್ ನಂ.204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, Opp. H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲ್ಲೆ

ದಿಕ್ಕುದೆಸೆ

ಇದು ಜಾಗತಿಕ ಚುನಾವಣಾ ವರ್ಷ

2024 ವಿಶ್ವದ ಪ್ರಜಾಸತ್ತಾತ್ಮಕ ದೇಶಗಳಿಗೆ ಮತ್ತು ಪ್ರಜಾ ತಾಂತ್ರಿಕ ಸಂಸ್ಥೆಗಳಿಗೆ ಅತ್ಯಂತ ಮಹತ್ವದ ವರ್ಷವಾಗಿದೆ. ಜಾಗತಿಕ ಭೂ ರಾಜಕೀಯದಲ್ಲಿ ನಿರ್ಣಾಯಕ ದೇಶಗಳ ಬಲಿಷ್ಠ ನಾಯಕರು ಚುನಾವಣೆ ಎಂಬ ಅಗ್ನಿಪರೀಕ್ಷೆಯನ್ನು ಎದುರಿಸಬೇಕಾಗಿದೆ. ಬಲಿಷ್ಠ ದೇಶಗಳಲ್ಲಿ ಹೊಸ ನಾಯಕತ್ವ ಬಂದಲ್ಲಿ ಜಾಗತಿಕ ಮಟ್ಟದಲ್ಲಿ ಆರ್ಥಿಕತೆ, ಆಹಾರ, ಆರೋಗ್ಯ, ತಂತ್ರಜ್ಞಾನ, ಹವಾಮಾನ ಬದಲಾವಣೆ, ವ್ಯೂಹಾತ್ಮಕ ರಕ್ಷಣಾ ಒಪ್ಪಂದಗಳು, ಮೊದಲಾದವುಗಳಿಗೆ ಸಂಬಂಧಪಟ್ಟಂತೆ ಹೊಸ ನೀತಿಗಳನ್ನು ರೂಪಿಸುವ ಸಾಧ್ಯತೆಗಳಿರುವುದರಿಂದ ಈ ವರ್ಷ ಎಲ್ಲ ದೃಷ್ಟಿಯಿಂದ ಮಹತ್ವಪೂರ್ಣವಾಗಿದೆ.

ಜಗತ್ತಿನ ಸುಮಾರು 64 ದೇಶಗಳಲ್ಲಿ ಈ ವರ್ಷ ಚುನಾವಣೆಗಳು ನಡೆಯಲಿವೆ. ವಿಶ್ವದ ಒಟ್ಟು ಜನಸಂಖ್ಯೆಯಲ್ಲಿ ಅರ್ಧದಷ್ಟು ಅಂದರೆ 370 ಕೋಟಿ ಜನರು ತಮ್ಮ ದೇಶಗಳಲ್ಲಿ ಆಳುವವರ ಹಣೆಬರಹ ನಿರ್ಧರಿಸಲಿದ್ದಾರೆ. ಇವುಗಳಲ್ಲಿ ಸುಮಾರು ನಲ್ವತ್ತು ಪ್ರಮುಖ ದೇಶಗಳಲ್ಲಿ ಜಗತ್ತಿನ ಜನಸಂಖ್ಯೆಯ ಶೇ.41ರಷ್ಟಿದ್ದು, ವಿಶ್ವದ ಜಿಡಿಪಿಯಲ್ಲಿ ಶೇ.42ರಷ್ಟು ಪಾಲು ಹೊಂದಿವೆ. ಜಗತ್ತಿನ ದೊಡ್ಡಣ್ಣ ಎನಿಸಿರುವ ಅಮೇರಿಕದಲ್ಲಿ ಈ ವರ್ಷ ನವೆಂಬರ್‌ನಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಡೆಮಾಕ್ರಾಟ್‌ನಿಂದ ಮತ್ತೆ ಬೈಡನ್ ಸ್ಪರ್ಧಿಸುವ ಸಾಧ್ಯತೆಗಳಿವೆ. ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ತನಕ್ಕೆ ಡೊನಾಲ್ಡ್ ಟ್ರಂಪ್, ಭಾರತೀಯ ಮೂಲದ ವಿವೇಕ್ ರಾಮಸ್ವಾಮಿ, ನಿಕ್ಕಿ ಹ್ಯಾಲೆ, ಕ್ರಿಸ್ಟಿ ನಡುವೆ ತೀವ್ರ ಸ್ಪರ್ಧೆ ಏರ್ಪಟ್ಟಿದೆ. ಜಾಗತಿಕ ವ್ಯಾಪಾರ–ವಹಿವಾಟುಗಳ ಕೇಂದ್ರ ಯುರೋಪಿಯನ್ ಒಕ್ಕೂಟ 705 ಸ್ಥಾನಗಳಿಗೆ, ವಿಶ್ವದ ಆರನೇ ಆರ್ಥಿಕ ಶಕ್ತಿ ಮತ್ತು ಮಿಲಿಟರಿ ಶಕ್ತಿಯಾಗಿರುವ ಇಂಗ್ಲೆಂಡ್, 140 ಕೋಟಿ ಜನಸಂಖ್ಯೆ ಇರುವ ಭಾರತ, ಜಗತ್ತಿನಲ್ಲಿ ಅತೀ ಹೆಚ್ಚು ಮುಸಲ್ಮಾನರಿರುವ ಇಂಡೋನೇಷ್ಯಾ, ಲ್ಯಾಟಿನ್ ಅಮೇರಿಕದ ಮೆಕ್ಸಿಕೊ, ದಕ್ಷಿಣ ಆಫ್ರಿಕಾದಲ್ಲಿ, ಭಾರತೀಯ ಉಪಖಂಡದಲ್ಲಿ ಪಾಕ್, ಶ್ರೀಲಂಕಾ, ಬಾಂಗ್ಲಾದೇಶಗಳಲ್ಲೂ ಚುನಾವಣೆ ನಡೆಯಲಿದೆ. ಅಮೇರಿಕ ಮತ್ತು ಚೀನಾ ನಡುವೆ ನಿರಂತರವಾಗಿ ಉದ್ವಿಗ್ನತೆಗೆ ಕಾರಣವಾಗಿರುವ ಸೆಮಿ ಕಂಡಕ್ಟರ್ ಉತ್ಪಾದನೆಯ ರಾಜಧಾನಿಯಾಗಿರುವ ಪುಟ್ಟ, ಆದರೂ ಪ್ರಬಲ ದೇಶವಾಗಿರುವ ತೈವಾನ್‌ನಲ್ಲೂ ಚುನಾವಣೆ ನಡೆಯಲಿದೆ. ಈ ಪ್ರಮುಖ ದೇಶಗಳ ಹೊರತಾಗಿ ಜಗತ್ತಿನ ಇನ್ನೂ ಕೆಲವು ದೇಶಗಳಲ್ಲಿ ಚುನಾವಣೆ ನಡೆಯಲಿದೆ.

ತೈಲ ಸಮೃದ್ಧವಾಗಿದ್ದರೂ, ಬಿಟ್ಟಿ ಭಾಗ್ಯಗಳಿಂದ ದಿವಾಳಿಯಾಗಿರುವ ವೆನೆಜುವೆಲಾದ ಅಧ್ಯಕ್ಷ ಪದಕ್ಕೆ, ಯುದ್ಧಪೀಡಿತ ಉಕ್ರೇನ್‌ನ ಜೆಲೆನ್‌ಸ್ಕಿ ಪುನರಾಯ್ಕೆಯಾದಲ್ಲಿ ಅಮೇರಿಕ ಮತ್ತು ನ್ಯಾಟೊ ದೇಶಗಳು ಯುದ್ಧ ಮುಂದುವರಿಸಬಹುದು. ಸೋತಲ್ಲಿ ಪುತಿನ್ ಮೇಲುಗೈ ಸಾಧಿಸಲಿದ್ದಾರೆ. ಭೌಗೋಳಿಕವಾಗಿ ಖಂಡಗಳು ಪ್ರತ್ಯೇಕವಿದ್ದರೂ ಚುನಾವಣೆಗಳು ಜಾಗತಿಕ ರಾಜಕಾರಣದ ಮೇಲೆ ನಿಶ್ಚಿತವಾಗಿ ಪರಿಣಾಮ ಬೀರಲಿವೆ.

ರಷ್ಯಾದಲ್ಲಿ ಚುನಾವಣೆ ಎಂಬ ಪ್ರಹಸನ: ರಷ್ಯಾದಲ್ಲಿ ಚುನಾವಣಾ ಪ್ರಕ್ರಿಯೆ ನಿಗೂಢವಾಗಿದೆ. ರಷ್ಯಾದಲ್ಲಿ ಮತದಾರರು ಕೇವಲ ಮತ ಚಲಾಯಿಸುತ್ತಾರೆ. ಮತ ಎಣಿಕೆ ಬಗ್ಗೆಯಾಗಲೀ, ಯಾರಿಗೆಷ್ಟು ಮತ ದೊರೆತಿವೆ ಎಂಬ ಬಗ್ಗೆ ಯಾವುದೇ ಮಾಹಿತಿಗಳು ಲಭಿಸುವುದಿಲ್ಲ. ಆಯ್ಕೆಯಾಗಿರುವ ಫಲಿತಾಂಶ ಮಾತ್ರ ಪ್ರಕಟವಾಗುತ್ತದೆ. ರಷ್ಯಾದಲ್ಲಿ ಸೋಜಿಗವೆಂದರೆ ಪ್ರಸ್ತುತ ಅಧ್ಯಕ್ಷ ಪುಟಿನ್‌ರು ನಿರ್ಧರಿಸಿದವರಿಗೆ ಮತದಾರರು ಮತ ನೀಡಬೇಕಾಗುತ್ತಾ. ರಷ್ಯಾ–ಯುಕ್ರೇನ್ ಯುದ್ಧ ವಿರೋಧಿಸುತ್ತಿರುವ ಹಾಗೂ ಅಧ್ಯಕ್ಷ ಪುಟಿನ್ ಎದುರಾಳಿಯಾಗಿ ಸ್ಪರ್ಧಿಸಲು ರೆಜೆವ್ ಪಟ್ಟಣದ ಮಾಜಿ ಡೆಪ್ಯೂಟಿಯಾಗಿರುವ ಎಕ್ತರೀನಾ ಡುನ್‌ಟ್ಸೊವಾರು ಸಲ್ಲಿಸಿದ ಅರ್ಜಿಯನ್ನು ರಷ್ಯಾದ ಚುನಾವಣಾ ಆಯೋಗ ತಿರಸ್ಕರಿಸಿದೆ. ಇನ್ನೋರ್ವ ಎದುರಾಳಿ ಹಾಗೂ ಪುಟಿನ್‌ರನ್ನು ತೀವ್ರವಾಗಿ ವಿರೋಧಿಸುತ್ತಿರುವ ಅಲೆಕ್ಸಿ ನವಲ್ನೆಯವರು ಭ್ರಷ್ಟಾಚಾರ ಹಾಗೂ ಉಗ್ರವಾದದ ಆರೋಪದಲ್ಲಿ ಮೂವತ್ತು ವರ್ಷಗಳ ಜೈಲು ಶಿಕ್ಷೆಗೆ ಒಳಗಾಗಿದ್ದಾರೆ. ಆದ್ದರಿಂದ ಕಳೆದ ಎರಡು ದಶಕಗಳಿಂದ ರಷ್ಯಾದ ಅಧ್ಯಕ್ಷರಾಗಿರುವ ಪುಟಿನ್ ಮುಂದಿನ ಆರು ವರ್ಷಕ್ಕೆ ಮತ್ತೆ ಅಧ್ಯಕ್ಷರಾಗಿ ಚುನಾಯಿತರಾಗುವುದು ನಿಶ್ಚಿತವಾಗಿದೆ.

ಪಶ್ಚಿಮದಲ್ಲಿ ಪ್ರಬಲವಾಗುತ್ತಿರುವ ರಾಷ್ಟ್ರೀಯ ವಾದ: ಈ ವರ್ಷ ಯುರೋಪ್‌ನ ಆಸ್ಟ್ರಿಯಾ, ಕ್ರೊವೇಶಿಯಾ, ಬೆಲ್ಜಿಯಂ ಹಾಗೂ ಫಿನ್ಲೆಂಡ್‌ಗಳಲ್ಲಿ ಚುನಾವಣೆ ನಡೆಯಲಿವೆ. ಅದೇ ರೀತಿ ಯುರೋಪಿಯನ್ ಪಾರ್ಲಿಮೆಂಟ್‌ನ 705 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಕಳೆದ ಕೆಲವು ವರ್ಷಗಳಿಂದ ಯುದ್ಧಗ್ರಸ್ತ ಅರಾಜಕತೆಯಿಂದ ಕೂಡಿದ ಸಿರಿಯಾ, ಲಿಬಿಯಾ, ಸೋಮಾಲಿಯಾ ಮೊದಲಾದ ದೇಶಗಳಿಂದ ವಲಸೆ ಬಂದ ಲಕ್ಷಾಂತರ ನಿರಾಶ್ರಿತರಿಗೆ ಯುರೋಪಿಯನ್ ದೇಶಗಳು ಆಶ್ರಯ ನೀಡಿದವು. ಇದರ ಪರಿಣಾಮ ಯುರೋಪ್‌ನ ದೇಶಗಳಿಂದು ಅಶಾಂತಿಯ ಬೀಡಾಗಿವೆ. ಈ ವಲಸೆಗಾರರಿಂದ ಯುರೋಪಿಯನ್ ಜನರು ಹೈರಾಣಾಗಿದ್ದಾರೆ. ಈ ವಲಸೆಗಾರರಿಂದಾಗಿ ಯುರೋಪ್‌ನಲ್ಲಿ ಕೊಲೆ, ಸುಲಿಗೆ ಅತ್ಯಾಚಾರದ ಪ್ರಮಾಣದಲ್ಲಿ ಭಾರಿ ಏರಿಕೆಯಾಗಿದೆ. ಇಂತಹ ವಲಸೆಗಾರರನ್ನು ದೇಶಕ್ಕೆ ಬರಮಾಡಿಕೊಂಡ ಎಡಪಂಥೀಯ, ಅಧಿಕಾರದಾಹಿ, ಉದಾರವಾದಿ ಅಧಿಕಾರಸ್ಥ ರಾಜಕಾರಣಿಗಳ ವಿರುದ್ಧ ಯುರೋಪಿಯನ್‌ರು ಆಕ್ರೋಶಗೊಂಡಿದ್ದಾರೆ. ಇದರ ಪರಿಣಾಮ ಯುರೋಪ್‌ನಲ್ಲಿ ಮತ್ತೆ ರಾಷ್ಟ್ರೀಯವಾದದ ಧ್ವನಿ ಜೋರಾಗುತ್ತಿದೆ. ತೀವ್ರ ಬಲಪಂಥೀಯ, ರಾಷ್ಟ್ರೀಯವಾದಿ, ವಲಸೆ ವಿರೋಧಿ ಪಕ್ಷಗಳು, ರಾಜಕಾರಣಿಗಳು ಅಧಿಕಾರಕ್ಕೇರತೊಡಗಿದ್ದಾರೆ. ಇಟಲಿಯಲ್ಲಿ ವಲಸೆ ವಿರೋಧಿ ಮೆಲನಿ ಪ್ರಧಾನಿಯಾಗಿದ್ದಾರೆ. ಗಲಭೆಗ್ರಸ್ತ, ಅರಾಜಕ ದೇಶಗಳಿಂದ ಪಲಾಯನ ಮಾಡುತ್ತಿರುವ ನಿರಾಶ್ರಿತರಿಗೆ ಶ್ರೀಮಂತ ದೇಶಗಳು ಆಶ್ರಯ ನಿರಾಕರಿಸಿರುವುದು ಯುರೋಪಿಯನ್‌ರ ಆಕ್ರೋಶಕ್ಕೆ ಮತ್ತೊಂದು ಪ್ರಬಲ ಕಾರಣವಾಗಿದೆ. ಯುದ್ಧಗ್ರಸ್ತ ಪ್ಯಾಲೆಸ್ತೀನ್‌ನಿಂದ ಪಲಾಯನಕ್ಕೆ ಯತ್ನಿಸುತ್ತಿರುವ ನಿರಾಶ್ರಿತರು ತಮ್ಮ ದೇಶ ಪ್ರವೇಶಿಸದಂತೆ ಈಜಿಪ್ಟ್ ಗಡಿಯುದ್ದಕ್ಕೂ ಮೂವತ್ತು ಅಡಿ ಎತ್ತರ ತಡೆಗೋಡೆ ನಿರ್ಮಿಸಿದೆ. ಈ ಗೋಡೆ ಇಸ್ಲಾಮಿಕ್ ಭ್ರಾತೃತ್ವವನ್ನು ಅಣಕಿಸುವಂತಿದೆ. ನೆದರ್ಲೆಂಡ್, ಸ್ಲೋವಾಕಿಯಗಳಲ್ಲಿ ವಲಸೆ ವಿರೋಧಿ ತೀವ್ರ ಬಲಪಂಥೀಯರು ತಮ್ಮ ರಾಷ್ಟ್ರೀಯವಾದಿ ನಿಲುವುಗಳಿಂದ ಚುನಾವಣೆಗಳಲ್ಲಿ ಯಶಸ್ಸು ಸಾಧಿಸುತ್ತಿದ್ದಾರೆ. ಈ ವರ್ಷ ಯುರೋಪ್‌ನ ಚುನಾವಣೆ ನಡೆಯಲಿರುವ ದೇಶಗಳಲ್ಲಿ ತೀವ್ರ ಬಲಪಂಥೀಯ ರಾಷ್ಟ್ರವಾದಿಗಳು ಅಧಿಕಾರಕ್ಕೆ ಬಂದಲ್ಲಿ ಯುರೋಪಿಯನ್ ಒಕ್ಕೂಟದ ಉದಾರವಾದಿ ವಲಸೆ ನೀತಿಯ ಮೇಲೆ ತೀವ್ರ ತರದ ನಕಾರಾತ್ಮಕ ಪರಿಣಾಮ ಬೀರಲಿದೆ. ಇದರಿಂದ ಸಿರಿಯಾ ಹಾಗೂ ಇನ್ನಿತರ ಗಲಭೆಗ್ರಸ್ತ ಗಲ್ಫ್ ರಾಷ್ಟ್ರಗಳಲ್ಲಿ ಅರಾಜಕತೆ ಹಾಗೂ ಯುದ್ಧಗಳು ಹೆಚ್ಚಾಗಲಿದ್ದು ವಿಶ್ವ ಶಾಂತಿಗೆ ಅಪಾಯಕಾರಿಯಾಗುವ ಸಾಧ್ಯತೆಗಳಿವೆ. ಅದೇ ರೀತಿ ಹೆಚ್ಚಿನ ಯುರೋಪ್ ದೇಶಗಳಲ್ಲಿ ರಾಷ್ಟ್ರವಾದಿಗಳು ಅಧಿಕಾರಕ್ಕೆ ಬಂದಲ್ಲಿ ಯುಕ್ರೇನ್ ಯುದ್ಧಕ್ಕೆ ಸಂಬಂಧಿಸಿದಂತೆ ಹೊಸ ಸಮೀಕರಣಗಳು ಬರುವ ಸಾಧ್ಯತೆಗಳಿವೆ.



ವಾಸ್ತವವಾಗಿ ಜಗತ್ತಿನಲ್ಲಿ ಅನೇಕ ದೇಶಗಳ ಮತದಾರರು ಪ್ರಜಾಸತ್ತಾತ್ಮಕ ಚುನಾವಣಾ ಪದ್ಧತಿಯ ಮೇಲೆ ವಿಶ್ವಾಸ ಕಳೆದುಕೊಂಡಿದ್ದಾರೆ. ಮತದಾರರು ಪ್ರಜಾಸತ್ತಾತ್ಮಕ ಆಡಳಿತದಿಂದ ಭ್ರಮನಿರಸನಗೊಂಡಿದ್ದಾರೆಂಬ ಅಭಿಪ್ರಾಯವಿದೆ. ಪಶ್ಚಿಮದ ದೇಶಗಳ ಮತದಾರರಲ್ಲಿ ಈ ಭಾವನೆ ವ್ಯಾಪಕವಾಗಿದೆ. ಪ್ರಜಾಪ್ರಭುತ್ವದ ರಕ್ಷಕರೆನ್ನುವ ದೇಶಗಳಲ್ಲಿ ಪ್ರಸ್ತುತ ಪ್ರಜಾಸತ್ತಾತ್ಮಕ ಆಡಳಿತ ವ್ಯವಸ್ಥೆಯು ಕೇವಲ ಶಕ್ತಿಶಾಲಿಗಳಿಗೆ, ಶ್ರೀಮಂತರಿಗೆ ಮಾತ್ರವಿದ್ದು, ದುರ್ಬಲರ ಕುರಿತು ನಿರ್ಲಕ್ಷ್ಯ ತೋರುತ್ತಿವೆ ಎಂಬ ಭಾವನೆ ಇದೆ. ಕೆಲವು ಪ್ರಜಾಸತ್ತಾತ್ಮಕ ದೇಶಗಳಲ್ಲಿ ವಾಕ್ ಸ್ವಾತಂತ್ರ್ಯ, ಪತ್ರಿಕಾ ಸ್ವಾತಂತ್ರ್ಯಗಳ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚುತ್ತಿವೆ. ಇಂತಹ ಘಟನೆಗಳು ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಅಡಕವಾಗಿರುವ ದೌರ್ಬಲ್ಯ, ವೈಫಲ್ಯಗಳನ್ನು ಎತ್ತಿ ತೋರುತ್ತಿವೆ.

ವಾಸ್ತವವಾಗಿ ಜಗತ್ತಿನಲ್ಲಿ ಅನೇಕ ದೇಶಗಳ ಮತದಾರರು ಪ್ರಜಾಸತ್ತಾತ್ಮಕ ಚುನಾವಣಾ ಪದ್ಧತಿಯ ಮೇಲೆ ವಿಶ್ವಾಸ ಕಳೆದುಕೊಂಡಿದ್ದಾರೆ. ಮತದಾರರು ಪ್ರಜಾಸತ್ತಾತ್ಮಕ ಆಡಳಿತದಿಂದ ಭ್ರಮನಿರಸನಗೊಂಡಿದ್ದಾರೆಂಬ ಅಭಿಪ್ರಾಯವಿದೆ. ಪಶ್ಚಿಮದ ದೇಶಗಳ ಮತದಾರರಲ್ಲಿ ಈ ಭಾವನೆ ವ್ಯಾಪಕವಾಗಿದೆ. ಪ್ರಜಾಪ್ರಭುತ್ವದ ರಕ್ಷಕರೆನ್ನುವ ದೇಶಗಳಲ್ಲಿ ಪ್ರಸ್ತುತ ಪ್ರಜಾಸತ್ತಾತ್ಮಕ ಆಡಳಿತ ವ್ಯವಸ್ಥೆಯು ಕೇವಲ ಶಕ್ತಿಶಾಲಿಗಳಿಗೆ, ಶ್ರೀಮಂತರಿಗೆ ಮಾತ್ರವಿದ್ದು, ದುರ್ಬಲರ ಕುರಿತು ನಿರ್ಲಕ್ಷ್ಯ ತೋರುತ್ತಿವೆ ಎಂಬ ಭಾವನೆ ಇದೆ. ಕೆಲವು ಪ್ರಜಾಸತ್ತಾತ್ಮಕ ದೇಶಗಳಲ್ಲಿ ವಾಕ್ ಸ್ವಾತಂತ್ರ್ಯ, ಪತ್ರಿಕಾ ಸ್ವಾತಂತ್ರ್ಯಗಳ ಮೇಲಿನ ಹಲ್ಲೆ ಪ್ರಕರಣಗಳು ಹೆಚ್ಚುತ್ತಿವೆ. ಇಂತಹ ಘಟನೆಗಳು ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಅಡಕವಾಗಿರುವ ದೌರ್ಬಲ್ಯ, ವೈಫಲ್ಯಗಳನ್ನು ಎತ್ತಿ ತೋರುತ್ತಿವೆ.

ಭಾರತೀಯ ಉಪ ಖಂಡದಲ್ಲಿ ಚುನಾವಣೆಗಳು: ಭಾರತದಲ್ಲಿ ಈ ವರ್ಷದ ಏಪ್ರಿಲ್–ಮೇ ತಿಂಗಳಲ್ಲಿ ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಪ್ರಧಾನಿ ಮೋದಿಯವರು ತೃತೀಯ ಬಾರಿ ಪ್ರಧಾನಿಯಾಗುವ ಸಾಧ್ಯತೆ ನಿಚ್ಚಳವಾಗಿದೆ. ಮೋದಿಯವರು ಪುನರಾಯ್ಕೆಯಾದಲ್ಲಿ ಭಾರತ ಜಗತ್ತಿನ ಪ್ರಬಲ ಶಕ್ತಿಶಾಲಿ ರಾಷ್ಟ್ರವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ಆದರೆ ಅಕಸ್ಮಾತ್ ವಿಪಕ್ಷಗಳ ಮೈತ್ರಿಕೂಟ ಬಹುಮತ ಸಾಧಿಸಿದಲ್ಲಿ ದೇಶ ಐವತ್ತು ವರ್ಷ ಹಿಂದಕ್ಕೆ ಹೋಗಲಿದೆ. ಬಲಿಷ್ಠಗೊಂಡಿರುವ ದೇಶದ ಆರ್ಥಿಕತೆ ಹಳ್ಳ ಹಿಡಿಯಬಹುದು. ಆಕಾಶಕ್ಕೇರುತ್ತಿರುವ ಷೇರು ಮಾರುಕಟ್ಟೆ ಪಾತಾಳಕ್ಕೆ ಮುಖ ಮಾಡಬಹುದು. ಮೂಲಸೌಕರ್ಯಗಳ ನಿರ್ಮಾಣ ಸ್ಥಗಿತಗೊಳ್ಳಬಹುದು. ಸರಕಾರಿ ಕಂಪೆನಿಗಳ ಬೆಳವಣಿಗೆ ಕುಂಠಿತವಾಗಲಿದೆ. ಚೀನಾ ಒಲವು ಹೊಂದಿರುವ ವಿಪಕ್ಷ ಸರಕಾರವು ಚೀನಿ ಉತ್ಪನ್ನಗಳಿಗೆ ಭಾರತದ ಮಾರುಕಟ್ಟೆಯನ್ನು ಸಂಪೂರ್ಣ ತೆರೆಯಬಹುದು. ಇದರಿಂದ ಭಾರತದ ಉದ್ಯಮಗಳು, ಕೈಗಾರಿಕೆಗಳು, ಸ್ಟಾರ್ಟ್‌ಅಪ್‌ಗಳು ಮುಚ್ಚುವ ಸಾಧ್ಯತೆ ಇದೆ. ಚೀನಾ, ಪಾಕಿಸ್ತಾನಗಳಿಗೆ ಸಂತಸ ತರುವ ಮಾದರಿಯಲ್ಲಿ ವಿದೇಶಾಂಗ ನೀತಿ ಬದಲಾವಣೆಯಾಗಬಹುದು. ರಾಜಕೀಯ ಸೇಡು ತೀರಿಸುವ ಸಾಧ್ಯತೆಗಳು ಹೆಚ್ಚಾಗಲಿವೆ. ಒಟ್ಟಿನಲ್ಲಿ ಭಾರತಕ್ಕೆ ಗಂಭೀರ ಸಮಸ್ಯೆಗಳು, ಸವಾಲುಗಳು ಎದುರಾಗಲಿವೆ. ಆದ್ದರಿಂದ ಈ ಬಾರಿಯ ಚುನಾವಣೆ ಭಾರತೀಯರಿಗೆ ನಿರ್ಣಾಯಕವಾಗಿದ್ದು, ವಿವೇಚನೆಯಿಂದ ಮತದಾನ ಮಾಡಬೇಕಾಗಿದೆ.

ರೋಗಗ್ರಸ್ಥ ನೆರೆಯ ಪಾಕಿಸ್ತಾನದಲ್ಲಿ ಮುಂದಿನ ತಿಂಗಳು ಎಂಟರಂದು ಚುನಾವಣೆ ನಡೆಯಲಿದೆ. ಆರ್ಥಿಕ ಬಿಕ್ಕಟ್ಟು, ಆಹಾರದ ಕೊರತೆ, ರಾಜಕೀಯ ಅಸ್ಥಿರತೆ, ವಿರೋಧಿ ನಾಯಕರನ್ನು ಬಂಧಿಸುವ ಹತ್ಯಾ ಯತ್ನಗಳು, ಮಿಲಿಟರಿ ಪ್ರಾಬಲ್ಯ ಮೊದಲಾದ ಸಮಸ್ಯೆಗಳಿರುವ ಪಾಕಿಗಳು ಹೈರಾಣಾಗಿದ್ದಾರೆ. 240 ಮಿಲಿಯನ್ ಜನಸಂಖ್ಯೆ ಇರುವ ಪಾಕಿಸ್ತಾನಕ್ಕೆ ಈ ಬಾರಿಯ ಚುನಾವಣೆ ಹೊಸ ಚೈತನ್ಯ, ಜೀವನ ನೀಡಬಹುದು ಎಂಬ ವಿಶ್ವಾಸ ಪಾಕಿಗಳಿಗಿಲ್ಲ. ಏಕೆಂದರೆ ಪಾಕ್‌ನಲ್ಲಿ ಬರುವ ಎಲ್ಲ ಸರಕಾರಗಳು ಪ್ರಬಲ ಮಿಲಿಟರಿ ವ್ಯವಸ್ಥೆಯ ನಿಯಂತ್ರಣದಲ್ಲಿರುವುದು. ಆದ್ದರಿಂದ ಚುನಾವಣೆಗಳು ಪಾಕ್‌ನ ಆಡಳಿತದಲ್ಲಿ ವ್ಯಕ್ತಿಗಳನ್ನು ಬದಲಾಯಿಸಲಿದೆಯೇ ಹೊರತು ವ್ಯವಸ್ಥೆಯನ್ನಲ್ಲ. ಕೇವಲ ನವಾಜ್ ಷರೀಫ್‌ರು ಭಾರತದೊಂದಿಗೆ ಸಂಬಂಧ ಸರಿಪಡಿಸಬೇಕೆಂಬ ಭಾವನೆಯಲ್ಲಿದ್ದಾರೆ. ಆದರೆ ಪ್ರಧಾನಿ ಯಾರೇ ಆದರೂ ಪಾಕ್‌ನಲ್ಲಿ ನಿಜವಾದ ಅಧಿಕಾರವು ಭಾರತವನ್ನು ದ್ವೇಷಿಸುತ್ತಿರುವ ಸೇನೆ ಬಳಿ ಇರುವುದರಿಂದ ಎರಡೂ ದೇಶಗಳ ನಡುವೆ ಸಂಬಂಧ ಸುಧಾರಣೆಯಾಗುವ ಸಂಭಾವ್ಯತೆ ಇಲ್ಲ.

ನೆರೆಯ ಬಾಂಗ್ಲಾದೇಶದಲ್ಲಿ ಈ ತಿಂಗಳ ಏಳರಂದು ಚುನಾವಣೆ ನಡೆಯಿತು. ನಿರೀಕ್ಷೆಯಂತೆ ಈ ಬಾರಿಯೂ ಶೇಕ್ ಹಸೀನಾರವರೇ ಮತ್ತೆ ಅಧಿಕಾರಕ್ಕೇರಿದ್ದಾರೆ. ಭಾರತಕ್ಕೆ ಆಪ್ತರಾಗಿರುವ, ಬಾಂಗ್ಲಾದಲ್ಲಿರುವ ಹಿಂದುಗಳಿಗೆ ಒಂದಷ್ಟು ಸುರಕ್ಷೆ ನೀಡುತ್ತಿರುವ ಶೇಕ್ ಹಸೀನಾ ಮತ್ತೆ ಪ್ರಧಾನಿಯಾಗಬೇಕೆಂಬುದು ಭಾರತದ ಬಯಕೆಯಾಗಿತ್ತು. ಆದರೆ ಭಾರತವನ್ನು ದುರ್ಬಲಗೊಳಿಸುವ ವಿಶ್ವದ ಅನೇಕ ಗುಂಪುಗಳಲ್ಲಿ ಮೊದಲ ಕೂಟದಲ್ಲಿರುವ ಗೋಮುಖ ವ್ಯಾಘ್ರ ಅಮೇರಿಕವು ಬಾಂಗ್ಲಾದಲ್ಲಿ ಭಾರತದ ಆಪ್ತ ಶೇಕ್ ಹಸೀನಾ ಮತ್ತೆ ಪ್ರಧಾನಿಯಾಗದಂತೆ ತಡೆಯುವ ಹುನ್ನಾರ ನಡೆಸಿತ್ತು. ಅದಕ್ಕಾಗಿ ಪ್ರಜಾಪ್ರಭುತ್ವದ ರಕ್ಷಕನ ಮುಖವಾಡ ಧರಿಸಿ ಅಮೇರಿಕವು ಬಂಗ್ಲಾ ವಿಪಕ್ಷ ನಾಯಕರಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಬೇಕೆಂದು ಶೇಕ್ ಹಸೀನಾರ ಮೇಲೆ ಒತ್ತಡ ಹೇರಿತ್ತು. ಈಗ ಶೇಕ್ ಹಸೀನಾ ಅವರೇ ಪ್ರಧಾನಿ ಆಗಿ ಆಯ್ಕೆಯಾಗುತ್ತಿದ್ದಂತೆ ಅಮೆರಿಕಾ ತನ್ನ ವರಸೆ ಶುರುವಿಟ್ಟುಕೊಂಡಿದೆ. ಬಂಗ್ಲಾದಲ್ಲಿ ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆದಿಲ್ಲ ಎಂದು ಬೊಬ್ಬೆ ಹೊಡೆದುಕೊಳ್ಳುತ್ತಿದೆ.

ಭಾರತದಲ್ಲಿ ಭಾರತೀಯ ಜನತಾ ಪಾರ್ಟಿ ಪ್ರಚಂಡ ಗೆಲುವು ಸಾಧಿಸಿ ಪ್ರಧಾನಿ ಮೋದಿಯವರು ಮತ್ತೆ ಪ್ರಧಾನಿಯಾದರೆ, ದೇಶವನ್ನು ದುರ್ಬಲಗೊಳಿಸುವ ನಿರಂತರ ಯತ್ನದಲ್ಲಿರುವ ದೇಶದೊಳಗಿರುವ ದೇಶ ವಿರೋಧಿ ಧೂರ್ತರು ಹಾಗೂ ಜಗತ್ತಿನಲ್ಲಿರುವ ಭಾರತ ವಿರೋಧಿ ಶಕ್ತಿಗಳು ಬಾಲ ಮಡಚಿ ಮೂಲೆ ಸೇರಲಿವೆ ಎಂಬುದು ರಾಷ್ಟ್ರೀಯ ವಾದಿಗಳ ಅಚಲ ವಿಶ್ವಾಸ. ಈ ರೀತಿ ಆಗುವಂತೆ ದೇಶಪ್ರೇಮಿ ಭಾರತೀಯರು ಸಂಕಲ್ಪ ಮಾಡಬೇಕಾಗಿದೆ.

ಕೆಚ್ಚೆದೆಯ ಭೀಮಾ ಕೋರೆಗಾಂವ್ ಹೋರಾಟ ಸ್ಮರಿಸಬೇಕು

ಗಂಗೋತ್ರಿಯಲ್ಲಿ ಫ್ಲ್ಯಾಶ್ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಕೆ.ಹರೀಶ್‌ಗೌಡ



ಮೈಸೂರು,ಜ.9(ಪಿಎಂ)– ಭೀಮಾ ಕೋರೆಗಾಂವ್ ಯುದ್ಧದ ಮಹತ್ವವನ್ನು ನಾವು ಅರಿತು ಆ ಕೆಚ್ಚೆದೆಯ ಹೋರಾಟ ಸ್ಮರಿಸಬೇಕು ಎಂದು ಶಾಸಕ ಕೆ.ಹರೀಶ್‌ಗೌಡ ಹೇಳಿದರು.

ಮೈಸೂರಿನ ಮಾನಸಗಂಗೋತ್ರಿಯ ಕ್ಲಾಕ್ ಟವರ್ ಆವರಣದಲ್ಲಿ ಮೈಸೂರು ವಿವಿಯ ದಲಿತ ವಿದ್ಯಾರ್ಥಿ ಒಕ್ಕೂಟದ ವತಿಯಿಂದ ಭೀಮಾ ಕೋರೆಗಾಂವ್ ವಿಜಯೋತ್ಸವ ಹಾಗೂ ಹೊಸ ವರ್ಷದ ಪ್ರಯುಕ್ತ ಹಮ್ಮಿಕೊಂಡಿದ್ದ ಫ್ಲ್ಯಾಶ್‌ಮಾಬ್ ಸಾಂಸ್ಕೃತಿಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಎಲ್ಲಾ ಸಮುದಾಯಗಳು ಸಮಾನವಾಗಿ ಬದುಕಬೇಕು. ಸಮಾನತೆಯಿಂದ ಬಾಳಬೇಕು. ಜಾತ್ಯಾತೀತ ವಿಚಾರಗಳನ್ನು ಇಟ್ಟುಕೊಂಡು ಮುಂದುವರೆದರೆ ಈ ದೇಶಕ್ಕೆ ಉಜ್ವಲ ಭವಿಷ್ಯ ಇರಲಿದೆ. ನಮ್ಮ ಮುಂದಿನ ಪೀಳಿಗೆಯೂ ಸುಭಿಕ್ಷೆಯಿಂದ ಬದುಕಲಿದೆ. ನಾನು ಹನುಮ ಜಯಂತಿಗೆ ಹೋಗಿದ್ದಕ್ಕೆ ಅಹಿಂದ ಮುಖಂಡ ಚಿಕ್ಕಜವರಪ್ಪ ಬೇಸರ ವ್ಯಕ್ತಪಡಿಸಿದರು. ಆದರೆ ನಮಗೆ ಹನುಮನೂ ಬೇಕು. ಹನುಮ ಒಬ್ಬ ಶೂದ್ರ. ಯಾವುದೇ ಧರ್ಮ–ಜಾತಿಯನ್ನು ನಾವು ಮೇಲು–ಕೀಳು ಎಂಬ ದೃಷ್ಟಿಕೋನದಲ್ಲಿ ನೋಡಬಾರದು. ಎಲ್ಲರನ್ನೂ ಸಮಾನರಾಗಿ ಗೌರವದಿಂದ ಕಾಣಬೇಕು ಎಂದು ತಿಳಿ ಹೇಳಿದರು.

ವಿಶ್ವಮಾನವ ತತ್ವದಡಿ ಬದುಕಿ: ಯಾವುದೇ ಜಾತಿ–ಧರ್ಮದ ಸಂಕೋಲೆಗೆ ಸಿಲುಕದೇ ರಾಷ್ಟ್ರಕವಿ ಕುವೆಂಪು ಅವರ ವಿಶ್ವಮಾನವ ತತ್ವದಡಿ ಉತ್ತಮ ಬದುಕು ಕಟ್ಟಿಕೊಳ್ಳಬೇಕು. ಕುವೆಂಪು ಅವರು ಕಟ್ಟಿದ ಮಾನಸ ಗಂಗೋತ್ರಿಯಲ್ಲಿ ಯಾವುದೇ ಒಂದು ಜಾತಿ, ಒಂದು ಧರ್ಮಕ್ಕೆ ಪ್ರಾಧಾನ್ಯತೆ ಇಲ್ಲ. ಇಲ್ಲಿ ಎಲ್ಲರೂ ಸಮಾನರು ಎಂದು ಹರೀಶ್‌ಗೌಡ ತಿಳಿಸಿದರು.

ನಾನು ಇದೇ ವಿವಿಯ ವಿದ್ಯಾರ್ಥಿಯಾಗಿ ಬಳಿಕ ಇಲ್ಲೇ 10 ವರ್ಷಗಳ ನೌಕರನಾಗಿಯೂ ಸೇವೆ ಸಲ್ಲಿಸಿದ್ದೇನೆ. ಮೈಸೂರು ವಿವಿಯಲ್ಲಿ ಎಲ್ಲಾ ಸಮುದಾಯದ ಮಹನೀಯರ ಜಯಂತಿಗಳನ್ನು ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಒಗ್ಗಟ್ಟಿನಿಂದ ಆಚರಿಸುವುದನ್ನು ಕಂಡಿದ್ದೇನೆ. ನಾನಿಂದು ಶಾಸಕನಾಗಲು ಮೊದಲ ಮೆಟ್ಟಿಲು ಈ ಮಾನಸ ಗಂಗೋತ್ರಿ ಎಂದು ಸ್ಮರಿಸಿದರು.

ಮೈಸೂರು ವಿವಿಗೆ ಸಂಬಂಧಿಸದೇ ಇದ್ದವರನ್ನು ಕಳೆದ ಬಾರಿಯ ಸರ್ಕಾರ ಇಲ್ಲಿನ ಸಿಂಡಿಕೇಟ್ ಸದಸ್ಯರನ್ನಾಗಿ ಮಾಡಿತು. ಆದರೆ ನಮ್ಮ ಸರ್ಕಾರ, ನಮ್ಮ ಮುಖ್ಯಮಂತ್ರಿಗಳಿಂದ ಮೈಸೂರು ವಿವಿ ವಿದ್ಯಾರ್ಥಿಗಳಾಗಿದ್ದವರು ಸಿಂಡಿಕೇಟ್ ಸದಸ್ಯರಾಗಿ ಆಯ್ಕೆ ಆಗಿದ್ದಾರೆ. ಕಳೆದ ಬಾರಿಯ ಸರ್ಕಾರ ಏನು ಮಾಡಿತು ಎಂದು ಆಲೋಚಿಸಿ, ನಮ್ಮ ಸರ್ಕಾರ ಯಾವುದೇ ಒಂದು ಜಾತಿ, ಧರ್ಮಕ್ಕೆ ಸೀಮಿತವಾಗಿಲ್ಲ ಎಂದು ಹೇಳಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಚ್ಚು ಗಮನ ನೀಡಿ, ವಿದ್ಯಾಭ್ಯಾಸದಲ್ಲಿ ಹಿಂದೆ ಬೀಳಬೇಡಿ. ದೇಶಕ್ಕೆ ಉತ್ತಮ ಸೇವೆ ಸಲ್ಲಿಸುವ ಅವಕಾಶ ನಿಮಗೆ ದೊರೆಯುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶಕ ಡಾ.ಚಂದ್ರಶೇಖರ್, ಅಹಿಂದ ಮುಖಂಡ ಚಿಕ್ಕಜವರಪ್ಪ ಮೈಸೂರು ವಿವಿ ಸಿಂಡಿಕೇಟ್ ಸದಸ್ಯರಾದ ಡಾ.ಬಸವರಾಜ್, ನಟರಾಜ್ ಶಿವಣ್ಣ, ಸಾಹಿತಿ ದಂಡಿಕೆರೆ ನಾಗರಾಜು, ಪ್ರಾಧ್ಯಾಪಕ ಡಾ.ಆರ್.ವೆಂಕಟೇಶ್, ಮೈಸೂರು ವಿವಿ ಸಂಶೋಧಕರ ಸಂಘದ ಮಾಜಿ ಅಧ್ಯಕ್ಷ ಡಾ.ಮಹೇಶ್ ಸೋಸಲೆ ಮತ್ತಿತರರು ಹಾಜರಿದ್ದರು.

ಪ್ರತಿದಿನ 2 ಕಪ್ ಕಾಫಿ ಸೇವನೆಯಿಂದ ಬಿಪಿ, ಹೃದಯ ಸಂಬಂಧಿ ಕಾಯಿಲೆ ನಿಯಂತ್ರಣ

ಕಾಫಿ ವಿತ್ ಡಾಕ್ಟರ್ಸ್ ಕಾರ್ಯಕ್ರಮದಲ್ಲಿ ಹಿರಿಯ ವೈದ್ಯ ಡಾ.ಸಿ.ಎನ್.ಮಂಜುನಾಥ್



ಮೈಸೂರು,ಜ.9(ಪಿಎಂ)– ಪ್ರತಿದಿನ ಎರಡು ಕಪ್ ಕಾಫಿ ಸೇವನೆಯಿಂದ ಮೆದುಳು ಜಾಗೃತಗೊಳ್ಳಲಿದೆ. ಅಲ್ಲದೆ, ಶೇ.18ರಷ್ಟು ಹೃದಯ ಸಂಬಂಧಿ ಕಾಯಿಲೆ, ಶೇ.16ರಷ್ಟು ರಕ್ತದೊತ್ತಡ ಕಡಿಮೆಯಾಗಲಿದೆ ಮತ್ತು ಪಾರ್ಶ್ವವಾಯು ಸೇರಿದಂತೆ ಮೊದಲಾದ ಆರೋಗ್ಯ ಸಮಸ್ಯೆಗಳನ್ನೂ ತಡೆಗಟ್ಟಬಹುದು ಎಂದು ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಸಿ.ಎನ್.ಮಂಜುನಾಥ್ ಹೇಳಿದರು.

ಹಾಸನ ಜಿಲ್ಲೆಯ ಸಕಲೇಶಪುರದಲ್ಲಿ ಇತ್ತೀಚೆಗೆ ಹಾಸನ್ ಡಿಸ್ಟ್ರಿಕ್ಟ್ ಕಾಫಿ ಪ್ಲಾಂಟರ್ಸ್ ಅಸೋಸಿಯೇಷನ್‌ನ 46ನೇ ವಾರ್ಷಿಕೋತ್ಸವದ ಪ್ರಯುಕ್ತ ಹಮ್ಮಿಕೊಂಡಿದ್ದ 'ಕಾಫಿ ವಿತ್ ಡಾಕ್ಟರ್ಸ್' ಕಾರ್ಯಕ್ರಮ ಮತ್ತು 'ಕಾಫಿ ಕೃಷಿ ಮೇಳ'ದಲ್ಲಿ ಅವರು ಮಾತನಾಡಿದರು.

ಪ್ರತಿದಿನ 2 ಕಪ್ ಕಾಫಿ ಸೇವಿಸುವ ಸುಮಾರು 5 ಲಕ್ಷ ಜನರ ಆರೋಗ್ಯದ ಬಗ್ಗೆ ಅಮೆರಿಕನ್ ಕಾಲೇಜ್ ಆಫ್ ಕಾರ್ಡಿಯಾಲಜಿ ವತಿಯಿಂದ ನಡೆಸಲಾಗಿದೆ. 10 ವರ್ಷಗಳ ಈ ಅಧ್ಯಯನದಲ್ಲಿ ಕಾಫಿ ಸೇವನೆಯಿಂದ ಹೃದಯ, ರಕ್ತದೊತ್ತಡ ಸಮಸ್ಯೆಗಳು ಸೇರಿದಂತೆ 10ಕ್ಕೂ ಹೆಚ್ಚು ಆರೋಗ್ಯ ಸಮಸ್ಯೆಗಳನ್ನು ತಡೆಯಬಹುದು ಎಂದು ಹೇಳಲಾಗಿದೆ ಎಂದರು.

ಪ್ರತಿದಿನ 2 ಕಪ್ ಕಾಫಿ ಸೇವಿಸುವವರ ಆಯಸ್ಸು 10 ವರ್ಷಗಳು ಹೆಚ್ಚಾಗಲಿದೆ. ಮಲೆನಾಡು ಗ್ರಾಮಾಂತರ ಪ್ರದೇಶದಲ್ಲಿ ಸುಮಾರು 90ರಿಂದ 100 ವರ್ಷಗಳ ಆಸುಪಾಸಿನವರೆಗೆ ಅನೇಕ ಜನ ಆರೋಗ್ಯಕರ ಜೀವನ ನಡೆಸುತ್ತಿದ್ದು, ಇದೇ ಇದಕ್ಕೆ ಸಾಕ್ಷಿಯಾಗಿದೆ. ಜನತೆಯಲ್ಲಿ ಕಾಫಿ ಸೇವನೆಯಿಂದ ಲಭ್ಯವಾಗುವ ಆರೋಗ್ಯದ ಪ್ರಯೋಜನಗಳ ಕುರಿತು ಜಾಗೃತಿ ಮೂಡಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಹೊಸ ಬ್ರ್ಯಾಂಡ್‌ಗಳನ್ನು ಪರಿಚಯಿಸುವ ಕಾಫಿ ಮೇಳಗಳನ್ನು ಆಯೋಜಿಸಬೇಕಿದೆ. ಜೊತೆಗೆ ವಿಶ್ವವಿದ್ಯಾನಿಲಯಗಳಲ್ಲಿ ಕಾಫಿಗೆ ಸಂಬಂಧಿಸಿದಂತೆ ಸಂಶೋಧನಾ ಕೇಂದ್ರಗಳನ್ನು ಸ್ಥಾಪಿಸುವ ಅಗತ್ಯವೂ ಇದೆ ಎಂದರು. ಹಾಸನ್ ಡಿಸ್ಟ್ರಿಕ್ಟ್ ಕಾಫಿ ಪ್ಲಾಂಟರ್ಸ್ ಅಸೋಸಿಯೇಷನ್‌ನ ಅಧ್ಯಕ್ಷ ಕೆ.ಎನ್.ಸುಬ್ರಹ್ಮಣ್ಯ, ಸಾಂಬಾರ್ ಬೋರ್ಡ್ ನ್ಯಾಷನಲ್ ಉಪಾಧ್ಯಕ್ಷ ಕೆ.ಸತ್ಯನಾರಾಯಣ, ಹೈಕೋರ್ಟ್ ನ್ಯಾಯಮೂರ್ತಿ ಸಂದೇಶ್, ಶಾಸಕರಾದ ಸಿಮೆಂಟ್ ಮಂಜು, ಎ.ಮಂಜು, ಕರ್ನಾಟಕ ಗ್ರೋವರ್ಸ್ ಫೆಡರೇಷನ್ ಅಧ್ಯಕ್ಷ ಮೋಹನ್‌ಕುಮಾರ್ ಇದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ



ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಓಬಿಸಿ ಮೋರ್ಚಾ ಅಧ್ಯಕ್ಷರಾಗಿ ಆರ್.ರಘು (ಕೌಟಿಲ್ಯ) ಅಧಿಕಾರ ಸ್ವೀಕರಿಸಿದರು. ಈ ವೇಳೆ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಶಾಸಕ ವಿ.ಸುನೀಲ್‌ಕುಮಾರ್, ಓಬಿಸಿ ಮೋರ್ಚಾದ ನಿರ್ಗಮಿತ ಅಧ್ಯಕ್ಷ ನೆ.ಲ.ನರೇಂದ್ರಬಾಬು, ಓಬಿಸಿ ಮೋರ್ಚಾ ಪದಾಧಿಕಾರಿಗಳಾದ ಸುರೇಶ್‌ಬಾಬು, ವಿವೇಕಾನಂದ ಡಬ್ಬಿ ಹಾಗೂ ಇತರ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಉಪಸ್ಥಿತರಿದ್ದರು.

ಪಡಿತರ ಅಕ್ಕಿ ಅಕ್ರಮ ಸಾಗಾಟ; ಲಾರಿ ಸಮೇತ 12.5 ಸಾವಿರ ಕೆಜಿ ಅಕ್ಕಿ ವಶ

ಮೈಸೂರು,ಜ.9(ಪಿಎಂ)– ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ದಾಳಿ ನಡೆಸಿ, ಲಾರಿ ಸಮೇತ 12.5 ಸಾವಿರ ಕೆಜಿ ತೂಕದ ಅಕ್ಕಿಯನ್ನು ವಶಪಡಿಸಿಕೊಂಡಿದ್ದಾರೆ.

ಮಾಹಿತಿ ಮೇರೆಗೆ ಮಂಗಳವಾರ ಸಂಜೆ ದಾಳಿ ನಡೆಸಿದ ಸಿಸಿಬಿ ಪೊಲೀಸರು, ಸಿದ್ದಲಿಂಗಪುರದ ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇಯ ಸರ್ವೀಸ್ ರಸ್ತೆಯಲ್ಲಿ ಲಾರಿಯನ್ನು (ಕೆಎ-09, ಡಿ-9686) ತಡೆದು ಪರಿಶೀಲಿಸಿದ್ದು, ಈ ವೇಳೆ 50 ಕೆಜಿ ತೂಕದ ಒಟ್ಟು 250 ಮೂಟೆಗಳಲ್ಲಿ ಪಡಿತರ ಅಕ್ಕಿ ಪತ್ತೆಯಾಗಿದೆ. ಲಾರಿ ಚಾಲಕನನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ.

ಹೆಬ್ಬಾಳ ಗೋದಾಮು ಒಂದರಿಂದ ಮಂಡ್ಯದ ಮಿಲ್‌ವೊಂದಕ್ಕೆ ಅಕ್ಕಿಯನ್ನು ಸಾಗಾಟ ಮಾಡಲಾಗುತ್ತಿತ್ತು. ದಾಳಿ ಮಾಡಿ ಪರಿಶೀಲಿಸಿದಾಗ, ಸದರಿ ಅಕ್ಕಿಯು ಸಕ್ರಮ ಎಂಬುದಕ್ಕೆ ಯಾವುದೇ ದಾಖಲಾತಿ ಇರಲಿಲ್ಲ. ನಂತರ ಆಹಾರ ಇಲಾಖೆ ಫುಡ್ ಇನ್ಸ್‌ಪೆಕ್ಟರ್ ಉಪಸ್ಥಿತಿಯಲ್ಲಿ ಅಕ್ಕಿಯನ್ನು ವಶಕ್ಕೆ ಪಡೆಯಲಾಗಿದೆ. ಪಡಿತರ ಅಕ್ಕಿಯನ್ನು ಅಕ್ರಮ ಸಾಗಾಟ ಮಾಡಲಾಗುತ್ತಿತ್ತು ಎಂಬುದನ್ನು ಆಹಾರ ಇಲಾಖೆ ಫುಡ್ ಇನ್ಸ್‌ಪೆಕ್ಟರ್ ಖಚಿತಪಡಿಸಿದ್ದಾರೆ.



ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಲಾರಿಯನ್ನು ಮೇಟಗಳ್ಳಿ ಪೊಲೀಸರು ವಶಕ್ಕೆ ಪಡೆದಿರುವುದು.

ಪಡಿತರ ಅಕ್ಕಿಯನ್ನು ಈ ರೀತಿಯಲ್ಲಿ ಅಕ್ರಮವಾಗಿ ಖರೀದಿಸುವ ಮಿಲ್ ಮಾಲೀಕರು, ಪಾಲಿಶ್ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಾರೆ. ಇದೊಂದು ದೊಡ್ಡ ದಂಧೆಯಾಗಿದೆ ಎಂಬ ಆರೋಪಗಳು ಕೇಳಿ ಬಂದಿವೆ.

ಮೇಟಗಳ್ಳಿ ಠಾಣೆಗೆ ಅಕ್ಕಿ, ಲಾರಿ ಮತ್ತು ಚಾಲಕನನ್ನು ಹಸ್ತಾಂತರ ಮಾಡಲಾಗಿದೆ. ಪ್ರಕರಣ ದಾಖಲಿಸಿಕೊಳ್ಳುವ ಮೇಟಗಳ್ಳಿ ಠಾಣೆ ಪೊಲೀಸರು ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ ಎಂದು ಸಿಸಿಬಿ ಪೊಲೀಸ್ ಮೂಲಗಳಿಂದ ತಿಳಿದುಬಂದಿದೆ. ಸಿಸಿಬಿ ಪೊಲೀಸ್ ಇನ್ಸ್‌ಪೆಕ್ಟರ್ ಪೂವಯ್ಯ ಅವರ ನೇತೃತ್ವದಲ್ಲಿ ಈ ದಾಳಿ ನಡೆಸಲಾಗಿದೆ.

ರಾಜ್ಯದ 28 ಲೋಕಸಭಾ ಕ್ಷೇತ್ರಗಳನ್ನು ಗೆಲ್ಲಲು ಯಾರನ್ನು ಬೇಕಾದ್ರೂ ಭೇಟಿಯಾಗಲು ಸಿದ್ಧ

ಹಾಸನ: 2024ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಕೂಟದ ಎಲ್ಲಾ 28 ಸ್ಥಾನಗಳನ್ನು ಗೆಲ್ಲಲು ನಾನು ಯಾವುದೇ ನಾಯಕರನ್ನು ಸಂಪರ್ಕಿಸಲು ಅಥವಾ ಭೇಟಿ ಮಾಡಲು ಸಿದ್ಧ ಎಂದು ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.



ಹಾಸನದಲ್ಲಿ ಮಾತನಾಡಿದ ಜೆಡಿಎಸ್ ರಾಜ್ಯಾಧ್ಯಕ್ಷ, ಮಂಡ್ಯ ರಾಜಕೀಯಕ್ಕೆ ಸಂಬಂಧಿಸಿದಂತೆ ಮಂಡ್ಯ ಹಾಲಿ ಸಂಸದೆ ಸುಮಲತಾ ಅವರೊಂದಿಗೂ ಮಾತನಾಡಬಹುದು ಎಂದಿದ್ದಾರೆ. ವಿ.ಸೋಮಣ್ಣ, ಎಚ್.ಡಿ. ದೇವೇಗೌಡ, ಸಿ.ಟಿ.ರವಿ, ಭೇಟಿ ಕುರಿತ ಪ್ರಶ್ನೆಗೆ ಉತ್ತರಿಸಿದ ಎಚ್‌ಡಿಕೆ, ಬಿಜೆಪಿ ಮತ್ತು ಜೆಡಿಎಸ್ ನಾಯಕರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿದೆ ಎಂದರು.

ರಾಜ್ಯದಲ್ಲಿ ಶ್ರೀರಾಮ ಭಕ್ತರಿಗೆ ರಾಮಲಲ್ಲಾ ತೀರ್ಥ ಕ್ಷೇತ್ರ ಟ್ರಸ್ಟ್ ವತಿಯಿಂದ ಮಂತ್ರಾಕ್ಷತೆಗೆ ಪಿಡಿಎಸ್ ಅಕ್ಕಿಯನ್ನು ಬಳಸಲಾಗುತ್ತಿದೆ ಎಂದ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಹೆಚ್‌ಡಿಕೆ, ಡಿಕೆಶಿ ಅವರು ಮೂರ್ಖತನದ ಹೇಳಿಕೆ ನೀಡಿದ್ದಾರೆ. ಸರ್ಕಾರ ಈ ಬಗ್ಗೆ ತನಿಖೆಗೆ ಆದೇಶಿಸಿ ಸತ್ಯ ಬಹಿರಂಗಪಡಿಸಲಿ ಎಂದರು.

ಇತ್ತೀಚೆಗಷ್ಟೇ ಪ್ರಜ್ವಲ್ ರೇವಣ್ಣ ಹಾಸನ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಎಂದು ಘೋಷಿಸಿದ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರ ನಿರ್ಧಾರಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಪ್ರೀತಂಗೌಡರ ಮನವೊಲಿಸಲು ಜೆಡಿಎಸ್ ಕೂಡ ಪ್ರಯತ್ನಿಸಲಿದೆ ಎಂದರು.

ನಿಧನ

ಆಂತೋಣಿ ಪ್ರಸಾದ್ ಪ್ಯಾಟ್ರಿಕ್



ಮೈಸೂರು,ಜ.9–ಮೈಸೂರಿನ ಎಫ್‌ಟಿಎಸ್ ಸರ್ಕಲ್ ಸಮೀಪವಿರುವ ಕರುಣಾಪುರ, ಸೇಂಟ್ ಮೇರಿಸ್ ರಸ್ತೆ, 13ನೇ ಕ್ರಾಸ್, ನಂ. 3849, 13/1 ನಿವಾಸಿ ಆಂತೋಣಿ ಪ್ರಸಾದ್ ಪ್ಯಾಟ್ರಿಕ್ (62) ಸೋಮವಾರ ರಾತ್ರಿ ಪುಣೆಯಲ್ಲಿ ನಿಧನರಾದರು.

ಮೃತರು ಪತ್ನಿ ಫಿಯೋನಾ ಪ್ಯಾಟ್ರಿಕ್, ಪುತ್ರಿ ಶಾರನ್, ಅಳಿಯ ಬ್ರೆಂಡನ್ ವಾಲ್ಲರ್, ಪುತ್ರ ಶಾನ್, ಮೊಮ್ಮಗಳು ಶಿಯನ್ನಾ ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ದಿನಾಂಕ ಮತ್ತು ಸಮಯವನ್ನು ಪಾರ್ಥಿವ ಶರೀರ ಪುಣೆಯಿಂದ ಬಂದ ನಂತರ ನಿರ್ಧರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮಾಹಿತಿಗೆ ಮೊ. 99808 99722 ಸಂಪರ್ಕಿಸಬಹುದು.

ಕೆ.ಎನ್.ಶ್ರೀನಿವಾಸ



ಮೈಸೂರು: ಇಲ್ಲಿನ ವಿಜಯನಗರ ನಿವಾಸಿ ಲೇಟ್ ಚಿಂತಾಮಣಿ (ಕುದೇರು) ಅವರ ಮಗ ಕೆ.ಎನ್.ಶ್ರೀನಿವಾಸ (55) ಸೋಮವಾರ ನಿಧನರಾದರು. ಮೃತರು ತಾಯಿ ಸರೋಜಮ್ಮ, ಸಹೋದರರಾದ ಶಿವಶಂಕರ್, ಶ್ರೀನಾಥ್ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯ ಕ್ರಿಯೆ ಮಂಗಳವಾರ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಿರ್ಜುನ್ ಕೆ.ನಾಗರಾಜು



ಮೈಸೂರಿನ ಹೊಸಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ, ಪಿಡಬ್ಲ್ಯೂಡಿ ಪ್ರಥಮ ದರ್ಜೆ ಗುತ್ತಿಗೆದಾರ ಮಿರ್ಜುನ್ ಕೆ.ನಾಗರಾಜು(58)ಮಂಗಳವಾರನಿಧನರಾದರು. ಇವರು ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗ, ಸ್ನೇಹಿತರನ್ನು ಅಗಲಿದ್ದಾರೆ. ಹೊಸಹುಂಡಿ ಗ್ರಾಮದ ರುದ್ರಭೂಮಿಯಲ್ಲಿ ಬುಧವಾರ ಮಧ್ಯಾಹ್ನ 12ಕ್ಕೆ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂಗೀತ ಮಾಂತ್ರಿಕ ಉಸ್ತಾದ್ ರಶೀದ್ ಖಾನ್



ಕೊಲ್ಕತ್ತಾ,ಜ.9–ಖ್ಯಾತ ಸಂಗೀತ ಮಾಂತ್ರಿಕ ಉಸ್ತಾದ್ ರಶೀದ್ ಖಾನ್ ನಿಧನರಾಗಿದ್ದಾರೆ. ಅವರಿಗೆ 55 ವರ್ಷ ವಯಸ್ಸಾಗಿತ್ತು. ಪ್ರಾಸ್ಟೇಟ್ ಕ್ಯಾನ್ಸರ್‌ನಿಂದಾಗಿ ನಗರದ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಉಸ್ತಾದ್ ರಶೀದ್ ಖಾನ್ ಮಂಗಳವಾರ ನಿಧನರಾಗಿದ್ದಾರೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತಿಳಿಸಿದ್ದಾರೆ. ನಾವು ಕೈಲಾದಷ್ಟು ಪ್ರಯತ್ನಿಸಿ ವಿಫಲರಾಗಿದ್ದೇವೆ. ಉಸ್ತಾದ್ ರಶೀದ್ ಖಾನ್ ಮಧ್ಯಾಹ್ನ 3.45ರ ಸುಮಾರಿಗೆ ನಿಧನರಾದರು ಎಂದು ಖಾಸಗಿ ಆಸ್ಪತ್ರೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆಸ್ಪತ್ರೆಗೆ ಭೇಟಿ ನೀಡಿದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಇದು ಇಡೀ ದೇಶಕ್ಕೆ ಮತ್ತು ಸಂಗೀತ ಬಂಧುಗಳಿಗೆ ದೊಡ್ಡ ನಷ್ಟವಾಗಿದೆ, ರಶೀದ್ ಖಾನ್ ಇನ್ನಿಲ್ಲ ಎಂದು ನಂಬಲು ಸಾಧ್ಯವಾಗದೆ ತುಂಬಾ ನೋವಾಗಿದೆ ಎಂದು ಹೇಳಿದರು.

ಕೋಲ್ಕತ್ತಾದ ಪೀರ್ಲೆಸ್ ಆಸ್ಪತ್ರೆಯಲ್ಲಿ ಸಂಜೆ 6ರವರೆಗೂ ಪಾರ್ಥಿವ ಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇರಿಸಲಾಗಿತ್ತು. ರಾತ್ರಿ ಪೀಸ್ ಹೆವನ್‌ಗೆ ಪಾರ್ಥಿವ ಶರೀರ ಕಳುಹಿಸಲಾಯಿತು. ನಾಳೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. 1968ರ ಜುಲೈ 1ರಂದು ಜನಿಸಿದ್ದ ಉಸ್ತಾದ್ ರಶೀದ್ ಖಾನ್, ಹಿಂದೂಸ್ತಾನಿ ಸಂಗೀತ ಸಂಪ್ರದಾಯದ ಶಾಸ್ತ್ರೀಯ ಸಂಗೀತಗಾರರಾಗಿದ್ದರು. 2022ರಲ್ಲಿ ಕೇಂದ್ರ ಸರ್ಕಾರ ಅವರು ಸಂಗೀತ ಕ್ಷೇತ್ರದಲ್ಲಿ ಸಲ್ಲಿಸಿರುವ ಕೊಡುಗೆಯನ್ನು ಪರಿಗಣಿಸಿ ದೇಶದ 3ನೇ ಅತ್ಯುನ್ನತ ನಾಗರಿಕ ಪುರಸ್ಕಾರವಾದ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿತ್ತು.

ಹಿರಿಯ ಮುತ್ಸದ್ಧಿ, ಸಂಸದ ಶ್ರೀನಿವಾಸ ಪ್ರಸಾದರ ರಾಜಕೀಯ ಜೀವನ ಸುವರ್ಣ ಮಹೋತ್ಸವ

● ಮಾರ್ಚ್ 17ರಂದು ಮೈಸೂರಲ್ಲಿ ಅದ್ದೂರಿ ಕಾರ್ಯಕ್ರಮ ● ಮುಖಂಡರ ಪೂರ್ವಭಾವಿ ಸಭೆ

ಮೈಸೂರು,ಜ.9(ಎಸ್‌ಬಿಡಿ)–ಮುತ್ಸದ್ಧಿ ರಾಜಕಾರಣಿ, ಚಾಮರಾಜನಗರ ಸಂಸದ ವಿ.ಶ್ರೀನಿವಾಸಪ್ರಸಾದ್ ಅವರ ರಾಜಕೀಯ ಜೀವನದ ಸುವರ್ಣ ಮಹೋತ್ಸವವನ್ನು ಮೈಸೂರಿನಲ್ಲಿ ಮಾ.17ರಂದು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಿದ್ದು, ಈ ಹಿನ್ನೆಲೆಯಲ್ಲಿ ಮಂಗಳವಾರ ಮುಖಂಡರು ಪೂರ್ವಭಾವಿ ಸಭೆ ನಡೆಸಿದರು.

ವಿ.ಶ್ರೀನಿವಾಸ ಪ್ರಸಾದ್ ಅವರ ರಾಜಕೀಯ ಜೀವನ ಮುಂಬರುವ ಮಾರ್ಚ್‌ಗೆ 50 ವರ್ಷ ಪೂರೈಸಲಿದೆ. ಈ ಹಿನ್ನೆಲೆಯಲ್ಲಿ ವಿ.ಶ್ರೀನಿವಾಸ ಪ್ರಸಾದ್ ಸುವರ್ಣ ಮಹೋತ್ಸವ ಅಭಿನಂದನಾ ಸಮಿತಿ ಅಡಿಯಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಗೆಸ್ಟ್ ಹೌಸ್ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಸಿ, ಕಾರ್ಯಕ್ರಮ ಸಂಬಂಧ ಚರ್ಚೆ ನಡೆಸಲಾಯಿತು. ಸಂಸದ ವಿ.ಶ್ರೀನಿವಾಸಪ್ರಸಾದ್ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಶ್ರೀ ಕಲ್ಯಾಣಸಿರಿ ಬಂತೇಜಿ, ಕಾಂಗ್ರೆಸ್ ಹಿರಿಯ ಮುಖಂಡ ಪಿಜಿಆರ್ ಸಿಂಧ್ಯಾ, ಮಾಜಿ ಶಾಸಕ ವಾಸು, ಮುಡಾ ಮಾಜಿ ಅಧ್ಯಕ್ಷರಾದ ಮೋಹನ್ ಕುಮಾರ್, ಸಿ.ಬಸವೇಗೌಡರು, ಲೇಖಕ ಡಾ.ಪ್ರಧಾನ ಗುರುದತ್ತ, ನಂಜನಗೂಡಿನ ಪದ್ಮನಾಭರಾವ್, ಸ.ರ.ಸುದರ್ಶನ್, ಡಾ.ಶಿವರಾಜಪ್ಪ, ಪ್ರೊ.ನಿ.ಗಿರಿಗೌಡ ಮತ್ತಿತರರು ಪಾಲ್ಗೊಂಡು ಅಭಿಪ್ರಾಯ ತಿಳಿಸಿದರು.



ಮೈಸೂರಿನ ಮುಕ್ತ ವಿವಿ ಅತಿಥಿಗೃಹದ ಸಭಾಂಗಣದಲ್ಲಿ ವಿ.ಶ್ರೀನಿವಾಸ ಪ್ರಸಾದ್ ರಾಜಕೀಯ ಜೀವನದ ಸುವರ್ಣ ಮಹೋತ್ಸವ ಸಂಬಂಧ ಮಂಗಳವಾರ ಪೂರ್ವಭಾವಿ ಸಭೆ ನಡೆಸಲಾಯಿತು.

ಹಿರಿಯರಿಗೆ ಆಹ್ವಾನ: ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಮಾ.17ರಂದು ದೊಡ್ಡ ಮಟ್ಟದಲ್ಲಿ ಸಮಾರಂಭ ನಡೆಸಲು ನಿರ್ಧರಿಸಿದ್ದು, ಮಾಜಿ ಮುಖ್ಯಮಂತ್ರಿಗಳಾದ ವೀರಪ್ಪ ಮೊಯ್ಲಿ, ಎಸ್.ಎಂ. ಕೃಷ್ಣ, ಮಾಜಿ ಸ್ಪೀಕರ್ ಕಾಗೋಡು ತಿಮ್ಮಪ್ಪ ಸೇರಿದಂತೆ ವಿ.ಶ್ರೀನಿವಾಸಪ್ರಸಾದ್ ಅವರ ರಾಜಕೀಯ ಸಮಕಾಲೀನರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲು ತೀರ್ಮಾನಿಸಲಾಯಿತು. ಅದೇ ಸಮಾರಂಭದಲ್ಲಿ ಪ್ರಧಾನ ಗುರುದತ್ತ ಅವರ ಪ್ರಧಾನ ಸಂಪಾದಕತ್ವ ಹಾಗೂ ಪ್ರೊ.ನೀಲಗಿರಿ ತಳವಾರ್ ಅವರ ಸಂಪಾದಕತ್ವದಲ್ಲಿ ಸಿದ್ಧವಾಗಿರುವ ವಿ.ಶ್ರೀನಿವಾಸ ಪ್ರಸಾದ್ ಜೀವನ ಚರಿತ್ರೆಯನ್ನು ಬಿಡುಗಡೆ ಮಾಡಲು ನಿರ್ಣಯಿಸಲಾಯಿತು.

ನಿವೃತ್ತಿ ಪುನರುಚ್ಚಾರ

ಈಗಾಗಲೇ ವಿ.ಶ್ರೀನಿವಾಸ ಪ್ರಸಾದ್ ಅವರು ರಾಜಕೀಯ ನಿವೃತ್ತಿ ಘೋಷಿಸಿದ್ದಾರೆ. ಆದರೆ ಇಂದಿನ ಸಭೆಯಲ್ಲಿ ಹಲವರು ರಾಜಕೀಯ ನಿವೃತ್ತಿ ಘೋಷಿಸದಂತೆ ಮನವಿ ಮಾಡಿದರು. ಚುನಾವಣೆ ರಾಜಕೀಯದಿಂದ ದೂರವಿದ್ದರೂ ಸರಿ ಆದರೆ ಮಾರ್ಗದರ್ಶಕರಾಗಿ ರಾಜಕೀಯದಲ್ಲಿ ಸಕ್ರಿಯರಾಗಿರಬೇಕು ಎಂದು ಒತ್ತಾಯಿಸಿದರು. ಆದರೆ ಸುವರ್ಣ ಮಹೋತ್ಸವದ ಸಮಾರಂಭದಲ್ಲೇ ಅಧಿಕೃತವಾಗಿ ನಿವೃತ್ತಿ ಘೋಷಿಸುವುದಾಗಿ ಶ್ರೀನಿವಾಸ ಪ್ರಸಾದ್ ಅವರು ಸ್ಪಷ್ಟಪಡಿಸಿದರೆಂದು ತಿಳಿದುಬಂದಿದೆ.

ಸಾಹಿತಿಗಳು ಸಮಾಜಮುಖಿಗಳಾಗಬೇಕು

● ಹಿರಿಯ ಸಾಹಿತಿ ಬನ್ನೂರು ರಾಜು ಕಿವಿಮಾತು ● ಕರುನಾಡು ರಾಜ್ಯೋತ್ಸವ ರತ್ನ ಪ್ರಶಸ್ತಿ ಪ್ರದಾನ



ಮೈಸೂರು, ಜ.9(ಎಸ್‌ಬಿಡಿ)– ಪ್ರಸ್ತುತ ಸಮಾಜಮುಖಿ ಸಾಹಿತ್ಯ ಕೃಷಿಯು ಅಗತ್ಯವಿದೆ ಎಂದು ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಿಸಿದರು.

ಮೈಸೂರಿನ ಕುವೆಂಪುನಗರದ 2ನೇ ಹಂತದ ನಿಮಿಷಾಂಬನಗರದಲ್ಲಿರುವ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರದ ಆವರಣದಲ್ಲಿ ಮಂಡ್ಯದ ಕರುನಾಡು ಸೇವಾ ಟ್ರಸ್ಟ್ ವತಿಯಿಂದ ಏರ್ಪಡಿಸಲಾಗಿದ್ದ ಕರುನಾಡು ಕವಿಗೋಷ್ಠಿ ಹಾಗೂ ಕರುನಾಡು ರಾಜ್ಯೋತ್ಸವ ರತ್ನ ಪುರಸ್ಕಾರ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ನಮ್ಮದು ಧ್ವನಿ ಇಲ್ಲದ ಮೂಕ ಸಮಾಜವಾಗಿದೆ. ಜಗತ್ತು ಅನೇಕ ಸಾಮಾಜಿಕ ತಲ್ಲಣಗಳಿಂದ ಯಕ್ಷ ಪ್ರಶ್ನೆಗಳ ಸುಳಿಯಲ್ಲಿ ಬಳಲುತ್ತಿದೆ. ಇದಕ್ಕೆಲ್ಲ ಲೇಖನಿ ಉತ್ತರವಾಗಬೇಕು. ಸಾಹಿತಿಗಳು ಸಮಾಜಮುಖಿಗಳಾಗಿ ಸಮಸ್ಯೆಗಳಿಗೆ ಕಣ್ಣು-ಕಿವಿಯಾಗಿ ಸ್ಪಂದಿಸಬೇಕು. ಬರವಣಿಗೆ ಮೂಲಕ ಸಮಾಜವನ್ನು ಎಚ್ಚರಿಸುವ ಹಾಗೂ ಸೂಕ್ತ ಮಾರ್ಗದರ್ಶನ ನೀಡುವ ಅವಶ್ಯಕತೆ ಇದೆ ಎಂದರು.

ಮನುಷ್ಯ ಆಡುವ ಮಾತುಗಳಲ್ಲಿ ಕೆಲವು ನಾಲಿಗೆಯಿಂದ ಬಂದರೆ, ಒಂದಷ್ಟು ಹೃದಯಾಂತರಾಳದಿಂದ ಹೊಮ್ಮುತ್ತವೆ. ಆದರೆ ಪ್ರಸ್ತುತ ನಾಲಿಗೆ ತುದಿಯ ಮಾತುಗಳೇ ವಿಜೃಂಭಿಸುತ್ತಿದ್ದು, ಹೃದಯದ ಮಾತು ಕಡಿಮೆಯಾಗಿದೆ. ಹೃದಯದ ಮಾತಿನ ಮೆರವಣಿಗೆಯಾದರೆ ಸಮಾಜಕ್ಕೂ ಒಳಿತು. ಆಗ ಮಾತ್ರ ಮನುಷ್ಯರಲ್ಲಿರಬೇಕಾದ ಮನುಷ್ಯತ್ವ ಜಾಗೃತವಾಗಲು ಸಾಧ್ಯ. ಈ ನಿಟ್ಟಿನಲ್ಲಿ ಸಾಹಿತ್ಯ ಕೃಷಿ ಮುನ್ನಡೆಯಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಜಾನಪದ ಕ್ಷೇತ್ರದಿಂದ ಬಯಲಾಟ ಕಲಾವಿದರಾದ ಶಿವಣ್ಣಗೌಡ ಮಾದುರಾಯ ಬಿರಾದಾರ, ಶಿವಮೂರ್ತೆಪ್ಪಾ ಶಿದ್ಧಪ್ಪ ಮೇದಾರ ಸಾ, ಸಾಹಿತ್ಯ ಕ್ಷೇತ್ರದ ಸಿದ್ದರಾಮ ಸಿ.ಸರಸಂಜಿ, ಡಾ.ಪಿ.ಎಂ.ಭೋಜೆ, ಮೌನೇಶ್, ಚಂದು ವಾಗೀಶ, ಕುರುವತ್ತಿಗೌಡ ಪೊಲೀಸ್ ಪಾಟೀಲ, ಪಿ.ಎಸ್.ಮುನಿಲಕ್ಷ್ಮಿ, ಕೆ.ಜಿ. ಹೊನ್ನಾದೇವಿ, ನಳಿನಿ, ಶಿಕ್ಷಣ ಕ್ಷೇತ್ರದ ಸಿ.ಎಂ.ಜ್ಯೋತಿ, ಎಂ.ನಾಗರಾಜು, ಎನ್.ಎಂ.ಜನಿವಾರದ, ಸಮಾಜಸೇವಾ ಕ್ಷೇತ್ರದಿಂದ ಕೆ.ನಾಗೇಂದ್ರ, ಹಾಗೂ ಸಂಘಟನಾ ಕ್ಷೇತ್ರದಿಂದ ಉದಯರವಿ ಅವರಿಗೆ ಕರುನಾಡು ರಾಜ್ಯೋತ್ಸವ ರತ್ನ ಪುರಸ್ಕಾರ ನೀಡಿ ಅಭಿನಂದಿಸಲಾಯಿತು. ಇದೇ ವೇಳೆ ಕರುನಾಡು ಕವಿ ಗೋಷ್ಠಿಯಲ್ಲಿ ಹಲವರು ಸ್ವರಚಿತ ಕವಿತೆಗಳನ್ನು ವಾಚಿಸಿದರು.

ಕಾರ್ಯಕ್ರಮದಲ್ಲಿ ಹೆಚ್.ಡಿ.ಕೋಟೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿ ಎಂ.ನಾಗರಾಜು, ಮಹಿಳಾ ಉದ್ಯಮಿ ಎನ್.ಜೆ.ಮಂಜುಳಾ, ನಿವೃತ್ತ ಯೋಧ ಮಧುಕುಮಾರ್, ಸಮಾಜ ಸೇವಕ ಎಂ.ಶಿವಪ್ಪ ಹಾಲು ಮತ, ಟ್ರಸ್ಟ್ ಅಧ್ಯಕ್ಷ ಎಂ.ಅಭಿನಂದನ್, ಹಿರಿಯ ನಾಗರಿಕರ ಹಗಲು ಯೋಗ ಕ್ಷೇಮ ಕೇಂದ್ರದ ಎಂ.ಪಿ.ಪ್ರಭುಸ್ವಾಮಿ ಮತ್ತಿತರರಿದ್ದರು.

ಪುರಭವನ ಕಲಾ ಸೇವೆಗೆ ಮೀಸಲಿರಿಸಿ

ಮಾಜಿ ಮೇಯರ್ ಸಂದೇಶ್ ಸ್ವಾಮಿ ಮನವಿ





ಮೈಸೂರು,ಜ.9–ದಿವಾನ್ ಸಿ.ವಿ.ರಂಗಚಾರ್ಲು ಅವರ ನೆನಪಿನಾರ್ಥ ಮಹಾರಾಜರು ನಿರ್ಮಿಸಿದ ಪಾರಂಪರಿಕ ಪುರಭವನವನ್ನು ಕಲಾಸೇವೆಗೆ ಪುನಃ ಮುಕ್ತಗೊಳಿಸಬೇಕು ಎಂದು ಮಾಜಿ ಮೇಯರ್ ಸಂದೇಶ್ ಸ್ವಾಮಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಮನವಿ ಸಲ್ಲಿಸಿರುವ ಸಂದೇಶ್ ಸ್ವಾಮಿ ಅವರು, ನಾಡಿನ ಕಲೆ ಹಾಗೂ ಕಲಾವಿದರಿಗೆ ಪ್ರೋತ್ಸಾಹಿಸುವ ಸಲುವಾಗಿ ಹತ್ತನೇ ಚಾಮರಾಜ ಒಡೆಯರು 1884ರಲ್ಲಿ ಪುರಭವನವನ್ನು ನಿರ್ಮಿಸಿದರು. ಸ್ವಾತಂತ್ರ್ಯ ನಂತರವು ಅನೇಕ ಐತಿಹಾಸಿಕ ಕಾರ್ಯಕ್ರಮಗಳಿಗೆ ಪುರಭವನ ಸಾಕ್ಷಿಯಾಗಿದೆ. ಅಲ್ಲದೆ ಇತ್ತೀಚಿನವರೆಗೂ ವೃತ್ತಿರಂಗಭೂಮಿಯ ಕಲಾವಿದರು ಪುರಭವನದಲ್ಲಿಯೇ ಹೆಚ್ಚಾಗಿ ನಾಟಕಗಳನ್ನು ಪ್ರದರ್ಶಿಸುತ್ತಿದ್ದನ್ನು ಕಾಣಬಹುದಾಗಿತ್ತು. ಆದರೆ ಸುಮಾರು ಮೂರು ತಿಂಗಳಿನಿಂದ ಪುರಭವನ ಬಂದ್ ಮಾಡಿರುವುದರಿಂದ ಕಲಾವಿದರಿಗೂ ಹಾಗೂ ಕಲಾಪ್ರೇಮಿಗಳಿಗೂ ತೊಂದರೆ ಉಂಟಾಗಿದೆ ಎಂದು ತಿಳಿಸಿದ್ದಾರೆ.

ಪುರಭವನ ನವೀಕರಣಕ್ಕೆ ಈವರೆಗೆ ಕೋಟ್ಯಾಂತರ ರೂಪಾಯಿ ಖರ್ಚು ಮಾಡಲಾಗಿದೆ. ಅಲ್ಲದೆ ಪುರಭವನದ ನಿರ್ವಹಣೆಗೆ ಮಹಾನಗರ ಪಾಲಿಕೆ ಯಿಂದ ಉಪಸಮಿತಿಯನ್ನು ನೇಮಕ ಮಾಡಲಾಗುತ್ತಿತ್ತು. ಪ್ರಸ್ತುತ ಪಾಲಿಕೆ ಚುನಾಯಿತ ಸದಸ್ಯರ ಅವಧಿ ಮುಕ್ತಾಯವಾಗಿದೆ. ಆದರೆ ಅಧಿಕಾರಿಗಳು ಇತ್ತ ಗಮನಹರಿಸದೆ ಸುಂದರ ಪಾರಂಪರಿಕ ಕಟ್ಟಡ ಸೂಕ್ತ ನಿರ್ವಹಣೆ ಇಲ್ಲದೆ ಪಾಳು ಬೀಳುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಈ ಹಿಂದೆ ಸಾರ್ವಜನಿಕರು ವಿರಮಿಸಲು ಹಾಗೂ ರೇಡಿಯೋ ಕಾರ್ಯಕ್ರಮ ಆಲಿಸಲು ಪುರಭವನದ ಆವರಣಕ್ಕೆ ಬರುತ್ತಿದ್ದರು. ಆದರೆ ಇಂದು ಇದೇ ಆವರಣದಲ್ಲಿ ವಾಹನಗಳ ನಿಲ್ದಾಣ ನಿರ್ಮಾಣ ಮಾಡಿದ ಕಾರಣ ಮುಂಭಾಗದ ದ್ವಾರವನ್ನು ಬಂದ್ ಮಾಡಿ, ಸಾರ್ವಜನಿಕರಿಗೂ ಪ್ರವೇಶ ಇಲ್ಲವಾಗಿದೆ. ಪಾರಂಪರಿಕ ಕಲಾಕೇಂದ್ರವಾಗಿದ್ದ ಪುರಭವನ ವಾಣಿಜ್ಯ ತಾಣವಾಗುತ್ತಿರುವುದು ರಾಜರ ಆಶಯಕ್ಕೆ ಅಪಚಾರ ಮಾಡಿದಂತೆ. ಆದ್ದರಿಂದ ಪಾಲಿಕೆ ಆಯುಕ್ತರು ಗಮನಹರಿಸಿ ಸಾರ್ವಜನಿಕರ ಕಾರ್ಯಕ್ರಮಗಳಿಗೆ ಪುರಭವನವನ್ನು ಪುನಾರಂಭಿಸಬೇಕು ಹಾಗೂ ಮುಂಭಾಗದ ಗೇಟ್ ಮುಕ್ತಗೊಳಿಸಬೇಕು ಎಂದು ಸಂದೇಶ್‌ಸ್ವಾಮಿ ಮನವಿ ಮಾಡಿದ್ದಾರೆ.

ಬಾರ್ ಸ್ಥಳಾಂತರ ವಿರೋಧಿಸಿ ದಲಿತ ಮಹಾಸಭಾದಿಂದ ಪ್ರತಿಭಟನೆ

ಈಗಾಗಲೇ ಎರಡು ಬಾರ್ ಇರುವ ರಸ್ತೆಯಲ್ಲಿ 3ನೇ ಬಾರ್ ಬೇಡ

ಮೈಸೂರು,ಜ.9(ಜಿಎ)–ನರಸಿಂಹರಾಜ ಮೊಹಲ್ಲಾದಲ್ಲಿರುವ ಶ್ರೀರಾಮ ವೈನ್ ಸ್ಟೋರ್ ಅನ್ನು ಬಜಾರ್ ಸ್ಟ್ರೀಟ್ ರಸ್ತೆಗೆ ಸ್ಥಳಾಂತರಿಸಬಾರದೆಂದು ಒತ್ತಾಯಿಸಿ ದಲಿತ ಮಹಾಸಭಾದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಎನ್.ಆರ್.ಮೊಹಲ್ಲಾದ ದಲಿತ ವಸತಿ ನಿಲಯದ ಬಳಿ ಇರುವ ಶ್ರೀರಾಮ ವೈನ್ ಸ್ಟೋರ್‌ನ್ನು ನಗರದ ಸ್ಟ್ರೀಟ್ ಬಜಾರ್ ರಸ್ತೆಯ ಮಾರುತಿ ಸರ್ಕಲ್‌ಗೆ ಸ್ಥಳಾಂತರ ಮಾಡಲು ಅರ್ಜಿ ಸಲ್ಲಿಸಲಾಗಿದ್ದು, ಈ ರಸ್ತೆಯಲ್ಲಿ ಈಗಾಗಲೇ ಚಾಮುಂಡೇಶ್ವರಿ ಬಾರ್ ಅಂಡ್ ರೆಸ್ಟೋರೆಂಟ್, ಅನ್ನಪೂರ್ಣೇಶ್ವರಿ ವೈನ್ ಸ್ಟೋರ್ ಇದೆ. ಇವುಗಳಿಂದ ಜನರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ವೃದ್ಧರು, ಮಹಿಳೆಯರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಈ ರಸ್ತೆಯಲ್ಲಿ ತಿರುಗಾಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕುಡುಕರು ಕುಡಿದು ರಸ್ತೆಯಲ್ಲಿ ಗಲಾಟೆ ಮಾಡುತ್ತಾರೆ.



ಬಾರ್ ಸ್ಥಳಾಂತರ ವಿರೋಧಿಸಿ ದಲಿತ ಮಹಾಸಭಾದಿಂದ ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಇದರಿಂದ ಸಾರ್ವಜನಿಕರಿಗೆ ಇರಿಸು ಮುರಿಸು ಉಂಟಾಗುತ್ತಿದೆ ಎಂದು ಕಿಡಿಕಾರಿದರು.

ಈ ಮದ್ಯದಂಗಡಿಗಳು ಇರುವ ಜಾಗದಲ್ಲಿ 3 ಸಾವಿರಕ್ಕೂ ಹೆಚ್ಚು ದಲಿತ ಸಮುದಾಯದ ಜನರಿದ್ದು, ಹೆಚ್ಚು ಯುವಕರಿದ್ದಾರೆ. ಗಾರೆ ಕೆಲಸ, ಪೇಂಟ್, ಬಾರ್ ಬೆಂಡಿಂಗ್, ಕೂಲಿ ಕಾರ್ಮಿಕರಾಗಿದ್ದು ಕುಡಿತದ ದಾಸರಾಗಿದ್ದಾರೆ. ದುಡಿದ ಹಣವನ್ನೆಲ್ಲಾ ಕುಡಿತಕ್ಕೇ ಖರ್ಚು ಮಾಡುತ್ತಿದ್ದಾರೆ. ಇದರಿಂದ ಪೋಷಕರಿಗೆ ತೊಂದರೆಯಾಗುತ್ತಿದೆ. ಮತ್ತೆ ಮೂರನೇ ಅಂಗಡಿ ತೆರೆದರೆ ಮತ್ತಷ್ಟು ತೊಂದರೆಯಾಗುತ್ತದೆ. ಹೀಗಾಗಿ ಯಾವುದೇ ಕಾರಣಕ್ಕೂ ಸ್ಥಳಾಂತರ ಮಾಡಬಾರದು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಸಭಾ ಅಧ್ಯಕ್ಷ ಎಸ್.ರಾಜೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇಂದು ಯುನೈಟೆಡ್ ಪ್ರಾಥಮಿಕ ಶಾಲಾ 19ನೇ ವಾರ್ಷಿಕೋತ್ಸವ

ಮೈಸೂರು, ಜ.9– ಮೈಸೂರಿನ ಎಸ್‌ಬಿಎಂ ಕಾಲೋನಿಯಲ್ಲಿರುವ ಶ್ರೀ ಬಾಲಾಜಿ ಎಜುಕೇಷನ್ ಮತ್ತು ಚಾರಿಟಬಲ್ ಟ್ರಸ್ಟ್ ಯುನೈಟೆಡ್ ಪ್ರಾಥಮಿಕ ಶಾಲಾ 19ನೇ ವಾರ್ಷಿಕೋತ್ಸವವನ್ನು ಜ.10ರಂದು ಬುಧವಾರ ಸಂಜೆ 4 ಗಂಟೆಗೆ ರಾಮಕೃಷ್ಣನಗರ ಇ ಅಂಡ್ ಎಫ್ ಬ್ಲಾಕ್‌ನಲ್ಲಿರುವ ನೃಪತುಂಗ ಕನ್ನಡ ಶಾಲೆಯ ಆವರಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸಮಾಜ ಸೇವಕ ಬಿ.ನಿಂಗಪ್ಪ ನೆರವೇರಿಸುವರು. ಅಧ್ಯಕ್ಷತೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಅಪರಾಧ ವಿಭಾಗದ ಡಾ.ಅಶೋಕ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪಾಲಿಕೆ ಮಾಜಿ ಸದಸ್ಯ ಆರ್.ದಿನೇಶ್, ಆಕೃತಿ ಕನ್ಸ್ಟ್ರಕ್ಷನ್‌ನ ರೋಹಿತ್‌ಗೌಡ, ಕುಶಾಲನಗರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಹೆಚ್‌ಓಡಿ ಡಾ.ಜಿ.ಎಂ.ನವೀನ್, ಮೈಸೂರಿನ ಶಾರದಾ ವಿಲಾಸ ಕಾಲೇಜಿನ ಉಪನ್ಯಾಸಕ ರಾಜೇಂದ್ರಪ್ರಸಾದ್ ಹೊನ್ನಲಗೆರೆ ಹಾಗೂ ದಮಯಂತಿ ಭಾಗವಹಿಸಲಿದ್ದಾರೆ ಎಂದು ಮುಖ್ಯೋಪಾಧ್ಯಾಯ ಎ.ಟಿ.ಶಂಕರೇಗೌಡ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ಹತ್ಯೆಗೆ ಸಂಚು ಆರೋಪ; ಕ್ರಮಕ್ಕೆ ಇಂದು ಸಂಜೆವರೆಗೆ ಗಡುವು; ತಪ್ಪಿದರೆ ಹೋರಾಟ ನಿರ್ಧಾರ

ಮೈಸೂರು, ಜ.9(ಎಸ್‌ಪಿಎನ್)– ಮೈಸೂರು ಧರ್ಮಕ್ಷೇತ್ರದ ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ಅವರ ಹತ್ಯೆಗೆ ಸಂಚು ರೂಪಿಸಿ, ಸಮುದಾಯಕ್ಕೆ ನೋವುಂಟು ಮಾಡಿರುವವರ ವಿರುದ್ಧ ನಾಳೆ(ಜ.10) ಸಂಜೆಯೊಳಗೆ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ನಮ್ಮ ಬೇಡಿಕೆ ಈಡೇರುವವರೆಗೂ ಬನ್ನಿಮಂಟಪದ ಬಿಷಪ್ ಹೌಸ್ ಮುಂಭಾಗ ಹಂತಹಂತವಾಗಿ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕ್ರೈಸ್ತ ಸಮುದಾಯದ ಮುಖಂಡರು ಮಂಗಳವಾರ ಘೋಷಿಸಿದರು.

ಮೈಸೂರು ನೆಲ್ಸನ್ ಮಂಡೇಲಾ ರಸ್ತೆಯ ಬಿಷಪ್ ಹೌಸ್ ಸನ್ಮಾಗಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮೈಸೂರು ಕ್ಯಾಥೋಲಿಕ್ ಅಸೋಸಿಯೇಷನ್ ಅಧ್ಯಕ್ಷ ಮ್ಯಾಥ್ಯೂ ಬಿ.ಸುರೇಶ್, ವಕೀಲ ಜೆರಾಲ್ಡೊ, ಮುಖಂಡ ಜಾನ್ ಬೋಸ್ಕೋ ಸೇರಿದಂತೆ ಇತರೆ ಮುಖಂಡರು ಘೋಷಿಸಿದರು.

ಅಧ್ಯಕ್ಷ ಮ್ಯಾಥ್ಯೂ ಬಿ.ಸುರೇಶ್ ಮಾತನಾಡಿ, ಜ.6ರಂದು ಸಾಮಾಜಿಕ ಜಾಲತಾಣಗಳಲ್ಲಿ ವಿಶ್ರಾಂತ ಬಿಷಪ್ ವಿ.ಎ. ವಿಲಿಯಂ ಹತ್ಯೆ ಸಂಚು ಸಂಬಂಧ ವೀಡಿಯೋ ವೈರಲ್ ಆಗಿದ್ದು, ಇದರಿಂದ ನಮ್ಮ ಸಮುದಾಯ ಸಾಕಷ್ಟು ಆತಂಕಕ್ಕೊಳಗಾಗಿದೆ. ಈ ಘಟನೆ ಕುರಿತು ಮೈಸೂರು ಧರ್ಮಕ್ಷೇತ್ರದ ಪ್ರಭಾರ ಆಡಳಿತಾಧಿಕಾರಿ ಬರ್ನಾಡ್ ಮೊರಾಸ್ ಸ್ಪಷ್ಟ ನಿರ್ಧಾರಕ್ಕೆ ಬರಬೇಕು. ಇಲ್ಲದಿದ್ದರೆ, ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದರು.



ಮೈಸೂರು ಬಿಷಪ್ ಹೌಸ್‌ನ ಸನ್ಮಾಗಿ ಸಭಾಂಗಣದಲ್ಲಿ ಮುಖಂಡರು ಸುದ್ದಿಗೋಷ್ಠಿ ನಡೆಸಿದರು. ಈ ವೇಳೆ ಮೈಸೂರು ಕ್ಯಾಥೋಲಿಕ್ ಅಸೋಸಿಯೇಷನ್ ಅಧ್ಯಕ್ಷ ಮ್ಯಾಥ್ಯೂ ಬಿ.ಸುರೇಶ್, ವಕೀಲ ಜೆರಾಲ್ಡೊ, ಜಾನ್ ಬೋಸ್ಕೋ ಇನ್ನಿತರರಿದ್ದರು.

ವೈರಲ್ ಸಂಭಾಷಣೆಯಲ್ಲಿ ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ಅವರನ್ನು ಈಗಾಗಲೇ ಬಿಷಪ್ ಸ್ಥಾನದಿಂದ ಕೆಳಗಿಳಿಸಲಾಗಿದೆ. ಈಗ ಅವರನ್ನು ಹತ್ಯೆ ಮಾಡಲು ಸುಪಾರಿ ನೀಡುವ ಮಾತುಕತೆ ನಡೆದಿದೆ. ಈ ಬೆಳವಣಿಗೆ ನಮ್ಮ ಸಮುದಾಯಕ್ಕೆ ತೀವ್ರ ನೋವುಂಟು ಮಾಡಿದ್ದು, ಪಿತೂರಿ ನಡೆಸುತ್ತಿರು ವವರನ್ನು ಈ ಘಟನೆಗೆ ಕಾರಣರಾದವರನ್ನು ಧರ್ಮಗುರು ಸ್ಥಾನದಿಂದ ಕೆಳಗಿಸಿ, ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು ಒತ್ತಾಯಿಸಿದರು.

ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ಎಲ್ಲಿದ್ದಾರೆ: ವಿಶ್ರಾಂತ ಬ್ರಿಷಪ್ ಕೆ.ಎ. ವಿಲಿಯಂ ಅವರು ಸುದೀರ್ಘ ರಜೆ ಮೇಲೆ ತೆರಳಿದವರು ವರ್ಷವಾದರೂ ಇಲ್ಲಿವರೆಗೂ ಅವರು ಎಲ್ಲಿದ್ದಾರೆ, ಹೇಗಿದ್ದಾರೆ. ಬದುಕಿದ್ದಾರೆಯೇ ಇಲ್ಲವೇ ಎಂಬುದು ಖಚಿತವಾಗಿಲ್ಲ. ಇದರ ಬಗ್ಗೆ ಹಿರಿಯ ಧರ್ಮಗುರುಗಳು ಸ್ಪಷ್ಟನೆ ನೀಡಬೇಕು. ಅವರನ್ನು ಈ ಕೂಡಲೇ ಮೈಸೂರಿಗೆ ಕರೆಸಿ, ಅವರ ಜೀವಕ್ಕೆ ಅಪಾಯವಾಗಿಲ್ಲ ಎಂಬುದನ್ನು ಸಮುದಾಯಕ್ಕೆ ಮನವರಿಕೆ ಮಾಡಬೇಕು ಎಂದು ಒತ್ತಾಯಿಸಿದರು.

ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ವಿರುದ್ಧ ಮೈಸೂರು ಧರ್ಮಪ್ರಾಂತ್ಯದ 37 ಮಂದಿ ಪಾದ್ರಿಗಳಿಂದ ವ್ಯಾಟಿಕನ್ ಅಧಿಕಾರಿಗಳಿಗೆ ಈ ಹಿಂದೆ ಬರೆದಿರುವ ಪತ್ರವೂ ಫ್ಯಾಬ್ರಿಕೇಟೆಡ್ ಅಂಡ್ ಫೇಕ್ ನಂಬರ್‌ಗಳನ್ನು ಕೂಡಿದೆ. ಈ ಷಡ್ಯಂತ್ರ ಮಾಡಿರುವ ಫಾದರ್‌ಗಳ ಮೇಲೆ ಹಲವು ಕ್ರಿಮಿನಲ್ ಪ್ರಕರಣ ದಾಖಲಾಗಿವೆ. ಈ ಘಟನಾವಳಿಗಳನ್ನು ಗಮನಿಸಿದರೆ ವಿಶ್ರಾಂತ ಬ್ರಿಷಪ್ ಕೆ.ಎ.ವಿಲಿಯಂ ವಿರುದ್ಧ ವ್ಯವಸ್ಥಿತ ಷಡ್ಯಂತ್ರ ನಡೆದಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

ವಿಶ್ರಾಂತ ಬಿಷಪ್ ಕೆ.ಎ.ವಿಲಿಯಂ ಅವರ ಮೇಲಿನ ಆರೋಪಗಳ ಬಗ್ಗೆ ವಿಚಾರಣೆ ನಡೆಸಲು ವ್ಯಾಟಿಕನ್ ಬಿಷಪ್‌ಗಳ ತ್ರಿಸದಸ್ಯ ಸಮಿತಿಯನ್ನು 2021ರಲ್ಲೇ ರಚಿಸಲಾಗಿತ್ತು. ಆರ್ಚ್ ಬಿಷಪ್ ಲಿಯೋ ಕರ್ನಲಿಯೋ ನೇತೃತ್ವದ ಈ ಸಮಿತಿ ಎರಡೆರಡು ಬಾರಿ ಮೈಸೂರು ಧರ್ಮಕ್ಷೇತ್ರಕ್ಕೆ ಆಗಮಿಸಿ, ಪರಿಶೀಲಿಸಿದ್ದರು. ಈ ವರದಿಯನ್ನು ವ್ಯಾಟಿಕನ್ ಬಿಷಪ್‌ಗಳಿಗೆ ಗೌಪ್ಯವಾಗಿ ನೀಡಬೇಕಿತ್ತು. ಆದರೆ, ಈ ವರದಿಯ ಅಂಶಗಳನ್ನು ಬಹಿರಂಗಗೊಳಿಸಿ, ಸಮಿತಿಗೆ ನೇಮಿಸಿದ್ದ ಸದಸ್ಯರೊಬ್ಬರು ವಿಚಾರಣಾ ನೀತಿಗಳನ್ನು ಗಾಳಿಗೆ ತೂರಿದ್ದಾರೆ. ಹಾಗಾಗಿ ಮುಂದಿನ ಪೀಳಿಗೆಗೆ ಕ್ರೈಸ್ತ ಧರ್ಮದ ಪಾವಿತ್ರ್ಯತೆಯನ್ನು ಉಳಿಸುವ ಸಲುವಾಗಿ ಹೋರಾಟ ಹಮ್ಮಿಕೊಳ್ಳುವುದು ಅನಿವಾರ್ಯ ಎಂದರು.

ಇದಕ್ಕೂ ಮೊದಲು ಮೈಸೂರು ಧರ್ಮಕ್ಷೇತ್ರದ ಚರ್ಚಿನ 40ಕ್ಕೂ ಹೆಚ್ಚು ಕ್ರೈಸ್ತ ಧರ್ಮಗುರುಗಳು ಪ್ರಭಾರ ಆಡಳಿತಾಧಿಕಾರಿ ಬರ್ನಾಡ್ ಮೊರಾಸ್ ಅವರನ್ನು ಭೇಟಿ ಮಾಡಿ ವಿಶ್ರಾಂತ ಬಿಷಪ್ ಕೆ.ವಿ.ವಿಲಿಯಂ ಹತ್ಯೆ ಸಂಬಂಧ ದೂರು ಸಲ್ಲಿಸಿ, ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುವಂತೆ ಒತ್ತಾಯಿಸಿ, ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದರು.

ಮಂಡ್ಯದಲ್ಲಿ ಸಂಸದೆ ಸುಮಲತಾ ಸ್ಪರ್ಧೆ ಖಚಿತ

ಆಪ್ತ ಹನಕೆರೆ ಹೆಚ್.ಪಿ.ಶಿವಕುಮಾರ್



ಮಂಡ್ಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಸಂಸದೆ ಸುಮಲತಾ ಆಪ್ತ ಶಿವಕುಮಾರ್ ಮಾತನಾಡಿದರು.

ಮಂಡ್ಯ, ಜ.9– ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದು, ಸಂಸದೆ ಸುಮಲತಾ ಮಂಡ್ಯ ಕ್ಷೇತ್ರದ ಮೈತ್ರಿ ಅಭ್ಯರ್ಥಿಯಾಗಿ ಲೋಕಸಭೆಗೆ ಸ್ಪರ್ಧಿಸುವ ವಿಶ್ವಾಸವಿದೆ. ಒಂದು ವೇಳೆ ಅವಕಾಶ ಸಿಗದಿದ್ದರೆ ಪಕ್ಷೇತರವಾಗಿ ಸ್ಪರ್ಧಿಸುವುದು ಖಚಿತ ಎಂದು ಸಂಸದೆ ಸುಮಲತಾ ಆಪ್ತ ಹನಕೆರೆ ಹೆಚ್.ಪಿ.ಶಿವಕುಮಾರ್ ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವಿಧಾನಸಭಾ ಚುನಾವಣೆ ಸಂದರ್ಭ ನಾವು ಬಿಜೆಪಿ ಅಭ್ಯರ್ಥಿಗಳಿಗೆ ಬಾಹ್ಯ ಬೆಂಬಲ ನೀಡಿ ಅವರ ಪರ ಜಿಲ್ಲೆಯ 7 ಕ್ಷೇತ್ರಗಳಲ್ಲೂ ಪ್ರಚಾರ ಮಾಡಿದ್ದೆವು. ಆದ್ದರಿಂದ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸುಮಲತಾ ಅವರಿಗೆ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗುವ ಅವಕಾಶ ಸಿಗುತ್ತದೆ ಎಂಬ ವಿಶ್ವಾಸವಿದೆ. ಒಂದು ವೇಳೆ ಬಿ.ಫಾರಂ ಸಿಗದಿದ್ದರೂ, ಅವರು ಪಕ್ಷೇತರವಾಗಿ ಸ್ಪರ್ಧಿಸಲಿದ್ದಾರೆ. ಇದರಲ್ಲಿ ಯಾವುದೇ ಅನುಮಾನ ಇಲ್ಲ ಎಂದು ಸ್ಪಷ್ಟಪಡಿಸಿದರು.

ಒಂದು ವೇಳೆ ಕಾಂಗ್ರೆಸ್‌ನಿಂದ ಟಿಕೆಟ್ ಸಿಕ್ಕರೆ ಸುಮಲತಾ ಅವರು ಸ್ಪರ್ಧಿಸುವರೇ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸುಮಲತಾ ಅವರು ಇದುವರೆಗೆ ಯಾವುದೇ ರಾಜಕೀಯ ಪಕ್ಷದಲ್ಲಿ ಗುರುತಿಸಿಕೊಂಡಿಲ್ಲ. ಕೇವಲ ಬಾಹ್ಯ ಬೆಂಬಲವನ್ನಷ್ಟೇ ನೀಡಿದ್ದಾರೆ. ಅಂತಹ ಬೆಳವಣಿಗೆ ನಡೆದರೆ ಕಾಂಗ್ರೆಸ್‌ನಿಂದ ಸ್ಪರ್ಧಿಸುವುದನ್ನು ತಳ್ಳಿ ಹಾಕುವಂತಿಲ್ಲ ಎಂದರು.

ಸುಮಲತಾ ಅವರು ಕಳೆದ ನಾಲ್ಕೂವರೆ ವರ್ಷಗಳಿಂದ ಮಂಡ್ಯ ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ದನಿಯಾಗಿ ರಾಜ್ಯ ಹಾಗೂ ಕೇಂದ್ರ ಸಹಕಾರದೊಂದಿಗೆ ಹಲವು ಜನಪರ ಕಾರ್ಯಗಳನ್ನು ಮಾಡಿದ್ದಾರೆ. ಅವರ ಅಧ್ಯಕ್ಷತೆಯಲ್ಲಿ ನಡೆಯುವ ದಿಶಾ ಸಭೆಯನ್ನು ಕಾಲಕಾಲಕ್ಕೆ ನಡೆಸಿದ ಸಂಸದರಲ್ಲಿ ರಾಜ್ಯದಲ್ಲೇ ಮೊದಲ ಸಂಸದರಾಗಿದ್ದಾರೆ. ಸಂಸದರ ನಿಧಿ ಸಮರ್ಪಕವಾಗಿ ಬಳಸಿದ ಸಂಸದರಲ್ಲಿ ಸುಮಲತಾ 2ನೇಯವರಾಗಿದ್ದಾರೆ ಎಂದರು. ಮೈಷುಗರ್ ಹಾಗೂ ಪಿಎಸ್ಎಸ್‌ಕೆ ಪುನರಾರಂಭ ಮತ್ತು ಅಕ್ರಮ ಗಣಿಗಾರಿಕೆ ಸ್ಥಗಿತದಲ್ಲಿ ಸಂಸದರ ಒತ್ತಾಸೆ ಇದ್ದು, ಇದನ್ನು ಜಿಲ್ಲೆಯ ಮತದಾರರು ಅರ್ಥೈಸಿಕೊಂಡಿದ್ದಾರೆ. ಅಂಬರೀಶ್ ಅವರ ಜನಪರ ಕಾರ್ಯಗಳು ಸುಮಲತಾ ಅವರಿಗೆ ವರವಾಗಲಿವೆ ಎಂದರು.

ಪ್ರಸ್ತುತ ರಾಜಕಾರಣದಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಮಾತುಕತೆ ವ್ಯಕ್ತವಾಗುತ್ತಿವೆ. ಹಳೇ ಮೈಸೂರು ಭಾಗದಲ್ಲಿ ಜೆಡಿಎಸ್‌ಗೆ ಸೀಟು ಬಿಟ್ಟು ಕೊಡುವ ಬದಲು ಪಕ್ಷ ಬಲವರ್ಧನೆ ದೃಷ್ಟಿಯಿಂದ ಬಿಜೆಪಿ ಅಭ್ಯರ್ಥಿ ಕಣಕ್ಕಿಳಿಸಬೇಕೆಂದು ಆಗ್ರಹಿಸಿದರು.

ಸಚ್ಚಿ ಭೇಟಿ ವೈಯಕ್ತಿಕ: ಸಂಸದೆ ಸುಮಲತಾ ಆಪ್ತ ಇಂಡುವಾಳು ಸಚ್ಚಿದಾನಂದ ಅವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಸಾಕಷ್ಟು ಮತ ಪಡೆದು ಪರಾಭವಗೊಂಡಿದ್ದಾರೆ. ಈ ನಡುವೆ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿರುವುದು ರಾಜಕೀಯ ವಿಚಾರವಾಗುವುದಿಲ್ಲ. ಅದು ಅವರ ವೈಯಕ್ತಿಕ ಭೇಟಿ. ಸುಮಲತಾ ಸ್ಪರ್ಧೆಗೆ ಸಚ್ಚಿದಾನಂದ ಬೆಂಬಲ ನಿರಂತರವಾಗಿರಲಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸ್ವಾಭಿಮಾನಿ ಪಡೆಯಲ್ಲಿ ಬಿರುಕಿಲ್ಲ: ಸಂಸದೆ ಸುಮಲತಾ ನೇತೃತ್ವದ ಸ್ವಾಭಿಮಾನಿ ಪಡೆಯಲ್ಲಿ ಯಾವುದೇ ಬಿರುಕಿಲ್ಲ. ಬೇಲೂರು ಸೋಮಶೇಖರ್ ಹಾಗೂ ತಮ್ಮ ನಡುವೆ ಸಾಮರಸ್ಯವಿದೆ. ಅನ್ಯ ಕಾರ್ಯ ನಿಮಿತ್ತ ಪತ್ರಿಕಾಗೋಷ್ಠಿಗೆ ಬಂದಿಲ್ಲ. ಅದನ್ನು ದೊಡ್ಡದು ಮಾಡುವ ಅವಶ್ಯಕತೆ ಇಲ್ಲ. ಮಂಡ್ಯ ಕ್ಷೇತ್ರವನ್ನು ಜೆಡಿಎಸ್‌ಗೆ ವಹಿಸಲಾಗಿದೆ ಎಂಬ ವದಂತಿ ಸರಿಯಲ್ಲ. 2024 ರಲ್ಲೂ ಸುಮಲತಾ ಸ್ಪರ್ಧೆ ನಿಶ್ಚಿತ ಎಂದರು.

ಸುಮಲತಾ ಸ್ಪರ್ಧೆ ಅನಿವಾರ್ಯ: ಹಳೇ ಮೈಸೂರು ಭಾಗದಲ್ಲಿ ಬಿಜೆಪಿ ಬಲಗೊಳಿಸಬೇಕೆಂಬ ಸದುದ್ದೇಶ ಬಿಜೆಪಿ ವರಿಷ್ಠರಲ್ಲಿದ್ದರೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸಂಸದೆ ಸುಮಲತಾ ಅಂಬರೀಶ್ ಸ್ಪರ್ಧೆಗೆ ಬಿಜೆಪಿ ವರಿಷ್ಠರು ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿದರು. ಗೋಷ್ಠಿಯಲ್ಲಿ ಮುಖಂಡರಾದ ಹೆಚ್.ಬಿ. ಅರವಿಂದ ಕುಮಾರ್, ಬಸವರಾಜು, ಮಹೇಂದ್ರ ಹಾಗೂ ಜಯರಾಮು ಉಪಸ್ಥಿತರಿದ್ದರು.

ಫೆ.3, ಸ್ನೇಹ ಸಮ್ಮಿಲನ ಕಾರ್ಯಕ್ರಮ


ಸ್ನೇಹ ಸಮ್ಮಿಲನ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಆರ್‌ಟಿಓ ಮಲ್ಲಿಕಾರ್ಜುನ್ ಮಾತನಾಡುತ್ತಿರುವುದು.

ಕೆ.ಆರ್.ಪೇಟೆ, ಜ.9– ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ಹಿರಿಯ ವಿದ್ಯಾರ್ಥಿಗಳ ಸಂಘವನ್ನು ನೋಂದಾಯಿಸಿ ಅಸ್ತಿತ್ವಕ್ಕೆ ತರಲಾಗಿದ್ದು, ಸಂಘದ ಉದ್ಘಾಟನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಫೆ.3 ರಂದು ಸಂಸ್ಥೆ ಆವರಣದಲ್ಲಿ ನಡೆಯಲಿದೆ ಎಂದು ಕಾಲೇಜಿನ ಹಿರಿಯ ವಿದ್ಯಾರ್ಥಿಗಳ ಸಂಘದ ಖಜಾಂಚಿ, ರಾಜ್ಯ ಆರ್‌ಟಿಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಪ್ರಾಂಶುಪಾಲ ಹೆಚ್.ಎಸ್.ನಾಗರಾಜು ಅಧ್ಯಕ್ಷತೆಯಲ್ಲಿ ನಡೆದ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದ ಹಿರಿಯ ವಿದ್ಯಾರ್ಥಿಗಳ ಸಂಘದ ಪದಾಧಿಕಾರಿಗಳ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. 1959–60ರಲ್ಲಿ ಶಾಸಕರಾಗಿದ್ದ ಎಂ.ಕೆ.ಬೊಮ್ಮೇಗೌಡರ ಹೋರಾಟದ ಫಲವಾಗಿ ಪಟ್ಟಣದಲ್ಲಿ ಪಾಲಿಟೆಕ್ನಿಕ್ ಕಾಲೇಜು ಆರಂಭವಾಯಿತು. ಈ ಜ್ಞಾನ ದೇವಾಲಯದಲ್ಲಿ ಕಲಿತ ಸಾವಿರಾರು ಮಂದಿ ಉನ್ನತ ಹುದ್ದೆ ಅಲಂಕರಿಸಿದ್ದಾರೆ. ಅಲ್ಲದೇ ವಿಜ್ಞಾನಿಗಳು, ತಂತ್ರಜ್ಞರು, ಇಂಜಿನಿಯರ್‌ಗಳು, ಕೈಗಾರಿಕೋದ್ಯಮಿಗಳಾಗಿದ್ದಾರೆ. ಸಚಿವ ಎನ್.ಚೆಲುವರಾಯಸ್ವಾಮಿ ಸೇರಿದಂತೆ ಹಲವರು ರಾಜಕಾರಣಿಗಳಾಗಿದ್ದಾರೆ. ಇಲ್ಲಿ ವಿದ್ಯಾಭ್ಯಾಸ ಮಾಡಿದ ಮೂವರು ಚಂದ್ರಯಾನ–3ರ ಯಶಸ್ಸಿಗಾಗಿ ದುಡಿದಿದ್ದಾರೆ. ಈ ಕಾಲೇಜು ಇಲ್ಲದಿದ್ದರೇ ನಾವು ಪ್ರಗತಿ ಹೊಂದಲು ಸಾಧ್ಯವಾಗುತ್ತಿರಲಿಲ್ಲ. ಹೀಗಾಗಿ ಕಾಲೇಜಿನ ಅಭಿವೃದ್ಧಿಗಾಗಿ ಸಂಘ ಸ್ಥಾಪಿಸಿದ್ದು, 900ಕ್ಕೂ ಹೆಚ್ಚು ಮಂದಿ ಸದಸ್ಯರಾಗಿದ್ದಾರೆ. ಅಲ್ಲದೇ ಇನ್ನಷ್ಟು ಮಂದಿಯನ್ನು ಸಂಘಟಿಸಲಾಗುತ್ತಿದೆ. ಈ ಕಾಲೇಜಿನಲ್ಲಿ ಓದಿ ಉನ್ನತ ಸ್ಥಾನಕ್ಕೇರಿ ಸಾಧನೆಗೈದವರನ್ನು ಫೆ.3 ರಂದು ನಡೆಯುವ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು. ಅಲ್ಲದೇ ಪ್ರಸ್ತುತ ಕಾಲೇಜಿನಲ್ಲಿ ಹೆಚ್ಚುಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು ಎಂದರು.

ಸಭೆ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಹೆಚ್.ಎಸ್.ನಾಗರಾಜು ಮಾತನಾಡಿ, ನಮ್ಮ ಕಾಲೇಜು ಆವರಣದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕೂಡ ಆರಂಭವಾಗಿದೆ. ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಸಹಭಾಗಿತ್ವದಲ್ಲಿ ಫೆ.3ರ ಸ್ನೇಹ ಸಮ್ಮಿಲನ ಕಾರ್ಯಕ್ರಮ ನಡೆಯಲಿದೆ ಎಂದ ಅವರು, ಕಾಲೇಜಿನ 30 ಎಕರೆ ಜಾಗ ಇದೀಗ ಖಾತೆಯಾಗುವ ಹಂತಕ್ಕೆ ಬಂದಿದೆ. ಇದಕ್ಕೆ ಹಿರಿಯ ವಿದ್ಯಾರ್ಥಿಗಳ ಪಾತ್ರ ಅಪಾರ ಎಂದರು.

ಈ ವೇಳೆ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಎಸ್.ಬಿ.ಸೋಮೇಶ್, ಪ್ರಧಾನ ಕಾರ್ಯದರ್ಶಿ ಎಂ.ಜಿ.ಶಿವಕುಮಾರ್, ಕಾರ್ಯದರ್ಶಿ ಬಿ.ಬಾಲಕೃಷ್ಣ ಮೂರ್ತಿ, ಸಂಘಟನಾ ಕಾರ್ಯದರ್ಶಿ ಹೆಚ್.ಟಿ.ಪುಟ್ಟರಾಜು, ಜಂಟಿ ಕಾರ್ಯದರ್ಶಿ ಎನ್.ಶಿವಲಿಂಗಪ್ಪ, ಸದಸ್ಯರಾದ ಪಿ.ಕೆ.ಶಿವರಾಮು, ಸಿ.ಆರ್.ಮಹೇಶ್ ಕುಮಾರ್, ಹೆಚ್.ಇ.ಗುರುರಾಜ್, ಬಿ.ರಾಮಕೃಷ್ಣ ಎಂ.ನಾಗರಾಜು, ಎಂ.ಎಸ್.ಮಹೇಂದ್ರಗೌಡ, ಸಂಪತ್ ಕುಮಾರ್, ಕೆ.ರಮೇಶ್, ಚೆಸ್ಕಾಂ ಇಂಜಿನಿಯರ್ ಟಿ.ಜಿ.ತಿಮ್ಮಪ್ಪ, ಆರ್. ಸುಮಿತ್, ಉಪನ್ಯಾಸಕ ಮಾಲಿಂಗೇಗೌಡ ಸೇರಿದಂತೆ ಹಲವರಿದ್ದರು.

ಅಘಲಯ ಪಿಎಸಿಎಸ್‌ಗೆ ಯೋಗಣ್ಣ ಅಧ್ಯಕ್ಷ


ಅಘಲಯ ಪಿಎಸಿಎಸ್ ನೂತನ ಅಧ್ಯಕ್ಷ ಯೋಗಣ್ಣ ಅವರನ್ನು ಮುಖಂಡರು ಅಭಿನಂದಿಸಿದರು.

ಕೆ.ಆರ್.ಪೇಟೆ, ಜ.9– ತಾಲೂಕಿನ ಅಘಲಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಯೋಗಣ್ಣ ಉ.ರಾಜೇಗೌಡ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷೆ ಮಂಜಮ್ಮ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಯೋಗಣ್ಣ (ರಾಜೇಗೌಡ) ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿಯೂ ಆದ ಸಹಕಾರ ಅಭಿವೃದ್ಧಿ ಅಧಿಕಾರಿ ಭರತ್ ಘೋಷಿಸಿದರು. ಸಹ ಚುನಾವಣಾಧಿಕಾರಿಯಾಗಿ ಸಂಘದ ಸಿಇಓ ಮುರುಳೀಧರ್ ಕಾರ್ಯ ನಿರ್ವಹಿಸಿದರು.

ತಾಲೂಕು ಜೆಡಿಎಸ್ ಅಧ್ಯಕ್ಷ ಎ.ಎನ್.ಜಾನಕೀರಾಂ ಮಾತನಾಡಿದರು. ನೂತನ ಅಧ್ಯಕ್ಷ ಯೋಗಣ್ಣ ಮಾತನಾಡಿ, ಮುಂದಿನ ದಿನಗಳಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಸರ್ಕಾರದ ಎಲ್ಲಾ ಯೋಜನೆಗಳು ರೈತರಿಗೆ ತಲುಪಿಸುತ್ತೇನೆ ಎಂದು ಭರವಸೆ ನೀಡಿದರು. ಈ ವೇಳೆ ತಾಲೂಕು ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ರಮೇಶ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಎ.ಎಸ್.ಶ್ರೀಧರ್, ಸಂಘದ ಉಪಾಧ್ಯಕ್ಷ ಮಂಜು, ಮುಖಂಡರಾದ ರಮೇಶ್, ಜಗದೀಶ್, ಮಂಜುನಾಥ್, ಸಮಾಜ ಸೇವಕ ಎ.ವೈ.ವಿಜಯ್ ಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ಲೋಕೇಶ್, ಕೃಷ್ಣಸಿಂಗ್, ಅಣ್ಣೇಗೌಡ, ಮಂಜೇಗೌಡ, ಅನಂತು, ಸಂಘದ ಮಾಜಿ ಅಧ್ಯಕ್ಷೆ ಮಂಜಮ್ಮ ಇನ್ನಿತರರಿದ್ದರು.

ಬಿಬಿಎಂಪಿ ಸಹಾಯಕ ಯೋಜನಾಧಿಕಾರಿ ಮಂಜೇಶ್ ಸಂಬಂಧಿಕರ ಮನೆ ಮೇಲೆ ಲೋಕಾಯುಕ್ತ ದಾಳಿ

ಹಲಗೂರು, ಜ.9– ಬಿಬಿಎಂಪಿ ಸಹಾಯಕ ಯೋಜನಾಧಿಕಾರಿ ಮಂಜೇಶ್ ನಿವಾಸದ ಮೇಲೆ ಲೋಕಾಯುಕ್ತ ದಾಳಿ ನಡೆದಿದ್ದು, ಮೂಲತಃ ಮಳವಳ್ಳಿ ತಾಲೂಕಿನ ಮಂಜೇಶ್ ಅವರ ಸಂಬಂಧಿಕರ ನಿವಾಸ ಹಾಗೂ ತೋಟದ ಮನೆ ಮೇಲೆ ಲೋಕಾಯುಕ್ತ ಎಸ್ಪಿ ಸುಜೀತ್ ನೇತೃತ್ವದಲ್ಲಿ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

ಮಂಜೇಶ್ ಸಂಬಂಧಿಕರಾದ ಹಲಗೂರು ಗ್ರಾಪಂ ಸದಸ್ಯ ಜೆಪಿಎಂ ಬಡಾವಣೆಯ ಸುರೇಂದ್ರ ನಿವಾಸ, ಮಂಜೇಶ್ ಸ್ವಗ್ರಾಮ ಗುಂಡಾಪುರ ಗ್ರಾಮದ ಮನೆ ಹಾಗೂ ಮಂಜೇಶ್ ಅವರ ನಂಜಾಪುರ, ನಂದಿಪುರ ತೋಟದ ಮನೆ, ಅಲ್ಲದೇ ಅಗಸನಪುರ ಮನೆ ಹಾಗೂ ಅಜ್ಜಿ ಮನೆ ಎಸ್.ಐ.ಹೊನಲಗೆರೆ ಮನೆಗಳ ಮೇಲೆ ದಾಳಿ ಮಾಡಿ, ದಾಖಲೆಗಳನ್ನು ಪರಿಶೀಲನೆ ನಡೆಸಿದ್ದಾರೆ. ಜೊತೆಗೆ ಮಂಜೇಶ್‌ಗೆ ಸೇರಿದ ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನ ಸಾತನೂರು ಹೋಬಳಿಯ ಸಾಸಲಪುರ ತೋಟದ ಮನೆ ಮೇಲು ಏಕಕಾಲದಲ್ಲಿ ದಾಳಿ ಮಾಡಿರುವ ಲೋಕಾಯುಕ್ತರು ದಾಖಲೆ ಪತ್ರಗಳನ್ನು ಪರಿಶೀಲಿಸಿ, ರಾತ್ರಿ ಯಾದರೂ ಶೋಧ ಕಾರ್ಯ ಮುಂದುವರೆಸಿದ್ದಾರೆ.

ಹೆಣ್ಣು ಭ್ರೂಣ ಹತ್ಯೆ ಕಾನೂನುಬಾಹಿರ: ಡಾ.ಸಿ.ಎ. ಅರವಿಂದ್


ಪಾಂಡವಪುರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯ ನೆರವೇರಿಸಲಾಯಿತು.

ಪಾಂಡವಪುರ, ಜ.9– ಹೆಣ್ಣು ಭ್ರೂಣ ಹತ್ಯೆ ಕಾನೂನುಬಾಹಿರ. ಈ ಬಗ್ಗೆ ಸಾರ್ವಜನಿಕರು ಜಾಗೃತರಾಗಬೇಕು ಎಂದು ಪಟ್ಟಣದ ಸಾರ್ವಜನಿಕ ಆಸ್ಪತ್ರೆ ವೈದ್ಯಾಧಿಕಾರಿ ಡಾ.ಸಿ.ಎ. ಅರವಿಂದ್ ತಿಳಿಸಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಜಿಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕದ ವತಿಯಿಂದ ಮಂಗಳವಾರ ನಡೆದ ತಾಯಿಯಿಂದ ಮಗುವಿಗೆ ಎಚ್‌ಐವಿ, ಸಿಫಿಲಿಸ್ ಮತ್ತು ಹೆಪಟೈಟಿಸ್ ಹರಡುವಿಕೆ ನಿರ್ಮೂಲನಾ ಆಂದೋಲನ ಹಾಗೂ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭ್ರೂಣ ಹತ್ಯೆ ಪ್ರಕರಣದಿಂದ ಜಿಲ್ಲೆಗೆ ಕೆಟ್ಟ ಹೆಸರು ಬಂದಿದೆ. ಭ್ರೂಣ ಹತ್ಯೆ ಕಾನೂನು ಬಾಹಿರವಾಗಿದೆ. ಹಾಗಾಗಿ ಪೋಷಕರು ಹೆಣ್ಣು ಭ್ರೂಣಹತ್ಯೆಗೆ ಮುಂದಾಗಬಾರದು ಎಂದು ಸಲಹೆ ನೀಡಿದರು.

ಏಡ್ಸ್(ಎಚ್‌ಐವಿ) ಬಗ್ಗೆ ಪ್ರತಿಯೊಬ್ಬರು ಜಾಗೃತರಾಗಬೇಕು. ಗರ್ಭಿಣಿಯರು ಕಡ್ಡಾಯವಾಗಿ ಎಚ್‌ಐವಿ ಪರೀಕ್ಷೆ ಮಾಡಿಸಿಕೊಂಡು ತಾಯಿಯಿಂದ ಮಗುವಿಗೆ ಸೋಂಕು ಹರಡದಂತೆ ಎಚ್ಚರ ವಹಿಸಬೇಕು. ಎಚ್‌ಐವಿ ಸೋಂಕು ನಿಯಂತ್ರಣಕ್ಕೆ ಸರ್ಕಾರ ಸಾಕಷ್ಟು ಕಾರ್ಯಕ್ರಮ ರೂಪಿಸಿದೆ. ಸಾರ್ವಜನಿಕರು ಸೋಂಕು ನಿಯಂತ್ರಣಕ್ಕೆ ಸಹಕರಿಸಬೇಕು ಎಂದು ತಿಳಿಸಿದರು

ಇದೇ ವೇಳೆ ತಾಲೂಕಿನ 50ಕ್ಕೂ ಹೆಚ್ಚು ಗರ್ಭಿಣಿಯರಿಗೆ ಸೀಮಂತ ಮಾಡಲಾಯಿತು. ಯೋಜನೆ, ಅಭಿವೃದ್ಧಿ ಇಲಾಖೆ ಸಂಯೋಜಕ ಪರಮೇಶ್, ಮಹಮದ್ ಸುಹೇಲ್ ಮಾತನಾಡಿದರು.

ಸಮಾರಂಭದಲ್ಲಿ ಪ್ರಸೂತಿ ವೈದ್ಯೆ ಡಾ.ಪವಿತ್ರ, ಮಂಜುಳ, ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಕೆ.ಪುಟ್ಟಸ್ವಾಮಿ, ವಿಜಿಕುಮಾರ್, ಅಶ್ವಿನಿ ಸೇರಿದಂತೆ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು.

ಮೊಹಮ್ಮದ್ ಶಮಿ, ಶೀತಲ್ ದೇವಿ ಸೇರಿ 26 ಕ್ರೀಡಾಪಟುಗಳಿಗೆ

ರಾಷ್ಟ್ರಪತಿಗಳಿಂದ ಅರ್ಜುನ ಪ್ರಶಸ್ತಿ ಪ್ರದಾನ


ಮೊಹಮ್ಮದ್ ಶಮಿ ಅವರು ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಅರ್ಜುನ ಪ್ರಶಸ್ತಿ ಸ್ವೀಕರಿಸಿದರು.

ನವದೆಹಲಿ, ಜ.9– ಕ್ರಿಕೆಟಿಗ, ಟೀಂ ಇಂಡಿಯಾ ವೇಗಿ ಮೊಹಮ್ಮದ್ ಶಮಿ ಮತ್ತು ಪ್ಯಾರಾ ಆರ್ಚರಿ ತಾರೆ ಶೀತಲ್ ದೇವಿ ಸೇರಿದಂತೆ 26 ಕ್ರೀಡಾಪಟುಗಳಿಗೆ ಮಂಗಳವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರೀಯ ಕ್ರೀಡಾ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

2023ರ ಏಕದಿನ ವಿಶ್ವಕಪ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ಮೊಹಮ್ಮದ್ ಶಮಿ ಅವರು ಈ ಬಾರಿಯ ಅರ್ಜುನ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಇಂದು ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಅರ್ಜುನ ಪ್ರಶಸ್ತಿ ಸ್ವೀಕರಿಸಿದರು.

ಇನ್ನು ಬ್ಯಾಡ್ಮಿಂಟನ್ ತಾರೆಗಳಾದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿ ರಾಜ್ ರಾಂಕಿ ರೆಡ್ಡಿ ದೇಶದ ಅತ್ಯುನ್ನತ ಕ್ರೀಡಾ ಪ್ರಶಸ್ತಿ ಮೇಜರ್ ಧ್ಯಾನ್ ಚಂದ್ ಖೇಲ್ ರತ್ನ ಗೌರವಕ್ಕೆ ಪಾತ್ರರಾಗಿದ್ದಾರೆ. 2023 ರಲ್ಲಿ ಬ್ಯಾಡ್ಮಿಂಟನ್ ಕ್ಷೇತ್ರದಲ್ಲಿ ಭಾರತದ ಕೀರ್ತಿ ಪತಾಕೆಯನ್ನು ಮುಗಿಲೆತ್ತರಕ್ಕೇರಿಸಿದ್ದ ಈ ಜೋಡಿಗೆ ಖೇಲ್ ರತ್ನ ಪ್ರಶಸ್ತಿ ನೀಡುವ ಮೂಲಕ ರಾಷ್ಟ್ರಪತಿ ದ್ರೌಪದಿ ಮುರ್ಮು ಗೌರವಿಸಿದರು.

ಅರ್ಜುನ ಪ್ರಶಸ್ತಿ ಪಡೆದ ಕ್ರೀಡಾಪಟುಗಳು: ಓಜಸ್ ಪ್ರವೀಣ್ ಡಿಯೋಟಾಲೆ (ಆರ್ಚರಿ), ಅದಿತಿ ಗೋಪಿಚಂದ್ ಸ್ವಾಮಿ (ಆರ್ಚರಿ), ಶ್ರೀಶಂಕರ್ (ಅಥ್ಲೆಟಿಕ್ಸ್), ಪಾರುಲ್ ಚೌಧರಿ (ಅಥ್ಲೆಟಿಕ್ಸ್), ಮೊಹಮ್ಮದ್ ಹುಸಾಮುದ್ದೀನ್ (ಬಾಕ್ಸರ್), ಆರ್ ವೈಶಾಲಿ (ಚೆಸ್), ಮೊಹಮ್ಮದ್ ಶಮಿ (ಕ್ರಿಕೆಟ್), ಅನುಷ್ ಅಗರ್ವಾಲ್ (ಇಕ್ವಿಸ್ಟ್ರಿಯನ್), ದಿವ್ಯಾಕೃತಿ ಸಿಂಗ್ (ಈಕ್ವೆಸ್ಟ್ರಿಯನ್ ಡ್ರೆಸ್ಸೇಜ್), ದೀಕ್ಷಾ ಡಾಗರ್ (ಗಾಲ್ಫ್), ಕೃಷ್ಣ ಬಹದ್ದೂರ್ ಪಾಠಕ್ (ಹಾಕಿ), ಸುಶೀಲಾ ಚಾನು (ಹಾಕಿ), ಪವನ್ ಕುಮಾರ್ (ಕಬಡ್ಡಿ), ರಿತು ನೇಗಿ (ಕಬಡ್ಡಿ), ನಸ್ರೀನ್ (ಖೋ–ಖೋ), ಪಿಂಕಿ (ಲಾನ್ ಬಾಲ್), ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್ (ಶೂಟಿಂಗ್), ಇಶಾ ಸಿಂಗ್ (ಶೂಟಿಂಗ್), ಹರಿಂದರ್ ಪಾಲ್ ಸಿಂಗ್ (ಸ್ಕ್ವಾಷ್), ಐಹಿಕಾ ಮುಖರ್ಜಿ (ಟೇಬಲ್ ಟೆನಿಸ್), ಸುನಿಲ್ ಕುಮಾರ್ (ಕುಸ್ತಿ), ಆಂಟಿಮ್ ಪಂಘಲ್ (ಕುಸ್ತಿ), ರೋಶಿಬಿನಾ ದೇವಿ (ವುಶು), ಶೀತಲ್ ದೇವಿ (ಪ್ಯಾರಾ ಆರ್ಚರಿ), ಅಜಯ್ ಕುಮಾರ್ (ಅಂಧರ ಕ್ರಿಕೆಟ್), ಪ್ರಾಚಿ ಯಾದವ್ (ಪ್ಯಾರಾ ಕೆನೋಯಿಂಗ್).


ಪ್ರಾಚಿ ಯಾದವ್ (ಪ್ಯಾರಾ ಕ್ಯಾನೋಯಿಯಿಗ್


ಅಲ್ಲೂರಿ ಅಜಯ್ (ಅಂಧ ಕ್ರಿಕೆಟ್)


ನಂಗೋರೆಮ್ (ವುಶು)


ಅಂಟಿಮ್ (ಕುಸ್ತಿ)


ಸುನೀಲ್‌ಕುಮಾರ್ (ಕುಸ್ತಿ)


ಅಹಿಕಾ ಮುಖರ್ಜಿ (ಟೇಬಲ್ ಟೆನ್ನಿಸ್)


ಹರಿಂದರ್‌ಪಾಲ್ ಸಿಂಗ್ (ಸ್ಕ್ವಾಷ್)


ಐಶ್ವರಿ ಪ್ರತಾಪ್‌ಸಿಂಗ್ (ಶೂಟಿಂಗ್)


ಪಿಂಕಿ (ಲಾನ್ ಬಟ್ಟಲುಗಳು)


ನಸ್ರೀನ್ (ಖೋ ಖೋ)


ರೀತು ನೇಗಿ (ಕಬಡ್ಡಿ)


ಪವನ್‌ಕುಮಾರ್ (ಕಬಡ್ಡಿ)


ಪುಕ್ರಂಬಮ್ ಸುಶೀಲಾ (ಹಾಕಿ)


ಕೃಷ್ಣನ್ ಬಹದ್ದೂರ್ (ಹಾಕಿ)


ದೀಕ್ಷಾ ಡಾಗರ್ (ಗಾಲ್ಫ್)


ದಿವ್ಯಕೃತಿಸಿಂಗ್ (ಈಕ್ವೆಸ್ಟ್ರಿಯನ್ ಡ್ರೆಸ್ಸೇಜ್)


ಅನುಷ್ ಅಗರವಾಲಾ (ಈಕ್ವೆಸ್ಟ್ರಿಯನ್)


ಆರ್.ವೈಶಾಲಿ (ಚೆಸ್)


ಮೊಹಮದ್ ಹುಸುಮುದ್ದೀನ್ (ಬಾಕ್ಸಿಂಗ್)


ಪಾರುಲ್ ಚೌಧರಿ (ಅಥ್ಲೆಟಿಕ್ಸ್)


ಶ್ರೀಶಂಕರ ಎಂ. (ಅಥ್ಲೆಟಿಕ್ಸ್)


ಅದಿತಿ ಗೋಪಿಚಂದ್ (ಬಿಲ್ಲುಗಾರಿಕೆ)


ಓಜಸ್ ಪ್ರವೀಣ್ (ಬಿಲ್ಲುಗಾರಿಕೆ)


ಇಶಾ ಸಿಂಗ್ (ಶೂಟಿಂಗ್)


ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಶೀತಲ್‌ದೇವಿ (ಪ್ಯಾರಾ ಬಿಲ್ಲುಗಾರಿಕೆ)ಗೆ ಪ್ರಶಸ್ತಿ

ಕೆಸಿಇಟಿ–24 ಎರಡು ದಿನ ಹಿಂದೂಡಿಕೆ: ಏ.18, 19ರಂದು ಪರೀಕ್ಷೆ

● ಸುಧಾರಣಾ ಕ್ರಮವಾಗಿ 'ಅರ್ಜಿ ಸಲ್ಲಿಕೆಯೊಂದಿಗೆ ಪರಿಶೀಲನೆ' ವ್ಯವಸ್ಥೆ ಜಾರಿ, ವಾಟ್ಸಪ್ ಸಂದೇಶಕ್ಕೆ ಮೊಬೈಲ್ ಆಪ್ ● ಜನವರಿ 10ರಿಂದ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಅವಕಾಶ

ಬೆಂಗಳೂರು, ಜ.9– ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕೆಇಎ) ಸಾಮಾನ್ಯ ಪ್ರವೇಶ ಪರೀಕ್ಷೆ (ಕೆಸಿಇಟಿ–24) ನಡೆಸುವ ದಿನಾಂಕವನ್ನು ಎರಡು ದಿನಗಳ ಮಟ್ಟಿಗೆ ಹಿಂದೂಡಿದ್ದು, ಆ ಪ್ರಕಾರ ಏಪ್ರಿಲ್ 18 ಮತ್ತು 19ರಂದು ಪರೀಕ್ಷೆಗಳು ನಡೆಯಲಿವೆ. ಈ ಮುಂಚೆ ಏಪ್ರಿಲ್ 20 ಮತ್ತು 21ರಂದು ಪರೀಕ್ಷೆ ನಡೆಸಲು ದಿನಾಂಕ ನಿಗದಿಯಾಗಿತ್ತು.


ಕೆಇಎ ಕಾರ್ಯನಿರ್ವಾಹಕ ನಿರ್ದೇಶಕಿ ಎಸ್. ರಮ್ಯಾ ಮಂಗಳವಾರ ಪತ್ರಿಕಾ ಪ್ರಕಟಣೆ ನೀಡಿದ್ದು, ಏಪ್ರಿಲ್ 21ರಂದು ಎನ್‌ಡಿಎ ಪರೀಕ್ಷೆ ನಡೆಯುತ್ತಿರುವುದರಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಅದರಂತೆ, ಕೆಸಿಇಟಿ ಕನ್ನಡ ಪರೀಕ್ಷೆ ಏಪ್ರಿಲ್ 20ರಂದು ನಡೆಯಲಿದೆ. ವೃತ್ತಿಪರ ಕೋರ್ಸುಗಳಿಗೆ ಸೇರ ಬಯಸುವ ಅಭ್ಯರ್ಥಿಗಳು ಅದಕ್ಕೆ ಅರ್ಹತೆ ಪಡೆಯುವ ನಿಟ್ಟಿನಲ್ಲಿ, ಕೆಸಿಇಟಿ–24 ಪರೀಕ್ಷೆ ತೆಗೆದುಕೊಳ್ಳುವುದಕ್ಕಾಗಿ ಜನವರಿ 10ರಿಂದ (ಬುಧವಾರ) ಫೆಬ್ರವರಿ 10ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಮೆಡಿಕಲ್, ಡೆಂಟಲ್, ಆಯುಷ್, ಬಿಪಿಟಿ, ಬಿಪಿಓ, ಬಿಎಸ್ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳಿಗೆ ಸೇರಲು ಆಸಕ್ತಿ ಇರುವ ಅಭ್ಯರ್ಥಿಗಳೂ ಈಗಲೇ ಅರ್ಜಿ ಸಲ್ಲಿಸಿ ನೋಂದಾಯಿಸಿಕೊಳ್ಳಬೇಕೆಂದು ಸೂಚಿಸಲಾಗಿದೆ. ಯುಜಿನೀಟ್–2024 ಫಲಿತಾಂಶಗಳ ಪ್ರಕಟಣೆಯ ನಂತರ ಕೆಇಎನಲ್ಲಿ ನೋಂದಾಯಿಸಲಾಗಿರುವ ಅಭ್ಯರ್ಥಿಗಳಿಗೆ ಓಇಇಖಿ ಸ್ಕೋರ್ ಮತ್ತು ರೋಲ್ ನಂಬರ್ ದಾಖಲಿಸಲು ಇಂಟರ್‌ಫೇಸ್ ನೀಡಲಾಗುವುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ಸಿಇಟಿ ಪ್ರಕ್ರಿಯೆಯಲ್ಲಿ ಸುಧಾರಣೆ ತರುವ ಭಾಗವಾಗಿ ಈ ಬಾರಿ ಅರ್ಜಿಯನ್ನು "ಅರ್ಜಿ ಹಾಗೂ ಪರಿಶೀಲನೆ" ನಮೂನೆಯಲ್ಲಿ ಹೊರತರಲಾಗಿದೆ. ಇದರಿಂದಾಗಿ, ಅಭ್ಯರ್ಥಿಗಳ ದಾಖಲಾತಿಗಳನ್ನು ಭೌತಿಕವಾಗಿ ಪರಿಶೀಲಿಸಲು ಈ ಮುಂಚೆ ಹಿಡಿಯುತ್ತಿದ್ದ ಹೆಚ್ಚಿನ ಸಮಯ ಉಳಿತಾಯವಾಗುತ್ತದೆ ಎಂದು ವಿವರಿಸಲಾಗಿದೆ. ಹೊಸ ಮಾದರಿಯಲ್ಲಿ, ಅಭ್ಯರ್ಥಿಗಳ ವಿವರಗಳನ್ನು, ಅಂದರೆ, ಶಾಲೆಗಳ ವ್ಯಾಸಂಗ, ಕನ್ನಡ ಮಾಧ್ಯಮ, ಜಾತಿ, ಆದಾಯ ಮುಂತಾದ ವಿವರಗಳನ್ನು, SATS ಹಾಗೂ ಕಂದಾಯ ಇಲಾಖೆಯ ವೆಬ್‌ಸರ್ವೀಸ್ ಮುಖಾಂತರ ಆನ್‌ಲೈನ್ ಮೂಲಕವೇ ಪರಿಶೀಲಿಸಲಾಗುವುದು, ಅಭ್ಯರ್ಥಿಗಳು ಪ್ರತ್ಯೇಕವಾಗಿ ದಾಖಲೆಗಳ ಪರಿಶೀಲನೆಗೆ ಭೌತಿಕವಾಗಿ ಹಾಜರಾಗುವ ಅವಶ್ಯಕತೆ ಇರುವುದಿಲ್ಲ. ಪ್ರತಿ ವರ್ಷವೂ ಸುಮಾರು ಒಂದೂವರೆ ತಿಂಗಳ ಕಾಲ ನಡೆಯುತ್ತಿದ್ದ ಪರಿಶೀಲನೆಗಳ ಕಾರ್ಯಗಳು ಈಗ ಅರ್ಜಿ ಸಲ್ಲಿಸುವ ಸಮಯದಲ್ಲಿಯೇ ನಡೆಯ ಲಿವೆ ಎಂದು ತಿಳಿಸಲಾಗಿದೆ. ಹೀಗಾಗಿ, ಅಭ್ಯರ್ಥಿಗಳು ಎಲ್ಲಾ ವಿವರಗಳನ್ನು ಕಡ್ಡಾಯವಾಗಿ ಎಚ್ಚರಿಕೆಯಿಂದ ಭರ್ತಿ ಮಾಡಲು ಮತ್ತು ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ. ಪ್ರಾಧಿಕಾರವು ಸುಮಾರು 250 ಕ್ಕೂ ಹೆಚ್ಚು ನುರಿತ ಉಪನ್ಯಾಸಕರುಗಳನ್ನು, ಮಾಸ್ಟರ್ ಟ್ರೈನರ್ ಎಂದು ಗುರುತಿಸಿ ಅವರುಗಳಿಗೆ ಅರ್ಜಿ ಸಲ್ಲಿಸುವ ಬಗ್ಗೆ ತರಬೇತಿಯನ್ನು ಈಗಾಗಲೇ ನೀಡಿದೆ. ಈ ಮಾಸ್ಟರ್ ಟ್ರೈನರ್‌ಗಳು, ಪ್ರತಿ ವಿಜ್ಞಾನ ಕಾಲೇಜಿನಲ್ಲಿ ಒಂದಿಬ್ಬರು ಉಪನ್ಯಾಸಕರನ್ನು ಗುರುತಿಸಿ ಅವರಿಗೆ "ಕಾಲೇಜು ಟ್ರೈನರ್" ತರಬೇತಿ ನೀಡಿ ಸಜ್ಜುಗೊಳಿಸಿದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ ಸಂದೇಹಗಳಿದ್ದಲ್ಲಿ ತಾವು ವ್ಯಾಸಂಗ ಮಾಡುತ್ತಿರುವ ಕಾಲೇಜಿನಲ್ಲಿನ ಕಾಲೇಜು ಟ್ರೈನರ್‌ಗಳನ್ನು ಸಂಪರ್ಕಿಸಿ ಮಾರ್ಗದರ್ಶನ ಪಡೆಯಬೇಕು ಎಂದೂ ಸೂಚಿಸಲಾಗಿದೆ.

ಮೊಬೈಲ್ ಆ್ಯಪ್ ಅಭಿವೃದ್ಧಿ: ಇದರ ಜೊತೆಗೆ, ಸುಧಾರಣೆಯ ಮತ್ತೊಂದು ಕ್ರಮವಾಗಿ ಕೆಇಎ ಮೊಬೈಲ್ ಆಪ್ ಅಭಿವೃದ್ಧಿಪಡಿಸಿದ್ದು ಇದನ್ನು ಕೆಇಎ ವೆಬ್ಸೈಟ್ ನಿಂದ ಡೌನ್ಲೋಡ್ ಮಾಡಿಕೊಳ್ಳಬಹುದು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್‌ಗೆ ಕೊರೊನಾ ಪಾಸಿಟಿವ್



ಬೆಂಗಳೂರು, ಜ.9–ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಮಂಗಳವಾರ ಕೊರೊನಾ ಪಾಸಿಟಿವ್ ದೃಢಪಟ್ಟಿದ್ದು, ಇಂದು ಅವರನ್ನು ಭೇಟಿ ಮಾಡಿದ್ದ ಬಿಜೆಪಿ ನಿಯೋಗಕ್ಕೆ ಕ್ವಾರಂಟೈನ್ ಭೀತಿ ಎದುರಾಗಿದೆ.

ರಾಜ್ಯಪಾಲರು ತಮಗೆ ಕೋವಿಡ್ ಪಾಸಿಟಿವ್ ಬಂದ ಹಿನ್ನೆಲೆಯಲ್ಲಿ ರಾಜಭವನದಲ್ಲಿಯೇ ಕ್ವಾರಂಟೈನ್ ಆಗಿದ್ದು, ಮುಂದಿನ ದಿನಾಂಕದವರೆಗೆ ಎಲ್ಲಾ ನಿಗದಿತ ಕಾರ್ಯಕ್ರಮಗಳನ್ನು ರದ್ದುಗೊಳಿಸಿದ್ದಾರೆ.

ಸದ್ಯ ರಾಜ್ಯಪಾಲರ ಆರೋಗ್ಯ ಸ್ಥಿರವಾಗಿದೆ. ವೈದ್ಯರು ಸೂಕ್ತ ಚಿಕಿತ್ಸೆಯೊಂದಿಗೆ ನಿಗಾವಹಿಸಿ ಆರೈಕೆ ಮಾಡುತ್ತಿದ್ದಾರೆ. ಮುಂದಿನ ಕೆಲ ದಿನಗಳ ಕಾಲ ರಾಜ್ಯಪಾಲರ ಭೇಟಿ ಹಾಗೂ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿದೆ ಎಂದು ರಾಜ್ಯಪಾಲರ ಕಚೇರಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ಮಧ್ಯೆ ಇಂದು ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದ ಬಿಜೆಪಿ ನಿಯೋಗ ರಾಜ್ಯಪಾಲರನ್ನು ಭೇಟಿ ಮಾಡಿ, ರಾಜ್ಯದಲ್ಲಿ ತೀವ್ರ ಬರಗಾಲದ ಹಿನ್ನೆಲೆಯಲ್ಲಿ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಮನವಿ ಮಾಡಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಡಿ.ವಿ.ಸದಾನಂದ ಗೌಡ, ಮಾಜಿ ಡಿಸಿಎಂ ಡಾ.ಅಶ್ವತ್ಥನಾರಾಯಣ, ಮಾಜಿ ಸಚಿವ ಕೆ.ಗೋಪಾಲಯ್ಯ, ಶಾಸಕರಾದ ಎಸ್.ರಘು, ರವಿ ಸುಬ್ರಮಣ್ಯ, ಕೆ.ರಾಮಮೂರ್ತಿ ಹಾಜರಿದ್ದರು. ರಾಜ್ಯಪಾಲರ ಭೇಟಿ ಬಳಿಕ ಕೊರೊನಾ ವರದಿ ಬಂದಿದ್ದು, ನಾಯಕರು ಆತಂಕಕ್ಕೆ ಕಾರಣವಾಗಿದೆ.

ಮೈಸೂರು ಮಿತ್ರ

ಕಾಲಮಿತಿಯೊಳಗೆ ಸಾರ್ವಜನಿಕರ ಕೆಲಸ ಮಾಡಿ

ಟಿ.ಶೆಟ್ಟಿಗೇರಿ ಗ್ರಾಮದಲ್ಲಿ ನಡೆದ ಜನಸ್ಪಂದನಾ ಸಭೆಯಲ್ಲಿ ಅಧಿಕಾರಿಗಳು, ಸಿಬ್ಬಂದಿಗೆ ಶಾಸಕ ಪೊನ್ನಣ್ಣ ಸೂಚನೆ



ಟಿ.ಶೆಟ್ಟಿಗೇರಿ ಗ್ರಾಮದ ಕೊಡವ ಸಮಾಜದ ಸಭಾಂಗಣದಲ್ಲಿ ನಡೆದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿದರು. ಡಿಸಿ ವೆಂಕಟ್ ರಾಜಾ, ಎಸಿ ವಿನಾಯಕ್ ನರ್ವಾಡೆ, ಜಿಪಂ ಸಿಇಓ ವರ್ಣಿತ್ ನೇಗಿ, ಎಸ್ಪಿ ಕೆ.ರಾಮರಾಜನ್ ಇದ್ದರು.

ಮಡಿಕೇರಿ, ಜ.9– ಸಾರ್ವಜನಿಕರ ಯಾವುದೇ ಕುಂದುಕೊರತೆಗಳನ್ನು ಆಲಿಸಿ, ಪರಿಹರಿಸುವುದು ಅಧಿಕಾರಿಗಳು ಮತ್ತು ಸಿಬ್ಬಂದಿಯ ಕರ್ತವ್ಯವಾಗಿದೆ. ಆ ನಿಟ್ಟಿನಲ್ಲಿ ಸಾಧ್ಯವಾದಷ್ಟು ಕಾಲಮಿತಿಯಲ್ಲಿ ಸಾರ್ವಜನಿಕರಿಗೆ ಸ್ಪಂದಿಸಬೇಕು ಎಂದು ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಅಧಿಕಾರಿಗಳಿಗೆ ತಿಳಿಸಿದರು.

ಪೊನ್ನಂಪೇಟೆ ತಾಲೂಕಿನ ಟಿ.ಶೆಟ್ಟಿ ಗೇರಿ ಗ್ರಾಮದ ಕೊಡವ ಸಮಾಜದ ಸಭಾಂಗಣದಲ್ಲಿ ಮಂಗಳವಾರ ನಡೆದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರೊಂದಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿ ಸೌಜನ್ಯದಿಂದ ನಡೆದುಕೊಳ್ಳಬೇಕು. ಸಾರ್ವಜನಿಕರಿಗೆ ಸ್ಪಂದಿಸಬೇಕು. ಕೆಲಸ ಆಗದಿರುವುದಕ್ಕೆ ಹಿಂಬರಹವನ್ನಾದರೂ ನೀಡಬೇಕು ಎಂದು ಸಲಹೆ ನೀಡಿದರು.

ವಿರಾಜಪೇಟೆಯ ತಮ್ಮ ಗೃಹ ಕಚೇರಿಯಲ್ಲಿ ಸಾರ್ವಜನಿಕರ ಭೇಟಿ ಕಾರ್ಯಕ್ರಮ ಇದ್ದೇ ಇರುತ್ತದೆ. ಆ ನಿಟ್ಟಿನಲ್ಲಿ ಸಾಧ್ಯವಾದಷ್ಟು ಸಾರ್ವಜನಿಕರಿಗೆ ಸ್ಪಂದಿಸಲು ಪ್ರಯತ್ನಿಸಲಾಗುವುದು. ಕೊಡಗು ಜಿಲ್ಲೆಗೆ ಸರ್ಕಾರದ ಹಂತದಲ್ಲಿ ಆಗಬೇಕಿರುವ ಕೆಲಸ ಕಾರ್ಯಗಳನ್ನು ತ್ವರಿತಗತಿಯಲ್ಲಿ ಕಾರ್ಯರೂಪಕ್ಕೆ ತರಲು ಪ್ರಾಮಾಣಿಕವಾಗಿ ಶ್ರಮಿಸಲಾಗುವುದು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನಸ್ಪಂದನಾ ಕಾರ್ಯಕ್ರಮ ಆಯೋಜಿಸಿ ಸಾರ್ವಜನಿಕರ ಅಹವಾಲುಗಳನ್ನು ಆಲಿಸಿ, ವರದಿ ನೀಡುವಂತೆ ಸೂಚಿಸಿದೆ. ಆ ನಿಟ್ಟಿನಲ್ಲಿ ಅಹವಾಲುಗಳನ್ನು ಸ್ವೀಕರಿಸಿ ಸಕಾಲಕ್ಕೆ ಪರಿಹರಿಸಲಾಗುವುದು ಎಂದು ತಿಳಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಕೊಡಗು ಜಿಲ್ಲೆಯಲ್ಲಿ 1.05 ಲಕ್ಷ ಮಹಿಳೆಯರಿಗೆ ತಲಾ 2 ಸಾವಿರ ರೂ. ಅವರ ಖಾತೆಗೆ ತಲುಪುತ್ತಿದೆ. ಉಳಿದವರಿಗೆ ಗೃಹಲಕ್ಷ್ಮಿ ಯೋಜನೆಯ ನ್ಯೂನತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ವಿಶೇಷ ಶಿಬಿರಗಳನ್ನು ಸಹ ಆಯೋಜಿಸಲಾಗುವುದು. ಅನ್ನಭಾಗ್ಯ ಯೋಜನೆಯಡಿಯ 10 ಕೆಜಿ ಅಕ್ಕಿಯಲ್ಲಿ 5 ಕೆಜಿ ವಿತರಿಸಲಾಗುತ್ತಿದೆ. ಉಳಿದ 5 ಕೆಜಿಗೆ ಹಣವನ್ನು ಪಡಿತರದಾರರ ಖಾತೆಗೆ ಜಮೆ ಮಾಡಲಾಗುತ್ತಿದೆ. ಶಕ್ತಿ ಯೋಜನೆಯಡಿ ರಾಜ್ಯದಲ್ಲಿ ಇದುವರೆಗೆ 70 ಕೋಟಿ ಮಹಿಳೆಯರು ವಿವಿಧ ಸ್ಥಳಗಳಿಗೆ ಪ್ರಯಾಣ ಮಾಡಿದ್ದಾರೆ ಎಂದು ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ, ಸಾರ್ವಜನಿಕರು ಕಚೇರಿಗೆ ಅಲೆಯುವುದನ್ನು ತಪ್ಪಿಸಲು ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗ್ರಾಮಕ್ಕೆ ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿ ಬಂದು ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಶ್ರಮಿಸಲಾಗುತ್ತಿದೆ. ಸಕಾಲದಲ್ಲಿ ಆಗಬೇಕಿರುವ ಕೆಲಸಗಳನ್ನು ಸಾಧ್ಯವಾದಷ್ಟು 15 ದಿನದೊಳಗೆ ಪರಿಹರಿಸಲಾಗುತ್ತದೆ. ಆಗದಿರುವ ಕೆಲಸಗಳಿಗೆ ಹಿಂಬರಹ ನೀಡಲಾಗುತ್ತದೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಜಿಲ್ಲಾಡಳಿತ ಎಲ್ಲಾ ಪ್ರಯತ್ನ ಮಾಡುತ್ತಿದೆ ಎಂದರು. ಟಿ.ಶೆಟ್ಟಿಗೇರಿ ಗ್ರಾಪಂ ಅಧ್ಯಕ್ಷ ಎಂ.ಎಂ.ಪಟ್ಟು, ಜಿಪಂ ಸಿಇಓ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಉಪ ವಿಭಾಗಾಧಿಕಾರಿ ವಿನಾಯಕ್ ನರ್ವಾಡೆ, ತಹಶೀಲ್ದಾರ್ ರಾಮಚಂದ್ರ, ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

ಸಾರ್ವಜನಿಕರಿಂದ 161 ಅರ್ಜಿ ಸಲ್ಲಿಕೆ

ಜನಸ್ಪಂದನಾ ಕಾರ್ಯಕ್ರಮದಲ್ಲಿ ಹಕ್ಕುಪತ್ರ ಹಾಗೂ ಪಿಂಚಣಿ ಆದೇಶ ಪತ್ರವನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಲಾಯಿತು. ಇದೇ ವೇಳೆ ಸಾರ್ವಜನಿಕರಿಂದ 161 ಅರ್ಜಿಗಳು ಸಲ್ಲಿಕೆಯಾದವು. ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ರಸ್ತೆ ಸರಿಪಡಿಸುವುದು, ಸೇತುವೆ ನಿರ್ಮಿಸುವುದು, ಸೆಸ್ಕ್‌ನಿಂದ ಸಮರ್ಪಕ ವಿದ್ಯುತ್ ಪೂರೈಕೆ ಹಾಗೂ ನಿರ್ವಹಣೆ ಮಾಡುವುದು, ವಿದ್ಯುತ್ ಮಾರ್ಗಗಳನ್ನು ಸರಿಪಡಿಸುವುದು. ಪಂಚಾಯತ್ ರಾಜ್ ಇಲಾಖೆನಿಂದ ಕುಡಿಯುವ ನೀರು ಪೂರೈಕೆ, ವಸತಿ ಹಾಗೂ ಮನೆ ನಿರ್ಮಾಣಕ್ಕೆ ಒತ್ತು ನೀಡುವುದು. ಕಂದಾಯ ಇಲಾಖೆಯ ಪೌತಿಖಾತೆ ದಾಖಲು, ದುರಸ್ತಿಗೆ ಜಾಗ ಒದಗಿಸುವುದು, ಗೃಹಲಕ್ಷ್ಮಿ ಯೋಜನೆಯಡಿ ಸೌಲಭ್ಯವನ್ನು ಅರ್ಹರಿಗೆ ತಲುಪಿಸುವುದು. ಹೀಗೆ ವಿವಿಧ ಇಲಾಖೆಯ ಕೆಲಸ ಕಾರ್ಯಗಳ ಬಗ್ಗೆ ಸಾರ್ವಜನಿಕರು ಜನಸ್ಪಂದನಾ ಸಭೆಯಲ್ಲಿ ಗಮನ ಸೆಳೆದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ವಸ್ತುಪ್ರದರ್ಶನ, ಮಳಿಗೆಗಳು ಗಮನ ಸೆಳೆದವು. ಇದೇ ವೇಳೆ ಹೆಣ್ಣು ಮಗುವನ್ನು ರಕ್ಷಿಸಿ, ಹೆಣ್ಣು ಮಗುವನ್ನು ಓದಿಸಿ' ಅಭಿಯಾನಕ್ಕೆ ಶಾಸಕ ಎ.ಎಸ್.ಪೊನ್ನಣ್ಣ ಚಾಲನೆ ನೀಡಿದರು.

9.60 ಕೋಟಿ ಕುಟುಂಬಗಳಿಗೆ ಅಡುಗೆ ಅನಿಲ ವಿತರಣೆ



ವಿರಾಜಪೇಟೆಯ ಪುರಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಂಸದ ಪ್ರತಾಪ್ ಸಿಂಹ ಅಡುಗೆ ಅನಿಲ ವಿತರಿಸಿದರು.

ವಿರಾಜಪೇಟೆ, ಜ.9– ಕೇಂದ್ರ ಸರ್ಕಾರದಿಂದ ದೇಶದಲ್ಲಿ 9 ಕೋಟಿ 60 ಲಕ್ಷ ಕುಟುಂಬಗಳಿಗೆ ಉಜ್ವಲ ಯೋಜನೆಯಡಿ ಅಡುಗೆ ಅನಿಲ ವಿತರಿಸಲಾಗಿದೆ ಎಂದು ಸಂಸದ ಪ್ರತಾಪ್ ಸಿಂಹ ಹೇಳಿದರು.

ಪಟ್ಟಣದ ಪುರಭವನದಲ್ಲಿ ಆಯೋಜಿಸಿದ್ದ ಅಡುಗೆ ಅನಿಲ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಬಾಲ್ಯದಲ್ಲಿ ತಾಯಿಯ ಕಷ್ಟವನ್ನು ಹತ್ತಿರದಿಂದ ಕಂಡ ಫಲವಾಗಿ ಮಹಿಳೆಯರಿಗೆ ಉಜ್ವಲ ಯೋಜನೆಯಡಿ ಅಡುಗೆ ಅನಿಲ ವಿತರಿಸಿದ್ದಾರೆ. ಈ ನಿಟ್ಟಿನಲ್ಲಿ ಯೋಜನೆಯ ಎರಡನೇ ಹಂತದಲ್ಲಿ 75 ಲಕ್ಷ ಫಲಾನುಭವಿಗಳ ಗುರಿ ದಾಟಿ ಮುನ್ನಡೆಯುತ್ತಿದೆ. ಮೋದಿ ಅವರು ಪ್ರಧಾನಿಯಾದ ಸಂದರ್ಭ ಸ್ವಾತಂತ್ರ್ಯೋತ್ಸವದಲ್ಲಿ ಗ್ರಾಮಾಂತರ ಮಹಿಳೆಯರಿಗಾಗಿ ಶೌಚಾಲಯಗಳ ನಿರ್ಮಿಸುವ ಆಗತ್ಯತೆಯನ್ನು ವಿವರಿಸಿ ಯೋಜನೆ ರೂಪಿಸಿದ್ದರು. ಗ್ರಾಮಾಂತರ ಪ್ರದೇಶಗಳಲ್ಲಿ ಈಗಾಗಲೇ ಸುಮಾರು 11 ಕೋಟಿ 72 ಲಕ್ಷ ಶೌಚಾಲಯ ನಿರ್ಮಿಸಲಾಗಿದೆ. ಮಹಿಳೆಯರ ಅನುಕೂಲಕ್ಕಾಗಿ ಕೇಂದ್ರ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೆ ತಂದೆ ಎಂದರು.

ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, ಉಜ್ವಲ ಯೋಜನೆ 9 ಕೋಟಿಗೂ ಹೆಚ್ಚು ಜನರಿಗೆ ಲಭಿಸಿರುವುದು ಶ್ಲಾಘನೀಯ. ಕೇಂದ್ರ ಮತ್ತು ರಾಜ್ಯ ಸರ್ಕಾರ ಬಡವರಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಪ್ರತಿಯೊಬ್ಬರಿಗೂ ಪೂರಕ. ಅನ್ನಭಾಗ್ಯ ಹೆಸರಿನಲ್ಲಿ 10 ಕೆಜಿ ಅಕ್ಕಿ ನೀಡುವ ಯೋಜನೆ ರೂಪಿಸಲಾಗಿದೆ. ಇದರಿಂದ ಜನರು ಮನೆಯಲ್ಲಿ ಸೋಮಾರಿಗಳಾಗುತ್ತಾರೆ ಎಂಬ ಮಾತು ಸರಿಯಲ್ಲ ಎಂದು ಹೇಳಿದರು.

ರಾಜ್ಯ ಸರ್ಕಾರ ಉಚಿತ ಯೋಜನೆ ನೀಡುವ ಸೌಲಭ್ಯ ಬಡಜನರ ಬದುಕಿಗೆ ಒಂದಷ್ಟು ಸಹಾಯವಾಗಲಿ. ಉಚಿತ ಯೋಜನೆ ಸರ್ಕಾರಕ್ಕೆ ಹೊರೆಯಾದರು ಬಡವರ ಒಳಿತಿಗೆ ಲಾಭವಾಗಲಿದೆ ಎಂದರು.

ವಿಧಾನಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ, ಆಹಾರ ನೀರಿಕ್ಷಕಿ ಸೀನಾಕುಮಾರಿ, ಪುರಸಭೆ ಮುಖ್ಯಾಧಿಕಾರಿ ಚಂದ್ರ ಕುಮಾರ್, ಶಶಿಧರನ್ ಉಪಸ್ಥಿತರಿದ್ದರು.

ಕಾಫಿ ತೋಟಗಳಲ್ಲಿ ಕಾಡಾನೆ ದಾಳಿ



ಕಾಡಾನೆಗಳು ಕಾಫಿ, ಬಾಳೆ ಗಿಡಗಳನ್ನು ನಾಶಪಡಿಸಿರುವುದು.

ನಾಪೋಕ್ಲು, ಜ.9–ನರಿಯಂದಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೇಲಾವರ ಗ್ರಾಮದಲ್ಲಿ ಕಾಡಾನೆಗಳ ಉಪಟಳದಿಂದ ಗ್ರಾಮಸ್ಥರು ತತ್ತರಿಸುವಂತಾಗಿದ್ದು, ಮಂಗಳವಾರ ಮುಂಜಾನೆ ಕಾಡಾನೆಗಳು ದಾಳಿ ನಡೆಸಿ, ಅಪಾರ ಪ್ರಮಾಣದ ತೋಟಗಾರಿಗೆ ಬೆಳೆಗಳನ್ನು ನಾಶಪಡಿಸಿವೆ.

ಗ್ರಾಮದ ಕಾಫಿ ಬೆಳೆಗಾರರಾದ ಮನೆಯಪಂಡ ಧೀರಜ್ ತಿಮ್ಮಯ್ಯ, ಕುಟ್ಟನ ಶಶಿ ಹಾಗೂ ಕುಟ್ಟನ ಪೂವಯ್ಯ ಅವರ ತೋಟಗಳಲ್ಲಿ ದಾಳಿ ನಡೆಸಿರುವ ಕಾಡಾನೆಗಳು, ಕಾಫಿ ಗಿಡಗಳು, ತೆಂಗು, ಅಡಕೆ, ಬಾಳೆ ಮತ್ತಿತರ ಬೆಳೆಗಳನ್ನು ನಾಶಪಡಿಸಿವೆ.

ಕಾಡಾನೆಗಳ ಹಾವಳಿಯಿಂದ ಜನಸಾಮಾನ್ಯರು ಸಂಚರಿಸಲು, ತೋಟಗಳ ಕೆಲಸಗಳಿಗೆ ಕಾರ್ಮಿಕರು ಬರಲು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ತರಗತಿಗಳಿಗೆ ಹೋಗಲು ಭಯಪಡುವಂತಾಗಿದೆ. ಆದ್ದರಿಂದ ಕಾಡಾನೆಗಳ ಹಾವಳಿ ನಿಯಂತ್ರಿಸಲು ಅರಣ್ಯ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಪೌರಾಯುಕ್ತರ ವರ್ಗಾವಣೆ ಶಿಫಾರಸ್ಸಿಗೆ ನಗರಸಭೆ ಸದಸ್ಯರ ಸರ್ವಾನುಮತ ತೀರ್ಮಾನ





ಮಡಿಕೇರಿ ನಗರಸಭೆ ಅಧ್ಯಕ್ಷೆ ಅನಿತಾ ಪೂವಯ್ಯ ತುರ್ತು ಸಭೆಯಲ್ಲಿ ಅಧ್ಯಕ್ಷತೆಯಲ್ಲಿ ಪೌರಾಯುಕ್ತರ ವರ್ಗಾವಣೆಗೆ ಸರ್ಕಾರಕ್ಕೆ ಶಿಫಾರಸ್ಸು ಸಲ್ಲಿಸಲು ಎಲ್ಲಾ ಸದ್ಯಸರು ಕೈ ಎತ್ತಿ ಸಹಮತ ಸೂಚಿಸಿದರು.

ಮಡಿಕೇರಿ, ಜ.9–ನಗರದ ಅಭಿವೃದ್ಧಿಗೆ ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ ಎಂದು ನಗರಸಭೆ ಪೌರಾಯುಕ್ತರನ್ನು ವರ್ಗಾವಣೆಗೊಳಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಸಲ್ಲಿಸಲು ನಗರಸಭೆಯ ಆಡಳಿತ ಮತ್ತು ವಿಪಕ್ಷ ಸದಸ್ಯರು ತುರ್ತು ಸಭೆ ನಡೆಸಿ, ಸರ್ವಾನುಮತದ ತೀರ್ಮಾನ ಕೈಗೊಂಡರು.

ಮಂಗಳವಾರ ನಡೆದ ತುರ್ತು ಸಭೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅಧ್ಯಕ್ಷೆ ಅನಿತಾ ಪೂವಯ್ಯ, ಪೌರಾಯುಕ್ತರು ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಸ್ಪಂದಿಸುತ್ತಿಲ್ಲ. ಇದರಿಂದ ತೆರಿಗೆ ಪಾವತಿದಾರರಿಗೆ ಅನಾನುಕೂಲ ಹಾಗೂ ತೊಂದರೆಯಾಗುತ್ತಿದೆ. ಪೌರಾಯುಕ್ತ ನಡವಳಿಕೆ ಹಾಗೂ ಕಾರ್ಯವೈಖರಿ ಬಗ್ಗೆ ಸದಸ್ಯರು ಮತ್ತು ಸಾರ್ವಜನಿಕ ವಲಯದಲ್ಲಿ ತೀವ್ರ ಅಸಮಾಧಾನ ವಿರುವ ಹಿನ್ನೆಲೆಯಲ್ಲಿ ಪುರಸಭೆ ಅಧಿನಿಯಮ ಪ್ರಕಾರ ಪೌರಾಯುಕ್ತರ ವರ್ಗಾವಣೆ ಸಂಬಂಧ ತುರ್ತುಸಭೆ ಕರೆಯಲಾಗಿದೆ. ಸದಸ್ಯರು ತಮ್ಮ ಅಭಿಪ್ರಾಯ ಹಾಗೂ ಸಲಹೆ ಸೂಚನೆಗಳನ್ನು ತಿಳಿಸುವಂತೆ ಹೇಳಿದರು.

ಇದೇ ವೇಳೆ ಎಸ್‌ಡಿಪಿಐ ಸದಸ್ಯ ಅಮೀನ್ ಮೊಹ್ಸಿನ್, ಬಿಜೆಪಿ ಸದಸ್ಯರಾದ ಅರುಣ್ ಶೆಟ್ಟಿ ಹಾಗೂ ಕೆ.ಎಸ್.ರಮೇಶ್ ಮಾತನಾಡಿ, ಪೌರಾಯುಕ್ತರ ವರ್ಗಾವಣೆಗೆ ಸಂಬಂಧ ಸರ್ವ ಸದಸ್ಯರ ಸಹಮತ ವಿರುವ ಹಿನ್ನೆಲೆಯಲ್ಲಿ ಒಬ್ಬೊಬ್ಬರ ಅಭಿಪ್ರಾಯ ಕೇಳುವ ಬದಲಿಗೆ ಎಲ್ಲರೂ ಕೈ ಎತ್ತಿ ಸಹಮತ ಸೂಚಿಸುವುದು ಒಳ್ಳೆಯದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ನಂತರ ಆಡಳಿತ ಮತ್ತು ವಿರೋಧ ಪಕ್ಷದ ಸದಸ್ಯರು ಪಕ್ಷಭೇದ ಮರೆತು ಕೈ ಎತ್ತುವ ಮೂಲಕ ಸಹಮತ ವ್ಯಕ್ತಪಡಿಸಿ, ಪೌರಾಯುಕ್ತರ ವರ್ಗಾವಣೆಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆ ಒಪ್ಪಿಗೆ ಸೂಚಿಸಿದರು. ಸಭೆಯಲ್ಲಿ ಉಪಾಧ್ಯಕ್ಷೆ ಸವಿತಾ ರಾಕೇಶ್ ಹಾಗೂ ಸದ್ಯರು ಉಪಸ್ಥಿತರಿದ್ದರು.

> ನಗರಸಭೆಯಲ್ಲಿ ಕಡತಗಳ ವಿಲೇವಾರಿ, ಫಾರಂ ನಂ–3 ಹಾಗೂ ಖಾತೆ ವರ್ಗಾವಣೆ ಸಂಬಂಧ ಕೆಲಸ ಕಾರ್ಯಗಳು ನಡೆಯುತ್ತಿಲ್ಲ. ಈ ಕುರಿತು ಸಾರ್ವಜನಿಕರಿಂದ ಸದಸ್ಯರಿಗೆ ದೂರು ಬಂದ ಹಿನ್ನೆಲೆಯಲ್ಲಿ ತುರ್ತು ಸಭೆ ಕರೆದು ಪೌರಾಯುಕ್ತರ ವರ್ಗಾವಣೆಗೆ ಸರ್ಕಾರಕ್ಕೆ ಮನವಿ ಮಾಡುವಂತೆ ತೀರ್ಮಾನ ಕೈಗೊಳ್ಳಲಾಗಿದೆ.
>
> -ಅನಿತಾ ಪೂವಯ್ಯ, ನಗರಸಭೆ ಅಧ್ಯಕ್ಷೆ

ಯುವಜನತೆ ಜಾನಪದ ಕಲೆ ಉಳಿಸಬೇಕು

● ಶಾಸಕ ಎ.ಆರ್.ಕೃಷ್ಣಮೂರ್ತಿ ಕಿವಿಮಾತು ● ಸಂತೇಮರಹಳ್ಳಿಯ ಪಪೂ ಕಾಲೇಜಿನಲ್ಲಿ ಯುವ ಸೌರಭ



ಸಂತೇಮರಹಳ್ಳಿಯ ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ 'ಯುವ ಸೌರಭ 2024'ರ ಸಾಂಸ್ಕೃತಿಕ ಕಾರ್ಯಕ್ರಮವನ್ನು ಶಾಸಕ ಎ.ಆರ್.ಕೃಷ್ಣಮೂರ್ತಿ ಉದ್ಘಾಟಿಸಿದರು. ಡಿಡಿಪಿಐ ಮಂಜುನಾಥ ಪ್ರಸನ್ನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಗುರುಲಿಂಗಯ ಮತ್ತಿತರರು ಇದ್ದರು.

> ನಶಿಸಿಹೋಗುತ್ತಿರುವ ಜಾನಪದ ಕಲೆಯನ್ನು ಉಳಿಸಿ ಬೆಳೆಸಿ ಕಾಪಾಡಿಕೊಂಡು ಹೋಗಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಯುವ ಸೌರಭ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ನಿಟ್ಟಿನಲ್ಲಿ 15 ರಿಂದ 30 ವರ್ಷದವರಲ್ಲಿ ಕಲಾ ಪ್ರತಿಭೆಯನ್ನು ಗುರುತಿಸಿ, ಅನಾವರಣಗೊಳಿಸಲು ನಡೆಸುತ್ತಿರುವ ಈ ವಿನೂತನ ಕಾರ್ಯಕ್ರಮದ ಸದುಪಯೋಗವನ್ನು ಯುವಜನರು ಪಡೆಯಬೇಕು.
>
> - ಗುರುಲಿಂಗಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ

ಚಾಮರಾಜನಗರ, ಜ.9–ಯುವಜನತೆ ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗದೆ ನಮ್ಮ ಜಾನಪದ ಕಲೆ ಹಾಗೂ ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ಉಳಿಸಿ, ಬೆಳೆಸಲು ಮಾನಸಿಕವಾಗಿ ಸಿದ್ಧರಾಗಬೇಕು ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದರು.

ತಾಲೂಕಿನ ಸಂತೇಮರಹಳ್ಳಿಯ ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಮಂಗಳವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ 'ಯುವ ಸೌರಭ 2024'ರ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು, ಯುವಕರು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗುತ್ತಿದ್ದಾರೆ. ತಂದೆ–ತಾಯಿಗಳನ್ನು ಗೌರವಿಸುವಂತೆ ನಮ್ಮ ಜಾನಪದ ಕಲೆ, ಸಂಸ್ಕೃತಿಯನ್ನು ಗೌರವಿಸಬೇಕು ಎಂದರು. ಚಾಮರಾಜನಗರ ಜಾನಪದ ಕಲೆಗಳ ತವರೂರು ಹಾಗೂ ಕಲೆಯ ಬೀಡಾಗಿದೆ. ಮಲೆಮಹದೇಶ್ವರರು, ಬಿಳಿಗಿರಿ ರಂಗನಾಥಸ್ವಾಮಿ, ಮಂಟೇಸ್ವಾಮಿ, ಸಿದ್ದಾಪ್ಪಾಜಿ ಅವರು ನಾಡಿನುದ್ದಕ್ಕೂ ನಡೆದಾಡಿ ಜಾನಪದ ಸಂಸ್ಕೃತಿಯನ್ನು ಪಸರಿಸಿದ ಕಾವ್ಯಗಳು ಇಂದು ಮನೆ ಮಾತಾಗಿವೆ. ವಿದ್ಯಾರ್ಥಿಗಳು ಶಾಲಾ–ಕಾಲೇಜು ದಿನಗಳಲ್ಲಿ ಕಲೆ, ಸಂಸ್ಕೃತಿ, ಕ್ರೀಡೆ ಸೇರಿದಂತೆ ಇತರೆ ಪಠ್ಯೇತರ ಚಟುವಟಿಕೆಗಳಲ್ಲಿ ಹೆಚ್ಚಾಗಿ ಭಾಗವಹಿಸಲು ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಜಾನಪದ ಕಲೆಗಳಲ್ಲಿ ಫಿನ್‌ಲ್ಯಾಂಡ್ ಮೊದಲ ಸ್ಥಾನದಲ್ಲಿದ್ದು, ನಂತರದ 2ನೇ ಸ್ಥಾನದಲ್ಲಿ ಭಾರತವಿದೆ. ಭಾರತದಲ್ಲಿ ಕರ್ನಾಟಕ ಜಾನಪದ ಕಲೆ ಪ್ರಸ್ತುತ ಪಡಿಸುವಲ್ಲಿ ಪ್ರಥಮ ಸ್ಥಾನದಲ್ಲಿದೆ. ಡಾ.ರಾಜ್‌ಕುಮಾರ್ ನಮ್ಮ ಜಿಲ್ಲೆಯ ಹೆಮ್ಮೆಯಾಗಿದ್ದಾರೆ. ಪೌರಾಣಿಕ ಹಾಗೂ ಸಾಮಾಜಿಕ ಪಾತ್ರಗಳಿಗೆ ಜೀವ ತುಂಬುತ್ತಿದ್ದ ರಾಜ್‌ಕುಮಾರ್ ಅವರನ್ನು ನಾವೆಲ್ಲರೂ ಆದರ್ಶವಾಗಿಟ್ಟು ಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ ಮಾತನಾಡಿ, ಯುವಜನತೆ ತಮ್ಮಲ್ಲಿ ಅಡಗಿರುವ ಕಲಾಪ್ರತಿಭೆಯನ್ನು ಹೊರಸೂಸಲು ಯುವ ಸೌರಭ ಉತ್ತಮ ವೇದಿಕೆಯಾಗಿದೆ. ಸಂಸ್ಕೃತಿ ನಿಂತ ನೀರಾಗಬಾರದು. ಅದು ಎಲ್ಲಾ ಕಾಲಕ್ಕೂ ಸಮಸ್ಥಿತಿ ಕಾಯ್ದುಕೊಳ್ಳಬೇಕಾದರೆ ಎಲ್ಲಾ ಕಾಲಮಾನದಲ್ಲೂ ಕ್ರೀಯಶೀಲವಾಗಿರಬೇಕು. ಜಾನಪದ ಕಲೆಗಳ ಪ್ರದರ್ಶನ ನಿರಂತರವಾಗಿರಬೇಕು. ಯುವಜನತೆ ಇದನ್ನು ಅರಿತು ಮುನ್ನಡೆಯಬೇಕು. ಪ್ರಸ್ತುತ ದಿನಗಳಲ್ಲಿ ಕಲೆ, ಸಂಸ್ಕೃತಿ ವ್ಯಾಪಾರೀಕರಣಗೊಳ್ಳುತ್ತಿರುವುದನ್ನು ಯುವಜನತೆ ತಡೆಯಬೇಕಿದೆ ಎಂದರು.

ಸಂತೇಮರಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಜಮ್ಮ, ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಪ್ರಿಯಾಶಂಕರ್, ಉಪಪ್ರಾಂಶುಪಾಲ ಶಿವಣ್ಣ, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಹದೇವಸ್ವಾಮಿ, ಮುಖಂಡರಾದ ಎಚ್.ವಿ.ಚಂದ್ರು ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಇದೇ ವೇಳೆ ಸುಗಮ ಸಂಗೀತ, ವಚನ ಸಂಗೀತ, ಜಾನಪದ ಗೀತೆ, ಸಮೂಹ ನೃತ್ಯ, ನೃತ್ಯ ರೂಪಕ, ನಾಟಕ, ಜನಪದ ಪ್ರದರ್ಶನ, ಯಕ್ಷಗಾನ, ಮೂಡಲ ಪ್ರಾಯ, ಬಯಲಾಟ, ಗೊಂಬೆಮೇಳ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ನಡೆಯಿತು.

ಪರಿಸರ ಪ್ರೇಮ ಎಲ್ಲರಲ್ಲೂ ರಕ್ತಗತವಾಗಿ ಬರಬೇಕು



ಚಂದಕವಾಡಿ ಸರ್ಕಾರಿ ಪಬ್ಲಿಕ್ ಶಾಲೆಯ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ ಚಾಲನೆ ನೀಡಿದರು.

ಚಾಮರಾಜನಗರ, ಜ.9– ಪರಿಸರ ಪ್ರೇಮ ಎಲ್ಲರಲ್ಲೂ ರಕ್ತಗತವಾಗಿ ಬರಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ ಹೇಳಿದರು.

ತಾಲೂಕಿನ ಚಂದಕವಾಡಿ ಸರ್ಕಾರಿ ಪಬ್ಲಿಕ್ ಶಾಲೆಯ ಆವರಣದಲ್ಲಿ ಬೆಂಗಳೂರು ಪುಳಿಯೋಗರೆ ಹೌಸ್, ಈಶ್ವರಿ ಸೋಷಿಯಲ್ ಟ್ರಸ್ಟ್ ಸಹಯೋಗದಲ್ಲಿ 100 ಸಾಲುಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪರಿಸರಪ್ರೇಮಿ ವೆಂಕಟೇಶ್ ಅವರು ಚಾಮರಾಜನಗರದಲ್ಲಿ ಗಿಡಗಳನ್ನು ನೆಟ್ಟು ಪರಿಸರ ಮಹತ್ವ ಸಾರಿದ್ದಾರೆ. ಮಹದೇವಸ್ವಾಮಿ ಕೂಡ 100 ಗಿಡಗಳನ್ನು ನಡೆಯುವ ಮೂಲಕ ಪರಿಸರ ಸಂಕರಕ್ಷಣೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಅವರ ಪಾದರಸ ವ್ಯಕ್ತಿತ್ವವನ್ನು ನಾವೆಲ್ಲರೂ ಅಳವಡಿಸಿಕೊಂಡರೆ ಪರಿಸರ ಉಳಿಸಬಹುದು ಎಂದರು.

ಮರ, ಗಿಡಗಳು ಪ್ರಕೃತಿಗಾಗಿ ತ್ಯಾಗ ಮಾಡುತ್ತವೆ. ಯಾವುದೇ ಸ್ವಾರ್ಥವನ್ನು ನಿರೀಕ್ಷೆ ಮಾಡದೆ ತನ್ನಷ್ಟಕ್ಕೆ ಬೆಳೆದು ಮರವಾಗಿ ಹೂ, ಹಣ್ಣು, ಉತ್ತಮ ಆಮ್ಲಜನಕವನ್ನು ನಮಗೆ ಕೊಟ್ಟು ಪ್ರಯೋಜನ ನೀಡುತ್ತವೆ. ಪ್ರಾಣಿ, ಪಕ್ಷಿಗಳಿಗೆ ಆಶ್ರಯ ಕೊಡುತ್ತವೆ. ಮರ, ಗಿಡಗಳ ರೀತಿ ನಾವು ಬೇರೆಯವರಿಗೆ ಪ್ರಯೋಜನವಾಗಿ ಬದುಕಬೇಕು. ಇಲ್ಲದಿದ್ದರೆ ಮನುಷ್ಯನ ಬದುಕಿಗೆ ಅರ್ಥವಿಲ್ಲ. ಶಿಕ್ಷಕರು ಪಾಠ ಮಾಡುವಾಗ ಮಕ್ಕಳಿಗೆ ಪ್ರಕೃತಿಯ ಬಗ್ಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಣ್ಣೇಗೌಡ ಮಾತನಾಡಿ, ಸಾರ್ವಜನಿಕ ಶಿಕ್ಷಣ ಇಲಾಖೆ ಶಾಲಾವರಣದಲ್ಲಿ ಸಸ್ಯಶಾಮಲ ಕಾರ್ಯಕ್ರಮದಲ್ಲಿ 4 ಸಾವಿರ ಗಿಡ ನೆಡುವ ಯೋಜನೆ ಹಾಕಿಕೊಂಡಿದೆ. 3 ಸಾವಿರ ಗಿಡಗಳನ್ನು ನೆಟ್ಟು ಶಾಲೆಯ ಹಸಿರೀಕರಣ, ಅಂದ ಹೆಚ್ಚಿಸಿ ಶಾಲೆ ಉತ್ತಮ ವಾತಾವರಣ ನಿರ್ಮಿಸಲಾಗುತ್ತಿದೆ. ಮುಂದಿನ ವರ್ಷ ಮತ್ತಷ್ಟು ಗುರಿ ಹೆಚ್ಚಿಸುವಂತೆ ಡಿಡಿಪಿಐ ನಿರ್ದೇಶನ ನೀಡಿದ್ದಾರೆ ಎಂದರು.

ಗ್ರಾಪಂ ಅಧ್ಯಕ್ಷ ನಟರಾಜು, ಈಶ್ವರಿ ಸೋಷಿಯಲ್ ಟ್ರಸ್ಟ್ ಅಧ್ಯಕ್ಷ ಸಿ.ಎಂ. ವೆಂಕಟೇಶ್, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾನಿಲಯದ ಮುಖ್ಯ ಸಂಚಾಲಕಿ ಬಿ.ಕೆ.ದಾನೇಶ್ವರಿ, ಸಬ್ ಇನ್ಸ್‌ಪೆಕ್ಟರ್ ಆರ್.ಶ್ರೀಕಾಂತ್, ಬೆಂಗಳೂರು ಪುಳಿಯೊಗರೆ ಹೌಸ್ ವ್ಯವಸ್ಥಾಪಕ ಮಹದೇವಸ್ವಾಮಿ, ಕರ್ನಾಟಕ ಪಬ್ಲಿಕ್ ಸ್ಕೂಲ್ ಪ್ರಾಂಶುಪಾಲ ಹೆಚ್.ಎನ್.ಸ್ವಾಮಿ, ಉಪಪ್ರಾಂಶುಪಾಲ ಚಂದ್ರಶೇಖರ್, ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ಜಾನಪದ ಗಾಯಕ ಸಿ.ಎಂ.ನರಸಿಂಹಮೂರ್ತಿ, ಹೆಬ್ಬಸೂರು ಗಡ್ಡ ಮಹೇಶ್, ಸೋಮು, ನವೀನ, ಮೂರ್ತಿ ಇತರರು ಹಾಜರಿದ್ದರು.



ಬೇಗೂರು ಗ್ರಾಮದ ಶ್ರೀಕಾಳಿಕಾಂಭ ಟಿಂಬರ್ ಆಂಡ್ ಪ್ಲೇಯಿಂಗ್ ಶಾಪ್‌ನಲ್ಲಿ ರಾಜ್ಯ ವಿಶ್ವಕರ್ಮ ನಿಗಮದ ಮಾಜಿ ಅಧ್ಯಕ್ಷ ನಂದಕುಮಾರ್ ನೇತೃತ್ವದಲ್ಲಿ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ರಂಗೂಪುರ ಮಹೇಶ್, ಸಿದ್ದು ಆಚಾರ್, ಪ್ರಕಾಶ್ ಮತ್ತಿತರರು ಹಾಜರಿದ್ದರು.

ಸಂಸ್ಕಾರ ಕಲಿತರೆ ಉತ್ತಮ ಪ್ರಜೆಯಾಗಲು ಸಾಧ್ಯ



ಗುಂಡ್ಲುಪೇಟೆಯ ವಿನಾಯಕ ಕಾನ್ವೆಂಟ್‌ನಲ್ಲಿ ಆಯೋಜಿಸಿದ್ದ ಸ್ಟಾರ್ ಲೈಟ್ ಫೆಸ್ಟಿವಲ್ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಗುಂಡ್ಲುಪೇಟೆ, ಡಿ.9– ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಶಿಸ್ತು ಮತ್ತು ಸಂಸ್ಕಾರವನ್ನು ಕಲಿತಾಗ ಮಾತ್ರ ಉತ್ತಮ ಪ್ರಜೆಯಾಗಲು ಸಾಧ್ಯ ಎಂದು ಸಾಹಿತಿ ಡಾ.ಪಿ.ನಾಗಣ್ಣ ಅಭಿಪ್ರಾಯಪಟ್ಟರು.

ಪಟ್ಟಣದ ವಿನಾಯಕ ಕಾನ್ವೆಂಟ್‌ನಲ್ಲಿ ಆಯೋಜಿಸಿದ್ದ ಸ್ಟಾರ್‌ಲೈಟ್ ಫೆಸ್ಟಿವಲ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣಕ್ಕೆ ಒತ್ತು ನೀಡಬೇಕಾಗಿದೆ. ಮಕ್ಕಳ ಮನಸ್ಸು ಕಚ್ಚಾವಸ್ತು ಇದ್ದಂತೆ ಇವರಿಗೆ ಬಾಲ್ಯದಿಂದಲೇ ವಿದ್ಯಾಭ್ಯಾಸದೊಂದಿಗೆ ಶಿಸ್ತು ಹಾಗೂ ಸಂಸ್ಕಾರ ಕಲಿಸಬೇಕಾದ ಅಗತ್ಯವಿದೆ ಎಂದರು.

ಸರ್ಕಲ್ ಇನ್ಸ್‌ಪೆಕ್ಟರ್ ಪರಶಿವಮೂರ್ತಿ ಮಾತನಾಡಿ, ಇತ್ತೀಚೆಗೆ ಬಾಲಾಪರಾಧಗಳ ಸಂಖ್ಯೆ ಹೆಚ್ಚಾಗುತ್ತಿವೆ. ಪಾಲಕರು ಶಾಲಾ–ಕಾಲೇಜುಗಳಿಗೆ ಹೋಗುತ್ತಿರುವ ತಮ್ಮ ಮಕ್ಕಳ ಚಟುವಟಿಕೆ ಬಗ್ಗೆ ಗಮನವಿಡಬೇಕು ಎಂದರು. ಕಾರ್ಯಕ್ರಮದಲ್ಲಿ ಕನ್ನಡ ಚಳುವಳಿಗಾರ ಮೂಗೂರು ನಂಜುಂಡಸ್ವಾಮಿ, ನಟ ಹನುಮಂತೇಗೌಡ, ಬಿಇಓ ರಾಜಶೇಖರ್, ಸಂಸ್ಥೆಯ ಅಧ್ಯಕ್ಷ ಕೆ.ಎಚ್.ನಂಜಪ್ಪ, ಕಾರ್ಯದರ್ಶಿ ಕೆ.ಎನ್.ಮಹದೇವ ಸ್ವಾಮಿ, ಮುಖ್ಯಸ್ಥರಾದ ಚಂದ್ರಶೇಖರಪ್ಪ, ಲಕ್ಷ್ಮೀ ಚಂದ್ರಶೇಖರಪ್ಪ ಪ್ರಾಂಶುಪಾಲ ಸುಭಾಷ್ ಇದ್ದರು.

ಮಹದೇಶ್ವರ ರಥ ನಿರ್ಮಾಣಕ್ಕೆ ನೆರವು ನೀಡಿ



ಚಾಮರಾಜನಗರ ತಾಲೂಕಿನ ಯಡಬೆಟ್ಟ ಮಹದೇಶ್ವರಸ್ವಾಮಿ ಟ್ರಸ್ಟ್‌ನ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು. ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಗೌಡಿಕೆ ನಾಗಣ್ಣ, ಎಂ.ಎನ್.ಮಹದೇವ್, ಪಟೇಲ್ ಗುರುಮಲ್ಲಪ್ಪ ಮತ್ತಿತರರು ಇದ್ದರು.

ಚಾಮರಾಜನಗರ, ಜ.9– ಶಿಥಿಲಗೊಂಡಿರುವ ತಾಲೂಕಿನ ಯಡಬೆಟ್ಟ ಶ್ರೀ ಮಹದೇಶ್ವರಸ್ವಾಮಿಯ ರಥ ನಿರ್ಮಾಣಕ್ಕೆ ದಾನಿಗಳು ನೆರವು ನೀಡಬೇಕು ಎಂದು ಮಹದೇಶ್ವರ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಗೌಡಿಕೆ ನಾಗಣ್ಣ ಮನವಿ ಮಾಡಿದರು.

ಯಡಬೆಟ್ಟ ಮಹದೇಶ್ವರಸ್ವಾಮಿ ಟ್ರಸ್ಟ್‌ನ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಚಾಮರಾಜನಗರ ತಾಲೂಕಿನ ಪ್ರಸಿದ್ಧ ಯಡಬೆಟ್ಟ ಮಹದೇಶ್ವರ ಸ್ವಾಮಿ ದೇವಸ್ಥಾನದ ಅಭಿವೃದ್ಧಿಗೆ ಸುತ್ತಮುತ್ತಲಿನ ಗ್ರಾಮಸ್ಥರ ಸಹಕಾರದೊಂದಿಗೆ ಟ್ರಸ್ಟ್ ರಚಿಸಿ, ಅಭಿವೃದ್ಧಿಪಡಿಸಲು ಮುಂದಾಗಿದ್ದೇವೆ. ಪ್ರತಿ ಅಮಾವಾಸ್ಯೆ, ವಿಶೇಷ ಹಬ್ಬ ಹರಿದಿನಗಳಲ್ಲಿ ಸ್ವಾಮಿಗೆ ಪೂಜಾ ಕಾರ್ಯ ವೈಭವವಾಗಿ ನಡೆಯುತ್ತಿದೆ. ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ ಎಂದರು.

ಪ್ರತಿವರ್ಷದ ದೀಪಾವಳಿ ಹಬ್ಬದ ದಿನದಂದು ಮಹದೇಶ್ವರಸ್ವಾಮಿಯ ರಥೋತ್ಸವ ನಡೆಯುತ್ತದೆ. ಹಳೇ ಕಾಲದ ರಥ ಇದ್ದಾಗಿದ್ದು, ಸಂಪೂರ್ಣವಾಗಿ ಶಿಥಿಲಗೊಂಡಿದೆ. ಪಿಡಬ್ಲ್ಯುಡಿ ಇಲಾಖೆ ಈ ರಥ ಸುರಕ್ಷತಾವಲ್ಲ ಎಂದು ಪ್ರಮಾಣ ಪತ್ರ ನೀಡಿದ್ದಾರೆ. ಆದ್ದರಿಂದ ಹೊಸ ರಥ ಸಿದ್ಧಗೊಳಿಸಲು ಭಕ್ತರು ನೆರವು ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಟ್ರಸ್ಟ್‌ನ ಕಾರ್ಯದರ್ಶಿ ಎಂ.ಎನ್.ಮಹದೇವ್, ಸಹ ಕಾರ್ಯದರ್ಶಿ, ಪಟೇಲ್ ಗುರುಮಲ್ಲಪ್ಪ, ಖಜಾಂಚಿ ಎಂ.ಕುಮಾರಸ್ವಾಮಿ, ನಿರ್ದೇಶಕರಾದ ಮಿಂಚು ನಾಗೇಂದ್ರ ನಂಜುಂಡೇರಾಜ್ ಅರಸು, ಎಂ.ಲಿಂಗರಾಜು, ಶಿವಣ್ಣಶೆಟ್ಟಿ, ಅರ್ಚಕರಾದ ಎಂ.ಗುರುಸ್ವಾಮಿ, ನಾಗಭೂಷಣ ಆರಾಧ್ಯ ಇತರರು ಇದ್ದರು.

ರೈಲು ಹಳಿಯಲ್ಲಿ ಯುವಕನ ಶವ ಪತ್ತೆ

ಕೊಲೆ ಆರೋಪ: ಪೋಷಕರ ಪ್ರತಿಭಟನೆ



ಕೊಳ್ಳೇಗಾಲ, ಜ.9– ಬೆಂಗಳೂರಿನ ಯಶವಂತಪುರ ರೈಲು ಹಳಿಯಲ್ಲಿ ಕೊಳ್ಳೇಗಾಲದ ಲಿಂಗಣಾಪುರ ಬಡಾವಣೆಯ ಯುವಕನ ಶವ ಸೋಮವಾರ ಪತ್ತೆಯಾಗಿದ್ದು, ಕೊಲೆ ಮಾಡಲಾಗಿದೆ ಎಂದು ಆರೋಪಿಸಿ ಪೋಷಕರು ಹಾಗೂ ಸಂಬಂಧಿಕರು ಕೊಳ್ಳೇಗಾಲ ಪಟ್ಟಣ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಿದರು.

ಲಿಂಗಣಾಪುರ ಬಡಾವಣೆಯ ನಿವಾಸಿ ಮಹದೇವಪ್ಪ ಹಾಗೂ ದಾಕ್ಷಾಯಿಣಿ ದಂಪತಿಯ ಪುತ್ರ ನಂದೀಶ್ (27) ಶವ ಪತ್ತೆಯಾಗಿದ್ದು, ಈತನ ಮೇಲೆ ತಾಲೂಕಿನ ಸಿದ್ದಯ್ಯನಪುರ ಗ್ರಾಮದ ಗುಂಪೊಂದು ಕ್ಷುಲ್ಲಕ ಕಾರಣಕ್ಕೆ ಹಲ್ಲೆ ನಡೆಸಿ, ಕೊಲೆ ಮಾಡಲಾಗಿದೆ. ನಂತರ ಬೆಂಗಳೂರಿನ ದೀಪಾಂಜಲಿ ನಗರ ವ್ಯಾಪ್ತಿಯ ಯಶವಂತಪುರ ರೈಲು ಹಳಿ ಮೇಲೆ ಬೀಸಲಾಡಲಾಗಿದೆ. ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ, ಶಿಕ್ಷೆ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಇದೇ ವೇಳೆ ಪ್ರತಿಭಟನಾಸ್ಥಳಕ್ಕೆ ಆಗಮಿಸಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದ್ದೇಶ್, ಹಲ್ಲೆ ನಡೆಸಿದವರು ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ನಡೆಸುವುದಾಗಿ ಭರವಸೆ ನೀಡಿದರು. ನಂತರ ಪ್ರತಿಭಟನೆ ಕೈ ಬಿಡಲಾಯಿತು.

ಮೈಸೂರು ಮಿತ್ರ ಬುಧವಾರ 10 ಜನವರಿ 2024

ಒಂದನೇ ಪುಟದಿಂದ

28ರಲ್ಲಿ 26 ಗೆಲ್ಲಲೇಬೇಕು!

ನಂತರ ಕಾಂಗ್ರೆಸ್‌ಗೆ ಬಂದ ಮತ ಪ್ರಮಾಣದ ಆಧಾರದ ಮೇಲೆ ಈ ಹಿಂದೆ ವರಿಷ್ಠರು ರಾಜ್ಯ ನಾಯಕರಿಗೆ ಕನಿಷ್ಠ 20 ಸ್ಥಾನಗಳನ್ನು ಗೆಲ್ಲಬೇಕೆಂದು ಗುರಿ ನೀಡಿದ್ದರು.

ಕರ್ನಾಟಕದ ಮಟ್ಟಿಗೆ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಎಲ್ಲಾ 28 ಸ್ಥಾನಗಳನ್ನು ಗೆಲ್ಲುವ ಗುರಿ ಇಟ್ಟುಕೊಂಡು ಈಗಾಗಲೇ ಪ್ರಕ್ರಿಯೆ ಆರಂಭಿಸಿವೆ.

ಇದನ್ನು ಸವಾಲಾಗಿ ಸ್ವೀಕರಿಸಿರುವ ಕಾಂಗ್ರೆಸ್ ವರಿಷ್ಠರು 26ರ ಗುರಿಯನ್ನು ರಾಜ್ಯ ನಾಯಕರಿಗೆ ನೀಡಿದ್ದಾರೆ. ಅಷ್ಟೇ ಅಲ್ಲದೆ ಸಂಪನ್ಮೂಲದಲ್ಲಿ ಬಲಿಷ್ಠವಾಗಿರುವ ಸಚಿವರನ್ನೇ ಪ್ರತಿ ಕ್ಷೇತ್ರಕ್ಕೂ ನೇಮಕ ಮಾಡಿದ್ದಾರೆ. ಮೂರು ಉಪಮುಖ್ಯಮಂತ್ರಿ ಬೇಡಿಕೆ ಹಿನ್ನೆಲೆಯಲ್ಲಿ ನಿನ್ನೆ ರಾತ್ರಿ ನಗರಕ್ಕೆ ಧಾವಿಸಿದ ರಾಜ್ಯ ಉಸ್ತುವಾರಿ ಹೊಣೆ ಹೊತ್ತ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಉಪಮುಖ್ಯಮಂತ್ರಿ ಹುದ್ದೆ ಆಕಾಂಕ್ಷಿಗಳಾದ ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ. ಪಾಟೀಲ್, ಸತೀಶ್ ಜಾರಕಿಹೊಳಿ ಸೇರಿದಂತೆ ಕೆಲವು ಹಿರಿಯರನ್ನು ತಾವು ತಂಗಿದ್ದ ಹೋಟೆಲ್‌ಗೆ ಕರೆಸಿಕೊಂಡು ಸುದೀರ್ಘ ಚರ್ಚೆ ಮಾಡಿದ್ದಾರೆ.

ಬೇಡಿಕೆ ಮತ್ತು ಇತರ ವಿಚಾರಗಳನ್ನು ಸದ್ಯಕ್ಕೆ ಬಿಡಿ, ಬಿಜೆಪಿ-ಜೆಡಿಎಸ್ ಮಣಿಸಲು ಗಮನಹರಿಸಿ ಎಂದು ಕಿವಿಮಾತು ಹೇಳಿದ್ದಾರೆ. ಅಷ್ಟೇ ಅಲ್ಲ, ಎಐಸಿಸಿ ಅಧ್ಯಕ್ಷರು ಮತ್ತು ಇತರ ಮುಖಂಡರ ಸಮ್ಮುಖದಲ್ಲೇ ಚುನಾವಣಾ ಸಿದ್ಧತೆ, ಅಭ್ಯರ್ಥಿಗಳ ಆಯ್ಕೆ ಹಾಗೂ ಉಳಿದ ವಿಚಾರಗಳ ಬಗ್ಗೆ ಮುಕ್ತವಾಗಿ ಸಮಾಲೋಚನೆ ಮಾಡೋಣ ಗುರುವಾರ ದೆಹಲಿಗೆ ಬನ್ನಿ ಎಂದು ಹೇಳಿದ್ದಾರೆ. ವರಿಷ್ಠರು ನೀಡಿರುವ ಗುರಿಗೆ ಬಲ ನೀಡಲು ಸುರ್ಜೇವಾಲ ನಾಳೆ ಪ್ರದೇಶ ಕಾಂಗ್ರೆಸ್‌ನ ಎಲ್ಲಾ ಹಂತದ ಸಭೆ ಕರೆದಿದ್ದಾರೆ.

ಬೇಡಿಕೆ ಇಟ್ಟಿದ್ದೇವೆ! ಬೆದರಿಕೆ ಹಾಕಿಲ್ಲ!!

ಬಿಜೆಪಿ-ಜೆಡಿಎಸ್ ಮೈತ್ರಿ ನಂತರ ವರಿಷ್ಠರು ಇಂತಿಷ್ಟು ಕ್ಷೇತ್ರ ಗೆಲ್ಲಲೇಬೇಕೆಂದು ಗುರಿ ನೀಡಿದ್ದಾರೆ. ಗುರಿ ಮುಟ್ಟಲು ನಾವೇನು ಮಾಡಬೇಕೆಂದು ಕೆಲವು ಸಲಹೆ-ಸೂಚನೆಗಳನ್ನು ನೀಡಿದ್ದಾರೆ. ಅಭ್ಯರ್ಥಿಗಳ ಬಗ್ಗೆಯೂ ಚರ್ಚೆಯಾಗಿದೆ.

ಚುನಾವಣಾ ತಂತ್ರಗಾರಿಕೆ ಬಗ್ಗೆ ವಿಚಾರ ವಿನಿಮಯ ಮಾಡಿಕೊಂಡಿದ್ದೇವೆ, ಅವರು ಈಗಾಗಲೇ ರಾಜ್ಯದ 28 ಕ್ಷೇತ್ರಗಳ ಬಗ್ಗೆಯೂ ಮಾಹಿತಿ ಪಡೆದುಕೊಂಡಿದ್ದಾರೆ.

ಆ ಮಾಹಿತಿ ಆಧಾರವಾಗಿಯೇ ನಮ್ಮ ಸಚಿವ ಸಹೋದ್ಯೋಗಿಗಳ ಜೊತೆ ಪ್ರತ್ಯೇಕವಾಗಿ ಚರ್ಚೆ ಮಾಡಿದ್ದಾರೆ ಎಂದರು. ನಮ್ಮ ಬೇಡಿಕೆ ಈಡೇರಿಸಲಿಲ್ಲ ಎಂಬ ಮಾತ್ರಕ್ಕೆ ಸಂಘಟನೆಯಿಂದ ದೂರ ಉಳಿಯುವುದಿಲ್ಲ, ನಮಗೇನು ಗುರಿ ಕೊಡುತ್ತಾರೋ ಅದನ್ನು ತಲುಪಲು ಶ್ರಮಪಡುತ್ತೇವೆ.

ಜನವರಿ 11ರಂದು ದೆಹಲಿಯಲ್ಲಿ ಸಭೆ ನಡೆಯುತ್ತಿದೆ, ಚುನಾವಣಾ ಉಸ್ತುವಾರಿ ವಹಿಸಿರುವ ಎಲ್ಲಾ 28 ಸಚಿವರಿಗೂ ಆಹ್ವಾನ ನೀಡಿದ್ದಾರೆ, ಅಲ್ಲಿ ಏನು ಮಾರ್ಗದರ್ಶನ ನೀಡುತ್ತಾರೋ ಅದರಂತೆ ನಡೆದುಕೊಳ್ಳುತ್ತೇವೆ ಎಂದರು.

ಸುಪ್ರೀಂಕೋರ್ಟ್‌ನಲ್ಲೂ ತಿರಸ್ಕೃತ

ಸ್ಯಾಂಟ್ರೋ ರವಿ ವಿರುದ್ಧ ವರದಕ್ಷಿಣೆ ಕಿರುಕುಳ ನಿಗ್ರಹ ಕಾಯ್ದೆ 1961, ಕಲಂ 3, ಜಾತಿ ನಿಂದನೆ ಕಾಯ್ದೆ 2014 ಹಾಗೂ ಭಾರತೀಯ ದಂಡ ಸಂಹಿತೆ ಕಾಯ್ದೆ 1960ರ ಕಲಂ 506, 498 ಎ, 504, 376, 270, 313, 323ರಡಿ ಪ್ರಕರಣ ದಾಖಲಿಸಿದ್ದರು.

ಎಫ್‌ಐಆರ್ ದಾಖಲಾಗುತ್ತಿದ್ದಂತೆಯೇ ತಲೆಮರೆಸಿಕೊಂಡಿದ್ದ ಆರೋಪಿ ಸ್ಯಾಂಟ್ರೋ ರವಿಯನ್ನು 15 ದಿನಗಳ ಬಳಿಕ ಪೊಲೀಸರು ಗುಜರಾತ್‌ನಲ್ಲಿ ಬಂಧಿಸಿ ಕರೆತಂದು ಮೈಸೂರು ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ಮತ್ತೆ 6 ದಿನ ವಶಕ್ಕೆ ಪಡೆದುಕೊಂಡಿದ್ದರು. ಆತ ಅಪರಾಧ ಎಸಗಿದ್ದ ವಿಜಯನಗರ, ಶ್ರೀರಾಂಪುರ, ಕುವೆಂಪುನಗರಗಳಿಗೂ ಕರೆದೊಯ್ದು ಸ್ಥಳ ಮಹಜರು ನಡೆಸಿದ್ದ ಪೊಲೀಸರು, ಮತ್ತೆ ನ್ಯಾಯಾಲಯಕ್ಕೆ ಹಾಜರುಪಡಿಸಿದಾಗ ನ್ಯಾಯಾಧೀಶರು ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರು. ಒಂದು ವರ್ಷದಿಂದ ಮೈಸೂರು ಜೈಲಿನಲ್ಲಿರುವ ಸ್ಯಾಂಟ್ರೋ ರವಿ, ಜೈಲಿನ ಅಧಿಕಾರಿಗಳು ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ ತನ್ನನ್ನು ಬೆಂಗಳೂರು ಜೈಲಿಗೆ ವರ್ಗಾಹಿಸಬೇಕೆಂದೂ ಕೇಳಿಕೊಂಡಿದ್ದ.

ಮೈಸೂರು ಜಿಲ್ಲಾ ಸತ್ರ ನ್ಯಾಯಾಲಯದಲ್ಲಿ ಜಾಮೀನು ಅರ್ಜಿ ತಿರಸ್ಕೃತಗೊಂಡಿದ್ದರಿಂದ ರಾಜ್ಯ ಉಚ್ಛ ನ್ಯಾಯಾಲಯದಲ್ಲಿಯೂ ಸ್ಯಾಂಟ್ರೋ ರವಿ ತನ್ನ ವಕೀಲರ ಮೂಲಕ ಜಾಮೀನು ಕೋರಿ ಮನವಿ ಮಾಡಿಕೊಂಡಿದ್ದ. ಅಲ್ಲಿ ಅರ್ಜಿ ವಜಾಗೊಂಡ ಹಿನ್ನೆಲೆಯಲ್ಲಿ ಖ್ಯಾತ ವಕೀಲರಾದ ಸಿದ್ಧಾರ್ಥ ಲೂತ್ರ ಹಾಗೂ ರವೀಂದ್ರ ಕಾಮತ್ ಸುಪ್ರೀಂಕೋರ್ಟ್‌ನಲ್ಲಿ ಜಾಮೀನು ಅರ್ಜಿ ಸಲ್ಲಿಸಿದ್ದರು. ಅಂತಿಮವಾಗಿ ಗಂಭೀರ ಆರೋಪ ಎದುರಿಸುತ್ತಿರುವ ಸ್ಯಾಂಟ್ರೋ ರವಿ ಜೈಲಿನಲ್ಲೇ ಮುದ್ದೆ ಮುರಿಯುವಂತಾಗಿದೆ. ವಿಜಯನಗರ 3ನೇ ಹಂತದ ಯುವತಿ 2023ರ ಜನವರಿ 2ರಂದು ನೀಡಿದ ದೂರಿನಲ್ಲಿ ಬಿಇ ಮೆಕ್ಯಾನಿಕಲ್ ಪದವೀಧರೆಯಾದ ನನ್ನನ್ನು ಪ್ರಸಿದ್ಧ ಕಂಪನಿಯಲ್ಲಿ ಕೆಲಸ ಕೊಡಿಸುವುದಾಗಿ ಆಮಿಷವೊಡ್ಡಿ ವಿಜಯನಗರದಲ್ಲಿರುವ ಮನೆಗೆ ಕರೆದೊಯ್ದು ಸಂದರ್ಶನ ಮಾಡಿದ್ದ. ನಾನು ಆಯ್ಕೆಯಾಗಿರುವುದಾಗಿ ಮೊಬೈಲ್ ಸಂದೇಶ ಕಳುಹಿಸಿ, ನನ್ನನ್ನು ಕೆಲಸಕ್ಕೆ ಬರುವಂತೆ ಹೇಳಿ ಕರೆಸಿಕೊಂಡು 2019ರ ಮಾರ್ಚ್ 7ರಂದು ಜ್ಯೂಸ್‌ನಲ್ಲಿ ಮತ್ತು ಬರಿಸುವ ಪದಾರ್ಥ ಬೆರೆಸಿ ಪ್ರಜ್ಞೆ ತಪ್ಪಿಸಿ ಲೈಂಗಿಕ ದೌರ್ಜನ್ಯ ಎಸಗಿದ್ದಲ್ಲದೆ ತನ್ನ ನಗ್ನ ಫೋಟೋ ತೆಗೆದು ಪೊಲೀಸರಿಗೆ ದೂರು ನೀಡಿದರೆ, ಅವುಗಳ ಸಮಾಜಿಕ ಜಾಲತಾಣದಲ್ಲಿ ಹರಿಯಬಿಡುವುದಲ್ಲದೆ ಪ್ರಾಣ ತೆಗೆಯುತ್ತೇನೆಂದು ಬೆದರಿಕೆವೊಡ್ಡಿದ್ದನಲ್ಲದೆ ಕಚೇರಿಯಲ್ಲಿ 10 ಲಕ್ಷ ರೂ. ಕಳವು ಮಾಡಿರುವುದಾಗಿ ನಾನೇ ದೂರು ಕೊಡುತ್ತೇನೆಂದು ಬೆದರಿಕೆ ಹಾಕಿದ್ದ ಎಂದು ಸಂತ್ರಸ್ತೆ ದೂರಿನಲ್ಲಿ ಆರೋಪಿಸಿದ್ದರು.

ದಳಪತಿಗಳ ಮಹತ್ವದ ಸಭೆ

ಇರುವುದನ್ನು ಅರಿತಿರುವ ಕುಮಾರಸ್ವಾಮಿ ಎಲ್ಲರನ್ನು ಒಗ್ಗಟ್ಟಿನಿಂದ ಕರೆದೊಯ್ಯಲು ತಾವೇ ಖುದ್ದು ಅಖಾಡಕ್ಕಿಳಿದಿದ್ದು, ಸ್ಪರ್ಧೆ ಮಾಡಿದರೆ ಗೆಲುವಿನ ಬಗ್ಗೆ ಚರ್ಚೆಗಳು ನಡೆಯುತ್ತಿದೆ.

ಕುಮಾರಸ್ವಾಮಿ ಮೋದಿ ಸಂಪುಟ ಸೇರುವ ಸಾಧ್ಯತೆ: ಸಂಕ್ರಾಂತಿ ಬಳಿಕ ಕೇಂದ್ರ ಸಂಪುಟ ವಿಸ್ತರಣೆ ಆಗಲಿದ್ದು, ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಮೋದಿ ಸಂಪುಟ ಸೇರುವ ಸಾಧ್ಯತೆ ಇದೆ ಎನ್ನಲಾಗಿದೆ. ಕುಮಾರಸ್ವಾಮಿ ಕೃಷಿ ಮಂತ್ರಿಯಾದರೆ ಹಳೇ ಮೈಸೂರು ಭಾಗದಲ್ಲಿ ಬಿಜೆಪಿಗೆ ಲಾಭವಾಗಲಿದ್ದು, ಈ ನಿಟ್ಟಿನಲ್ಲಿ ಕುಮಾರಸ್ವಾಮಿ ವರ್ಚಸ್ಸು ಬಳಸಿಕೊಳ್ಳಲು ಬಿಜೆಪಿ ಸಿದ್ಧತೆ ನಡೆಸುತ್ತಿದೆ. ಕುಮಾರಸ್ವಾಮಿ ಮಂತ್ರಿಯಾದರೆ ಕೇಂದ್ರ ರಾಜಕಾರಣಕ್ಕೆ ಹೋಗುವುದು ಪಕ್ಕಾ, ಹೆಚ್ಚಿಕೆ ಆರು ತಿಂಗಳಲ್ಲಿ ಸಂಸತ್ ಸದಸ್ಯರಾಗಬೇಕು. ಸದ್ಯ ಸಾರ್ವತ್ರಿಕ ಚುನಾವಣೆಗೆ ಕೇವಲ ಮೂರ್ನಾಲ್ಕು ತಿಂಗಳು ಬಾಕಿ ಇರುವುದರಿಂದ ಒಟ್ಟಿಗೆ ಸಂಸತ್ ಸಾರ್ವತ್ರಿಕ ಚುನಾವಣೆಗೆ ಸ್ಪರ್ಧಿಸಬೇಕೆಂಬುದು ಕುಮಾರಸ್ವಾಮಿ ಲೆಕ್ಕಾಚಾರ. ಸದ್ಯ ಬಿಜೆಪಿ ಜೆಡಿಎಸ್‌ಗೆ ಮೂರ್ನಾಲ್ಕು ಕ್ಷೇತ್ರ ಬಿಟ್ಟುಕೊಡಲಿದ್ದು, ಮಂಡ್ಯ, ಹಾಸನ, ತುಮಕೂರು ಹಾಗೂ ಕೋಲಾರ ಅಂತಿಮವಾಗಿದೆ. ಈ ಪೈಕಿ ಮಂಡ್ಯ ಕುಮಾರಸ್ವಾಮಿಗೆ ಉತ್ತಮ ರಾಜಕೀಯ ವಾತಾವರಣ ಇರುವ ಕ್ಷೇತ್ರವಾಗಿದ್ದು, ಕ್ಷೇತ್ರ ವ್ಯಾಪ್ತಿಯ ಶಾಸಕ ಹೆಚ್.ಟಿ.ಮಂಜು, ಮಾಜಿ ಶಾಸಕರಾದ ಸಾ.ರಾ.ಮಹೇಶ್, ಸಿ.ಎಸ್.ಪುಟ್ಟರಾಜು, ಡಾ.ಅನ್ನದಾನಿ, ಸುರೇಶ್‌ಗೌಡ, ಮುಖಂಡ ಬಿ.ಆರ್.ರಾಮಚಂದ್ರ ಸೇರಿ ಹಲವರು ಸಭೆಯಲ್ಲಿ ಭಾಗಿಯಾಗಿದ್ದಾರೆ. ಬಹುತೇಕರು ಹೆಚ್ಡಿಕೆ ಸ್ಪರ್ಧೆಗೆ ಒಲವು ವ್ಯಕ್ತಪಡಿಸಿದ್ದು, ಗೆಲುವಿಗೆ ಅವಿರತ ಶ್ರಮಿಸುವುದಾಗಿ ಆಶ್ವಾಸನೆ ನೀಡಿದ್ದಾರೆ. ಕುಮಾರಸ್ವಾಮಿ ಮಾತ್ರ ಈ ಹಿಂದೆ ನಿಖಿಲ್ ಚುನಾವಣೆಯಲ್ಲಾದ ಎಡವಟ್ಟು, ಕಾಂಗ್ರೆಸ್ ಅನ್ನು ಸುಲಭವಾಗಿ ಪರಿಗಣಿಸಬಾರದು ಹಾಗೂ ಹಾಲಿ ಸಂಸದೆ ಸುಮಲತಾ ಬಂಡೆದ್ದು ಕಾಂಗ್ರೆಸ್‌ನಿಂದ ಒಂದು ವೇಳೆ ಅಭ್ಯರ್ಥಿ ಆದರೆ ನಮ್ಮ ಲೆಕ್ಕಾಚಾರ ಹೇಗಿರಬೇಕು. ಗೆಲುವಿಗೆ ಅಡೆತಡೆಗಳಿದ್ದರೆ ರಾಜ್ಯಸಭೆಗೆ ಹೋಗುವೆ ಎಂಬ ಬಗ್ಗೆ ಕುಮಾರಸ್ವಾಮಿ ಮುಖಂಡರ ಮುಂದೆ ಅಭಿಪ್ರಾಯ ಮಂಡಿಸಿದ್ದಾರೆ.

ಮೂವರು ಅಧಿಕಾರಿಗಳ ವಿರುದ್ಧ ದೋಷಾರೋಪ

ನಾಲಾ ಉದ್ದೇಶಕ್ಕೆ ಭೂಸ್ವಾಧೀನವಾಗಿದ್ದರೂ, ಅದನ್ನೂ ಸೇರಿಸಿ ಪೂರ್ಣ ವಿಸ್ತೀರ್ಣಕ್ಕೆ ಅಕ್ರಮವಾಗಿ ಅನ್ಯ ಕ್ರಾಂತ ಮಂಜೂರು ಮಾಡಲಾಗಿದೆ ಎಂದು ಆರೋಪಿಸಿದರು. ಈ ಸಂಬಂಧ ಕಾವೇರಿ ನೀರಾವರಿ ನಿಗಮ, ನಂ. 4 ವರುಣಾ ನಾಲಾ ಉಪವಿಭಾಗ, ಮೈಸೂರು ಇದರ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ರೊಂದಿಗೆ ಜಂಟಿ ಸ್ಥಳ ಪರಿಶೀಲನೆ ನಡೆಸಿದ್ದ ಶ್ರೀರಂಗಪಟ್ಟಣ ತಹಸೀಲ್ದಾರ್ ಸದರಿ 14 ಗುಂಟೆ ಭೂಮಿ ನಾಲಾ ಉದ್ದೇಶಕ್ಕೆ ಸ್ವಾಧೀನ ವಾಗಿ ಅಲ್ಲಿ ನಾಲೆ ಹಾದು ಹೋಗಿದೆ ಎಂದು 2023ರ ಫೆಬ್ರವರಿ 28ರಂದು ಜಿಲ್ಲಾಧಿ ಕಾರಿಗಳಿಗೆ ವರದಿ ಸಲ್ಲಿಸಿದ್ದರು.

ಆ ಜಾಗ ಅನ್ಯಕ್ರಾಂತಕ್ಕೆ ವರದಿ ಸಲ್ಲಿಸಿ ಭೂ ಮಾಲೀಕರಿಗೆ ಸಹಾಯ ಮಾಡಿರುವ ಮೂವರು ಅಧಿಕಾರಿಗಳ ವಿರುದ್ಧ 1-4 ರೀತ್ಯಾ ದೋಷಾರೋಪಣಾ ಪಟ್ಟಿ ಸಲ್ಲಿಸುವಂತೆ 2023ರ ಡಿಸೆಂಬರ್ 6ರಂದು ಮಂಡ್ಯ ಜಿಲ್ಲಾಧಿಕಾರಿಗಳು ತಹಸೀಲ್ದಾರ್‌ರಿಗೆ ಪತ್ರ ಮುಖೇನ ನಿರ್ದೇಶನ ನೀಡಿದ್ದರು. ಅದರಂತೆ 2023ರ ಡಿಸೆಂಬರ್ 28ರಂದು ಪ್ರಸ್ತಾಪಿತ ಜಮೀನಿನಲ್ಲಿ ಕಾವೇರಿ ನೀರಾ ವರಿ ನಿಗಮಕ್ಕೆ ವರುಣ ನಾಲೆಗಾಗಿ ಭೂಸ್ವಾಧೀನವಾಗಿರುವ 14 ಗುಂಟೆ ಜಮೀನು ಒಳ ಗೊಂಡಂತೆ ಅಕ್ರಮವಾಗಿ ಭೂ ಪರಿವರ್ತನೆ ಮಂಜೂರು ಮಾಡಲು ಶಿಫಾರಸು ಮಾಡಿದ್ದ ಜಯರಾಮಮೂರ್ತಿ, ಕೆ. ಬಾಲಗಂಗಾಧರ ಹಾಗೂ ಪುಟ್ಟಸ್ವಾಮಿ ವಿರುದ್ಧ ಪ್ರತ್ಯೇಕ 1-4 ದೋಷಾರೋಪಣಾ ಪಟ್ಟಿ ಸಿದ್ಧಪಡಿ ಸಿದ ತಹಸೀಲ್ದಾರ್, ತಮ್ಮ ಅಭಿಪ್ರಾಯ ದೊಂದಿಗೆ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿ ಸಿದ್ದಾರೆ. ಈ ನಡುವೆ ಬೆಳಗೊಳ ಗ್ರಾಮದ ಸ. ನಂ. 44ರ 2.13 ಎಕರೆ ಪೈಕಿ 14 ಗುಂಟೆ ಜಮೀನನ್ನು ಕಾವೇರಿ ನೀರಾವರಿ ನಿಗಮವು 1990ರಲ್ಲಿ ನಾಲಾ ಉದ್ದೇಶ ಕ್ಕಾಗಿ ಭೂಸ್ವಾಧೀನಪಡಿಸಿಕೊಂಡು ಮಾಲೀಕ ರಿಗೆ ಪರಿಹಾರದ ಹಣ ನೀಡಿದೆ. ಈ ಮಾಹಿತಿಯನ್ನು ಮರೆಮಾಚಿ ಅಧಿಕಾರಿಗಳ ಜೊತೆ ಶಾಮೀಲಾಗಿ ಆ ಜಾಗವನ್ನೂ ಸೇರಿಸಿ ಅನ್ಯಕ್ರಾಂತ ಮಾಡಿಸಿಕೊಂಡಿರುವ ವೀರ ಭದ್ರಯ್ಯ ವಿರುದ್ಧವೂ 2023ರ ಡಿಸೆಂಬರ್ ನಲ್ಲಿ ಕೆಆರ್‌ಎಸ್ ಠಾಣೆಯಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 192-ಎ ರೀತ್ಯಾ ಪ್ರಕರಣ ದಾಖಲಿಸಲಾಗಿದೆ. ತಾವೇ ಸ್ವಾಧೀನಪಡಿಸಿಕೊಂಡು ಭೂ ಮಾಲೀಕರಿಗೆ ಪರಿಹಾರದ ಆರ್‌ಟಿಸಿಯಲ್ಲಿ ಇಂಡೀಕರಣ ಮಾಡಿಸದೇ ಅಕ್ರಮವಾಗಿ ಅನ್ಯಕ್ರಾಂತವಾಗಲು ಕಾರಣರಾಗಿದ್ದ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಈಗ ಏನೂ ತಿಳಿಯದಂತೆ ಮೌನ ವಹಿಸಿರು ವುದೂ ಅನುಮಾನಕ್ಕೆ ಕಾರಣವಾಗಿದೆ.

ಬಿಲ್ಕಿಸ್ ಬಾನು ಅತ್ಯಾಚಾರ ಪ್ರಕರಣ

ಸುಪ್ರೀಂ ಕೋರ್ಟ್ ಆದೇಶದಿಂದ ಮಹಿಳೆಯರಲ್ಲಿ ವಿಶ್ವಾಸ

● ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರ್‌ನಾಥ್ ಪ್ರತಿಕ್ರಿಯೆ ● ಬಿಜೆಪಿ ಎಂದಿಗೂ ಮಹಿಳೆಯರ ಪರ ಇಲ್ಲ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ಜ.9(ಎಂಟಿವೈ)- ಗುಜರಾತ್‌ನಲ್ಲಿ ಸನ್ನಡತೆಯ ಆಧಾರದಲ್ಲಿ ಬಿಲ್ಕಿಸ್ ಬಾನು ಅತ್ಯಾಚಾರ ಪ್ರಕರಣದ ಆರೋಪಿಗಳ ಬಿಡುಗಡೆ ಆದೇಶವನ್ನು ಸುಪ್ರಿಂಕೋರ್ಟ್ ರದ್ದು ಮಾಡಿರುವುದು ಸ್ವಾಗತಾರ್ಹ ಬೆಳವಣಿಗೆ. ಸಂತ್ರಸ್ತ ಕುಟುಂಬದವರಿಗೆ ಸರ್ವೋಚ್ಛ ನ್ಯಾಯಾಲಯ ಮಹತ್ವದ ತೀರ್ಪು ಒದಗಿಸಿದೆ ಎಂದು ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ತಿಳಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುಜರಾತ್‌ನ ಬಿಜೆಪಿ ಸರ್ಕಾರ ಸನ್ನಡತೆಯ ಆಧಾರದ ಮೇಲೆ ಬಿಲ್ಕಿಸ್ ಬಾನು ಅತ್ಯಾಚಾರ ಪ್ರಕರಣದ 11 ಅಪರಾಧಿಗಳನ್ನು ಬಿಡುಗಡೆ ಮಾಡಿತ್ತು. ಸರ್ಕಾರದ ಆದೇಶವನ್ನು ರದ್ದು ಮಾಡಿರುವ ಸುಪ್ರಿಂಕೋರ್ಟ್ ದೇಶದ ಮಹಿಳೆಯರ ಪರ ಧ್ವನಿಗೆ ನ್ಯಾಯ ಒದಗಿಸಿದೆ. ಅಲ್ಲದೆ, 20 ವರ್ಷಗಳ ಸತತ ಹೋರಾಟಕ್ಕೆ ಮತ್ತೆ ನ್ಯಾಯ ಸಿಕ್ಕಿದೆ. ಸರ್ವೋಚ್ಛ ನ್ಯಾಯಾಲಯವು ತೀರ್ಪಿನಲ್ಲಿ ಯಾವುದೇ ಜಾತಿ, ಧರ್ಮಕ್ಕೆ ಸೇರಿದ್ದರೂ ಕಾನೂನಿನ ಮುಂದೆ ಎಲ್ಲರೂ ಸಮಾನರು. ಎಲ್ಲರಿಗೂ ಒಂದೇ ಕಾನೂನು ಅನ್ವಯ ಎಂದು ಹೇಳಿದೆ. ನ್ಯಾಯಾಂಗವು ಅನ್ಯಾಯಕ್ಕೆ ಒಳಗಾದವರ ಪರ ಇದೆ ಎಂಬುದನ್ನು ಈ ತೀರ್ಪು ದೃಢಪಡಿಸಿದೆ ಎಂದರು.

ಈ ಪ್ರಕರಣದಲ್ಲಿ ನೊಂದ ಮಹಿಳೆಯರ ಪರವಾಗಿ ತೀರ್ಪು ಕೊಟ್ಟವರು ಕರ್ನಾಟಕದ ಮಂಡ್ಯ ಜಿಲ್ಲೆಯ ಮೇಲು ಕೋಟೆ ಹೆಣ್ಣು ಮಗಳು ಎಂಬುದು ಹೆಮ್ಮೆಯ ಸಂಗತಿ. ಗುಜರಾತ್‌ನಲ್ಲಿ ಬಿಜೆಪಿ ಸರ್ಕಾರ ಇದ್ದಾಗಲೇ ಬಿಲ್ಕಿಸ್ ಬಾನು ಪ್ರಕರಣ ನಡೆದಿತ್ತು. ಗುಜರಾತ್ ಸರ್ಕಾರವೇ ಅಪರಾಧಿಗಳನ್ನು ಸನ್ನಡತೆ ಆಧಾರದ ಮೇಲೆ ಬಿಡುಗಡೆ ಮಾಡಿತ್ತು. ಈ ತೀರ್ಮಾನ ತಪ್ಪೆಂದು ನ್ಯಾಯಾಲಯ ಚಾಟಿ ಬೀಸಿದೆ. ಬಿಜೆಪಿ ಎಂದಿಗೂ ಮಹಿಳೆಯರ ಪರವಾಗಿಲ್ಲ. ಬೇಟಿ ಪಡಾವೋ ಬೇಟಿ ಬಚಾವೋ ಘೋಷಣೆಗೆ ಸೀಮಿತವಾಗಿದೆ. ಕುಸ್ತಿ ಪಟು ಸಾಕ್ಷಿ ಮಲ್ಲಿಕ್ ಯಾಕೆ ತಮ್ಮ ಪದಕವನ್ನು ರಸ್ತೆಯಲ್ಲಿ ಇಟ್ಟು ಹೋದರು? ಮಹಿಳೆಯರಿಗೆ ನ್ಯಾಯ ಕೊಡಿಸದ ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜೀನಾಮೆ ನೀಡಬೇಕು. ಅತ್ಯಾಚಾರ ಮಾಡಿದವರು ಬಿಡುಗಡೆಯಾದಾಗ ಹಾರ ಹಾಕಿ ಸ್ವಾಗತಿಸುವುದು ಗುಜರಾತ್ ಮಾದರಿಯೇ ಎಂದು ಪ್ರಶ್ನಿಸಿದ ಪುಷ್ಪಾ ಅಮರನಾಥ್, ಇವರಿಗೆ ಮತ್ತೊಮ್ಮೆ ಅಧಿಕಾರ ಕೊಟ್ಟರೆ ಸಂವಿಧಾನದ ಆಶಯಗಳಿಗೆ ಧಕ್ಕೆ ತರುತ್ತಾರೆ ಎಂದು ಆರೋಪಿಸಿದರು.

ರಾಷ್ಟ್ರಪತಿ ಆಹ್ವಾನಿಸಿ: ದೇಶದ ಪ್ರಥಮ ಪ್ರಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರಾಮ ಮಂದಿರ ಉದ್ಘಾಟನೆಗೆ ಆಹ್ವಾನ ನೀಡಿಲ್ಲ. ದೇಶದ ಮಹಿಳೆಯರನ್ನು ಗೌರವಿಸುವ ನಿಟ್ಟಿನಲ್ಲಿ ರಾಷ್ಟ್ರಪತಿಗಳಿಗೆ ಆಹ್ವಾನ ನೀಡಬೇಕು. ಆ ಮೂಲಕ ಮಹಿಳೆಯರಲ್ಲಿ ಖುಷಿ ತರಬೇಕು. ಈ ಹಿಂದೆ ಸಂಸತ್ತು ಉದ್ಘಾಟನೆಗೆ ಆಹ್ವಾನಿಸದೆ ದೊಡ್ಡ ತಪ್ಪು ಮಾಡಿದ್ದರು. ಈಗಲೂ ಆ ತಪ್ಪು ಪುನರಾವರ್ತನೆ ಆಗುವಂತೆ ಕಾಣುತ್ತಿದೆ ಎಂದು ವಿಷಾದಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶ್ರೀರಾಮಮಂದಿರ ಉದ್ಘಾಟನೆಗೆ ಆಹ್ವಾನ ನೀಡಿಲ್ಲ. ಅವರು ನಿಜವಾದ ರಾಮ ಭಕ್ತ. ಅವರ ಹೆಸರಿನಲ್ಲಿಯೇ ರಾಮ ಇದ್ದಾನೆ. ರಾಮರಾಜ್ಯದ ಕನಸನ್ನು ನನಸು ಮಾಡುತ್ತಿದ್ದಾರೆ. ಶ್ರೀರಾಮ ರಾಜಕೀಯಕ್ಕೆ ಅಲ್ಲ. ಎಲ್ಲರನ್ನೂ ಒಳಗೊಂಡಂತೆ ದೇಗುಲ ಉದ್ಘಾಟನೆಯಾಗಲಿ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಹಿಳಾ ಮುಖಂಡರಾದ ಪುಷ್ಪಾವಲ್ಲಿ, ಲತಾ ಮೋಹನ್, ಮಾಜಿ ಮೇಯರ್‌ಗಳಾದ ಪುಷ್ಪಲತಾ ಟಿ.ಬಿ.ಚಿಕ್ಕಣ್ಣ, ಮೋದಾಮಣಿ ಎಂ.ಸಿ.ರಾಜೇಶ್ವರಿ ಪುಟ್ಟಸ್ವಾಮಿ, ರಾಧಾಮಣಿ, ಸುಶೀಲ್, ಇಂದಿರಾ, ಚಂದ್ರಕಲಾ, ಭವ್ಯ, ಗಾಯತ್ರಿ ನಾರಾಯಣ ಇದ್ದರು.

ಲೋಕಸಭೆ ಟಿಕೆಟ್‌ಗೆ ಮನವಿ

ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ನೀಡುವಂತೆ ಹೈಕಮಾಂಡ್‌ಗೆ ಮನವಿ ಮಾಡಿದ್ದೇನೆ. 15 ವರ್ಷಗಳಿಂದ ಪಕ್ಷಕ್ಕಾಗಿ ದುಡಿದಿದ್ದೇನೆ. 2018, 2023ರ ವಿಧಾನಸಭೆ ಚುನಾವಣೆಯಲ್ಲಿ ಟಿಕೆಟ್ ಸಿಗಲಿಲ್ಲ. ಸ್ಥಳೀಯ ಸಂಸ್ಥೆಗೂ ಅವಕಾಶ ದೊರೆಯಲಿಲ್ಲ. ಈ ಬಾರಿ ಅವಕಾಶ ಮಾಡಿಕೊಟ್ಟರೆ ಪಾರ್ಲಿಮೆಂಟಿನಲ್ಲಿ ಜನ ಸಾಮಾನ್ಯರು, ರೈತರ ದನಿಯಾಗುತ್ತೇನೆ.

- ಡಾ.ಪುಷ್ಪಾ ಅಮರನಾಥ್, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ

ಉದ್ಯೋಗಾವಕಾಶಗಳ ಸೃಷ್ಟಿಗೆ ಆಗ್ರಹಿಸಿ ಎಐಡಿವೈಓ ಪ್ರತಿಭಟನೆ



ನಿರುದ್ಯೋಗಿಗಳಿಗೆ ಉದ್ಯೋಗ ಸೃಷ್ಟಿಸುವಂತೆ ಆಗ್ರಹಿಸಿ ಎಐಡಿವೈಓ ವತಿಯಿಂದ ಮಂಗಳವಾರ ಅಶೋಕ ರಸ್ತೆಯ ಅಂಚೆ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜ.9(ಜಿಎ)-ನಿರುದ್ಯೋಗ ಸಮಸ್ಯೆ ಸುಧಾರಿಸುವ ನಿಟ್ಟಿನಲ್ಲಿ ಹೆಚ್ಚು ಉದ್ಯೋಗ ಸೃಷ್ಟಿಸುವ ಯೋಜನೆಗಳನ್ನು ರೂಪಿಸಬೇಕೆಂದು ಒತ್ತಾಯಿಸಿ ಎಐಡಿವೈಓ ವತಿಯಿಂದ ಅಶೋಕ ರಸ್ತೆಯ ಅಂಚೆ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ರಾಜ್ಯದಲ್ಲಿ ಪ್ರತಿವರ್ಷ ಸಾವಿರಾರು ಐಟಿಐ, ಡಿಪ್ಲೊಮಾ ವಿದ್ಯಾರ್ಥಿಗಳು ವಿವಿಧ ಟ್ರೇಡ್‌ಗಳಲ್ಲಿ ನಿರ್ದಿಷ್ಟ ಕೌಶಲ್ಯಗಳನ್ನು ಕಲಿತು ಹೊರಬರುತ್ತಾರೆ. ಐಟಿಐ ತರಬೇತಿ ಪಡೆದುಕೊಂಡರೆ ತಕ್ಷಣ ಎಲ್ಲಾದರೂ ಉದ್ಯೋಗ ಸಿಗುತ್ತದೆ ಎಂಬುದು ಅವರ ನಂಬಿಕೆ. ಇವರಿಗೆ ರೈಲ್ವೆ, ಕೆಎಸ್‌ಆರ್‌ಟಿಸಿ ವರ್ಕ್‌ಶಾಪ್, ಕೆಇಬಿ ಮತ್ತು ಕೆಲವು ಸರ್ಕಾರಿ ಉದ್ದಿಮೆಗಳಲ್ಲಿ ಹಿಂದೆಲ್ಲಾ ಉದ್ಯೋಗ ದೊರೆಯುತ್ತಿತ್ತು. ಇತ್ತೀಚೆಗೆ ಆ ಅಲ್ಪಸ್ವಲ್ಪ ಉದ್ಯೋಗಗಳೂ ಕ್ಷೀಣಿಸುತ್ತಿವೆ. ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಅವಕಾಶ ಇರುವ ಸರ್ಕಾರದ ಕೆಲ ಉತ್ಪಾದನಾ ಚಟುವಟಿಕೆಗಳನ್ನು ಖಾಸಗಿಯವರಿಗೆ ಹೊರಗುತ್ತಿಗೆ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಸರ್ಕಾರದ ಇಂತಹ ನಿರ್ಧಾರಗಳು ನಿರುದ್ಯೋಗ ಸ್ಥಿತಿ ಮತ್ತಷ್ಟು ಬಿಗಡಾಯಿಸುವಂತೆ ಮಾಡುತ್ತಿದೆ. ಇದರ ಜತೆಗೆ ಹಲವಾರು ಸರ್ಕಾರಿ ಉದ್ದಿಮೆಗಳನ್ನು ಖಾಸಗೀಕರಣ ಮಾಡುತ್ತಿರುವುದು ಕೂಡ ಉದ್ಯೋಗಾವಕಾಶಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಇನ್ನೊಂದೆಡೆ ಅಪ್ರೆಂಟಿಸ್ ಹೆಸರಿನಲ್ಲಿ ಖಾಸಗಿ ಕಾರ್ಖಾನೆಗಳು ಮತ್ತು ಸರ್ಕಾರಿ ಉದ್ದಿಮೆಗಳಲ್ಲೂ ಕಡಿಮೆ ಸಂಬಳಕ್ಕೆ ದುಡಿಸಿಕೊಂಡು ಶೋಷಣೆ ಮಾಡಲಾಗುತ್ತಿದೆ. ಈಗಿನ ಅಪ್ರೆಂಟಿಸ್‌ಷಿಪ್ ಕಾಯ್ದೆ ಪ್ರಕಾರ ತರಬೇತಿ ಸಮಯದಲ್ಲಿ ಅನುಭವದ ಆಧಾರದ ಮೇಲೆ ಕನಿಷ್ಠ ಕೂಲಿಗೆ ಸಮನಾಗಿ ವೇತನ ನೀಡಬೇಕು. ನಿರ್ದಿಷ್ಟ ಅವಧಿಯ ನಂತರ ಅಲ್ಲಿಯೇ ಖಾಯಂ ನೌಕರರಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರಗಳು ಕೇವಲ ಚುನಾವಣೆ ಸಂದರ್ಭದಲ್ಲಿ ಮಾತ್ರ ಯುವಜನರನ್ನು ಸ್ಮರಿಸದೆ ನಿರುದ್ಯೋಗ ಹೋಗಲಾಡಿಸಲು, ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಬೇಕು. ಉದ್ಯೋಗಾವಕಾಶಗಳ ಕಡಿತ ನಿಲ್ಲಬೇಕು. ಹೆಚ್ಚೆಚ್ಚು ಶ್ರಮಾಧಾರಿತ ಕಾರ್ಖಾನೆಗಳನ್ನು ಸ್ಥಾಪಿಸಬೇಕು. ಐಟಿಐ ತರಬೇತಿದಾರರಿಗೆ ಅಪ್ರೆಂಟಿಸ್ ಸಂದರ್ಭದಲ್ಲಿ ಕನಿಷ್ಠ ಕೂಲಿಗೆ ಸಮನಾದ ವೇತನ ನೀಡಬೇಕು. ಐಟಿಐ ತರಬೇತಿ ಪಡೆಯಲು ಬರುವವರಲ್ಲಿ ಬಹುತೇಕರು ಗ್ರಾಮೀಣ ಪ್ರದೇಶದವರಾಗಿದ್ದು, ಅವರಿಗೆ ಸಹಾಯವಾಗುವಂತೆ ತರಬೇತಿ ಹಂತದಲ್ಲಿ ಯೋಗ್ಯ ರೀತಿಯ ಶಿಷ್ಯವೇತನ ನೀಡಬೇಕು. ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ನಿರಂಜನ್, ಕಾರ್ಯದರ್ಶಿ ಸುಮಾ, ಜಂಟಿ ಕಾರ್ಯದರ್ಶಿ ನೀತುಶ್ರೀ, ವಿವಿಧ ಐಟಿಐ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜ.12, ಕರ್ನಾಟಕ ರಾಷ್ಟ್ರ ಸಮಿತಿ ಯುವ ಸಮಾವೇಶ



ಜಿಲ್ಲಾ ಪತ್ರಕರ್ತರ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಕೆಆರ್‌ಎಸ್ ಪಕ್ಷದ ಜಿಲ್ಲಾ ಘಟಕದ ಉಪಾಧ್ಯಕ್ಷ ಡಿ.ಪಿ.ಕೆ.ಪರಮೇಶ್ ಮಾತನಾಡಿದರು. ಚಿತ್ರದಲ್ಲಿ ಪಕ್ಷ ಜಿಲ್ಲಾಧ್ಯಕ್ಷ ಪ್ರೇಮ್‌ಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಾ.ಸ.ಪ್ರವೀಣ್, ಕಾರ್ಯದರ್ಶಿ ನಾಗೇಂದ್ರ, ಮಹಿಳಾ ಘಟಕದ ಅಧ್ಯಕ್ಷೆ ಲಕ್ಷ್ಮಮ್ಮ ಅವರನ್ನು ಕಾಣಬಹುದು

ಮೈಸೂರು, ಜ.9(ಜಿಎ)- ದೇಶದ ಅಭಿವೃದ್ಧಿಗೆ ಯುವಕರ ಬೆಂಬಲ ಅಗತ್ಯವಾಗಿರುವುದರಿಂದ ಸ್ವಾಮಿ ವಿವೇಕಾನಂದರ ದಿನಾಚರಣೆ ಅಂಗವಾಗಿ ಕರ್ನಾಟಕ ರಾಷ್ಟ್ರ ಸಮಿತಿ(ಕೆಆರ್‌ಎಸ್) ಪಕ್ಷದ ವತಿಯಿಂದ ಜ.12 ರಂದು ಕರ್ನಾಟಕ ರಾಷ್ಟ್ರ ಸಮಿತಿ ಯುವ ಸಮಾವೇಶವನ್ನು ಕೊಪ್ಪಳ ಜಿಲ್ಲೆಯಲ್ಲಿ ಏರ್ಪಡಿಸಲಾಗಿದೆ ಎಂದು ಕೆಆರ್‌ಎಸ್ ಪಕ್ಷದ ಜಿಲ್ಲಾ ಘಟಕದ ಉಪಾಧ್ಯಕ್ಷ ಡಿ.ಪಿ.ಕೆ.ಪರಮೇಶ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಅವರು, ಕರ್ನಾಟಕದ ಯುವಕರು ರಾಜಕೀಯ ಕ್ಷೇತ್ರದಲ್ಲಿ ಹೊರ ಹೊಮ್ಮಲು ಮತ್ತು ಭವಿಷ್ಯದ ನಾಯಕರನ್ನು ಸೃಷ್ಟಿಸಲು ಯುವ ಸಮಾವೇಶವನ್ನು ಏರ್ಪಡಿಸುತ್ತಿದ್ದು, ರಾಜ್ಯಾದ್ಯಂತ 1000 ರಿಂದ 1500 ಮಂದಿ ಕಾರ್ಯಕರ್ತರು ಭಾಗವಹಿಸುವ ನಿರೀಕ್ಷೆ ಇದೆ. ಮೈಸೂರು ಜಿಲ್ಲೆಯಿಂದ 30 ಮಂದಿ ಪಕ್ಷದ ಕಾರ್ಯಕರ್ತರು ತೆರಳಲಿದ್ದೇವೆ ಎಂದರು.

ಈ ವೇಳೆ ರಾಜ್ಯ ಯುವ ಘಟಕದ ವತಿಯಿಂದ ಮೈಸೂರು ಜಿಲ್ಲಾ ಯುವ ಘಟಕಕ್ಕೆ ಜಿಲ್ಲಾಧ್ಯಕ್ಷ ರವೀಂದ್ರ, ಪ್ರಧಾನ ಕಾರ್ಯದರ್ಶಿ ಮಲ್ಲಪ್ಪ ಮತ್ತು ಕಾರ್ಯದರ್ಶಿಗಳಾಗಿ ಹೇಮಂತ್, ಸಚಿನ್, ನವೀನ್ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಪ್ರೇಮ್ ಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಾ.ಸ. ಪ್ರವೀಣ್, ಕಾರ್ಯದರ್ಶಿ ನಾಗೇಂದ್ರ ಮಹಿಳಾ ಘಟಕದ ಅಧ್ಯಕ್ಷೆ ಲಕ್ಷ್ಮಮ್ಮ ಉಪಸ್ಥಿತರಿದ್ದರು.

ನಾಳೆ, ನಾಡಿದ್ದು ವಿಟಿಯು ಟೆಕ್ನೋ ಕಲ್ಚರಲ್ ಫೆಸ್ಟ್ 'ಯುಕ್ತಿ 2024'



ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಾದೇಶಿಕ ನಿರ್ದೇಶಕ ಡಾ.ರೇಣುಕಾ ಮೂರ್ತಿ ಟಿ.ಪಿ ಮಾತನಾಡಿದರು. ಚಿತ್ರದಲ್ಲಿ ಕಾರ್ಯಕ್ರಮ ಸಂಯೋಜಕರಾದ ಡಾ.ಎಂ.ಎಸ್.ಯತೀಶ್ ಚಂದ್ರ, ಡಾ.ಜಿ.ಎಫ್.ಅಲಿ ಅಹಮ್ಮದ್, ಡಾ.ಎಂ.ಪ್ರಸನ್ನಕುಮಾರ್, ಡಾ.ಬಿ.ಎಸ್.ಕೀರ್ತಿಗೌಡ ಅವರನ್ನು ಕಾಣಬಹುದು

ಮೈಸೂರು, ಜ.9(ಜಿಎ)-ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯದ ವತಿಯಿಂದ ಜ.11 ಮತ್ತು 12ರಂದು 'ಯುಕ್ತಿ 2024' ಪ್ರಾದೇಶಿಕ ಮಟ್ಟದ ಟೆಕ್ನೋ ಕಲ್ಚರಲ್ ಫೆಸ್ಟ್ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ನಿರ್ದೇಶಕ ಡಾ.ಟಿ.ಪಿ. ರೇಣುಕಾ ಮೂರ್ತಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10.20ಕ್ಕೆ ಮೈಸೂರಿನ ರಿಂಗ್ ರಸ್ತೆಯಲ್ಲಿರುವ ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕ್ಯಾಂಪಸ್‌ನಲ್ಲಿ ಕಾರ್ಯಕ್ರಮ ಆಯೋಜಿಸಿದ್ದು, ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಉದ್ಘಾಟಿಸಲಿದ್ದಾರೆ. ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಳಗಾವಿಯ ವಿಟಿಯು ವ್ಯವಸ್ಥಾಪನಾ ಸಮಿತಿ ಸದಸ್ಯ ಡಾ.ಎನ್. ಕೃಷ್ಣೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಜ.12ರಂದು ಸಂಜೆ 4ಕ್ಕೆ ಉತ್ಸವದ ಸಮಾರೋಪ ಸಮಾರಂಭ ನಡೆಯಲಿದ್ದು, ಬೆಳಗಾವಿಯ ವಿಟಿಯು ವ್ಯವಸ್ಥಾಪನಾ ಸಮಿತಿ ಸದಸ್ಯ ಡಾ.ಎಂ.ಎಸ್.ಶಿವಕುಮಾರ್, ಜಿ.ರಾಕೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಡೀನ್ ಡಾ.ಕೆ.ಸದಾಶಿವೇಗೌಡ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮ ಸಂಯೋಜಕರಾದ ಡಾ.ಎಂ.ಎಸ್.ಯತೀಶ್ ಚಂದ್ರ, ಡಾ.ಜಿ.ಎಫ್.ಅಲಿ ಅಹಮ್ಮದ್, ಡಾ.ಎಂ.ಪ್ರಸನ್ನಕುಮಾರ್, ಡಾ.ಬಿ.ಎಸ್.ಕೀರ್ತಿಗೌಡ ಉಪಸ್ಥಿತರಿದ್ದರು.

'ಯುವ ಸ್ಪಂದನ' ಕಾರ್ಯಕ್ರಮದಡಿ ತರಬೇತಿಗೆ ಅರ್ಜಿ ಆಹ್ವಾನ


ಮೈಸೂರು, ಜ.9- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಸೂರು ಜಿಲ್ಲೆ ಮತ್ತು ಜನ ಆರೋಗ್ಯ ಸಂಸ್ಥೆ, ಎಪಿಡೀಮಿಯಾಲಜಿ ವಿಭಾಗ, ನಿಮ್ಹಾನ್ಸ್, ಬೆಂಗಳೂರು, ಇವರಿಂದ ಅನುಷ್ಠಾನಗೊಂಡಿರುವ "ಯುವ ಸ್ಪಂದನ" ಕಾರ್ಯಕ್ರಮದಡಿಯಲ್ಲಿ ಕಾರ್ಯ ನಿರ್ವಹಿಸಲು ಹೊಸದಾಗಿ ಯುವಪರಿವರ್ತಕರು ಹಾಗೂ ಯುವ ಸಮಾಲೋಚಕರನ್ನು ಆಯ್ಕೆ ಮಾಡಿ, ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಯಾವುದೇ ಪದವಿ ಅಥವಾ ಮೇಲ್ಪಟ್ಟ ಯಾವುದೇ ವಿದ್ಯಾರ್ಹತೆ ಹೊಂದಿರಬೇಕು ಹಾಗೂ 21 ರಿಂದ 35 ವರ್ಷದ ವಯೋಮಿತಿಯವರಾಗಿರಬೇಕು. ಸ್ಥಳೀಯ ಭಾಷೆ ಕನ್ನಡವನ್ನು ಸ್ಪಷ್ಟವಾಗಿ ಮಾತನಾಡಬೇಕು. ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ, ಹುಮ್ಮಸ್ಸು ಹಾಗೂ ಸಂವಹನ ಕೌಶಲ್ಯದ ಜೊತೆಗೆ ಸಂವಾದ ಕೌಶಲ್ಯಗಳನ್ನು ಹೊಂದಿರಬೇಕು. ಸಮುದಾಯದಲ್ಲಿ ಯುವಜನರಿಗೆ ತರಬೇತಿ ಯಂತಹ ಕಾರ್ಯಕ್ರಮಗಳನ್ನು ನಡೆಸುವುದು ಮತ್ತು ಮೈಸೂರು ಜಿಲ್ಲೆಯಲ್ಲಿ ಪ್ರಯಾಣಿಸುವುದು ಅವಶ್ಯವಿರುವುದರಿಂದ ಅದೇ ತಾಲೂಕಿನಲ್ಲಿ ವಾಸಿಸುತ್ತಿರುವ ಖಾಯಂ ನಿವಾಸಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2564179,8548985639 ಹಾಗೂ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ವಿಕ್ರಂ ಸಿಂಹ ಪರ ದೇವೇಗೌಡರ ಕುಟುಂಬದ ವಕಾಲತ್ತಿಗೆ ಕಾಂಗ್ರೆಸ್ ಗೇಲಿ

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಸಾ.ರಾ. ಮಹೇಶ್ ಸ್ಪರ್ಧೆಗೆ ಮಾಜಿ ಸಿಎಂ ಕುಮಾರಸ್ವಾಮಿ ಯತ್ನ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು

ಮೈಸೂರು,ಜ.9(ಎಂಟಿವೈ)- ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಿಂದ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಶಾಸಕ ಸಾ.ರಾ.ಮಹೇಶ್ ಅವರಿಗೆ ಟಿಕೆಟ್ ಕೊಡಿಸಲು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಪ್ರಯತ್ನಿಸುತ್ತಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್ ತಿಳಿಸಿದ್ದಾರೆ.

ಮೈಸೂರು ನಗರ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು-ಕೊಡಗು ಕ್ಷೇತ್ರವನ್ನು ಬಿಜೆಪಿಗೆ ಬಿಡಲು ಅವರು ತಯಾರಿಲ್ಲ. ಸಾ.ರಾ.ಮಹೇಶ್ ಸ್ಪರ್ಧಿಸುವುದಿಲ್ಲ ಎಂಬ ಮಾತಿನಲ್ಲಿಯೇ ಸ್ಪರ್ಧೆ ಬಗ್ಗೆ ಸುಳಿವಿದೆ. ಹೆಚ್.ಡಿ.ಕುಮಾರಸ್ವಾಮಿ ಕೆಲವು ದಿನಗಳಿಂದ ಸಂಸದ ಪ್ರತಾಪ್ ಸಿಂಹ, ಆತನ ಸಹೋದರನ ವಿರುದ್ಧ ಮೃದು ಧೋರಣೆ ಅನುಸರಿಸುವ ಉದ್ದೇಶ ಏನು? ವಿಕ್ರಂ ಸಿಂಹ ಬಂಧನದಲ್ಲಿ ದೇವೇಗೌಡರ ಕುಟುಂಬದ ಕೈವಾಡ ಇದೆ ಈ ಬಗ್ಗೆ ಜನರು ಮಾತಾಡುತ್ತಿದ್ದಾರೆ ಎಂದು ಹಾಸನದ ಪತ್ರಿಕೆಯೊಂದು ವರದಿ ಮಾಡಿದೆ. ಕುಮಾರಸ್ವಾಮಿ ಯಾರನ್ನಾದರೂ ಹೊಗಳಿದರೆ ಅವರಿಗೆ ಗಂಡಾಂತರ ಕಾದಿದೆ. ಖೆಡ್ಡಾ ಯಾರು ಯಾರಿಗೆ ತೊಡಿದ್ದಾರೆ ಎಂಬುದನ್ನು ಪ್ರತಾಪಸಿಂಹ ಮತ್ತು ಬೆಂಬಲಿಗರು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಬೇರೆ ಕಡೆಯಿಂದ ಬೀಟೆ ಮರಗಳನ್ನು ಕಡಿದು ತಂದು ಹಾಕಲು ಅದೇನು ಕಡ್ಲೆಕಾಯಿ ಗಿಡವೇ? ಕುಮಾರಸ್ವಾಮಿ ಅವರು ಸಾಮಾನ್ಯ ಜ್ಞಾನ ಇಲ್ಲದವರಂತೆ ಸಿದ್ದರಾಮಯ್ಯ ವಿರುದ್ಧ ಆರೋಪ ಮಾಡುತ್ತಾರೆ. ಹಿಟ್ ಅಂಡ್ ರನ್ ಹೇಳಿಕೆ ಕೊಡುವುದನ್ನು ಅವರು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಕೇಂದ್ರ ಮಂತ್ರಿ: ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಕೇಂದ್ರ ಮಂತ್ರಿ ಮಾಡಲು ಮಾತುಕತೆ ನಡೆಯುತ್ತಿದೆ. ಕರ್ನಾಟಕದಲ್ಲಿ ನಾಲ್ಕು ಕ್ಷೇತ್ರಗಳನ್ನು ಕೇಳುತ್ತಿದ್ದಾರೆ. ನಾಲ್ಕರಲ್ಲೂ ಅವರ ಕುಟುಂಬದವರೇ ಸ್ಪರ್ಧೆ ಮಾಡುವಂತೆ ತಂತ್ರಗಾರಿಕೆ ನಡೆಸಲಾಗುತ್ತಿದೆ ಎಂದು ಆರೋಪಿಸಿದರು.

ಸಂಸದ ಪ್ರತಾಪಸಿಂಹ, ಯತೀಂದ್ರ ಸಿದ್ದರಾಮಯ್ಯ ಬಗ್ಗೆ ತುಚ್ಛವಾಗಿ ಮಾತಾಡಿದ್ದಾರೆ. ಮಾಜಿ ಶಾಸಕ, ಅಶ್ರಯ ಸಮಿತಿ ಅಧ್ಯಕ್ಷರ ಕಾನೂನಾತ್ಮಕ ಅಧಿಕಾರದ ಬಗ್ಗೆ ತಿಳಿದು ಮಾತಾಡಬೇಕು. ಸಿದ್ದರಾಮಯ್ಯ ವಿರುದ್ಧ ಒಕ್ಕಲಿಗರನ್ನು ಎತ್ತಿ ಕಟ್ಟುವಂತಹ ಹೇಳಿಕೆ ನೀಡುತ್ತಿದ್ದಾರೆ. ಅಕಾಲಿಕ ಮಳೆಯಿಂದ ಸಂಕಷ್ಟಕ್ಕೆ ಸಿಲುಕಿದ ಕೊಡಗಿನ ರೈತರ ಸಂಕಷ್ಟ ಕೇಳದೇ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ ಎಂದರು.

ನ್ಯಾಯಾಲಯ ತೀರ್ಪು ಸ್ವಾಗತ: ಕೆಆರ್‌ಎಸ್‌ನ 20 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿಷೇಧಿಸುವಂತೆ ಹೈಕೋರ್ಟ್ ಆದೇಶವನ್ನು ಸ್ವಾಗತಿಸುತ್ತೇವೆ. ಮಂಡ್ಯ ಜಿಲ್ಲಾಡಳಿತ ನ್ಯಾಯಾಲಯದ ಆದೇಶ ಅನುಷ್ಠಾನಗೊಳಿಸಿ ಅಣೆಕಟ್ಟೆಯನ್ನು ರಕ್ಷಿಸಬೇಕು ಎಂದು ತಿಳಿಸಿದರು.

ಯತ್ನಾಳ್‌ಗೆ ಸನ್ಮಾನ ಮಾಡಬೇಕು: ಮಾಸ್ಕ್, ಕೋವಿಡ್ ಕಿಟ್ ಸಹಿತವಾಗಿ ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ 40 ಸಾವಿರ ಕೋಟಿ ಲೂಟಿ ಮಾಡಿದ್ದಾರೆ ಎಂದು ಸತ್ಯ ಹೇಳುತ್ತಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಸರ್ಕಾರದ ವತಿಯಿಂದ ಸನ್ಮಾನ ಮಾಡಬೇಕು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್. ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ. ಶಿವಣ್ಣ, ಕೆ. ಮಹೇಶ್, ಸೇವಾದಳ ಗಿರೀಶ್ ಇನ್ನಿತರರು ಇದ್ದರು.

ಚುನಾವಣಾಧಿಕಾರಿ ವಿರುದ್ಧ ಸಿಎಂಗೆ ಪತ್ರ

ಯುವ ಮತದಾರರ ನೋಂದಣಿಗೆ ಆನ್‌ಲೈನ್‌ನಲ್ಲಿ ಮಾತ್ರ ಅವಕಾಶ ನೀಡಿರುವ ಜಿಲ್ಲಾ ಚುನಾವಣಾಧಿಕಾರಿ ವಿರುದ್ಧ ಮುಖ್ಯಮಂತ್ರಿಗಳಿಗೆ ಪತ್ರ ಬರೆಯಲು ಉದ್ದೇಶಿಸಲಾಗಿದೆ. ಬಿಜೆಪಿ ಅನುಕೂಲಕ್ಕಾಗಿ ಹೀಗೆ ಮಾಡಲಾಗುತ್ತಿದೆಯೇ? ಕೇಂದ್ರ ಚುನಾವಣಾ ಆಯೋಗದಿಂದ ನಿರ್ದೇಶನ ಇದೆಯೇ? ಮನೆ ಮನೆಗೆ ಭೇಟಿ ನೀಡಿ 18 ವರ್ಷ ಮೇಲ್ಪಟ್ಟವರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡುವುದು ನಿಮ್ಮ ಕರ್ತವ್ಯ ಅಲ್ಲವೇ?. ಆನ್‌ಲೈನ್‌ನಲ್ಲಿ ಸ್ಲಂ, ಬಡ ಯುವಕರ ನೋಂದಣಿಗೆ ಕಷ್ಟವಾಗಲಿದೆ. ಅರ್ಜಿ ಕೊಟ್ಟು ನೋಂದಣಿ ಮಾಡಿಸಬೇಕು ಎಂದು ಒತ್ತಾಯಿಸಿದರು.

ಪುರಸಭೆ ಮುಖ್ಯಾಧಿಕಾರಿಯಿಂದ ಜನಪ್ರತಿನಿಧಿಗಳ ಹಕ್ಕಿಗೆ ಚ್ಯುತಿ

ಅಧಿಕಾರಿ ವಿರುದ್ಧ ಕ್ರಮಕ್ಕೆ ಸಾಮಾನ್ಯ ಸಭೆಯಲ್ಲಿ ನಿರ್ಣಯ

ತಿ.ನರಸೀಪುರ, ಜ.9– ಪುರಸಭೆ ಸದಸ್ಯರನ್ನು ನಿರ್ಲಕ್ಷಿಸಿ, ಸಭೆ ನಡೆಸಿರುವ ಮುಖ್ಯಾಧಿಕಾರಿ ಸ್ಥಳೀಯ ಜನಪ್ರತಿನಿಧಿಗಳ ಹಕ್ಕಿಗೆ ಚ್ಯುತಿ ತಂದಿರುವುದರಿಂದ ಅವರ ವಿರುದ್ಧ ಕ್ರಮ ಜರುಗಿಸುವಂತೆ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಲಾಯಿತು.

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಅಭಿವೃದ್ಧಿ ಮತ್ತು ನಾಗರೀಕರಿಗೆ ಮೂಲ ಭೂತ ಸೌಕರ್ಯಗಳನ್ನು ಕಲ್ಪಿಸಲು ಆಡಳಿತಾತ್ಮಕ ಹಿತದೃಷ್ಟಿಯಿಂದ ಆಡಳಿತಾಧಿಕಾರಿ ಕೆ.ಆರ್.ರಕ್ಷಿತ್ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಸಾಮಾನ್ಯ ಸಭೆಯಲ್ಲಿ ಬಹುತೇಕ ಸದಸ್ಯರು ಮುಖ್ಯಾಧಿಕಾರಿ ವಿರುದ್ಧ ಆರೋಪ ಮಾಡಿದ್ದರಿಂದ ಬಿ.ಕೆ.ವಸಂತ ಕುಮಾರಿ ವಿರುದ್ಧ ಶಿಸ್ತು ಕ್ರಮಕ್ಕೆ ತೀರ್ಮಾನಿಸಲಾಯಿತು.

ಸದಸ್ಯ, ನಿಕಟಪೂರ್ವ ಅಧ್ಯಕ್ಷ ಟಿ.ಎಂ. ನಂಜುಂಡಸ್ವಾಮಿ ಅವರು ಮಾತನಾಡಿ, ಮುಖ್ಯಾಧಿಕಾರಿಗಳು ಈ ಹಿಂದೆ 2023ರ ಜು.3 ರಂದು ಏಕಪಕ್ಷೀಯ ವಾಗಿ ಸಭೆ ನಡೆಸಿ, ಸದಸ್ಯರನ್ನು ದೂರ ವಿಟ್ಟು ನಮ್ಮ ಹಕ್ಕಿಗೆ ಧಕ್ಕೆ ತಂದಿರುವುದ ರಿಂದ ಅವರ ವಿರುದ್ಧವೇ ಕಾನೂನು ಕ್ರಮ ಜರುಗಿಸುವಂತೆ ನಿರ್ಣಯಕ್ಕೆ ಆಗ್ರಹಿಸಿದ ಹಿನ್ನೆಲೆಯಲ್ಲಿ ಸದಸ್ಯರೂ ಧ್ವನಿಗೂಡಿದರು.



ಪುರಸಭಾ ಸದಸ್ಯರು ಮತ್ತು ಅಧಿಕಾರಿಗಳೊಂದಿಗೆ ಸಭೆ ನಡೆಸುತ್ತಿರುವ ಆಡಳಿತಾಧಿಕಾರಿ

ಮಾಜಿ ಉಪಾಧ್ಯಕ್ಷೆ, ಪ್ರೇಮ ಮರಯ್ಯ, ಮತ್ತೋರ್ವ ಸದಸ್ಯೆ ಬೇಬಿ ಹೇಮಂತ್ ಕುಮಾರ್ ಹಾಗೂ ಸದಸ್ಯ ಸಿ.ಪ್ರಕಾಶ್ ಮಾತನಾಡಿ, ಪ.ಜಾತಿ ಮತ್ತು ಪ.ಪಂಗಡ ಸಮುದಾಯಗಳ ಅಭಿವೃದ್ಧಿ ಅನುದಾನದ ಬಳಕೆ ಹಾಗೂ ಪಲಾನುಭವಿಗಳ ಆಯ್ಕೆಯಲ್ಲೂ ಮೀಸಲು ಕ್ಷೇತ್ರದಲ್ಲಿ ಆಯ್ಕೆಯಾದ ಸದಸ್ಯರನ್ನು ನಿರ್ಲಕ್ಷಿಸಲಾಗಿದೆ. ಹೀಗಾದರೆ ನಮ್ಮಗಳ ಆಗತ್ಯವಾದರೂ ಏನಿದೆ ಎಂದು ಅಧಿಕಾರಿಗಳ ವಿರುದ್ಧವೂ ಹರಿಹಾಯ್ದರು.

ಸದಸ್ಯೆ ಶೋಭರಾಣಿ ಮಲ್ಲೇಶ್ ಮಾತನಾಡಿ, ಪುರಸಭೆಗೆ 18 ನೇ ವಾರ್ಡಿನಿಂದಲೇ ಹೆಚ್ಚಿನ ಆದಾಯ ಬರುತ್ತಿದ್ದರೂ ಇಲ್ಲಿಯವರೆಗೂ ಅಭಿವೃದ್ಧಿಗೆ ಬಿಡಿಗಾಸು ಅನುದಾನವನ್ನೂ ನೀಡಿಲ್ಲ. ವಾಣಿಜ್ಯ ವಹಿವಾಟು ಹೆಚ್ಚಾಗಿರುವ, ಜನ ದಟ್ಟಣೆಯ ಸಂಚಾರವಿರುವ ರಸ್ತೆಗಳಲ್ಲಿ ಅಭಿವೃದ್ಧಿ ಆಗಿಲ್ಲ. ಸ್ವಚ್ಛತೆ ಮತ್ತು ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸದಸ್ಯ ಎಸ್.ಕೆ.ಕಿರಣ್, ಮಾಜಿ ಅಧ್ಯಕ್ಷರುಗಳಾದ ಎನ್.ಸೋಮು ಮತ್ತು ಎಸ್. ಮದನ್ ರಾಜ್ ಅನುದಾನ ಮತ್ತು ಖಾತೆ ಅದಾಲತ್ ಕುರಿತು ಮಾತನಾಡಿದರು.

ಪುರಸಭಾ ಸದಸ್ಯರುಗಳಾದ ರೂಪ ಕರಿಯಪ್ಪ ಎಲ್. ಮಂಜುನಾಥ್, ಸೈಯೀದ್ ಅಹಮದ್, ಜಿ. ರೂಪಶ್ರೀ, ಆರ್.ನಾಗರಾಜು, ಮಹದೇವಮ್ಮ ಬಿ.ವಸಂತ ಶ್ರೀಕಂಠ, ಮಾದೇವಿ, ರಾಜೇಶ್ವರಿ ರಾಘವೇಂದ್ರ, ಆರ್ ತೇಜಸ್ವಿನಿ, ಪಿ.ಮೋಹನ್, ನಾಗರತ್ನ ಮಾದೇಶ್, ಮಂಜು (ಬಾದಾಮಿ) ಇಂಜಿನಿಯರ್ ಸಿದ್ದಯ್ಯ, ನಾಗರಾಜು, ವ್ಯವಸ್ಥಾಪಕ ಮಹೇಂದ್ರ ಲೆಕ್ಕಾಧಿಕಾರಿ ವಿನಯ್ ಹಾಗೂ ಇನ್ನಿತರರು ಹಾಜರಿದ್ದರು.

ಚುನಾಯಿತ ಜಪ್ರತಿನಿಧಿಗಳಾದ ಪುರಸಭೆ ಸದಸ್ಯರ ಸಲಹೆ ಸೂಚನೆಗಳನ್ನು ಆಲಿಸಿದ ಆಡಳಿತಾಧಿಕಾರಿ ಕೆ.ಆರ್.ರಕ್ಷಿತ್ ಜನ ಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅಭಿವೃದ್ಧಿ ಕೆಲಸವನ್ನು ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಸಿಎಂ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರ ಅನುಮತಿ ಪಡೆದುಕೊಂಡು ಪುರಸಭೆಯ ನೂತನ ಕಟ್ಟಡವನ್ನು ಉದ್ಘಾಟನೆಗೆ ದಿನವನ್ನು ನಿಗದಿ ಮಾಡಲಾಗುವುದು. ಈ ಬಗ್ಗೆ ನಗರಾಭಿವೃದ್ಧಿ ಇಲಾಖೆಯಿಂದ ಅನುಮೋದನೆ ಪಡೆದು ಕೊಳ್ಳಲಾಗುವುದು ಎಂದು ತಿಳಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಡೆವಿಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಬ್ಯಾಡ್ ಮ್ಯಾನರ್ಸ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸಲಾರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಾಟೇರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಟೇರ (ಕ)	4 ಪ್ರದರ್ಶನಗಳು
ರಾಜಕಮಲ್	
ಕಾಟೇರ (ಕ)	4 ಪ್ರದರ್ಶನಗಳು
ಸಂಗಂ	
ಸಲಾರ್ (ಕ)	4 ಪ್ರದರ್ಶನಗಳು
ಲಿಡೋ	
ಕೈವಾ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಟೈಗರ್–3 (ಹಿಂ)	4 ಪ್ರದರ್ಶನಗಳು
ಪ್ರಭಾ	
on line ಮದುವೆ off line ಶೋಭನ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಪ್ರೇಮ ಕಥ (ತೆ): ಬೆ.10.20ಕ್ಕೆ, ಮಾಥಿಮಾರನ್ (ತ): ಮ.1.05ಕ್ಕೆ, ಸಲಾರ್–1 (ತೆ): ಮ.3.40ಕ್ಕೆ, ಕಾಟೇರ (ಕ): ರಾ.7.05ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಮ.12.05ಕ್ಕೆ, ಕಾಟೇರ (ಕ): ಮ.3.50ಕ್ಕೆ, ರಾ.10ಕ್ಕೆ, ಪ್ರೇಮ ಕಥ (ತೆ): ರಾ.7.15ಕ್ಕೆ.
ಸ್ಕ್ರೀನ್ 3	ಒಂಟಿ ಬಂಟಿ ಲವ್ ಸ್ಟೋರಿ (ಕ): ಬೆ.10.20ಕ್ಕೆ, ಡಂಕಿ (ಹಿಂ): ಮ.1.20ಕ್ಕೆ, ರಾ.7.10ಕ್ಕೆ, ಅಕ್ವಾಮ್ಯಾನ್ ಅಂಡ್ ಲಾಸ್ಟ್ ಕಿಂಗ್‌ಡಮ್ (3ಡಿ)(ಇಂ): ಸಂ.4.30ಕ್ಕೆ, ಆಟಂ (ಮ): ರಾ.10.15ಕ್ಕೆ.
ಸ್ಕ್ರೀನ್ 4	ಕಾಟೇರ (ಕ): ಬೆ.9.50ಕ್ಕೆ, ಮ.1.15ಕ್ಕೆ, ಸಂ.4.45ಕ್ಕೆ, ರಾ.8.30ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಕಾಟೇರ (ಕ): ಬೆ.11.30ಕ್ಕೆ, ಮ.3.10ಕ್ಕೆ, ಸಂ.6.50ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಕಾಟೇರ (ಕ): ಬೆ.10.30ಕ್ಕೆ, ಮ.2.10ಕ್ಕೆ, ಸಂ.5.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಸಲಾರ್–1 (ಕ): ಬೆ.11ಕ್ಕೆ, ಸಂ.6.10ಕ್ಕೆ, ರಾ.9.45ಕ್ಕೆ, ಸಲಾರ್ –1 (ಹಿಂ): ಮ.2.35ಕ್ಕೆ,
ಸ್ಕ್ರೀನ್ 4	ಮೈಗ್ರೇಷನ್ (3ಡಿ)(ಇಂ): ಬೆ.10.30ಕ್ಕೆ, ರಾ.7.55ಕ್ಕೆ, ಡಂಕಿ (ಹಿಂ): ಮ.12.35ಕ್ಕೆ, ಸಂ.4.35ಕ್ಕೆ, ಸಲಾರ್–1 (ಹಿಂ): ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮ ಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಅಕ್ವಾಮ್ಯಾನ್ ಅಂಡ್ ಲಾಸ್ಟ್ ಕಿಂಗ್‌ಡಮ್ (3ಡಿ)(ಇಂ): ಬೆ.9.35ಕ್ಕೆ, ಮ.3.55ಕ್ಕೆ, ರಾ.10ಕ್ಕೆ, ಡಂಕಿ (ಹಿಂ): ಬೆ.9ಕ್ಕೆ, ಬೆ.11.40ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ಸಂ.6.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ನೆರು (ಮ): ರಾ.10.10ಕ್ಕೆ, ಸಲಾರ್ –1 (ಮ): ಸಂ.6.35ಕ್ಕೆ, ಸಲಾರ್–1 (ಹಿಂ): ಮ.2.50ಕ್ಕೆ, ಸಂ.5.55ಕ್ಕೆ, ರಾ.10ಕ್ಕೆ, ಸಲಾರ್–1 (ಕ): ಬೆ.8.05ಕ್ಕೆ, ಬೆ.11.15ಕ್ಕೆ, ಮ.3ಕ್ಕೆ, ಸಂ.6.25ಕ್ಕೆ, ಸಲಾರ್– 1(ತೆ): ಬೆ.7.10ಕ್ಕೆ, ಬೆ.7.40ಕ್ಕೆ, ಬೆ.8.10ಕ್ಕೆ, ರಾ.10.45ಕ್ಕೆ, ಬೆ.11.45ಕ್ಕೆ, ಮ.12.20ಕ್ಕೆ, ಮ.3.20ಕ್ಕೆ, ಮ.2.20ಕ್ಕೆ, ಸಂ.6.55ಕ್ಕೆ, ರಾ.9.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪ ಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ದೊಡ್ಡಕವಲಂದೆ ಗ್ರಾಪಂನಲ್ಲಿ ಹಣ ದುರ್ಬಳಕೆ ಆರೋಪ

ಪಿಡಿಓ ಸೇವೆಯಿಂದ ಅಮಾನತು

ನಂಜನಗೂಡು, ಜ.9– ತಾಲೂಕಿನ ದೊಡ್ಡ ಕವಲಂದೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಬಿಡುಗಡೆ ಮಾಡಲಾಗಿದ್ದ ಹಣವನ್ನು ದುರ್ಬಳಕೆ ಮಾಡಿಕೊಂಡಿರುವ ಆರೋಪದ ಮೇರೆಗೆ ಈ ಹಿಂದೆ ಕವಲಂದೆ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಂಚಾಯತ್ ಅಭಿವೃದ್ಧಿ ಅಧಿಕಾರಿಯನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.



ಹಾಲಿ ಕೊಡಗು ಜಿಲ್ಲೆಮಡಿಕೇರಿ ತಾಲೂಕಿನ ಮಕಂದೂರು ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪುರುಷೋತ್ತಮ್ ಅಮಾನತುಗೊಂಡವರು. ಇವರು ನಂಜನಗೂಡು ತಾಲೂಕಿನ ದೊಡ್ಡ ಕವಲಂದೆ ಪಂಚಾಯತಿಯಲ್ಲಿ ಪಿಡಿಓ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ 26.25 ಲಕ್ಷ ರೂ. ಅನುದಾನವನ್ನು ಶೌಚಾಲಯ ನಿರ್ಮಾಣದ ಬದಲಾಗಿ ಅನ್ಯ ಉದ್ದೇಶಕ್ಕೆ ಬಳಸಿಕೊಂಡಿದ್ದು, ಜೊತೆಗೆ 2020–21 ಹಾಗೂ 22–23ನೇ ಸಾಲಿನಲ್ಲಿ 8,73,796ರೂಗಳನ್ನು ನಿಯಮ ಬಾಹಿರವಾಗಿ ಪಂಚಾಯತಿ ಬಿಲ್ ಕಲೆಕ್ಟರ್ ಬ್ಯಾಂಕ್ ಖಾತೆಗೆ ವರ್ಗಾಯಿಸುವ ಮೂಲಕ ದುರುಪಯೋಗ ಪಡಿಸಿಕೊಂಡಿರುವುದು ಇಲಾಖಾ ತನಿಖೆಯಲ್ಲಿ ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ತಕ್ಷಣದಿಂದ ಜಾರಿಗೆ ಬರುವಂತೆ ಮಡಿಕೇರಿ ತಾಲೂಕಿನ ಮಕಂದೂರು ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪುರುಷೋತ್ತಮ್ ಅವರನ್ನು ಅಮಾನತ್ತು ಪಡಿಸಿರುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತರಾದ ಪ್ರಿಯಾಂಕ ಮೇರಿ ಫ್ರಾನ್ಸಿಸ್ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಕಾಯ್ದೆ ವಿರೋಧಿಸಿ ಜ.17, ಸರಕು ಸಾಗಾಣಿಕೆ ಸ್ಥಗಿತಗೊಳಿಸಿ ಪ್ರತಿಭಟನೆ

ನಂಜನಗೂಡು, ಜ.9– ಕೇಂದ್ರ ಸರ್ಕಾರ ಪರಿಷ್ಕೃತ ವಾಹನ ಕಾಯ್ದೆ ಅವೈಜ್ಞಾನಿಕವಾಗಿದ್ದು, ತಕ್ಷಣ ಈ ವಿಧೇಯಕವನ್ನು ಹಿಂಪಡೆಯುವಂತೆ ಒತ್ತಾಯಿಸಿ ಜ.17ರಂದು ಸರಕು ಸಾಗಾಣಿಕೆಯನ್ನು ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಲಾಗುವುದು ಎಂದು ಲಾರಿ ಮಾಲೀಕರ ಸಂಘದ ಗೌರವಾಧ್ಯಕ್ಷ ವಿಶ್ವನಾಥ್ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೂತನ ನಾಗರೀಕ ಸುರಕ್ಷತೆ ಕಾಂಯ್ದೆ 2023 ವಿಧೇಯಕಕ್ಕೆ ಸಂಬಂದಿಸಿದಂತೆ ಎಲ್ಲಾ ಬಗೆಯ ವಾಹನ ಚಾಲನೆ ಮಾಡುವ ಚಾಲಕರಿಗೆ, ತಮ್ಮ ವಾಹನಗಳು ಅಪಘಾತಕ್ಕೆ ಸಿಲುಕಿ ನಾಗರೀಕರು ಸಾವು ಸಂಭವಿಸಿದರೆ ಚಾಲಕರ ಮೇಲೆ 10 ವರ್ಷಗಳ ಕಾಲ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 10 ಲಕ್ಷದ ವರೆಗೆ ದಂಡವನ್ನು ಹಾಕುವ ನಿರ್ಣಯವನ್ನು ಕೇಂದ್ರ ಸರ್ಕಾರದ ಮಾನ್ಯ ಗೃಹಮಂತ್ರಿಗಳಾದ ಅಮಿತ್ ಶಾ ರವರು ಸಂಸತ್ ಭವನದಲ್ಲಿ ಪ್ರಸ್ತಾಪಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರದ ಈ ಕ್ರಮದಿಂದ ಸಾರಿಗೆ ಉದ್ಯಮವನ್ನು ಅವಲಂಬಿಸಿರುವ ಲಕ್ಷಾಂತರ ವಾಹನ ಚಾಲಕರು ನಿರ್ವಾಕರು, ಲಾರಿ ಮಾಲೀಕರು ಕಂಗಾಲಾಗಿದ್ದಾರೆ. ಕೇಂದ್ರ ಸರ್ಕಾರ ಜಾರಿಗೆ ತರಲು ಹೊರಟಿರುವ ಈ ವಿಧೇಯಕದಲ್ಲಿ ಹಲವು ದೋಷ ಪೂರಿತ ಕಾನೂನುಗಳನ್ನು ಜಾರಿಗೆ ಬಾರದಂತೆ ತಡೆಯುವ ಸಲುವಾಗಿ ರಾಜ್ಯ ಲಾರಿ ಮಾಲೀಕರ ಮತ್ತು ಚಾಲಕರ ಕ್ಷೇಮಾಭಿವೃದ್ಧಿ ಸಂಘವು ಜ.17ರಂದು ಪ್ರತಿಭಟನೆ ನಡೆಸಲು ಮುಂದಾಗಿದ್ದು ಅಂದು ದಿನ ನಿತ್ಯದ ಅಗತ್ಯ ವಸ್ತುಗಳನ್ನು ಹೊರತುಪಡಿಸಿ ಎಲ್ಲಾ ಬಗೆಯ ಸರಕು ಸಾಗಾಣಿಕೆಯನ್ನು ಸ್ಥಗಿತಗೊಳಿಸಲಾಗುವುದು ಎಂದರು.

ಗೋಷ್ಠಿಯಲ್ಲಿ ಎನ್.ಸಿದ್ದಪ್ಪ ಸಜ್ಜಾದ್ ಪಾಷ, ಮಂಜುನಾಥ್, ಶ್ರೀನಿವಾಸ್, ಶೇಷಾದ್ರಿ, ಪವನ, ವೆಂಕಟೇಶ್, ಮರಿಸ್ವಾಮಿ, ಶರತ್, ಉಮೇಶ್, ಗುರುಪ್ರಸಾದ್, ಮಂಜೇಶ್ ಇದ್ದರು.

ಪತ್ರಕರ್ತರ ಸಂಘದ ಕ್ಯಾಲೆಂಡರ್ ಬಿಡುಗಡೆ

ಸರಗೂರು, ಜ.9– ಸಮಾಜ ಸರಿ ದಾರಿಯಲ್ಲಿ ನಡೆಯಬೇಕಾದರೆ ಪತ್ರಕರ್ತರ ಪಾತ್ರವೂ ಮಹತ್ವದ್ದಾಗಿದೆ ಎಂದು ಸುತ್ತೂರು ಮಠದ ಶಿವರಾತ್ರಿಶ್ವರ ದೇಶಿಕೇಂದ್ರ ಮಹಾಸ್ವಾಮೀಜಿ ತಿಳಿಸಿದರು. ಸರಗೂರು ಪಟ್ಟಣದ ಜೆಎಸ್‌ಎಸ್ ಕಾಲೇಜು ಆವರಣದಲ್ಲಿ ಪತ್ರಕರ್ತರ ನೂತನ ಕ್ಯಾಲೆಂಡರನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಕಾರ್ಯಾಂಗ ನ್ಯಾಯಾಂಗದ ರೀತಿ ಪತ್ರಿಕಾ ರಂಗವು ಸಹ ಒಂದು ಅಂಗವಾಗಿದ್ದು ಸಮಾಜದಲ್ಲಿ ಆಗುವ ಏಳು ಬೀಳುಗಳನ್ನು ಎತ್ತಿ ತೋರಿಸುವ ಮೂಲಕ ಸಮಾಜವನ್ನು ತಿದ್ದುವ ಮೂಲಕ ಪತ್ರಕರ್ತರು ಕಾರ್ಯೋನ್ಮುಖರಾಗಿದ್ದಾರೆ, ಆದ್ದರಿಂದ ಪತ್ರಿಕಾ ರಂಗವು ಸಮಾಜದಲ್ಲಿ ತನ್ನದೇ ಆದ ಮಹತ್ವವನ್ನೂ ಹೊಂದಿದೆ ಎಂದರು.



ಕ್ಯಾಲೆಂಡರ್ ಬಿಡುಗಡೆ ಮಾಡುತ್ತಿರುವ ಸುತ್ತೂರು ಶ್ರೀಗಳು


ಈ ವೇಳೆ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಬೀಚನಹಳ್ಳಿ ಮಂಜು, ಉಪಾಧ್ಯಕ್ಷ ಎಡತೊರೆ ಮಹೇಶ್, ಖಜಾಂಚಿ ಮಂಜು ಕೋಟೆ, ಪ್ರಧಾನ ಕಾರ್ಯದರ್ಶಿ ಎಸ್.ಆರ್. ನಾಗಾರಾವು, ನಿರ್ದೇಶಕರುಗಳಾದ ಜಿ.ರವಿಕುಮಾರ್, ರೇಣುಕಾ ತುಂಬಸೋಗೆ, ರಂಗರಾಜು, ರವಿಕುಮಾರ್, ಪುಟ್ಟರಾಜು, ನಾಗೇಶ್, ಸದಸ್ಯರುಗಳಾದ ಶ್ರೀನಿಧಿ, ಕನ್ನಡಪ್ರಮೋದ್, ದಾಸೇಗೌಡ, ಚಿಕ್ಕಣ್ಣ, ಸುರೇಶ್, ವಾಸುಕಿ ನಾಗೇಶ್, ಚಂದ್ರ ಸೇರಿದಂತೆ ಇತರರು ಹಾಜರಿದ್ದರು.

ಇಂದು ಜಾನುವಾರುಗಳ ಆರೋಗ್ಯ ತಪಾಸಣಾ ಶಿಬಿರ

ಬನ್ನೂರು, ಜ.9– ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ, ಕರ್ನಾಟಕ ರಾಜ್ಯ ರೈತ ಸಂಘ, ಪಶುಪಾಲನಾ ಮತ್ತು ಪಶು ಇಲಾಖೆ ಹಾಗೂ ಮೇಗಲಕೊಪ್ಪಲಿನ ಹಾಲು ಉತ್ಪಾದನಾ ಸಹಕಾರ ಸಂಘದ ಸಹಯೋಗದಲ್ಲಿ ಜಾನುವಾರುಗಳ ಆರೋಗ್ಯ ತಪಾಸಣಾ ಶಿಬಿರವನ್ನು ಬುಧವಾರ (ಜ.10) ಮೇಗಲಕೊಪ್ಪಲಿನ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕಲಿಗ ವಿಕಾಸ ವೇದಿಕೆಯ ರಾಜ್ಯಾಧ್ಯಕ್ಷೆ ಯಮುನಾ ತಿಳಿಸಿದರು. ಮುಂಜಾನೆ 7 ಗಂಟೆಯಿಂದ ಆರಂಭವಾಗುವ ಜಾನುವಾರುಗಳ ಆರೋಗ್ಯ ತಪಾಸಣಾ ಶಿಬಿರದಲ್ಲಿ ಚರ್ಮ ಗಂಟು ರೋಗದ ವಿರುದ್ಧ ಲಸಿಕೆ, ಕುರಿ ಮೇಕೆಗಳಿಗೆ ಈಟಿ ಲಸಿಕೆ, ಎಲ್ಲಾ ಜಾನುವಾರುಗಳಿಗೆ ಜಂತುನಾಶಕ ಔಷಧ ವಿತರಣೆ, ಹಸು ಎಮ್ಮೆಗಳಿಗೆ ಬರಡು ರಾಸು ತಪಾಸಣೆ ಮತ್ತು ಚಿಕಿತ್ಸೆ ನೀಡುವ ಕಾರ್ಯವು ನಡೆಯಲಿದ್ದು, ಗ್ರಾಮಸ್ಥರು ಸದುಪಯೋಗ ಪಡಿಸಿಕೊಳ್ಳುವಂತೆ ಅವರು ತಿಳಿಸಿದರು.

ಬಾರದ ಚುನಾವಣಾಧಿಕಾರಿ, ನಡೆಯದ ಚುನಾವಣೆ

ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದ ನಿರ್ದೇಶಕರು, ಸದಸ್ಯರು, ಗ್ರಾಮಸ್ಥರು



ಹುರ ಡೇರಿ ಮುಂದೆ ಪ್ರತಿಭಟನೆ ನಡೆಸುತ್ತಿರುವ ನಿರ್ದೇಶಕರು

ಮಲ್ಕುಂಡಿ, ಜ.9–ಅಲ್ಲಿ ಎಲ್ಲಾ ಸಿದ್ಧತೆಯಾಗಿತ್ತು. ಚುನಾವಣಾ ದಿನಾಂಕ, ಸಮಯ ಕೂಡ ನಿಗದಿಯಾಗಿತ್ತು. ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಆಕಾಂಕ್ಷಿಗಳು ಆಗಮಿಸಿದ್ದರು. ನಿರ್ದೇಶಕರು, ಸದಸ್ಯರು, ಗ್ರಾಮಸ್ಥರು ಕೂಡ ಭಾಗವಹಿಸಿದ್ದರು. ಆದರೆ ಚುನಾವಣಾಧಿಕಾರಿಯೇ ಬರಲಿಲ್ಲ. ಚುನಾವಣೆಯೂ ನಡೆಯಲಿಲ್ಲ.

ಇದು ನಂಜನಗೂಡು ತಾಲೂಕು ಹುರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಕಂಡು ಬಂದ ಚಿತ್ರಣ. ಇದರಿಂದ ಆಕ್ರೋಶಗೊಂಡ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರು, ಸದಸ್ಯರು ಮತ್ತು ಗ್ರಾಮಸ್ಥರು ಪ್ರತಿಭಟನೆ ನಡೆಸಿ, ಚುನಾವಣಾಧಿಕಾರಿ ವಿರುದ್ಧ ಘೋಷಣೆ ಕೂಗಿದರು.

ಮಂಗಳವಾರ ಹುರ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಚುನಾವಣೆ ನಿಗದಿಯಾಗಿತ್ತು. ಚುನಾವಣಾಧಿಕಾರಿಯಾಗಿ ಅವಿನಾಶ್ ಅವರನ್ನು ನೇಮಕ ಮಾಡಲಾಗಿತ್ತು. ಎಲ್ಲರೂ ಹಾಜರಿದ್ದು, ಎಲ್ಲವೂ ಸಿದ್ಧಗೊಂಡಿತ್ತಾದರೂ, ಚುನಾವಣಾಧಿಕಾರಿ ಯಾವುದೇ ಸುಳಿವು ನೀಡದೆ ನಾಪತ್ತೆಯಾಗಿದ್ದರು. ಯಾವುದೇ ಕರೆಯನ್ನು ಸ್ವೀಕರಿಸದೆ ನಿರ್ಲಕ್ಷ್ಯದಿಂದ ವರ್ತಿಸಿದರು ಎಂದು ಹೇಳಲಾಗಿದೆ.

ಬೆಳಗ್ಗೆಯಿಂದ ಮಧ್ಯಾಹ್ನದವರೆಗೂ ಕಾದ ನಿರ್ದೇಶಕರು, ಸದಸ್ಯರು ಮತ್ತು ಗ್ರಾಮಸ್ಥರು, ಮಧ್ಯಾಹ್ನದ ನಂತರ ಹುರ ಹಾಲು ಉತ್ಪಾದಕರ ಸಹಕಾರ ಸಂಘದ ಕಚೇರಿ ಎದುರು ಪ್ರತಿಭಟನೆ ಕುಳಿತು ಚುನಾವಣಾಧಿಕಾರಿ ವರ್ತನೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.

'ಚುನಾವಣಾಧಿಕಾರಿಯ ಬೇಜವಬ್ದಾರಿ ನಡವಳಿಕೆಯಿಂದ ಚುನಾವಣೆ ನಡೆದಿಲ್ಲ. ಚುನಾವಣೆ ಎಂದರೆ ಕಾಟಾಚಾರಕ್ಕೆ ನಡೆಯುವ ಪ್ರಕ್ರಿಯೆ ಎಂದು ತಿಳಿದುಕೊಂಡ ಂತಿದೆ. ಅವರಿಗೆ ನಮ್ಮ ಧಿಕ್ಕಾರವಿದೆ' ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಸಂಬಂಧ ಪಟ್ಟ ಯಾವುದೇ ರಾಜಕಾರಣಿ, ಅಧಿಕಾರಿಗಳು ಉತ್ತರ ನೀಡದೆ ಮೌನ ವಹಿಸಿದ್ದು, ಹಲವಾರು ಅನುಮಾನಗಳಿಗೆ ಎಡೆಮಾಡಿಕೊಟ್ಟಿತ್ತು.

ಒಂದು ಮೂಲದ ಪ್ರಕಾರ ಕೆಲ ರಾಜಕಾರಣಿಗಳ ಒತ್ತಡಕ್ಕೆ ಮಣಿದು ಚುನಾವಣಾಧಿಕಾರಿ, ಬಾರದೆ ಗೈರು ಹಾಜರಾಗಿದ್ದಾರೆ ಎಂದರೆ ಮತ್ತೊಂದು ಮೂಲದ ಪ್ರಕಾರ ಅನಾರೋಗ್ಯವೆಂದು ಸುಳ್ಳು ಕಾರಣ ನೀಡಿ ಅವರು ಭಾಗ ವಹಿಸಲಿಲ್ಲ ಎಂದು ಹೇಳಲಾಗುತ್ತಿದೆ.

ಹಿಂದಿನ ದಿನ ಹಾಲು ಉತ್ಪಾದಕರ ಸಂಘದ ಸಿಓ ಮತ್ತು ಕಾರ್ಯದರ್ಶಿಗೆ ಕರೆ ಮಾಡಿ ನಾಳೆ (ಮಂಗಳವಾರ) ಬೆಳಗ್ಗೆ 10 ಗಂಟೆಗೆ ಬಂದು ಚುನಾವಣಾ ಪ್ರಕ್ರಿಯೆ ನಡೆಸುವುದಾಗಿ ತಿಳಿಸಿದ್ದವರು ಯಾವುದೇ ಕಾರಣ ನೀಡದೇ ಏಕಾಏಕಿ ನಾಪತ್ತೆಯಾಗಿದ್ದು, ನಿಗೂಢವಾಗಿದೆ. ನಂಜನಗೂಡು ತಾಲೂಕಿನಲ್ಲಿ ಇದು ಅಪರೂಪದ ಪ್ರಥಮ ಪ್ರಕರಣ ಎನ್ನಲಾಗಿದೆ.

ಹುಣಸೂರಲ್ಲಿ ಜನತಾ ದರ್ಶನ ನಡೆಸಿದ ಎಂಎಲ್‌ಸಿ ವಿಶ್ವನಾಥ್



ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುತ್ತಿರುವ ಎಂಎಲ್‌ಸಿ ವಿಶ್ವನಾಥ್

ಹುಣಸೂರು, ಜ.9– ವಿಧಾನಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ಅವರು ಇಲ್ಲಿನ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜನತಾ ದರ್ಶನ ಕಾರ್ಯಕ್ರಮ ನಡೆಸಿ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವ ಅಭಯ ನೀಡಿದರು.

ತಾಲೂಕಿನ ಹಲವಾರು ಜ್ವಲಂತ ಸಮಸ್ಯೆಗಳು ಅನಾವರಣಗೊಂಡವು. ಕಂದಾಯ ಇಲಾಖೆಯ ಖಾತೆ, ಪೋಡು, ಪಾಣಿಗಳನ್ನು ಮಾಡಿಕೊಡುತ್ತಿಲ್ಲ ಸಮಸ್ಯೆಯಾಗುತ್ತಿದೆ. ಬಸ್‌ಗಳ ಸೇವೆ ಸಮರ್ಪಕವಾಗಿಲ್ಲ. ಪೌರ ಕಾರ್ಮಿಕರಿಗೆ ಕುಡಿಯುವ ನೀರು ಮತ್ತು ಮನೆಗಳು ಇಲ್ಲದೆ ಪರದಾಡುವಂತಾಗಿದೆ. ರಸ್ತೆ, ದೇವಸ್ಥಾನ, ಸಮುದಾಯ ಭವನ, ಆಸ್ಪತ್ರೆಯಲ್ಲಿನ ಡಾಕ್ಟರ್‌ಗಳ ಕೊರತೆ, ರೈತರ ಪಂಪ್‌ಸೆಟ್‌ಗೆ ವಿದ್ಯುತ್ ಮತ್ತಿತರ ಸಮಸ್ಯೆಗಳ ಬಗ್ಗೆ ನೂರಾರು ದೂರುಗಳು ಬಂದವು.

ಕೊಳೆತು ನಾರುತ್ತಿರುವ ಐತಿಹಾಸಿಕ ಹಿನ್ನೆಲೆ ಇರುವ ಲಕ್ಷ್ಮಣತೀರ್ಥ ನದಿ. ಈ ಕಲುಷಿತ ನೀರಿನಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಇದನ್ನು ತಾವು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಕೋರಲಾಯಿತು. ಗಾವಡಗೆರೆ, ಹಲ್ಯಾಳು, ರಾಯನಹಳ್ಳಿ ಕೆರೆಗಳನ್ನು ಅರಣ್ಯ ಇಲಾಖೆಯವರಿಂದ ಗ್ರಾಮ ಪಂಚಾಯ್ತಿಗೆ ವಹಿಸುವಂತೆ, ಗಾವಡಗೆರೆ ಕೆರೆ ಹಾಗೂ ಹಲ್ಯಾಳು ಕೆರೆ ಹಾಗೂ ಇನ್ನಿತರ ಕೆರೆಗಳಿಗೆ ಲಕ್ಷ್ಮಣತೀರ್ಥ ನದಿಯ ತೊಂಡಾಳು ಅಣೆಕಟ್ಟೆಯಿಂದ ಏತ ನೀರಾವರಿ ಯೋಜನೆಯಿಂದ ಕೆರೆ ಭರ್ತಿ ಮಾಡುವ ಯೋಜನೆ ಮಾಡುವಂತೆ ಕೋರಲಾಯಿತು.

ಮೈಸೂರು ಚಳಿಗಾಲದ ರೇಸುಗಳು



7ನೇ ದಿನ, ಬುಧವಾರ 10-1-2024

ಇಂದಿನ ರೇಸಿಗೆ ನಮ್ಮ ಆಯ್ಕೆ

(ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ)

I. ಕುಟ್ಟ ಪ್ಲೇಟ್–1200 ಮೀ. 3 ವರ್ಷದ (ಟರ್ಮ್ಸ್). ಮ.2.00ಕ್ಕೆ
1. ಶಿ ಈಸ್ ಅನ್‌ಸ್ಟಾಪಬಲ್ 2. ಕ್ಯಾಲಿಫ್‌ಸೋ ಕಿಂಗ್ 3. ಫೈರ್ ಬೋಲ್ಟ್

II. ಸ್ಪ್ಲಾಷ್ ಪ್ಲೇಟ್–1200 ಮೀ. ರೇಟೆಡ್ 00 ರಿಂದ 25. ಮ.2.30ಕ್ಕೆ
1. ಫ್ಲೀಟ್ ಟ್ಯಾಕ್ಟೀಕಲ್ 2. ಅರಿಗಾಟೋ 3. ಯೂನಿಟಿ

III. ವರುಣ ಪ್ಲೇಟ್–1400 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1 ವೆನ್‌ಚೆಂಗ್ 2. ಮೈ ಲೈಫ್ ಮೈ ರೂಲ್ಸ್ 3 ಐ ಕ್ಯಾನ್

IV. ಸೋಲಿಟೇರ್ ಪ್ಲೇಟ್ ಡಿ2–1200 ಮೀ. ರೇಟೆಡ್ 20 ರಿಂದ 45. ಮ.3.30ಕ್ಕೆ
1. ಕೇಸರಿ ಕ್ವೀನ್ 2. ಸ್ಟಾರ್ ಜ್ಯೂವೆಲ್ 3. ಬೈಸನ್

V. ಸಿ. ದಶರಥ ರಾಮ ಶೆಟ್ಟಿ ಮೆಮೋರಿಯಲ್ ಟ್ರೋಫಿ–1400 ಮೀ. ರೇಟೆಡ್ 80 ಮತ್ತು ಮೇಲ್ವರ್ಗ. ಮ.4.00ಕ್ಕೆ
1. ಐರನ್ ಕ್ಲಾಡ್ 2. ಸೆಗೇರಾ 3. ಹವೇಲಾಕ್ ಕ್ರೂಸ್

VI. ಹಳೆಬೀಡು ಪ್ಲೇಟ್–1200 ಮೀ. ರೇಟೆಡ್ 40 ರಿಂದ 65.(ನೋ ವ್ಹಿಪ್) ಸಂ.4.30ಕ್ಕೆ
1 ಫ್ಯೂರಿಯಸ್ ಫನ್ 2. ಇಂಪೀರಿಯಸ್ 3. ಇಂಡಿಯನ್ ಪೆಟ್ರಿಯಟ್

VII. ಸೋಲಿಟೇರ್ ಪ್ಲೇಟ್ ಡಿ1–1200 ಮೀ. ರೇಟೆಡ್ 20 ರಿಂದ 45. ಸಂ.5.00ಕ್ಕೆ
1 ಬ್ಯೂಟಿಫುಲ್ ಒಬ್ಲಿವಿಯನ್ 2 ಸಿಯೋಲ್ ಫಾರ್ ಬುಲೆಟ್ 3. ಮೇಬರಿ

ದಿನದ ಅತ್ಯುತ್ತಮ..............................	: ವೆನ್‌ಚೆಂಗ್
ಡಬ್ಬಲ್..............................	: ಶಿ ಈಸ್ ಅನ್‌ಸ್ಟಾಪಬಲ್, ಪ್ಯೂರಿಯಸ್ ಫನ್
ಜಾಕ್‌ಪಾಟ್..............................	: 3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್..............................	: 4, 5, 6 ಮತ್ತು 7
I ಟ್ರಿಬಲ್..............................	: 2, 3 ಮತ್ತು 4
II ಟ್ರಿಬಲ್..............................	: 5, 6 ಮತ್ತು 7
ಎಕ್ಸ್‌ಆಕ್ಟ್..............................	: 1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಬನ್ನೂರು ಡೇರಿ ಅಧ್ಯಕ್ಷ–ಉಪಾಧ್ಯಕ್ಷ ಸ್ಥಾನ ಜೆಡಿಎಸ್ ತೆಕ್ಕೆಗೆ

ಬಿ.ಎನ್.ಕೃಷ್ಣೇಗೌಡ ಅಧ್ಯಕ್ಷ, ಬಿ.ಸಿ.ಉಮೇಶ್ ಕುಮಾರ್ ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ

ತಿ.ನರಸೀಪುರ, ಜ.9–ತಾಲೂಕಿನ ಬನ್ನೂರು ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಬಿ.ಎನ್.ಕೃಷ್ಣೇಗೌಡ, ಉಪಾಧ್ಯಕ್ಷರಾಗಿ ಬಿ.ಸಿ.ಉಮೇಶ್ ಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬನ್ನೂರು ಪಟ್ಟಣದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ಮಂಗಳವಾರ ನಡೆದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಈ ಇಬ್ಬರನ್ನು ಹೊರತು ಪಡಿಸಿ ಬೇರಾವುದೇ ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿ ಸಹಕಾರ ಇಲಾಖೆಯ ರಾಜಣ್ಣ ಅಧ್ಯಕ್ಷ –ಉಪಾಧ್ಯಕ್ಷರ ಅವಿರೋಧ ಆಯ್ಕೆಯನ್ನು ಘೋಷಿಸಿದರು.



ವಿಜಯೋತ್ಸವ ಆಚರಿಸುತ್ತಿರುವ ಬನ್ನೂರು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು

ಸಂಘದ ನಿರ್ದೇಶಕರುಗಳಾದ ಬಿ.ಉಮೇಶ್, ಎಂ.ಚಂದ್ರುನಿಂಗಪ್ಪ, ಮಹೇಶ್, ಬಿ.ಎಸ್. ರಾಜೀವ, ರುದ್ರ, ವೆಂಕಟೇಶ್, ಬಿ.ಎಸ್. ಶಿವಕುಮಾರ್, ಬಿ.ಕೆ.ಶೋಭಾ, ಶ್ರೀಧರ, ಸುಶೀಲ ಚುನಾವಣಾ ಸಭೆಯಲ್ಲಿ ಹಾಜರಿದ್ದು ಸಹಕಾರ ಸಂಘದ ವರಿಷ್ಠರ ಆಯ್ಕೆಗೆ ಅನುಮೋದನೆ ನೀಡಿದರು. ಸಹಾಯಕ ಚುನಾವಣಾಧಿಕಾರಿಯಾಗಿ ಡೈರಿ ಕಾರ್ಯದರ್ಶಿ ರಾಘು ಕರ್ತವ್ಯ ನಿರ್ವಹಿಸಿದರು.

ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ ಪ್ರಕಟವಾಗುತ್ತಿದ್ದಂತೆ ಡೈರಿ ಮುಂಭಾಗ ನೆರೆದಿದ್ದ ಅಭಿಮಾನಿಗಳು, ಜೆಡಿಎಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ನೂತನ ಅಧ್ಯಕ್ಷ ಬಿ.ಎನ್.ಕೃಷ್ಣೇ ಗೌಡ ಮಾತನಾಡಿ ಬನ್ನೂರು ಹಾಲು ಉತ್ಪಾದಕರ ಸಹಕಾರ ಸಂಘವನ್ನು ಮಾದರಿ ಸಂಘವಾಗಿ ರೂಪಿಸಲು ಶ್ರಮಿಸಲಾಗುವುದು ಎಂದರು.

ಷೇರುದಾರರು ಸಂಘಕ್ಕೆ ಉತ್ತಮ ಗುಣಮಟ್ಟದ ಹಾಲನ್ನು ಸರಬರಾಜು ಮಾಡಬೇಕು. ಸಂಘವು ಉಳಿದರೆ ನಾವೆಲ್ಲರೂ ಉಳಿದಂತೆ ಆದ್ದರಿಂದ ನನ್ನ ಅವಧಿಯಲ್ಲಿ ಎಲ್ಲರ ಸಹಕಾರದಿಂದ ಸಂಘದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ಭರವಸೆ ನೀಡಿದರು.

ಲಕ್ಷ್ಮಮ್ಮ ನಿಧನ



ಕೆ.ಆರ್.ಪೇಟೆ, ಜ.9– ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಪಂ ಸದಸ್ಯ ಕುಮಾರಗೌಡ ಅವರ ತಾಯಿ ಲಕ್ಷ್ಮಮ್ಮ(76) ಮಂಗಳವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ (ಜ.10) ಬೆಳಗ್ಗೆ 11 ಗಂಟೆಗೆ ಮೃತರ ತೋಟದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜನವರಿ ತಿಂಗಳಾಂತ್ಯಕ್ಕೆ ಭಾಗಮಂಡಲ ಸೇತುವೆ ಕಾರ್ಯ ಮುಕ್ತಾಯಕ್ಕೆ ಗಡುವು


ಬೋಸರಾಜು



ಬೆಂಗಳೂರು, ಜ.9– ಅಪೂರ್ಣಗೊಂಡಿರುವ ಕೊಡಗು ಜಿಲ್ಲೆ ವಿರಾಜಪೇಟೆ ತಾಲೂಕು ಭಾಗಮಂಡಲ ಮೇಲ್ಸೇತುವೆ ಕಾಮಗಾರಿಯನ್ನು ಜನವರಿ ತಿಂಗಳಾಂತ್ಯಕ್ಕೆ ಮುಗಿಸುವಂತೆ ಕಾವೇರಿ ಜಲ ನಿಗಮ ನಿಯಮಿತದ ಅಧಿಕಾರಿಗಳಿಗೆ ಗಡುವು ನೀಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.

ಸಚಿವರ ಅಧ್ಯಕ್ಷತೆಯಲ್ಲಿ ಮಂಗಳವಾರ ವಿಕಾಸಸೌಧದಲ್ಲಿ ನಡೆದ ಸಭೆಯಲ್ಲಿ ಜಲ ಸಂಪನ್ಮೂಲ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ಹಾಗೂ ಕಾವೇರಿ ಜಲ ನಿಗಮ ನಿಯಮಿತದ ಅಧಿಕಾರಿಗಳು ಭಾಗವಹಿಸಿದ್ದರು. ಹಲವಾರು ವರ್ಷಗಳಿಂದ ಈ ಸೇತುವೆಯ ಕಾಮಗಾರಿ ನಡೆಯುತ್ತಿದೆ. ಆದರೆ, ಇದುವರೆಗೂ ಇದನ್ನು ಪೂರ್ಣಗೊಳಿಸಲಾಗಿಲ್ಲ. ಸಾರ್ವಜನಿಕರ ಅನುಕೂಲಕ್ಕಾಗಿ ಇದನ್ನು ಶೀಘ್ರವಾಗಿ ಮುಗಿಸುವ ಅವಶ್ಯಕತೆಯಿದೆ. ಅಂತಿಮ ಹಂತದ ಕಾಮಗಾರಿಯನ್ನು ತಿಂಗಳಾಂತ್ಯದ ಒಳಗೆ ಮುಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು. ಜಲ ಸಂಪನ್ಮೂಲ, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಕೇಶ್ ಸಿಂಗ್ ಮಾತನಾಡಿ, ಸ್ಥಳೀಯ ಅಧಿಕಾರಿಗಳು ಕಾಮಗಾರಿಯನ್ನು ಮುಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು. ಪ್ರತಿ ದಿನ ಕಾಮಗಾರಿ ಪ್ರಗತಿಯ ವರದಿಯನ್ನು ನೀಡುವಂತೆ ಸೂಚನೆ ನೀಡಿದರು.

ಹೆಚ್.ಡಿ.ಕೋಟೆ ಬಳಿ ಮರಗಳ ಹನನ: ಗ್ರಾಮಸ್ಥರ ಆಕ್ರೋಶ


(ಸಂಗ್ರಹ ಚಿತ್ರ)

ಹೆಚ್.ಡಿ.ಕೋಟೆ, ಜ. 9– ಪುರಾತನ ಮತ್ತು ಇತಿಹಾಸವಿರುವ ದೇವಾಲಯದ ಸುತ್ತ–ಮುತ್ತ ಬೆಳೆದಿದ್ದ ಮರಗಳ ಹನನ ಮಾಡಲಾಗಿದ್ದು, ಗ್ರಾಮಸ್ಥರು ಆಕ್ರೋಶಭರಿತರಾಗಿ ಪ್ರತಿಭಟನೆ ನಡೆಸಿರುವ ಘಟನೆ ತಾಲೂಕಿನ ಮುಳ್ಳೂರಿನಲ್ಲಿ ಮಂಗಳವಾರ ಸಂಭವಿಸಿದೆ.

ಸುಮಾರು 800 ವರ್ಷಗಳ ಇತಿಹಾಸವಿರುವ ಚೋಳರ ಕಾಲದ ಲಕ್ಷ್ಮೀಕಾಂತ ಸ್ವಾಮಿ ದೇವಸ್ಥಾನದ ಸುತ್ತ–ಮುತ್ತ ಇರುವ ಮರಗಳನ್ನು ಕಡಿದು ಉರುಳಿಸಲಾಗಿದೆ. ಈ ಪ್ರದೇಶವೂ ಭಾರತೀಯ ಪುರಾತತ್ವ ಇಲಾಖೆಗೆ ಸೇರಿದ್ದು, ಸ್ಥಳೀಯ ಗ್ರಾಮ ಪಂಚಾಯಿತಿ, ಅರಣ್ಯ ಇಲಾಖೆ ಮತ್ತು ಪುರಾತತ್ವ ಇಲಾಖೆಯ ಅನುಮತಿ ಪಡೆಯದೇ ಅಕ್ರಮವಾಗಿ ಮರಗಳನ್ನು ಹನನ ಮಾಡಲಾಗಿದೆ ಎಂದು ಗ್ರಾಮಸ್ಥರು ಆಪಾದಿಸಿದ್ದಾರೆ.

ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಯೊಂದರ ನೌಕರರೇ ಮರಗಳನ್ನು ಅಧಿಕಾರಿಯೊಬ್ಬರ ಮೌಖಿಕ ಆದೇಶದ ಮೇರೆಗೆ ಕಡಿಯಲಾಗಿದ್ದು, ಯಾವ ಉದ್ದೇಶಕ್ಕಾಗಿ ಕಡಿಯಲಾಗಿದೆ ಎಂಬುದು ತಿಳಿದುಬಂದಿಲ್ಲ.

ಈ ಕೃತ್ಯವೆಸಗಿರುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ನಟ ಯಶ್ ಗದಗ ಭೇಟಿ ವೇಳೆ ಅಪಘಾತಕ್ಕೀಡಾಗಿದ್ದ ಅಭಿಮಾನಿ ಸಾವು!

ಗದಗ, ಜ.9– ಯಶ್ ಹುಟ್ಟುಹಬ್ಬಕ್ಕೆ ಶುಭ ಕೋರುವ ಕಟೌಟ್ ನಿಲ್ಲಿಸುವಾಗ ವಿದ್ಯುತ್ ಸ್ಪರ್ಶದಿಂದ ಮೂವರು ಅಭಿಮಾನಿಗಳು ಮೃತಪಟ್ಟ ಘಟನೆ ಬೆನ್ನಲ್ಲೇ ನಟ ಯಶ್ ಗದಗ ಭೇಟಿ ವೇಳೆ ಮತ್ತೊಬ್ಬ ಅಭಿಮಾನಿ ಅಪಘಾತದಲ್ಲಿ ಮೃತಪಟ್ಟಿದ್ದಾನೆ. ನಟ ಯಶ್ ಜಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿ ವಾಪಸ್ ಆಗುತ್ತಿದ್ದಾಗ ಪೊಲೀಸ್ ವಾಹನಕ್ಕೆ ಬೈಕ್ ಡಿಕ್ಕಿಯಾಗಿ ಮತ್ತೊಬ್ಬ ಅಭಿಮಾನಿ ಸಾವನ್ನಪ್ಪಿದ್ದಾನೆ. ಈತನನ್ನು ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮದ ನಿಖಿಲ್ (22) ಎಂದು ಗುರುತಿಸಲಾಗಿದೆ.

ಗದಗ–ಮುಳುಗುಂದ ರಸ್ತೆಯಲ್ಲಿ ಯಶ್ ಬೆಂಗಾವಲು (ಪೊಲೀಸ್ ಬೆಂಗಾವಲು ವಾಹನ) ವಾಹನಕ್ಕೆ ಸ್ಕೂಟಿ ಡಿಕ್ಕಿ ಹೊಡೆದಿದ್ದು, ಗಂಭೀರವಾಗಿ ಗಾಯಗೊಂಡ ಯುವಕನನ್ನು ಕೂಡಲೇ ಗದಗ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ತೀವ್ರ ರಕ್ತಸ್ರಾವವಾಗಿದ್ದ ಕಾರಣ ಯುವಕ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ.

ನಿಧನ



ಬಿಜಿನೆಸ್ ಕೆ ನಾಗರಾಜು

ಹಿರಿಯ... ಪ್ರಥಮ ದರ್ಜೆ ಗುತ್ತಿಗೆದಾರರು ಹಾಗೂ ಹೊಸಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷರು ಇವರು ದಿನಾಂಕ 09.01.2024 ಮಂಗಳವಾರ ದೈವಾಧೀನರಾಗಿದ್ದು, ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 10.01.2024 ಬುಧವಾರ ಹೊಸಹುಂಡಿ ಗ್ರಾಮದ ರುದ್ರಭೂಮಿಯಲ್ಲಿ ಮಧ್ಯಾಹ್ನ 12 ಗಂಟೆಗೆ ನೆರವೇರಿಸಲಾಗುವುದು. ದುಃಖತಪ್ತರು: ಕುಟುಂಬವರ್ಗ

ಮೊದಲನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಬಸವರಾಜಮ್ಮ

ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿ ಹಚ್ಚಹಸಿರಾಗಿದೆ

ಇಂತಿ ನಿಮ್ಮ ಆತ್ಮಕ್ಕೆ ಶಾಂತಿ ಕೋರುವ,
ಶ್ರೀ ಗುರುಸಿದ್ದಪ್ಪ ಮತ್ತು ಕುಟುಂಬ ವರ್ಗದವರು,
ದೇವಯ್ಯನಹುಂಡಿ, ಮೈಸೂರು





ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ




ಜನನ : 10–07–1932 ಮರಣ: 31–12–2023

ಶ್ರೀಮತಿ ಕಮಲಮ್ಮ
ಕೂರ್ಗಳ್ಳಿ ಗ್ರಾಮದ ವಕೀಲರು ದಿ॥ ಬಿ.ಭೈರಪ್ಪನವರ ಧರ್ಮಪತ್ನಿ

ಇವರು ದಿನಾಂಕ: 31–12–2023 ಭಾನುವಾರ ಬೆಳಿಗ್ಗೆ 10.45ಕ್ಕೆ ಸ್ವರ್ಗಸ್ಥರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ದಿನಾಂಕ 10–01–2024 ಬುಧವಾರ ಬೆಳಗ್ಗೆ 11.00 ಗಂಟೆಗೆ ಹಾಲು ತುಪ್ಪವನ್ನು ಗೋಕುಲಂನ ರುದ್ರಭೂಮಿಯಲ್ಲಿ ಮತ್ತು ಭೋಜನವನ್ನು ಮಧ್ಯಾಹ್ನ 12.30ಕ್ಕೆ ಹರಿಹರಾನಂದ ಭಾರತಿಸ್ವಾಮಿ ಸನ್ಯಾಸಾಶ್ರಮ (ಮಹಾಜನ ಕಾಲೇಜು ಹತ್ತಿರ) ಮೈಸೂರು ಇಲ್ಲಿ ಏರ್ಪಡಿಸಲಾಗಿದೆ.
ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಶಾಂತಿಯನ್ನು ಕೋರಬೇಕಾಗಿ ವಿನಂತಿಸಿಕೊಳ್ಳುತ್ತೇವೆ. ಆಹ್ವಾನ ಪತ್ರಿಕೆ ತಲುಪದೇ ಇರುವವರು ಇದನ್ನೇ ಆಹ್ವಾನ ಪತ್ರಿಕೆ ಎಂದು ಪರಿಗಣಿಸಿ ಆಗಮಿಸಬೇಕಾಗಿ ವಿನಂತಿ.

ದುಃಖತಪ್ತರು: ಮಕ್ಕಳು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಕುಟುಂಬವರ್ಗದವರು ಹಾಗೂ ಬಂಧು–ಮಿತ್ರರು

14ನೇ ವರ್ಷದ ಪುಣ್ಯಸ್ಮರಣೆ


ಯು॥ ನರಸಿಂಹೇಗೌಡ್ರು
ನಿಧನ .10.01.2010

ನಿಮ್ಮ ಅಗಲಿಕೆ ನಮ್ಮಲ್ಲಿ ಶಾಶ್ವತ ನೋವು ತಂದಿದೆ ನಿಮ್ಮ ನೆನಪಿನಲ್ಲೆ ಜೀವನ ಸಾಗಿಸುವ ನಿಮ್ಮ ಆತ್ಮಕ್ಕೆ ಚಿರಶಾಂತಿ ಕೋರುವ

ದುಃಖತಪ್ತರು
ಮೃತರ ಮಗ ಮತ್ತು ಸೊಸೆ, ಶ್ರೀಮತಿ ಶಾಂತಮ್ಮ ಮತ್ತು ಶ್ರೀ ಮಹದೇವು ಮೊಮ್ಮಕ್ಕಳು, ಮರಿಮಕ್ಕಳು ಹಾಗೂ ಕುಟುಂಬವರ್ಗದವರು ಬಿಎಸ್‌ಎಂ ಗ್ರೂಪ್, ಜಿತ್ ಫೈನಾನ್ಸ್, ಕುಂಬಾರ ಕೊಪ್ಪಲ್ ಮೈಸೂರು

ಮೈಸೂರು ಮಿತ್ರ — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಶ್ರೀ ಬಿ. ಪ್ರಸಾದ್ ಬಿನ್ ಲೇಟ್ ಬಸವರಾಜು, ಮನೆ ನಂ.1804/ಎ, ಸಿ.ಹೆಚ್–102/ಎ, 10ನೇ ಕ್ರಾಸ್, ಅಶೋಕಪುರಂ, ಮೈಸೂರು ರವರ ಇರಾದೆ ಮೇರೆಗೆ ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಶ್ರೀ ಆರ್.ಸಿ ಮಹೇಶ್ ಬಿನ್ ರಾಮಚಂದ್ರಯ್ಯ, ಅಧ್ಯಕ್ಷರು/ನಿರ್ದೇಶಕರು, ಮಾನಸ ಗೃಹ ನಿರ್ಮಾಣ ಸಹಕಾರ ಸಂಘ ನಿ., ಮೈಸೂರು ಸಂಖ್ಯೆ1864/8ಸಿ, ಸಿಹೆಚ್–44/3ಸಿ, ಹಳೇ ಮಾನಂದವಾಡಿ ರಸ್ತೆ, ಶ್ರೀರಾಂಪುರ 2ನೇ ಹಂತ, ಮೈಸೂರು ಆದ ಇವರು ಮೇಲ್ಕಂಡ ಸಂಘದಲ್ಲಿ ಮತ್ತು ಗೋಲ್ಡನ್ ಸಿಟಿ, ಗೃಹ ನಿರ್ಮಾಣ ಸಹಕಾರ ಸಂಘ ನಿ., ಮೈಸೂರು ಇಲ್ಲಿ ಒಂದೇ ತರಹದ ಎರಡು ಸಹಕಾರ ಸಂಘಗಳಲ್ಲಿ ದ್ವಿ–ಸದಸ್ಯತ್ವ ಹೊಂದಿದ್ದು ಹಾಗೂ ಮಾನಸ ಗೃಹ ನಿರ್ಮಾಣ ಸಹಕಾರ ಸಂಘ ನಿ., ಮೈಸೂರು ಇದಕ್ಕೆ (ದೂರುದಾರರ ಪತ್ನಿ ಕುಟುಂಬದ ಸ್ವತ್ತಾದ ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಮಂಡಗಳ್ಳಿ ಗ್ರಾಮದ ಸರ್ವೆ ನಂ.305/1 ರ) ಡೆವಲಪರ್/ಗುತ್ತಿಗೆದಾರರಾಗಿಯೂ ಕೂಡ ಕಾರ್ಯ ನಿರ್ವಹಿಸುತ್ತಿದ್ದಾರೆ. ಸಂಘದ ಸದಸ್ಯರು ಸಂಘದ ಯಾವುದೇ ಕರಾರುಗಳಲ್ಲಿ ಪಾಲ್ಗೊಳ್ಳುವಂತಿರುವುದಿಲ್ಲ ಇದು ಸಂಘದ ಬೈಲಾ ಹಾಗೂ ಕರ್ನಾಟಕ ಸಂಘಗಳ ಅಧಿನಿಯಮ 1959ರ ಪ್ರಕರಣ 29–ಸಿ(1)(ಬಿ)ರ ಸ್ಪಷ್ಟ ಉಲ್ಲಂಘನೆ ಮಾಡಿರುವುದರಿಂದ ಸಂಘದ ಅಧ್ಯಕ್ಷರು/ ನಿರ್ದೇಶಕರ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮೈಸೂರು ಉಪವಿಭಾಗ, ಮೈಸೂರು ರವರನ್ನು ಕೋರಿ ದಿನಾಂಕ 07–07–2023 ರಂದು ದೂರು ದಾಖಲಿಸಿದ್ದು, ದೂರಿನನ್ವಯ ಸದರಿ ರವರ ಕಛೇರಿಯಲ್ಲಿ 29ಸಿ ಪ್ರಕರಣ ಸಂಖ್ಯೆ.ಸನಿ41/ವ್ಯಾಜ್ಯ/29ಸಿ/02/2023–24 ರಂತೆ ಪ್ರಕರಣ ದಾಖಲಾಗಿ ವಿಚಾರಣೆ ನಡೆದಿದ್ದು, ಮಾನ್ಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮೈಸೂರು ಉಪವಿಭಾಗ, ಮೈಸೂರು ರವರು ದಿನಾಂಕ 08–01–2024 ರಂದು ಆದೇಶ ನೀಡಿರುತ್ತಾರೆ.

ಆದೇಶದ ವಿವರ

ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 29ಸಿ ಹಾಗೂ ಕರ್ನಾಟಕ ಸರ್ಕಾರದ ಸಂಖ್ಯೆ: ಸಿಇ:71:ಸಿಎಲ್ಎಂ:2016 ಬೆಂಗಳೂರು ದಿನಾಂಕ: 06.12.2016ರ ರೀತ್ಯಾ ಮನೋಜ್ ಕುಮಾರ್, ಎಸ್.ಎಚ್ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮೈಸೂರು ಉಪವಿಭಾಗ, ಮೈಸೂರು ಆದ ನನಗೆ ಪ್ರದತ್ತವಾದವಾಗಿರುವ ಅಧಿಕಾರವನ್ನು ಚಲಾಯಿಸಿ ಶ್ರೀ ಆರ್.ಸಿ.ಮಹೇಶ್ ಬಿನ್ ರಾಮಚಂದ್ರಯ್ಯ, ಅಧ್ಯಕ್ಷರು / ನಿರ್ದೇಶಕರು, ಮಾನಸ ಗೃಹ ನಿರ್ಮಾಣ ಸಹಕಾರ ಸಂಘ ನಿ., ಮೈಸೂರು ಇವರನ್ನು ಮೇಲ್ಕಂಡ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನದಿಂದ ಈ ಆದೇಶದ ದಿನದಿಂದ 05 ವರ್ಷಗಳ ಕಾಲ ಅನರ್ಹಗೊಳಿಸಿ ಆದೇಶಿಸಿದೆ.

ಮೇಲಿನ ಅನರ್ಹತೆಯ ಅವಧಿಯಲ್ಲಿ ಇವರು ಯಾವುದೇ ಸಹಕಾರ ಸಂಘದ ಆಡಳಿತ ಮಂಡಳಿ ಸದಸ್ಯರಾಗಿ ಚುನಾಯಿತರಾಗಲು ಅಥವಾ ನೇಮಕಗೊಳ್ಳಲು ಅಥವಾ ಮುಂದುವರೆಯಲು ಅಥವಾ ಸಂಘದ ಡೆಲಿಗೇಟ್ ಆಗಿ ಅಥವಾ ಪ್ರತಿನಿಧಿಯಾಗಿ ನೇಮಕಗೊಳ್ಳಲು, ಚುನಾಯಿತರಾಗಲು ಅಥವಾ ಮುಂದುವರೆಯಲು ಅರ್ಹನಾಗತಕ್ಕದ್ದಲ್ಲ ಎಂದು ಆದೇಶಿಸಿರುತ್ತಾರೆ. ಸದರಿ ವಿಚಾರವನ್ನು ಈ ಮೂಲಕ ಸಾರ್ವಜನಿಕರ ಮಾಹಿತಿಗಾಗಿ ನೀಡಲಾಗಿದೆ.

Sd/- J. K.SHESHAGIRI RAO, B.Sc, LL.B
Advocate, Roll No: KAR 1504/99. # 57/7A, No.4, 1st Floor,
New Sayyaji Rao Road, Fort Mohalla, Mysore. Mob: 9980072770

ಸ್ಥಾಪನೆ : 1983 ಫೋನ್ : 0821–2422127

ದಿ ಸಿಟಿಜನ್ಸ್ ಹೌಸ್ ಮಾರ್ಟ್‌ಗೇಜ್ ಮತ್ತು ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಲಿ.,

ನಂ.361/1, ಸಿ.ಹೆಚ್.–15, ಡಿ.ಸುಬ್ಬಯ್ಯ ರಸ್ತೆ, ಚಾಮರಾಜಮೊಹಲ್ಲಾ, ಮೈಸೂರು–570024
"ಎ" ಶ್ರೇಣಿಯ ಸಹಕಾರ ಸಂಘ

ಪ್ರಕಟಣೆ

ಮಾನ್ಯ ಸದಸ್ಯರಲ್ಲಿ ವಿನಂತಿ.
ಸಂಘದ ಆಡಳಿತ ಮಂಡಳಿ ಸಾಮಾನ್ಯ ಚುನಾವಣೆಗೆ ಸಂಬಂಧಿಸಿದಂತೆ ಮಹಿಳಾ ಮೀಸಲು ಸ್ಥಾನಕ್ಕಾಗಿ ಮಾತ್ರ ದಿನಾಂಕ 14–01–2024ರಂದು ಭಾನುವಾರ ಬೆಳಿಗ್ಗೆ 9–00 ಗಂಟೆಯಿಂದ ಸಂಜೆ 4–00 ಘಂಟೆಯವರೆಗೆ ಮಾತ್ರ ಸಂಘದ ಕಛೇರಿಯಲ್ಲಿ ಮತದಾನ ನಡೆಯಲಿದ್ದು ಮತ ಚಲಾಯಿಸಲು ಸಂಘದ ಗುರುತಿನ ಕಾರ್ಡ್ ಕಡ್ಡಾಯವಾಗಿರುತ್ತದೆ. ಗುರುತಿನ ಕಾರ್ಡ್ ಪಡೆಯದವರು ಇತ್ತೀಚಿನ ಭಾವಚಿತ್ರದೊಂದಿಗೆ ಸಂಘದ ಕಛೇರಿ ವೇಳೆಯಲ್ಲಿ ಭೇಟಿ ನೀಡಿ ಗುರುತಿನ ಕಾರ್ಡ್ ಪಡೆದುಕೊಳ್ಳಲು ಕೋರಲಾಗಿದೆ.

ಸಹಿ/– ಎಂ.ವಿ. ರವಿ, ಕಾರ್ಯದರ್ಶಿ, ಮೊ.ನಂ. 9741202595



